ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

ಜೂನ್ 27 ಸೋಮವಾರ 2022

ಸಂಪುಟ: 43 | ಸಂಚಿಕೆ: 72 | ಪುಟಗಳು: 12

₹4

ದೂರವಾಣಿ: 2496520, 2496521, 2496526, 2496527, 2496528,
ಜಾಹೀರಾತು: 2496522, 2496523, ನಗರ ಕಚೇರಿಗಳು: ಕೆ.ಆರ್. ಸರ್ಕಲ್,
ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695

ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com
website: www.mysurumithra.com

ಮಹಾ ರಾಜಕೀಯ ಬಿಕ್ಕಟ್ಟು; ಬಂಡಾಯ ನಾಯಕ

ಶಿಂಧೆ ಸುಪ್ರೀಂ ಮೊರೆ

ನವದೆಹಲಿ, ಜೂ.26– ಮಹಾರಾಷ್ಟ್ರ ರಾಜಕೀಯ ಬಿಕ್ಕಟ್ಟು ಕ್ಷಣಕ್ಕೊಂದು ತಿರುವು ಪಡೆಯುತ್ತಿದ್ದು, ಎಂವಿಎ ಮೈತ್ರಿ ಸರ್ಕಾರದ ಭವಿಷ್ಯ ಸುಪ್ರೀಂಕೋರ್ಟ್ ಮೆಟ್ಟಿಲೇರಿದೆ. ಬಂಡಾಯ ನಾಯಕ ಏಕನಾಥ್ ಶಿಂಧೆ ಅವರು ತಾವು ಸೇರಿದಂತೆ ಇತರ 15 ಶಾಸಕರನ್ನು ಅನರ್ಹಗೊಳಿಸುವ ಶಿವಸೇನೆಯ ಕ್ರಮವನ್ನು ಸುಪ್ರೀಂ ಕೋರ್ಟ್‌ನಲ್ಲಿ ಪ್ರಶ್ನಿಸಿದ್ದಾರೆ. ಈ ಪ್ರಕರಣದ ವಿಚಾರಣೆ ನಾಳೆ (ಸೋಮವಾರ) ನಡೆಯಲಿದೆ.

ಉಪಸಭಾಪತಿ ನರಹರಿ ಜಿರ್ವಾಲ್ ವಿರುದ್ಧದ ಅವಿಶ್ವಾಸ ನಿರ್ಣಯವನ್ನು ತಿರಸ್ಕರಿಸಿ ಅಜಯ್ ಚೌಧರಿ ಅವರನ್ನು ಶಿವಸೇನೆ ಶಾಸಕಾಂಗ ಪಕ್ಷದ ನಾಯಕರನ್ನಾಗಿ ನೇಮಿಸಿರುವುದನ್ನು ಏಕನಾಥ್ ಶಿಂಧೆ ಪ್ರಶ್ನಿಸಿದ್ದಾರೆ.

ತಮ್ಮನ್ನು ಪದಚ್ಯುತಗೊಳಿಸುವ ವಿಷಯ ನಿರ್ಧಾರವಾಗುವವರೆಗೆ ಅನರ್ಹತೆ ಅರ್ಜಿಯ ಬಗ್ಗೆ ಯಾವುದೇ ಕ್ರಮ ಕೈಗೊಳ್ಳದಂತೆ ಉಪ ಸ್ಪೀಕರ್‌ಗೆ ಆದೇಶ ನೀಡುವಂತೆ ಬಂಡುಕೋರರು ಸುಪ್ರೀಂ ಕೋರ್ಟ್‌ಗೆ ಮನವಿ ಮಾಡಿದ್ದಾರೆ. ಅಲ್ಲದೆ ತಮ್ಮ ಕುಟುಂಬಗಳಿಗೆ ಭದ್ರತೆ ಒದಗಿಸುವಂತೆ ಮಹಾರಾಷ್ಟ್ರ ಸರ್ಕಾರಕ್ಕೆ ನಿರ್ದೇಶನ ನೀಡುವಂತೆಯೂ ನ್ಯಾಯಾಲಯವನ್ನು ಕೋರಿದ್ದಾರೆ.

ಇಂದು ಅರ್ಜಿ ವಿಚಾರಣೆ





ಈ ವಾರದ ಆರಂಭದಲ್ಲಿ 16 ಬಂಡಾಯ ಶಾಸಕರನ್ನು ಅನರ್ಹಗೊಳಿಸುವಂತೆ ಶಿವಸೇನೆ ಉಪ ಸ್ಪೀಕರ್‌ಗೆ ಮನವಿ ಸಲ್ಲಿಸಿದೆ. ಏಕನಾಥ ಶಿಂಧೆ ಪಾಳಯವು ಈ ಕ್ರಮವನ್ನು ಕಾನೂನು ಬಾಹಿರ ಎಂದು ಪ್ರತಿಪಾದಿಸಿದೆ. ಏಕೆಂದರೆ ಅನರ್ಹತೆಯು ಅಸ್ತ್ರ ವಿಧಾನಸಭೆಯಲ್ಲಿನ ವಿಷಯಗಳಿಗೆ ಮಾತ್ರ ಸಂಬಂಧಿಸಿದ್ದು, ಪಕ್ಷದ ಸಭೆಗಲ್ಲ ಎಂದಿದೆ. ಬಂಡಾಯ ಸಚಿವರ ವಿರುದ್ಧ ಇತರ ಕ್ರಮಗಳನ್ನು ▶ 9ನೇ ಪುಟಕ್ಕೆ

ಶಿವಸೇನಾ ಬಂಡಾಯ ಶಾಸಕರಿಗೆ Y+ ಭದ್ರತೆ

ಮುಂಬೈ: ಕೇಂದ್ರ ಸರ್ಕಾರವು ಶಿವಸೇನಾದ 15 ಮಂದಿ ಬಂಡಾಯ ಶಾಸಕರಿಗೆ 'Y+' ಶ್ರೇಣಿಯ ಸಿಆರ್‌ಪಿಎಫ್ ಭದ್ರತೆ ಒದಗಿಸಿದೆ ಎಂದು ಮೂಲಗಳು ತಿಳಿಸಿರುವುದಾಗಿ ಸುದ್ದಿಸಂಸ್ಥೆ 'ಎಎನ್‌ಐ' ಟ್ವೀಟ್ ಮಾಡಿದೆ.


ಸಾಂದರ್ಭಿಕ ಚಿತ್ರ

ಮಹಾರಾಷ್ಟ್ರದಲ್ಲಿ ರಾಜಕೀಯ ಬಿಕ್ಕಟ್ಟಿನ ಹಿನ್ನೆಲೆಯಲ್ಲಿ ಬಂಡಾಯ ಶಾಸಕರಿಗೆ ಸೂಕ್ತ ಭದ್ರತೆ ಕಲ್ಪಿಸುವಂತೆ ರಾಜಕೀಯ ಮುಖಂಡರು ಕೇಂದ್ರ ಸರ್ಕಾರಕ್ಕೆ ಮನವಿ ಮಾಡಿದ್ದರು. ಇದಕ್ಕೆ ಇಂಬು ನೀಡುವಂತೆ ಸರ್ಕಾರ ಉಳಿಸಿಕೊಳ್ಳುವುದರ ಜತೆಗೆ ಬಂಡಾಯ ಶಾಸಕರು ಬಿಸಿ ಮುಟ್ಟಿಸಲು ಮುಂದಾಗಿದ್ದ ಸಿಎಂ ಉದ್ಧವ್ ಠಾಕ್ರೆ ಶಾಸಕರಿಗೆ ಹಾಗೂ ಅವರ ಕುಟುಂಬದವರಿಗೆ ನೀಡಿದ್ದ ▶ 9ನೇ ಪುಟಕ್ಕೆ

'ಒಂದು ರಾಷ್ಟ್ರ, ಒಂದು ಡಯಾಲಿಸಿಸ್' ಶೀಘ್ರ ಜಾರಿ

ಚೆನ್ನೈ: ಕೇಂದ್ರ ಸರ್ಕಾರವು ಶೀಘ್ರವೇ ಒಂದು ದೇಶ, ಒಂದು ಡಯಾಲಿಸಿಸ್ ಯೋಜನೆಯನ್ನು ಜಾರಿಗೊಳಿಸಲಿದೆ ಎಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಮನ್ಸುಖ್ ಮಾಂಡವೀಯ ತಿಳಿಸಿದ್ದಾರೆ.



ಪ್ರಧಾನಮಂತ್ರಿ ರಾಷ್ಟ್ರೀಯ ಡಯಾಲಿಸಿಸ್ ಯೋಜನೆಯಡಿಯಲ್ಲಿ ಒನ್ ನೇಷನ್, ಒನ್ ಡಯಾಲಿಸಿಸ್ ಯೋಜನೆ ಜಾರಿಗೆ ಬರಲಿದ್ದು, ಈ ಕಾರ್ಯಕ್ರಮದ ಅಡಿಯಲ್ಲಿ ಯಾವುದೇ ರೋಗಿ ದೇಶದ ಯಾವುದೇ ಭಾಗದಲ್ಲಿ ▶ 9ನೇ ಪುಟಕ್ಕೆ

ನನಗಂತೂ ಮುಸ್ಲಿಮರ ವೋಟು ಬೇಡ, ನಾನು ಅವರನ್ನು ಕೇಳೋದೇ ಇಲ್ಲ

ಶಿವಮೊಗ್ಗ: ಹೆಚ್.ಡಿ.ಕುಮಾರಸ್ವಾಮಿ ಆರ್‌ಎಸ್‌ಎಸ್ ಟೀಕಿಸಿದರೆ ಮುಸ್ಲಿಮರ ವೋಟು ಬರುತ್ತದೆ ಅಂದುಕೊಂಡಿದ್ದಾರೆ. ಆದರೆ ನನಗೆ ಮುಸ್ಲಿಮರ ವೋಟು ಬೇಡ. ನಾನು ಅವರನ್ನು ಕೇಳೋದೇ ಇಲ್ಲ ಎಂದು ಮಾಜಿ ಸಚಿವ ಕೆ.ಎಸ್.ಈಶ್ವರಪ್ಪ ಹೇಳಿದ್ದಾರೆ.



ಆರ್‌ಎಸ್‌ಎಸ್ ಅವರಿಗೂ 40 ಪರ್ಸೆಂಟೇಜ್ ಕಮಿಷನ್ ಹೋಗುತ್ತದೆ? ಎಂಬ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರ ಹೇಳಿಕೆಗೆ ಶಿವಮೊಗ್ಗದಲ್ಲಿ ಸುದ್ದಿಗಾರರೊಂದಿಗೆ ಪ್ರತಿಕ್ರಿಯಿಸಿದ್ದಾರೆ. ▶ 9ನೇ ಪುಟಕ್ಕೆ

ಬೆಳ್ಳಂಬೆಳಗ್ಗೆ ಭೀಕರ ಅಪಘಾತ

ಕ್ರೂಸರ್ ಪಲ್ಟಿಯಾಗಿ ಏಳು ಮಂದಿ ಸಾವು

ಕಣಬರಗಿ ಸಮೀಪ ದುರ್ಘಟನೆ



ಬೆಳಗಾವಿ: ಬೆಳಗಾವಿ ಬಳಿ ಬೆಳ್ಳಂಬೆಳಗ್ಗೆ ಭೀಕರ ಅಪಘಾತ ಸಂಭವಿಸಿದೆ. ಕ್ರೂಸರ್ ಪಲ್ಟಿಯಾಗಿ 7 ಮಂದಿ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಕಣಬರಗಿ ಸಮೀಪ ▶ 9ನೇ ಪುಟಕ್ಕೆ

ಇಂದಿನಿಂದ SSLC ಪೂರಕ ಪರೀಕ್ಷೆ

ಬೆಂಗಳೂರು: ನಾಳೆಯಿಂದ (ಸೋಮವಾರ) ಜುಲೈ 4ರವರೆಗೆ ಎಸ್‌ಎಸ್‌ಎಲ್‌ಸಿ ಪೂರಕ ಪರೀಕ್ಷೆ ನಡೆಯಲಿದೆ. ಪೂರಕ ಪರೀಕ್ಷೆಗೆ ಶಿಕ್ಷಣ ಇಲಾಖೆಯಿಂದ ಕೊರೊನಾ ನಿಯಂತ್ರಣ ಮಾರ್ಗಸೂಚಿ ಕ್ರಮಗಳನ್ನು ಬಿಡುಗಡೆ ಮಾಡಲಾಗಿದೆ. ಈ ಬಾರಿ 94649 ವಿದ್ಯಾರ್ಥಿಗಳು ಪರೀಕ್ಷೆಗೆ ನೋಂದಾಯಿಸಿಕೊಂಡಿದ್ದಾರೆ. 423 ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದೆ. ಎಸ್‌ಓಪಿಯಲ್ಲಿನ ಮಾರ್ಗಸೂಚಿಯನ್ನು ಇಲಾಖೆಯ ಎಲ್ಲಾ ಹಂತದ ಅಧಿಕಾರಿಗಳು, ಸಂಬಂಧಿಸಿದ ಇತರೆ ಇಲಾಖೆಯ ಅಧಿಕಾರಿಗಳು, ಜಿಲ್ಲಾಧಿಕಾರಿ, ಸಿಇಓಗಳೊಂದಿಗೆ ಸಮನ್ವಯ ಸಾಧಿಸಿ, ಕಟ್ಟುನಿಟ್ಟಾಗಿ ಅನುಷ್ಠಾನಗೊಳಿಸುವಂತೆ ಆದೇಶ ಹೊರಡಿಸಲಾಗಿದೆ. ಪ್ರತಿ ಪರೀಕ್ಷಾ ▶ 9ನೇ ಪುಟಕ್ಕೆ


ಫೈಲ್ ಚಿತ್ರ

ಮೈಸೂರು ನಗರದಲ್ಲಿ ಹೆಚ್ಚುವರಿ 200 ಸಿಸಿಟಿವಿ ಕ್ಯಾಮರಾ ಅಳವಡಿಕೆ

ಕೋಟಿ ರೂ. ಅಂದಾಜು ವೆಚ್ಚ: ಪೊಲೀಸ್ ಆಯುಕ್ತ

ಮೈಸೂರು,ಜೂ.26(ಆರ್‌ಕೆ)–ತಂತ್ರಜ್ಞಾನವನ್ನು ಸಮರ್ಪಕವಾಗಿ ಬಳಸಿಕೊಂಡು ಅಪರಾಧ ಪ್ರಕರಣಗಳನ್ನು ನಿಯಂತ್ರಿಸುವುದು ಹಾಗೂ ಪತ್ತೆಗೆ ಮೈಸೂರು ನಗರಾದ್ಯಂತ ಹೆಚ್ಚುವರಿ ಸಿಸಿಟಿವಿ ಕ್ಯಾಮರಾ ಅಳವಡಿಸಲು ಪೊಲೀಸರು ಮುಂದಾಗಿದ್ದಾರೆ.



ಮೈಸೂರಿನ ಅರಮನೆ ಸುತ್ತಲಿನ ಪ್ರದೇಶ, ಜೆಎಲ್‌ಬಿ ರಸ್ತೆ, ಸಿಗ್ನಲ್ ಲೈಟ್ ಸರ್ಕಲ್‌ಗಳು, ರಾಜ ಮಾರ್ಗ, ಪ್ರಮುಖ ರಸ್ತೆಗಳು ಸೇರಿದಂತೆ ಪ್ರಸ್ತುತ 52 ಸಿಸಿಟಿವಿ ಕ್ಯಾಮರಾಗಳು ಕಾರ್ಯನಿರ್ವಹಿಸುತ್ತಿದ್ದು, ಉಳಿದ ಸರ್ಕಲ್, ಜಂಕ್ಷನ್‌ಗಳಿಗೂ ಅಳವಡಿಸಲು ಇನ್ನೂ 200 ಕ್ಯಾಮರಾಗಳು ಬೇಕೆಂದು ಮೈಸೂರು ನಗರ ಪೊಲೀಸ್ ಘಟಕವು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿತ್ತು.

ಈ ಕುರಿತು ಸಚಿವ ಸಂಪುಟದಲ್ಲಿ ಚರ್ಚೆಯಾಗಿ ಮೈಸೂರು ಸೇರಿದಂತೆ ರಾಜ್ಯದ ಎಲ್ಲಾ ಕಮೀಷ್ನರೇಟ್ ನಗರಗಳಿಗೂ ಸಿಸಿಟಿವಿ ಹಾಕಲು ಅನುದಾನ ನೀಡಲು ಅನುಮೋದನೆಯಾಗಿದೆ. ಅದರಂತೆ ಮೈಸೂರು ನಗರಕ್ಕೆ 1 ಕೋಟಿ ರೂ. ಮಂಜೂರಾಗಿದ್ದು, ಶೀಘ್ರ ಹಣ ಬಿಡುಗಡೆಯಾಗುವ ನಿರೀಕ್ಷೆ ಇದೆ. ಇಲ್ಲಿನ ಸಂಚಾರ ವ್ಯವಸ್ಥೆ, ಭದ್ರತೆ, ಅಪರಾಧ ಪತ್ತೆ ಮತ್ತು ನಿಯಂತ್ರಣ ಹಾಗೂ ಕಾನೂನು–ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ಬೆಳೆಯುತ್ತಿರುವ ಮೈಸೂರು ನಗರಕ್ಕೆ ಇನ್ನೂ 200 ಸರ್ವಲೆನ್ಸ್ ಕ್ಯಾಮರಾಗಳ ಅಗತ್ಯವಿದೆ ಎಂದು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿದ್ದರಿಂದ ಸದ್ಯಕ್ಕೆ 1 ಕೋಟಿ ರೂ. ಅನುದಾನ ಮಂಜೂರಾಗಿದೆ. ಅದರಲ್ಲಿ ಎಷ್ಟು ಕ್ಯಾಮರಾಗಳನ್ನು ಅಳವಡಿಸಲು ಸಾಧ್ಯವೋ ಅಷ್ಟನ್ನು ಹಾಕುತ್ತೇವೆ ಎಂದು ನಗರ ಪೊಲೀಸ್ ಆಯುಕ್ತ ಡಾ.ಚಂದ್ರಗುಪ್ತ ತಿಳಿಸಿದರು.

ಮೈಸೂರು ನಗರ ಬೆಳೆದಂತೆ ಜನಸಂಖ್ಯೆಗನುಗುಣವಾಗಿ ಅಪರಾಧಗಳೂ ಹೆಚ್ಚಾಗುತ್ತವೆ. ವಾಹನಗಳ ಅಧಿಕವಾಗುತ್ತಿರುವುದರಿಂದ ಅಪಘಾತಗಳೂ ಹೆಚ್ಚುವುದು ಸಹಜ. ಅಲ್ಲದೇ ಇಲ್ಲಿ ಗಣ್ಯರು, ಅತೀ ಗಣ್ಯರ ಮೂವ್‌ಮೆಂಟ್ ಜಾಸ್ತಿ ಇರುತ್ತದೆಯಾದ್ದರಿಂದ ತಂತ್ರಜ್ಞಾನ ಬಳಸಿಕೊಂಡು ನಿರ್ವಹಣೆ ಮಾಡುವುದು ಅನಿವಾರ್ಯ. ಮೈಸೂರಿಗೆ ಸಂಪರ್ಕ ಕಲ್ಪಿಸುವ ಎಲ್ಲಾ ಹೆದ್ದಾರಿ, ಜಿಲ್ಲಾ ರಸ್ತೆಗಳ ಪ್ರವೇಶ, ನಿರ್ಗಮನ ಸ್ಥಳಗಳಲ್ಲಿ ಹೈ ರೆಸಲ್ಯೂಷನ್ ಕ್ಲೋಸ್ಡ್ ಸರ್ಕ್ಯೂಟ್ ಟೆಲಿವಿಷನ್ ಕ್ಯಾಮರಾಗಳನ್ನು ಅಳವಡಿಸಿ ಶಂಕಿತ ಹಾಗೂ ದುಷ್ಕರ್ಮಿಗಳ ಚಲನ–ವಲನಗಳ ಮೇಲೆ ನಿಗಾ ಇರಿಸಬೇಕಾಗುತ್ತದೆ. ಅಪರಾಧ ನಿಯಂತ್ರಣ, ಪತ್ತೆ ಕಾರ್ಯ ಹಾಗೂ ಭದ್ರತೆಗಾಗಿ ಹೆಚ್ಚುವರಿ ಕ್ಯಾಮರಾಗಳ ಅಗತ್ಯವಿದೆ ಎಂದು 'ಮೈಸೂರು ಮಿತ್ರ'ನಿಗೆ ತಿಳಿಸಿದರು.

ಮಂಜೂರಾಗಿರುವ 1 ಕೋಟಿ ರೂ. ಅನುದಾನ ಬಳಸಿಕೊಂಡು ನಗರಕ್ಕೆ ಹೆಚ್ಚುವರಿ ಕ್ಯಾಮರಾಗಳನ್ನು ಅಳವಡಿಸುತ್ತೇವೆ. ಒಂದೇ ಕಡೆ ಮಾನಿಟರ್ ಮಾಡಿ ತೀವ್ರ ನಿಗಾ ವಹಿಸುವ ಮೂಲಕ ನಿರ್ವಹಣೆ ಮಾಡುತ್ತೇವೆ. –ಡಾ.ಚಂದ್ರಗುಪ್ತ

"ಪೊಲೀಸ್ ಸಿಬ್ಬಂದಿಗಳನ್ನು ಎಲ್ಲಾ ಪಾಯಿಂಟ್‌ಗಳಿಗೆ ನೇಮಿಸಲು ಸಾಧ್ಯವಾಗುವುದಿಲ್ಲ. ಅದರ ಬದಲು ತಂತ್ರಜ್ಞಾನ ಬಳಸುವುದರಿಂದ ಒಂದೆಡೆ ಕುಳಿತು ಇಡೀ ಮೈಸೂರಿನ ಚಿತ್ರಣವನ್ನು ವೀಕ್ಷಿಸಬಹುದು. ಅತೀ ಗಣ್ಯರು ಭೇಟಿ ನೀಡಿದಾಗ, ಪ್ರಮುಖ ಬೃಹತ್ ಸಭೆ, ಸಮಾರಂಭಗಳು, ಐತಿಹಾಸಿಕ ಕಾರ್ಯಕ್ರಮಗಳು ನಡೆದಾಗ ಸಂಪೂರ್ಣ ಚಿತ್ರಣ ದಾಖಲಿಸಲು ಸಿಸಿ ಕ್ಯಾಮರಾಗಳಿಂದ ಸಾಧ್ಯವಾಗಲಿದೆ. ಚಿನ್ನದ ಸರ ಅಪಹರಣ, ಮನೆ ಕಳವು, ಹೆದ್ದಾರಿ ದರೋಡೆ, ಅಪಘಾತಗಳಂತಹ ಕೃತ್ಯಗಳು ನಡೆದಾಗ ಪ್ರಕರಣಗಳ ಪತ್ತೆ ಮಾಡಲು ಸಿಸಿಟಿವಿ ಕ್ಯಾಮರಾಗಳು ಸಹಕಾರಿ ಯಾಗಲಿವೆ. ಅಲ್ಲದೆ, ದುಷ್ಕರ್ಮಿಗಳು ಸಹ ಅಪರಾಧ ಕೃತ್ಯ ಎಸಗಲು ಹಿಂಜರಿಯುತ್ತಾರೆ. –ಡಾ.ಚಂದ್ರಗುಪ್ತ, ನಗರ ಪೊಲೀಸ್ ಆಯುಕ್ತ.



ಸಾಂಸ್ಥಿಕ ಹೂಡಿಕೆ ಹೆಚ್ಚಾದ ಕಾರಣ ಪತ್ರಿಕಾ ಸ್ವಾತಂತ್ರ್ಯಕ್ಕೆ ಹಿನ್ನಡೆ

● ಜನರಲ್ ಆಫ್ ಮೀಡಿಯಾ ಲಾ ಅಂಡ್ ಎಥಿಕ್ಸ್‌ನ ಸಂಪಾದಕ ಡಾ.ನಿಖಿಲ್ ಮೊರೊ ಅಭಿಮತ ● ಮೈಸೂರು ಲಿಟರರಿ ಅಸೋಷಿಯೇಷನ್‌ನಿಂದ ಆಯೋಜಿಸಿದ್ದ ಕಾರ್ಯಕ್ರಮ

ಮೈಸೂರು,ಜೂ.26(ಪಿಎಂ)– ಭಾರತೀಯ ಮಾಧ್ಯಮ ಸಂಸ್ಥೆಗಳಲ್ಲಿ ಸಾಂಸ್ಥಿಕ ಹೂಡಿಕೆ ಹೆಚ್ಚಾದ ಪರಿಣಾಮ ದೇಶದಲ್ಲಿ ಪತ್ರಿಕಾ ಸ್ವಾತಂತ್ರ್ಯ ಹಿನ್ನಡೆ ಅನುಭವಿಸುತ್ತಿದೆ ಎಂದು ಜರ್ನಲ್ ಆಫ್ ಮೀಡಿಯಾ ಲಾ ಅಂಡ್ ಎಥಿಕ್ಸ್‌ನ ಸಂಪಾದಕ ಡಾ. ನಿಖಿಲ್ ಮೊರೊ ಅಭಿಪ್ರಾಯಪಟ್ಟರು.

ಮೈಸೂರಿನ ಸರಸ್ವತಿಪುರಂನ ರೋಟರಿ ಮೈಸೂರು ಪಶ್ಚಿಮದ ಸಭಾಂಗಣದಲ್ಲಿ ಮೈಸೂರು ಲಿಟರರಿ ಅಶೋಸಿಯೇಷನ್ ವತಿಯಿಂದ ಭಾನುವಾರ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ 'ಯುನೈಟೆಡ್ ಸ್ಟೇಟ್ಸ್ (ಅಮೆರಿಕ) ಮತ್ತು ಭಾರತದಲ್ಲಿ ಪತ್ರಿಕಾ ಸ್ವಾತಂತ್ರ್ಯ: ಕಾನೂನು ವಿಶ್ಲೇಷಣೆ' ವಿಷಯ ಕುರಿತು ಅವರು ಮಾತನಾಡಿದರು.

ಭಾರತದಲ್ಲಿ ಪರವಾನಗಿ ಪಡೆದ 900 ಪ್ರಸಾರ ಚಾನೆಲ್‌ಗಳ ಪೈಕಿ ಅರ್ಧದಷ್ಟು ಖಾಸಗಿ ಕಂಪನಿಗಳು, ರಾಜಕಾರಣಿಗಳು, ರಿಯಲ್ ಎಸ್ಟೇಟ್ ಉದ್ಯಮಿಗಳ ಒಡೆತನದಲ್ಲಿವೆ. ಇವುಗಳಲ್ಲಿ ಹೆಚ್ಚಿನವು ತಮ್ಮ ಕಂಪನಿಗಳು, ಸಂಸ್ಥೆಗಳು ಮತ್ತು ರಾಜಕೀಯ ಪಕ್ಷಗಳ ಪರವಾಗಿ ಕಾರ್ಯನಿರ್ವಹಿಸುವಂತಹ ವಾತಾವರಣವೇ ಹೆಚ್ಚಿದೆ. ಅಲ್ಲದೆ, ಪ್ರಮುಖ ಚಾನೆಲ್‌ಗಳು ಮಹಾನಗರಗಳ ಮೇಲೆ ತಮ್ಮ ಗಮನ ಕೇಂದ್ರೀಕರಿಸಿದ್ದು, ಗ್ರಾಮೀಣ ಮತ್ತು ಹಿಂದುಳಿದ ಪ್ರದೇಶಗಳ ಸಮಸ್ಯೆಗಳತ್ತ ಮುಖ ಮಾಡುತ್ತಿಲ್ಲ ಎಂದರು.

ಮನರಂಜನಾ ಕ್ಷೇತ್ರ ವ್ಯಾಪಕವಾಗಿ ಬೆಳೆದಿದೆ. ಈ ಕ್ಷೇತ್ರದಿಂದ ಆದಾಯ ಗಳಿಕೆಯಲ್ಲಿ ಭಾರತವು ವಿಶ್ವದ ಐದನೇ ರಾಷ್ಟ್ರವಾಗಿ ಹೊರಹೊಮ್ಮಿದೆ. ಸಾಂಸ್ಥಿಕ ಹೂಡಿಕೆ ಹೆಚ್ಚಳವೇ ಇದಕ್ಕೆ ಕಾರಣವಾಗಿದೆ. ಮನರಂಜನಾ ಮಾರುಕಟ್ಟೆಯಿಂದ ಭಾರತೀಯ ವಾಹಿನಿಗಳು ಶೇ.92ರಷ್ಟು ಆದಾಯ ಗಳಿಸುತ್ತಿವೆ. ಅಮೆರಿಕದಲ್ಲೂ ಇದೇ ಪರಿಸ್ಥಿತಿ ಇದೆ ಎಂದು ತಿಳಿಸಿದರು.

ವಿದೇಶಿ ನೇರ ಹೂಡಿಕೆ ನೀತಿಯ ಪರಿಣಾಮ ಭಾರತದಲ್ಲಿ ಪ್ರಸಾರ ಮತ್ತು ಮುದ್ರಣ ಮಾಧ್ಯಮ ಘಟಕಗಳಲ್ಲಿ ಭಾರೀ ಪ್ರಮಾಣದ ವಿದೇಶಿ ಬಂಡವಾಳ ಹೂಡಿಕೆಯಾಗಿದೆ. ಇದರಿಂದ ಲಾಭ ಕೇಂದ್ರೀತವಾಗಿ ಕಾರ್ಯನಿರ್ವಹಿಸುತ್ತಿರುವ ಪ್ರವೃತ್ತಿ ಹೆಚ್ಚಾಗಿ ನೈಜ ಸಮಸ್ಯೆಗಳ ಮೇಲೆ ಮಾಧ್ಯಮಗಳು ಬೆಳಕು ಚೆಲ್ಲಲಾಗದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು.



ಮೈಸೂರಿನ ಸರಸ್ವತಿಪುರಂನ ರೋಟರಿ ಮೈಸೂರು ಪಶ್ಚಿಮದ ಸಭಾಂಗಣದಲ್ಲಿ ಜರ್ನಲ್ ಆಫ್ ಮೀಡಿಯಾ ಲಾ ಅಂಡ್ ಎಥಿಕ್ಸ್‌ನ ಸಂಪಾದಕ ಡಾ.ನಿಖಿಲ್ ಮೊರೊ ಮಾತನಾಡಿದರು. (ಎಡದಿಂದ–ಕುಳಿತವರು) ಮೈಸೂರು ಲಿಟರರಿ ಅಸೋಸಿಯೇಷನ್ ಉಪಾಧ್ಯಕ್ಷ ಪ್ರೊ.ಬಿ.ಎನ್.ಬಾಲಾಜಿ, ಅಧ್ಯಕ್ಷ ಕೆ.ಸಿ.ಬೆಳ್ಳಿಯಪ್ಪ, ಕಾರ್ಯದರ್ಶಿ ರೆಜಿನಾಲ್ಡ್ ವೆಸ್ಲಿ ಅವರನ್ನು ಚಿತ್ರದಲ್ಲಿ ಕಾಣಬಹುದು.

ಪತ್ರಿಕಾ ಸ್ವಾತಂತ್ರ್ಯ ಅಮೆರಿಕದಲ್ಲಿ ಸಂರಕ್ಷಣೆ ಸ್ವರೂಪ ಹೊಂದಿದೆ. ಭಾರತದಲ್ಲಿ ಪತ್ರಿಕಾ ಸ್ವಾತಂತ್ರ್ಯವನ್ನು ಸಂವಿಧಾನ ನೀಡಿದ್ದರೂ ಹಲವು ಇತಿಮಿತಿ ಇರುವುದನ್ನು ಕಾಣಬಹುದು. ಜೊತೆಗೆ ಅನೇಕ ಕಾಯ್ದೆಗಳ ಮೂಲಕ ಭಾರತದ ಪತ್ರಿಕಾ ಸ್ವಾತಂತ್ರ್ಯದ ಮೇಲೆ ನಿಯಂತ್ರಣ ಹೊಂದಲಾಗಿದೆ. ಇಂತಹ ನಿಯಂತ್ರಣದ ಪರಿಣಾಮ ಮಾಧ್ಯಮಗಳು ಜನಪರ ದನಿಯಾಗುವಲ್ಲಿ ಹಿನ್ನಡೆ ಅನುಭವಿಸುವಂತಾಗಿದೆ ಎಂದರು.

ಪ್ರಸ್ತುತ ಸುದ್ದಿ ವಾಹಿನಿಗಳಲ್ಲಿ ನಡೆಯುವ ಚರ್ಚೆಗಳು ನೈಜ ಸಮಸ್ಯೆಯತ್ತ ಬೆಳಕು ಚೆಲ್ಲುವಲ್ಲಿ ಬಹುತೇಕ ವಿಫಲವಾಗುತ್ತಿವೆ. ಚರ್ಚೆಯಲ್ಲಿ ಪಾಲ್ಗೊಂಡವರ ಅಭಿಪ್ರಾಯಗಳೇ ಇಲ್ಲಿ ಹೆಚ್ಚಾಗಿ ಬಿಂಬಿತವಾಗುತ್ತಿವೆ. ಆ ಮೂಲಕ ನೈಜ ಸಮಸ್ಯೆಗಳತ್ತ ಬಹುತೇಕ ಮಾಧ್ಯಮಗಳು ಗಮನ ನೀಡುತ್ತಿಲ್ಲ. ಇದರಿಂದ ದನಿ ಇಲ್ಲದವರಿಗೆ ದನಿಯಾಗುವ ಪ್ರವೃತ್ತಿ ಕಡಿಮೆಯಾಗುತ್ತಿದೆ ಎಂದು ವಿಷಾದಿಸಿದರು. ಮೈಸೂರು ಲಿಟರರಿ ಅಶೋಸಿಯೇಷನ್ ಅಧ್ಯಕ್ಷ ಕೆ.ಸಿ.ಬೆಳ್ಳಿಯಪ್ಪ, ಉಪಾಧ್ಯಕ್ಷ ಪ್ರೊ.ಬಿ.ಎನ್. ಬಾಲಾಜಿ, ಕಾರ್ಯದರ್ಶಿ ರೆಜಿನಾಲ್ಡ್ ವೆಸ್ಲಿ ವೇದಿಕೆಯಲ್ಲಿದ್ದರು. ವಿವಿಧ ಕ್ಷೇತ್ರದ ಗಣ್ಯರು ಹಾಗೂ ಸಾರ್ವಜನಿಕರು ಪಾಲ್ಗೊಂಡಿದ್ದರು.

ಕೋಟಿ ಸೇವಾ ಟ್ರಸ್ಟ್ ವತಿಯಿಂದ ಕೆಂಪೇಗೌಡರ ರಥಕ್ಕೆ ಸ್ವಾಗತ



ಮೈಸೂರು: ಮೈಸೂರು ವಿಜಯನಗರ ಮೊದಲನೇ ಹಂತದಲ್ಲಿ ನಾಡಪ್ರಭು ಕೆಂಪೇಗೌಡರ ರಥವನ್ನು ಪುಣ್ಯ ಕೋಟಿ ಸೇವಾ ಟ್ರಸ್ಟ್ ವತಿಯಿಂದ ಭಕ್ತಿಭಾವದಿಂದ ಸ್ವಾಗತಿಸಲಾಯಿತು.

ಈ ವೇಳೆ ಮಾತನಾಡಿದ ಶಾಸಕ ಜಿ.ಟಿ.ದೇವೇಗೌಡರು, ನಮ್ಮ ನಾಡಪ್ರಭು ಕೆಂಪೇಗೌಡರು ಯಾವುದೇ ಒಂದು ಜಾತಿಗೆ ಸೀಮಿತವಾದವರಲ್ಲ. ಅದಕ್ಕೆ ಉದಾಹರಣೆ ಎಲ್ಲಾ ಜಾತಿ–ಜನಾಂಗಕ್ಕೆ ಪೇಟೆಗಳನ್ನು ತೆರೆದವರು ಕೆಂಪೇಗೌಡರು. ಉಪ್ಪಾರ ಪೇಟೆ, ಅಕ್ಕಿ ಪೇಟೆ, ಬಳೆ ಪೇಟೆ, ಚಿಕ್ಕಪೇಟೆ ಹೀಗೆ ಹತ್ತು ಹಲವಾರು ಪೇಟೆಗಳನ್ನು ನಿರ್ಮಾಣ ಮಾಡಿದ ಮಹಾತ್ಮ ನಾಡಪ್ರಭು ಕೆಂಪೇಗೌಡರು ಎಂದು ಗುಣಗಾನ ಮಾಡಿದರು. ಈ ಸಂದರ್ಭದಲ್ಲಿ ಜಿಲ್ಲಾ ಒಕ್ಕಲಿಗರ ಸಂಘದ ಅಧ್ಯಕ್ಷರಾದ ಪಡುವಾರಹಳ್ಳಿ ಮರಿಸ್ವಾಮಿ, ರಾಜ್ಯ ಒಕ್ಕಲಿಗರ ಸಂಘದ ಕಾರ್ಯಾಧ್ಯಕ್ಷರಾದ ಗಂಗಾಧರ್ ಗೌಡ, ಮಂಜೇಗೌಡ, ಬಿಜೆಪಿ ಚಾಮರಾಜ ಕ್ಷೇತ್ರದ ಉಪಾಧ್ಯಕ್ಷರಾದ ಕುಮಾರ್‌ಗೌಡ, ಪಾಲಾಕ್ಷ, ಪಾಲಿಕೆ ಸದಸ್ಯರಾದ ಸುಬ್ಬಯ್ಯ, ಪ್ರೇಮಾ ಶಂಕರೇಗೌಡ, ಹೇಮಾ ನಂದೀಶ್, ಪುಣ್ಯ ಕೋಟಿ ಸೇವಾ ಟ್ರಸ್ಟ್ ಅಧ್ಯಕ್ಷ ಹನುಮಂತೇಶ್, ಪಡುವಾರಹಳ್ಳಿ ರವಿ ಉಪಸ್ಥಿತರಿದ್ದರು.

ಡಿಪ್ಲೊಮಾ ಕೋರ್ಸ್ ಅರ್ಜಿ ಸಲ್ಲಿಕೆಗೆ ಅವಧಿ ವಿಸ್ತರಣೆ

ಮೈಸೂರು,ಜೂ.26–ಕೈಮಗ್ಗ ಮತ್ತು ಜವಳಿ ಇಲಾಖೆ ವತಿಯಿಂದ ಎಸ್‌ಎಸ್‌ಎಲ್‌ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಇಂಗ್ಲೀಷ್‌ನ್ನು ಅಭ್ಯಸಿಸಿ ಉತ್ತೀರ್ಣರಾಗಿರುವ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವ ದಿನಾಂಕವನ್ನು ಜು.11ರವರೆಗೆ ವಿಸ್ತರಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು 2022–23ನೇ ಸಾಲಿನ ಶೈಕ್ಷಣಿಕ ಅವಧಿಗೆ, ತಂತ್ರಜ್ಞಾನದಲ್ಲಿ ಮೂರು ವರ್ಷಗಳ ಡಿಪ್ಲೋಮ ಕೋರ್ಸ್ ಕಲಿಕೆಗಾಗಿ, ಕರ್ನಾಟಕ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ಗದಗ–ಬೆಟಗೇರಿ (ಕರ್ನಾಟಕ)–22 ಅಭ್ಯರ್ಥಿಗಳು, ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ (ತಮಿಳುನಾಡು) –17 ಅಭ್ಯರ್ಥಿಗಳು, ಎಸ್.ಪಿ.ಕೆ.ಎಂ. ಭಾರತೀಯ ಕೈಮಗ್ಗ ತಂತ್ರಜ್ಞಾನ ಸಂಸ್ಥೆ, ವೆಂಕಟಗಿರಿ (ನೆಲ್ಲೂರು ಜಿಲ್ಲೆ ಆಂಧ್ರಪ್ರದೇಶ)–03 ಅಭ್ಯರ್ಥಿಗಳು ಮತ್ತು ಭಾರತೀಯ ಕೈಮಗ್ಗ ಸಂತ್ರಜ್ಞಾನ ಸಂಸ್ಥೆ, ಕಣ್ಣೂರು (ಕೇರಳ)–02 ಅಭ್ಯರ್ಥಿಗಳು ಹೀಗೆ ಒಟ್ಟು 44 ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಿದೆ. ಆಯ್ಕೆಯಾದವರಿಗೆ ವ್ಯಾಸಾಂಗದ ಸಮಯದಲ್ಲಿ ಪ್ರತಿ ತಿಂಗಳು 2500 ರೂ.ಗಳ ಶಿಷ್ಯವೇತನ ನೀಡಲಾಗುವುದು. ಅರ್ಹತಾ ಪರೀಕ್ಷೆಯಲ್ಲಿಗಳಿಸಿರುವ ಕ್ರೋಢೀಕೃತ ಅಂಕಗಳು ಮೆರಿಟ್ ಆಧಾರವಾಗಿದ್ದು, ಭರ್ತಿ ಮಾಡಿದ ಅರ್ಜಿಗಳನ್ನು https://khtigadg.ac.in ಮೂಲಕ ಸಲ್ಲಿಸಬಹುದು ಅಥವಾ Admission Form.pdf ಮೂಲಕ ಡೌನ್ ಲೋಡ್ ಮಾಡಿಕೊಳ್ಳಬಹುದು.ಮಾಹಿತಿಗಾಗಿ ದೂ.ಸಂ.: 08372–297221, ಮೊ.ಸಂ: 9449189170 ಅಥವಾ ದೂಸಂ: 0821–2441353 ಸಂಪರ್ಕಿಸಬಹುದು.

ಜು.13ರಂದು ಗ್ರಾಪಂ ನೌಕರರ ಪ್ರತಿಭಟನೆ



ಮೈಸೂರು, ಜೂ.26 (ಆರ್‌ಕೆಬಿ)–ಕರ್ನಾಟಕ ರಾಜ್ಯ ಗ್ರಾಮ ಪಂಚಾಯತಿ ನೌಕರರ ಸಂಘದ ವಿಭಾಗ ಮಟ್ಟದ ಕಾರ್ಯಗಾರ ಭಾನುವಾರ ಮೈಸೂರು ಮಹಾರಾಜ ಕಾಲೇಜು ಶತಮಾನೋತ್ಸವ ಭವನದಲ್ಲಿ ನಡೆದು ತಮ್ಮ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಜು.13ರಂದು ಎಲ್ಲಾ ಜಿಲ್ಲಾ ಕಾರ್ಮಿಕ ಕಚೇರಿ ಕನಿಷ್ಠ ಕೂಲಿ ಜಾರಿ ಮಾಡಲು ಒತ್ತಾಯಿಸಿ ಪ್ರತಿಭಟನಾ ಧರಣಿ ನಡೆಸಲು ತೀರ್ಮಾನಿಸಲಾಯಿತು.

ವೇತನ, ಪಿಂಚಣಿ, ಉಪಧನಕ್ಕಾಗಿ ಅಂದಾಜು 700 ಕೋಟಿ ರೂ. ಒದಗಿಸುವಂತೆ ಒತ್ತಾಯಿಸಿ ನಮ್ಮ ಸಂಘಟನೆ ಬಜೆಟ್ ಪೂರ್ವದಲ್ಲಿ ನಡೆಸಿದ ಹೋರಾಟದ ಫಲವಾಗಿ ಸರ್ಕಾರ 300 ಕೋಟಿ ರೂ.ಗಳನ್ನು ಬಜೆಟ್‌ನಲ್ಲಿ ಮಂಜೂರು ಮಾಡಿದ್ದು, ಇದನ್ನು ಪಡೆಯುವಲ್ಲಿ ನಾವು ಸಫಲರಾಗಿದ್ದೇವೆ. ಇಎಫ್‌ಎಮ್‌ಎಸ್‌ನಲ್ಲಿ ಸೇರ್ಪಡೆ ಮಾಡುವ ಸಂದರ್ಭದಲ್ಲಿ ವಿದ್ಯಾರ್ಹತೆ ಪರಿಗಣಿಸಲು ಇಲಾಖೆಯಿಂದ ಪತ್ರ ಹೋಗಿದ್ದು, ಇದರಿಂದ ರಾಜ್ಯದಲ್ಲಿ 2017ರ ಅ.30ಕ್ಕಿಂತ ಮುಂಚೆ ನೇಮಕಗೊಂಡವರಿಗೆ ಅನ್ಯಾಯವಾಗುವುದರಿಂದ ಇದನ್ನು ಕೈಬಿಡಬೇಕು. ಹಿಂದಿನ ಆದೇಶದಂತೆ ವೇತನ, ಹಾಜರಾತಿ, ವಯಸ್ಸಿನ ದಾಖಲಾತಿ ಆಧಾರದಲ್ಲಿ ಸೇರ್ಪಡೆ ಮಾಡಿಕೊಳ್ಳಬೇಕು. ಈ ದಿನಾಂಕದ ಒಳಗೆ ನೇಮಕ ಹೊಂದಿದ ನೌಕರರ ವಿದ್ಯಾರ್ಹತೆ ಸಡಿಲಿಕೆ ನೀಡಬೇಕು ಎಂದು ಸಮಾವೇಶದಲ್ಲಿ ನಿರ್ಣಯ ಕೈಗೊಳ್ಳಲಾಯಿತು.

ವಿಭಾಗ ಮಟ್ಟದ ಕಾರ್ಯಾಗಾರದಲ್ಲಿ ನಿರ್ಧಾರ

ಗ್ರಾಮ ಪಂಚಾಯತಿಗಳಲ್ಲಿ ಕರ ವಸೂಲಿಯಲ್ಲಿ ಶೇ.40ರಷ್ಟು ಹಣವನ್ನು ನೌಕರರ ವೇತನ ಹಾಗೂ ಪಿಂಚಣಿಗೆ ಬಳಸಬೇಕು. ಗ್ರಾಪಂಗಳಲ್ಲಿ ಸಿಬ್ಬಂದಿಗೆ ತೊಂದರೆ ಯಾದಾಗ ಅವರಿಗೆ ಅದೇ ತಾಲೂಕಿನ ಪಕ್ಕದ ಪಂಚಾಯತಿಗಳಿಗೆ ವರ್ಗಾವಣೆಗೆ ಜಿಲ್ಲಾ ಪಂಚಾಯತ್ ಅವಕಾಶ ನೀಡಬೇಕು. ಸೇವೆಯಲ್ಲಿರುವಾಗ ಗ್ರಾಪಂ ನೌಕರರು ಮೃತರಾದರೆ ಅವರ ಅಂತಿಮ ಸಂಸ್ಕಾರಕ್ಕೆ ಈ ಹಿಂದೆ ಚರ್ಚಿಸಿದ ಹಾಗೆ 10,000 ಕೊಡಲು ಆದೇಶ ಹೊರಡಿಸಬೇಕು. ನೀರುಗಂಟಿ, ಜವಾನ, ಸ್ವಚ್ಛತೆಗಾರರಾಗಿ ಸೇವೆ ಸಲ್ಲಿಸುವವರು ಜಿಪಂ ಅನುಮೋದನೆ ಪಡೆದು ತೆರವು ಆದ ಕರ ವಸೂಲಿಗಾರ ಅಥವಾ ಇನ್ನಿತರೆ ಹುದ್ದೆಗಳಿಗೆ ಬಡ್ತಿ ಪಡೆದಾಗ ಮತ್ತೇ ಜಿಪಂ ಅನುಮೋದನೆ ಪಡೆಯುವುದನ್ನು ಕೈಬಿಡಬೇಕು. ಜನಸಂಖ್ಯೆಗನುಗುಣವಾಗಿ ಗ್ರಾಪಂಗಳಲ್ಲಿ ಗ್ರೇಡ್–2ನಿಂದ ಗ್ರೇಡ್–1 ಪಂಚಾಯಿತಿಗಳಾಗಿ ಮಾರ್ಪಡಿಸಬೇಕು. ಪ್ರತಿ ಗ್ರಾಪಂಗೂ ದ್ವಿತೀಯ ದರ್ಜೆ ಲೆಕ್ಕ ಸಹಾಯಕ ಹುದ್ದೆ ಸೃಷ್ಟಿಸಬೇಕು ಎಂಬಿತ್ಯಾದಿ ಹಲವು ಬೇಡಿಕೆಗಳ ಬಗ್ಗೆ ಹೋರಾಟ ನಡೆಸಲು ಸಮಾವೇಶದಲ್ಲಿ ತೀರ್ಮಾನಿಸಲಾಯಿತು.

ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ರಾಮಕೃಷ್ಣ ಸಮಾವೇಶವನ್ನು ಉದ್ಘಾಟಿಸಿದರು. ರಾಜ್ಯ ಉಪಾಧ್ಯಕ್ಷ ನಾಡಗೌಡ, ಖಜಾಂಚಿ ಆರ್.ಎಸ್.ಬಸವರಾಜ್, ಮೈಸೂರು ಜಿಲ್ಲಾಧ್ಯಕ್ಷ ಕೆ.ಬಸವರಾಜ್, ಕರ್ನಾಟಕ ಪ್ರಾಂತ ರೈತ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಜಗದೀಶ್ ಸೂರ್ಯ, ರಾಜ್ಯ ಸಹ ಕಾರ್ಯದರ್ಶಿ ಸಿದ್ದರಾಜು. ಚಾಮರಾಜನಗರ ಜಿಲ್ಲಾಧ್ಯಕ್ಷ ಮಹದೇವಸ್ವಾಮಿ, ಮಂಡ್ಯಾ ಜಿಲ್ಲಾಧ್ಯಕ್ಷ ಶಿವಕುಮಾರ್, ಕೊಡಗು ಜಿಲ್ಲಾ ಮುಖಂಡ ಎಂ.ಬಿ.ಹರೀಶ್ ಇನ್ನಿತರರು ಉಪಸ್ಥಿತರಿದ್ದರು.



ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಕಳಲವಾಡಿ ಗ್ರಾಮದಲ್ಲಿ ಶ್ರೀ ಕನಕ ಕಾಗಿನೆಲೆ ಗೃಹ ನಿರ್ಮಾಣ ಸಹಕಾರ ಸಂಘದ ಕಟ್ಟಡ ನಿರ್ಮಾಣಕ್ಕೆ ಶಾಸಕ ಜಿ.ಟಿ. ದೇವೇಗೌಡ ಭೂಮಿಪೂಜೆ ನೆರವೇರಿಸಿದರು. ಚಿತ್ರದಲ್ಲಿ ಕರ್ನಾಟಕ ಪ್ರದೇಶ ಕುರುಬರ ಸಂಘದ ರಾಜ್ಯಾಧ್ಯಕ್ಷ ಬಿ.ಸುಬ್ರಹ್ಮಣ್ಯ, ರಾಮಚಂದ್ರೇಗೌಡ ಇನ್ನಿತರರನ್ನು ಕಾಣಬಹುದು.

ಶಿಶುಪಾಲನಾ ಕೇಂದ್ರಕ್ಕೆ ಅರ್ಜಿ ಆಹ್ವಾನ

ಮೈಸೂರು, ಜೂ.26– ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ 2022–23ನೇ ಸಾಲಿಗೆ ಉದ್ಯೋಗಸ್ಥ ಮಹಿಳೆಯರಿಗೆ ಅನುಕೂಲವಾಗುವಂತೆ 6 ವರ್ಷದ ಮಕ್ಕಳಿಗೆ ಪೂರಕ ಪೌಷ್ಟಿಕ ಆಹಾರ ಹಾಗೂ ಆರೈಕೆ ಮಾಡುವ ನಿಟ್ಟಿನಲ್ಲಿ ಜಿಲ್ಲಾ ಕೇಂದ್ರದಲ್ಲಿ 2 ಶಿಶುಪಾಲನಾ ಕೇಂದ್ರಗಳನ್ನು ಹಾಗೂ ಹುಣಸೂರು, ನಂಜನಗೂಡು ತಾಲೂಕಿನಲ್ಲಿ 2 ಶಿಶುಪಾಲನಾ ಕೇಂದ್ರಗಳನ್ನು ನಿರ್ವಹಣೆ ಮಾಡಲು ಸ್ವಯಂಸೇವಾ ಸಂಸ್ಥೆಗಳಿಂದ ಅರ್ಜಿ ಆಹ್ವಾನಿಸಿದೆ. ಮಾಹಿತಿಗೆ ದೂ.ಸಂಖ್ಯೆ: 0821–24954321 ಸಂಪರ್ಕಿಸಿ.

ದ್ರೌಪದಿ ಮುರ್ಮು ಆಯ್ಕೆಗೆ ಬಿಜೆಪಿ ಎಸ್ಟಿ ಮೋರ್ಚಾ ಸ್ವಾಗತ

ಎಸ್‌ಟಿ ಸಮುದಾಯಕ್ಕೆ ಬಿಜೆಪಿ ಕೊಟ್ಟ ಉಡುಗೊರೆ

ಮೈಸೂರು, ಜೂ.26(ಆರ್‌ಕೆಬಿ)– ದೇಶದ ರಾಷ್ಟ್ರಪತಿ ಹುದ್ದೆಗೆ ಬುಡಕಟ್ಟು ಸಮಾಜದ ನಾಯಕಿ ದ್ರೌಪದಿ ಮುರ್ಮು ಅವರನ್ನು ಎನ್‌ಡಿಎ ಅಭ್ಯರ್ಥಿಯನ್ನಾಗಿ ಆಯ್ಕೆ ಮಾಡುವ ಮೂಲಕ ಬಿಜೆಪಿ ಪರಿಶಿಷ್ಟ ವರ್ಗಕ್ಕೆ ಬಹು ದೊಡ್ಡ ಉಡುಗೊರೆ ನೀಡಿದೆ ಎಂದು ಬಿಜೆಪಿ ಎಸ್‌ಟಿ ಮೋರ್ಚಾ ಸ್ವಾಗತಿಸಿದೆ.



ಮೈಸೂರು ಬಿಜೆಪಿ ಕಚೇರಿಯಲ್ಲಿ ಭಾನುವಾರ ಎಸ್‌ಟಿ ಮೋರ್ಚಾ ರಾಜ್ಯ ಕೋಶಾಧ್ಯಕ್ಷ ಹಾಗೂ ಮೈಸೂರು ನಗರಪಾಲಿಕೆ ಆಡಳಿತ ಪಕ್ಷದ ನಾಯಕ ಶಿವಕುಮಾರ್ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ರಾಷ್ಟ್ರಪತಿ ಚುನಾವಣೆಯಲ್ಲಿ ಎನ್‌ಡಿಎ ಅಭ್ಯರ್ಥಿ ಯಾರಾಗುತ್ತಾರೆ ಎಂಬ ಕುತೂಹಲದಿಂದ ಕಾದಿದ್ದವರಿಗೆ ಬಿಜೆಪಿ ಉತ್ತಮ ಅಭ್ಯರ್ಥಿಯನ್ನೇ ಆಯ್ಕೆ ಮಾಡುವ ಮೂಲಕ ಸಾಮಾಜಿಕ ನ್ಯಾಯಕ್ಕೆ ಬದ್ಧವಾಗಿದೆ ಎಂಬುದನ್ನು ತೋರಿಸಿಕೊಟ್ಟಿದೆ ಎಂದು ತಿಳಿಸಿದರು.

ಅಟಲ್ ಬಿಹಾರಿ ವಾಜಪೇಯಿ ಪ್ರಧಾನಿಯಾಗಿದ್ದ ಕಾಲದಲ್ಲಿ ಡಾ.ಎ.ಪಿ.ಜೆ.ಅಬ್ದುಲ್ ಕಲಾಂ ಅವರನ್ನು ಆಯ್ಕೆ ಮಾಡಲಾಗಿತ್ತು. ನರೇಂದ್ರ ಮೋದಿ ಪ್ರಧಾನಿಯಾದ ಬಳಿಕ ದಲಿತ ಸಮುದಾಯಕ್ಕೆ ಸೇರಿದ ರಾಮನಾಥ್ ಕೋವಿಂದ್ ಅವರನ್ನು ಆಯ್ಕೆ ಮಾಡಿತ್ತು. ಇದೀಗ ಅತ್ಯಂತ ಹಿಂದುಳಿದ ಬುಡಕಟ್ಟು ಸಮುದಾಯಕ್ಕೆ ಸೇರಿದ ದ್ರೌಪದಿ ಮುರ್ಮು ಅವರನ್ನು ಅಭ್ಯರ್ಥಿಯಾಗಿ ಮಾಡುವ ಮೂಲಕ ಎಸ್‌ಟಿ ಸಮುದಾಯವನ್ನು ಗೌರವಿಸಿದೆ. ಈ ವಿಚಾರದಲ್ಲಿ ಪ್ರಧಾನಿ ನರೇಂದ್ರ ಮೋದಿ ಹಾಗೂ ಬಿಜೆಪಿಯದ್ದು ಐತಿಹಾಸಿಕ ತೀರ್ಮಾನವಾಗಿದೆ. ಇದಕ್ಕಾಗಿ ಪ್ರಧಾನಿ ಮೋದಿ, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ, ಗೃಹ ಸಚಿವ ಅಮಿತ್ ಷಾ ಅವರಿಗೆ ಕೃತಜ್ಞತೆ ಸಲ್ಲಿಸುವುದಾಗಿ ತಿಳಿಸಿದರು.

ಕೇಂದ್ರ ಸಚಿವ ಸಂಪುಟದಲ್ಲಿ ಅರ್ಜುನ್ ಮುಂಡ ಸೇರಿದಂತೆ ಆರು ಮಂದಿಗೆ ಅವಕಾಶ ನೀಡಿದೆ. ರಾಜ್ಯದಲ್ಲಿ ಬಿ.ಶ್ರೀರಾಮುಲು ಅವರಿಗೆ ಸಚಿವ ಸ್ಥಾನ ಹಾಗೂ ವಿಧಾನ ಪರಿಷತ್‌ನಲ್ಲಿ ಹೇಮಲತಾ ನಾಯಕ್ ಅವರಿಗೆ ಅವಕಾಶ ನೀಡಿ ನಾಯಕ ಸಮಾಜದಲ್ಲಿ ಮಹಿಳೆಗೆ ಅವಕಾಶ ಕಲ್ಪಿಸಿದೆ. ಅಲ್ಲದೆ ಬಜೆಟ್‌ನಲ್ಲಿ ಎಸ್‌ಟಿ ಸಮುದಾಯಕ್ಕೆ 12,000 ಕೋಟಿ ಅನುದಾನ ಮೀಸಲಿಟ್ಟು, ನಾಯಕ ಸಮಾಜದ ಅಭಿವೃದ್ಧಿಗೆ ಅನೇಕಾರು ಕಾರ್ಯಕ್ರಮಗಳನ್ನು ನೀಡಿದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಎಸ್ಟಿ ಮೋರ್ಚಾದ ರಾಜ್ಯ ಉಪಾಧ್ಯಕ್ಷ ಮಲ್ಲೇಶ್, ನಗರ ಅಧ್ಯಕ್ಷ ಲಕ್ಷ್ಮಣ, ಪ್ರಧಾನ ಕಾರ್ಯದರ್ಶಿ ಎಂ.ಮಹೇಶ್, ನಗರ ಪ್ರಧಾನ ಕಾರ್ಯದರ್ಶಿ ಎಂ.ಕೃಷ್ಣ ನಾಯಕ, ಮಾಧ್ಯಮ ವಕ್ತಾರ ಮಹೇಶ್‌ರಾಜೇ ಅರಸ್ ಉಪಸ್ಥಿತರಿದ್ದರು.

ಮೈಸೂರು ಜೈಲಿನಲ್ಲಿ ತುರ್ತು ಪರಿಸ್ಥಿತಿಯ ಕರಾಳ ದಿನಗಳ ನೆನಪು

ಹಿರಿಯ ಸ್ವಾತಂತ್ರ್ಯ ಹೋರಾಟಗಾರರಿಗೆ ರಾಮದಾಸ್ ಸನ್ಮಾನ


ಮೈಸೂರು, ಜೂ. 26 (ಆರ್‌ಕೆ)– ಮೈಸೂರು ಜಿಲ್ಲಾ ಕೇಂದ್ರ ಕಾರಾಗೃಹದ ಆವರಣದಲ್ಲಿ ಏರ್ಪಡಿಸಿದ್ದ ಕಾರ್ಯಕ್ರಮದಲ್ಲಿ 47 ವರ್ಷಗಳ ಹಿಂದಿನ ತುರ್ತು ಪರಿಸ್ಥಿತಿಯ ಕರಾಳ ದಿನಗಳ ಸ್ಮರಣೆ ಮಾಡಲಾಯಿತು.

ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ಶಾಸಕ ಎಸ್.ಎ.ರಾಮದಾಸ್ ನೇತೃತ್ವದಲ್ಲಿ ನಡೆದ ಕಾರ್ಯಕ್ರಮದಲ್ಲಿ ಹಿರಿಯ ಸ್ವಾತಂತ್ರ್ಯ ಹೋರಾಟಗಾರರಾದ ತೋಂಟದಾರ್ಯ, ಹಿರಿಯೂರು ವೆಂಕಟೇಶ್, ಎನ್.ಆರ್. ಚಂದ್ರಶೇಖರ್, ರಾಮಕೃಷ್ಣಪ್ಪ, ವಾಮನಜೀ, ಮಹದೇವಣ್ಣ, ಶ್ರೀಧರ, ತಿಲಕ್‌ನಗರ ಮಹದೇವಣ್ಣ, ಶ್ರೀಮತಿ ಪದ್ಮ, ರಘು, ವೇಣುಗೋಪಾಲ್ ಅವರನ್ನು ಶಾಸಕ ಎಸ್.ಎ. ರಾಮದಾಸ್ ಮತ್ತು ಹಂಗಾಮಿ ಮೇಯರ್ ಸುನಂದಾ ಪಾಲನೇತ್ರ ಸನ್ಮಾನಿಸಿ, ಗೌರವ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ರಾಮದಾಸ್, 47 ವರ್ಷಗಳ ಹಿಂದೆ ದೇಶದಲ್ಲಿ ತುರ್ತು ಪರಿಸ್ಥಿತಿ ಹೇರಿದಾಗ ಸರ್ಕಾರದ ವಿರುದ್ಧ ಕರಪತ್ರ ಪ್ರದರ್ಶಿಸಿ ಪ್ರತಿಭಟನೆಯಲ್ಲಿ ಪಾಲ್ಗೊಂಡು ಬಂಧಿತರಾಗಿ ಜೈಲುವಾಸ ಅನುಭವಿಸಿದವರ ಅನುಭವಗಳ ಚಿಂತನ–ಮಂಥನ ಮಾಡುವ ಮೂಲಕ ಹಿರಿಯರನ್ನು ಗೌರವಿಸುವ ಅವಕಾಶ ಲಭ್ಯವಾಗಿರುವುದು ಸಂತಸ ತಂದಿದೆ ಎಂದರು.

ಇದೇ ವೇಳೆ ತುರ್ತು ಪರಿಸ್ಥಿತಿಯಲ್ಲಿ ಮೈಸೂರು ಜೈಲಿನಲ್ಲಿ ಬಿಜೆಪಿ ಹಿರಿಯ ಮುಖಂಡ ತೋಂಟದಾರ್ಯ ಅವರು ತಮ್ಮ ಅನುಭವಗಳನ್ನು ಹಂಚಿಕೊಂಡರು. ಅದೊಂದು ಅದ್ಭುತ ಅನುಭವ. ಬೀದಿಗಿಳಿದು 'ಭಾರತ ಮಾತಾ ಕೀ ಜೈ' ಎಂದು ತುರ್ತು ಪರಿಸ್ಥಿತಿ ವಿರುದ್ಧ ಘೋಷಣೆ ಕೂಗಿದ ಹಲವರನ್ನು ಪೊಲೀಸರು ಬಂಧಿಸಿ, ಮೈಸೂರು ಜೈಲಿಗೆ ಕಳುಹಿಸಿದರು ಎಂದರು.

ನನ್ನೊಂದಿಗೆ ಜೈಲುವಾಸ ಅನುಭವಿಸಿದ ಹಲವರಿಗೆ ಜೈಲಿನಲ್ಲಿದ್ದಾಗಲೇ ಹಿರಿಯ ಸ್ವಾತಂತ್ರ್ಯ ಹೋರಾಟಗಾರ ಓ.ವಿ. ಶೇಷಾದ್ರಿ ಅವರು ಪತ್ರ ಬರೆದು ಸೆರೆಮನೆ–ಗುರುಮನೆ ಇದ್ದಂತೆ. ನೀವು ಅಲ್ಲಿ ನಿಮಗೆ ತಿಳಿಯದಿರುವ ಹಲವು ಸಂಗತಿಗಳನ್ನು ಅರಿಯಲು ಸಹಾಯವಾಗುತ್ತದೆ ಎಂದಿದ್ದರು ಎಂಬುದನ್ನು ತೋಂಟದಾರ್ಯ ಹಳೆಯ ನೆನಪುಗಳನ್ನು ಸ್ಮರಿಸಿಕೊಂಡರು.




ರಾಷ್ಟ್ರದಲ್ಲಿ ತುರ್ತು ಪರಿಸ್ಥಿತಿ ಹೇರಿದ್ದ ಸಂದರ್ಭ ರೀಸರ್ಚ್ ಅನಾಲಿಸಿಸ್ ವಿಂಗ್ (RAW) ನೀಡಿದ ವರದಿಯನ್ವಯ ಇಂದಿರಾ ಗಾಂಧಿ ಅವರು 1977ರ ಮಾರ್ಚ್ ಮಾಹೆಯಲ್ಲಿ ಚುನಾವಣೆ ಘೋಷಿಸಿದರು. ಆದರೆ, ದಕ್ಷಿಣ ರಾಜ್ಯಗಳಲ್ಲಿನ ಕೆಲವೇ ಬೆರಳೆಣಿಕೆ ಕ್ಷೇತ್ರಗಳನ್ನು ಹೊರತುಪಡಿಸಿದರೆ ದೇಶಾದ್ಯಂತ ಕಾಂಗ್ರೆಸ್ ಧೂಳೀಪಟವಾಯಿತು. ಜನಸಂಘ ತಂಡದ 98 ಮಂದಿ ಸೇರಿದಂತೆ ಜನತಾ ಪಾರ್ಟಿಯು ಬಹುಮತ ಗಳಿಸಿತು ಎಂದು ತಿಳಿಸಿದರು.

ಹೊಸ ಸರ್ಕಾರ ರಚನೆಯಾಗಿ ಅಟಲ್ ಬಿಹಾರಿ ವಾಜಪೇಯಿ ಅವರು ವಿದೇಶಾಂಗ ಸಚಿವರಾಗಿ ಭಾರತ–ಪಾಕಿಸ್ತಾನಗಳ ನಡುವೆ ಬಾಂಧವ್ಯ ಬೆಸೆದಿದ್ದರು. ಅಂದಿನ ತುರ್ತು ಪರಿಸ್ಥಿತಿಯ ಹೋರಾಟದಿಂದ ಬಿಜೆಪಿಗೆ ಬಲ ಬಂದಿತಲ್ಲದೆ ಅದು ಪರಿವರ್ತನೆ, ಬದಲಾವಣೆಗೂ ಕಾರಣವಾಯಿತು ಎಂದು ತೋಂಟದಾರ್ಯ ಹಳೆಯ ನೆನಪುಗಳ ಮೆಲುಕು ಹಾಕಿದರು.

ಕಾರ್ಯಕ್ರಮದಲ್ಲಿ ಕೆ.ಆರ್. ಕ್ಷೇತ್ರದ ಬಿಜೆಪಿ ಅಧ್ಯಕ್ಷ ವಡಿವೇಲು, ಮುಖಂಡರಾದ ಡಾ.ಭಾನುಪ್ರಕಾಶ್, ರಾಜೇಶ್ ಸೇರಿದಂತೆ ಹಲವರು ಭಾಗವಹಿಸಿದ್ದರು. ನಂತರ ತೋಂಟದಾರ್ಯ ಸೇರಿದಂತೆ ಜೈಲುವಾಸ ಅನುಭವಿಸಿದ್ದ ಸ್ವಾತಂತ್ರ್ಯ ಹೋರಾಟಗಾರರು ಜೈಲಿನಲ್ಲಿ ತಾವು ವಾಸವಿದ್ದ ಸ್ಥಳವನ್ನು ವೀಕ್ಷಿಸಿದರು.

ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

27.06.2022 ಸೋಮವಾರ, ಮಳೆ ನಕ್ಷತ್ರ : ಆರಿದ್ರ, 22.06.2022 ರಿಂದ 05.07.2022
ಶ್ರೀ ಶುಭಕೃತುನಾಮ ಸಂವತ್ಸರ, ಉತ್ತರಾಯಣ, ಗ್ರೀಷ್ಮ ಋತು, ಜ್ಯೇಷ್ಠ ಮಾಸ, ಕೃಷ್ಣ ಪಕ್ಷ
ತಿಥಿ: ತ್ರಯೋದಶಿ, ನಕ್ಷತ್ರ : ಕೃತ್ತಿಕಾ, ರಾಹುಕಾಲ: ಬೆಳಗ್ಗೆ 7.30 ರಿಂದ 9ರವರೆಗೆ

■ **ಧನ್ಯ ಸ್ಕೂಲ್ ಆಫ್ ಯೋಗ ಹಾಗೂ ಮುದ್ರಾ ಪ್ರಾಣಾಯಾಮ ರಿಸರ್ಚ್ ಸೆಂಟರ್ :** ಮುದ್ರಾ ಪ್ರಾಣಾಯಾಮ ಶಿಬಿರ, ಸ್ಥಳ: ಮಹಿಳಾ ಸಮಾಜ, ಜೆಎಲ್‌ಬಿ ರಸ್ತೆ, ಬೆಳಗ್ಗೆ 6.30ರಿಂದ.

■ **ಜೆಎಸ್‌ಎಸ್ ಆಯುರ್ವೇದ ಆಸ್ಪತ್ರೆ:** ಅಂತರರಾಷ್ಟ್ರೀಯ ಮೈಗ್ರೇನ್ ದಿನದ ಪ್ರಯುಕ್ತ ಅರ್ಧ ತಲೆನೋವು (ಮೈಗ್ರೇನ್) ಚಿಕಿತ್ಸಾ ಶಿಬಿರ, ಸ್ಥಳ: ಜೆಎಸ್‌ಎಸ್ ಆಯುರ್ವೇದ ರಸ್ತೆ, ಬೆಳಗ್ಗೆ 9 ಗಂಟೆಯಿಂದ.

■ **ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ, ಸ್ಕೂಲ್ ಆಫ್ ಲಾಂಗ್ವೇಜ್ :** 'ಭಾರತೀಯ ಭಕ್ತಿ ಸಾಹಿತ್ಯ' (ಭಾಷಾ ಸಂಗಮ–2022) ಕುರಿತು 2 ದಿನಗಳ ಅಂತರರಾಷ್ಟ್ರೀಯ ಸಮ್ಮೇಳನ, ಆನ್‌ಲೈನ್‌ನಲ್ಲಿ ಉದ್ಘಾಟನಾ ಸಮಾರಂಭ. ಆನ್‌ಲೈನ್: https://meet.google.com/qbg-coow-xyf, ಬೆಳಗ್ಗೆ 10.30ರಿಂದ.


■ **ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ನಾಡಪ್ರಭು ಕೆಂಪೇಗೌಡ ಜಯಂತ್ಯೋತ್ಸವ ಸಮಿತಿ:** ನಾಡಪ್ರಭು ಕೆಂಪೇಗೌಡ ಜಯಂತಿ–2022, ದಿವ್ಯ ಸಾನಿಧ್ಯ: ಆದಿಚುಂಚನಗಿರಿ ಮಹಾಸಂಸ್ಥಾನ ಮೈಸೂರು ಶಾಖಾ ಮಠದ ಶ್ರೀ ಸೋಮನಾಥ ಸ್ವಾಮೀಜಿ, ಉದ್ಘಾಟನೆ: ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ. ಸೋಮಶೇಖರ್, ಅಧ್ಯಕ್ಷತೆ: ಶಾಸಕ ಎಲ್.ನಾಗೇಂದ್ರ, ಮುಖ್ಯ ಅತಿಥಿಗಳು: ಹಂಗಾಮಿ ಮೇಯರ್ ಶ್ರೀಮತಿ ಸುನಂದಾ ಪಾಲನೇತ್ರ, ಸಂಸದರಾದ ಪ್ರತಾಪ್ ಸಿಂಹ, ವಿ.ಶ್ರೀನಿವಾಸಪ್ರಸಾದ್, ಶ್ರೀಮತಿ ಸುಮಲತಾ ಅಂಬರೀಶ್, ಸ್ಥಳ: ಕರ್ನಾಟಕ ಕಲಾಮಂದಿರ, ಬೆಳಗ್ಗೆ 11 ಗಂಟೆಗೆ.

■ **ಮೈಸೂರು ವಿಶ್ವವಿದ್ಯಾನಿಲಯ, ಯುವರಾಜ ಕಾಲೇಜು (ಸ್ವಾಯತ್ತ):** ಯುರೇಕಾ–2022, ಉದ್ಘಾಟನೆ: ಮೈಸೂರು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಜಿ.ಹೇಮಂತ್‌ಕುಮಾರ್, ಅಧ್ಯಕ್ಷತೆ: ಯುವರಾಜ ಕಾಲೇಜು ಪ್ರಾಂಶುಪಾಲರಾದ ಪ್ರೊ.ಬಿ.ಎನ್.ಯಶೋಧ, ಉಪಸ್ಥಿತರು: ಯುವರಾಜ ಕಾಲೇಜು ಆಡಳಿತಾಧಿಕಾರಿ ಪ್ರೊ.ಹೆಚ್.ಸೋಮಶೇಖರಪ್ಪ, ಯುವರಾಜ ಕಾಲೇಜು ಪರೀಕ್ಷಾ ನಿಯಂತ್ರಣಾಧಿಕಾರಿ ಪ್ರೊ.ಕೆ.ಬಿ. ಉಮೇಶ್, ಕಾರ್ಯಕ್ರಮ ಸಂಯೋಜಕರಾದ ಡಾ. ರೂಬಿ ಸೆಲ್ವಿನಾ ಎಂ., ಸ್ಥಳ: ಅಮೃತ ಮಹೋತ್ಸವ ಸಭಾಂಗಣ, ಯುವರಾಜ ಕಾಲೇಜು, ಬೆಳಗ್ಗೆ 11 ಗಂಟೆಗೆ.

■ **ಜೆಎಸ್‌ಎಸ್ ಕಲಾ, ವಾಣಿಜ್ಯ ಮತ್ತು ವಿಜ್ಞಾನ ಕಾಲೇಜು, ಜೆಎಸ್‌ಎಸ್ ಕೌನ್ಸಿಲಿಂಗ್ ಸೆಂಟರ್ ಫಾರ್ ಆಲ್ಕೋಹಾಲಿಕ್ ಅಡಿಕ್ಟ್ಸ್ (ಜೆಎಸ್‌ಎಸ್ ಮಹಾ ವಿದ್ಯಾಪೀಠ) :** ಮಾದಕ ವ್ಯಸನ ಮತ್ತು ಮಾನವ ಅಕ್ರಮ ಸಾಗಾಣಿಕೆ ವಿರುದ್ಧ ಅಂತಾರಾಷ್ಟ್ರೀಯ ದಿನಾಚರಣೆ, ಸ್ಥಳ: ಕಾಲೇಜಿನ ಸೆಮಿನಾರ್ ಹಾಲ್, ಮಧ್ಯಾಹ್ನ 2.30ಕ್ಕೆ

■ **ಲಯನ್ಸ್ ಕ್ಲಬ್ ಆಫ್ ಮೈಸೂರ್ ಸೌತ್ (ಲಯನ್ಸ್ ಕ್ಲಬ್ ಇಂಟರ್‌ನ್ಯಾಷನಲ್, ಡಿಸ್ಟ್ರಿಕ್ಟ್–317ಎ):** ಚಾರ್ಟರ್ ಆನಿವರ್ಸರಿ ಸೆಲೆಬ್ರೇಷನ್, ಮುಖ್ಯ ಅತಿಥಿ: ಮುಡಾ ಅಧ್ಯಕ್ಷ ಹೆಚ್.ವಿ. ರಾಜೀವ್, ಮುಕ್ತ ವಿಶ್ವವಿದ್ಯಾನಿಲಯ ವಿಶ್ರಾಂತ ಪ್ರೊ. ಕೆ.ಎಸ್. ರಂಗಪ್ಪ, ಸ್ಥಳ: ಹೋಟೆಲ್ ರೂಸ್ಟ್, ಹುಣಸೂರು ರಸ್ತೆ, ಸಂಜೆ: 7 ಗಂಟೆಗೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.05 ಚಿಂತನ, 6.20 ಗೀತಾರಾಧನ, 6.35 ಹಾಗೂ ಸಂಜೆ 5ಕ್ಕೆ: ಶತಮಾನದ ಸ್ಮರಣೆಗಳು: ಮಂಡ್ಯ ಜಿಲ್ಲೆಯ ಶತಮಾನದ ನೆನಪುಗಳು: ಲೇಖನ ಪ್ರಸ್ತುತಿ– ಡಿ.ಎನ್.ಶ್ರೀಪಾದ್, 6.40 ಅರಿವಿನ ಶಿಖರ: ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಕಾರ್ಯಕ್ರಮ ಗಾಯನ– ಅಂಬಯ್ಯ ನುಲಿ ಮತ್ತು ಜಯಂತಿ ವಿ.ಭಟ್ ವ್ಯಾಖ್ಯಾನ–ಡಾ. ಮ.ರಾಮಕೃಷ್ಣ, 7.45 ನಿತ್ಯ ವಿಜ್ಞಾನ: ಪ್ರಾಯೋಜಿತ ಕಾರ್ಯಕ್ರಮ, 9.05 ಯಕ್ಷ ಸಂಪದ: ಯಕ್ಷಗಾನ ಬಡಗುತಿಟ್ಟಿನ ಮಟ್ಟುಗಳ ರೇಡಿಯೋ ಪ್ರಾತ್ಯಕ್ಷಿಕೆ, ಕರ್ನಾಟಕ ಯಕ್ಷಗಾನ ಅಕಾಡೆಮಿ ಪ್ರಾಯೋಜಿತ ಕಾರ್ಯಕ್ರಮ, ನಿರ್ಮಾಣ–ದಿವಾಕರ ಹೆಗಡೆ, 9.35 ಭಾರತದ ಸ್ವಾತಂತ್ರ್ಯ ಅಮೃತ ಮಹೋತ್ಸವದ ಸಂದರ್ಭದಲ್ಲಿ ದೈನಂದಿನ ವಿಶೇಷ ಕಾರ್ಯಕ್ರಮ ಸರಣಿ 'ಸ್ವಾತಂತ್ರ್ಯ ಚಳುವಳಿಯ ಪಯಣ' ಆಕಾಶವಾಣಿಯೊಂದಿಗೆ, 10.00 ಲಯಸಂಭ್ರಮ: ತಾಳ, ಲಯ, ರಸಾಸ್ವಾದ, ಪ್ರಸ್ತುತಿ– ಹೆಚ್.ಎಲ್.ಶಿವಶಂಕರಸ್ವಾಮಿ, ನಿರ್ಮಾಣ –ಎಸ್.ಸುಬ್ರಹ್ಮಣ್ಯ ಭಾಗವಹಿಸುವವರು–ಡಾ.ಶೀಲಾ ಶ್ರೀಧರ್, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ. **ಮಧ್ಯಾಹ್ನ:** 12.05 ವನಿತಾ ವಿಹಾರ, 12.30 ಭಕ್ತಿಗೀತೆಗಳು–ಬಿ.ಆರ್.ಗೀತಾ, 12.45 ನಮ್ಮ ಆರೋಗ್ಯ: 'ಸ್ಕ್ವಿಂಟ್ ಐಸ್' ಕುರಿತು ಡಾ.ಕೆ.ವಿ. ರವಿಶಂಕರ್ ಅವರೊಂದಿಗೆ ಮಾತುಕತೆ, 1.20 ಭಾವಗೀತೆಗಳು–ಹೇಮಪ್ರಸಾದ್, 3.00 ವಸಂತಾ ರಾಮಾನುಜಂ–ಹಾಡುಗಾರಿಕೆ, 4.00 ಮಹಿಳಾರಂಗ–ಡಾಕ್ಟರ್ ಸಮಯ: ಭಾಗವಹಿಸುವವರು ಡಾ.ಸುಧಾ ಸಾಯಿರಾಂ, 4.30 ಝೇಂಕಾರ: ಮಕ್ಕಳ ಗೀತ ಗಾಯನ ಕಲಿಕಾ ಕಾರ್ಯಕ್ರಮ, ಕವಿ–ಸುರೇಖಾ ಭೀಮಕುಳಿ, ಸಂಗೀತ–ಬಿ.ಆರ್.ಗೀತಾ, ಭಾಗವಹಿಸುವವರು ಬೆಂಗಳೂರು ಬನಶಂಕರಿಯ ಲಿಟಲ್ ಫ್ಲವರ್ ಪಬ್ಲಿಕ್ ಶಾಲೆಯ ಮಕ್ಕಳು, 6.50 ಕೃಷಿರಂಗ: ಮಣ್ಣಿನ ಸಂರಕ್ಷಣೆಯ ಪ್ರಾಮುಖ್ಯತೆ ಕುರಿತು ಡಾ.ಎಸ್.ಎಸ್.ಪ್ರಕಾಶ್ ಅವರೊಡನೆ ಸಂದರ್ಶನ, 9.30 ಅಮೃತ ಸ್ವಾತಂತ್ರ್ಯ ಮಾಲಿಕೆಯ ವಿಶೇಷ ಕಾರ್ಯಕ್ರಮ, 10.30 ಸವಿನೆನಪು.


ನಾಡಪ್ರಭು ಕೆಂಪೇಗೌಡರ
ಜಯಂತಿ
27.06.2022 ಸೋಮವಾರ
ಅರಮನೆಯಿಂದ ಮೆರವಣಿಗೆ
ಬೆಳಗ್ಗೆ 9.30ಕ್ಕೆ
ಕಾರ್ಯಕ್ರಮ ಕಲಾಮಂದಿರ
ಬೆಳಗ್ಗೆ 11.30
ಸಿ.ಜಿ. ಗಂಗಾಧರ್
ಕಾರ್ಯಾಧ್ಯಕ್ಷರು, ರಾಜ್ಯ ಒಕ್ಕಲಿಗರ ಸಂಘ
ಕೆ.ವಿ.ಶ್ರೀಧರ
ನಿರ್ದೇಶಕರು, ರಾಜ್ಯ ಒಕ್ಕಲಿಗರ ಸಂಘ
ನಗರಪಾಲಿಕೆ ಸದಸ್ಯರು, ಮೈಸೂರು
ಮಂಜೇಗೌಡ
ನಿರ್ದೇಶಕರು, ರಾಜ್ಯ ಒಕ್ಕಲಿಗರ ಸಂಘ
ಶ್ರೀ ಜಯರಾಮ್ ಆರ್
ಗೌರವಾಧ್ಯಕ್ಷರು
ಶ್ರೀ ಮರಿಸ್ವಾಮಿ ಸಿ
ಅಧ್ಯಕ್ಷರು
ಶ್ರೀ ರವಿಕುಮಾರ್ ಆರ್
(ರಾಜಕೀಯ)
ಉಪಾಧ್ಯಕ್ಷರು
ಶ್ರೀ ಮಹೇಶ್ ಬಿ.ಸಿ.
ಉಪಾಧ್ಯಕ್ಷರು
ಶ್ರೀ ಚೇತನ್ ಎಂ.ಇ.
ಪ್ರಧಾನ ಕಾರ್ಯದರ್ಶಿ
ಶ್ರೀ ಜಯರಾಮು
ಸಹ ಕಾರ್ಯದರ್ಶಿ
ಶ್ರೀ ಲೋಕೇಶ್ ಆರ್.
ಖಜಾಂಚಿ
ಜಿ. ಮಂಜು
ಎಂ. ಶಿವಕುಮಾರ್
ಎಸ್. ಪ್ರಕಾಶ್
ಎಸ್. ಗುರುರಾಜ್
ಪ್ರಸನ್ನ ಎಸ್. ಲಕ್ಷ್ಮಣ್
ಜಿ. ಕುಮಾರ್‌ಗೌಡ
ಶ್ರೀಮತಿ ಸುಶೀಲಾ ನಂಜಪ್ಪ
ಎ. ರವಿ.
ಬಿ.ಇ. ಗಿರೀಶ್‌ಗೌಡ
ಬಿ.ಪಿ. ಬೋರೇಗೌಡ
ಎಸ್. ಉಮೇಶ
ಕೆ.ಪಿ. ನಾಗಣ್ಣ
ಗೋಪಾಲ್
ಪಿ. ಪ್ರಶಾಂತ್‌ಗೌಡ
ಮಿರ್ಲೆ ಶ್ರೀನಿವಾಸಗೌಡ ಎಂ ಕೆ
ಹೆಚ್.ಎನ್. ಸುಧೀರ್
ಎಚ್.ಕೆ. ನಾಗಣ್ಣ
ಪಿ.ಹೆಚ್. ರಾಜು
ಎ. ಕುಮಾರ್
ಟಿ.ಎನ್. ಸಂತೋಷ್‌ಕುಮಾರ್
@bhi design: 97407 97701
ಸುಸ್ವಾಗತ
ಸ್ವಾಗತ ಬಯಸುವವರು: ಜಿಲ್ಲಾ ಒಕ್ಕಲಿಗ ಸಂಘ ಮೈಸೂರು,
ರಾಜ್ಯ ಒಕ್ಕಲಿಗರ ಸಂಘ ಹಾಗೂ ಎಲ್ಲಾ ಒಕ್ಕಲಿಗ ಸಂಘ ಸಂಸ್ಥೆಗಳು


ನಾಡಪ್ರಭು ಕೆಂಪೇಗೌಡರ
513ನೇ ಜಯಂತೋತ್ಸವದ
ಶುಭಾಶಯಗಳು
ಎಲ್. ನಾಗೇಂದ್ರ
ಶಾಸಕರು, ಚಾಮರಾಜ ವಿಧಾನಸಭಾ ಕ್ಷೇತ್ರ,
ಮೈಸೂರು
ಪುನೀತ್ ಎಂ.ಎಸ್.
ಪ್ರಧಾನ ಕಾರ್ಯದರ್ಶಿ, ಚಾಮರಾಜ ವಿಧಾನಸಭಾ ಕ್ಷೇತ್ರ


ವರುಣಾ ವಿಧಾನಸಭಾ ಕ್ಷೇತ್ರದ ಜನಪ್ರಿಯ ಶಾಸಕರಾದ
ಸನ್ಮಾನ್ಯ ಶ್ರೀ ಡಾ. ಯತೀಂದ್ರ ಸಿದ್ದರಾಮಯ್ಯ ಅವರಿಗೆ
ಹುಟ್ಟುಹಬ್ಬದ ಶುಭಾಶಯಗಳು
ಅನಿಲ್ ಕುಮಾರ್ ಎನ್.
ಮಾಜಿ ಎಪಿಎಂಸಿ ಅಧ್ಯಕ್ಷರು
ಟಿ. ನರಸೀಪುರ


ಸರಳ ನಡೆ-ವಿರಳ ವ್ಯಕ್ತಿತ್ವ ಭರವಸೆಯ ನಾಯಕತ್ವ ಹಾಗೂ ವರುಣ
ವಿಧಾನಸಭಾಕ್ಷೇತ್ರದ ಜನಪ್ರಿಯ ಶಾಸಕರಾದ
ಸನ್ಮಾನ್ಯ ಶ್ರೀ ಯತೀಂದ್ರ ಸಿದ್ದರಾಮಯ್ಯರವರಿಗೆ
ಜನ್ಮದಿನದ ಶುಭಾಶಯಗಳು
ಶುಭಕೋರುವವರು
ಸಂಜಯ್‌ಕುಮಾರ್
ಕಾಂಗ್ರೆಸ್ ಮುಖಂಡರು
ಪಿರಿಯಾಪಟ್ಟಣ
ರಮೇಶ್ ಹುಯಿಲಾಳು
ಗ್ರಾ.ಪಂ. ಸದಸ್ಯರು
ನಾಗವಾಲ ಗ್ರಾಮ ಪಂಚಾಯಿತಿ
ಹುಯಿಲಾಳು ಕುಮಾರ್
ಕಾಂಗ್ರೆಸ್ ಯುವ ಮುಖಂಡರು

ನಕ್ಕರೆ ಅದೇ ಸ್ವರ್ಗ

ಪೂಜಾರಿ : ಮಂಗಳಾರತಿ ಯಾರ ಹೆಸರಿಗೆ ಮಾಡಲಿ?
ಗುಂಡ : ನನ್ನ ಹೆಂಡತಿ ಹೆಸರಿಗೆ ಮಾಡಿ.
ಪೂಜಾರಿ : ಯಾಕೆ ನಿಮ್ಮ ಹೆಸರಿಗೆ ಬೇಡವಾ, ಸರ್?
ಗುಂಡ : ಬೇಡ, ಈಗಾಗಲೇ ಅದು ಮನೆಯಲ್ಲಿ ಆಗಿದೆ.

ಮೈಸೂರು ಮಿತ್ರ
ಸೋಮವಾರ, 27 ಜೂನ್ 2022
ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)
ಸಂಪಾದಕ: ಎಂ. ಗೋವಿಂದೇಗೌಡ *M.A.*

ಅಮೃತವಾಹಿನಿ

ಅರ್ಥವಿಲ್ಲದ ಪ್ರಶ್ನೆಗೆ ಸುಮ್ಮನಿರುವುದೇ ಉತ್ತರ.

ವೇದ ಸುಳ್ಳಾದರೂ ಗಾದೆ ಸುಳ್ಳಾಗದು


ಸತ್ಯಕ್ಕೆ ಸಾವಿಲ್ಲ, ಸುಳ್ಳಿಗೆ ಸುಖವಿಲ್ಲ.

ನಿಮ್ಮ ಪತ್ರಗಳು

ಈ ರಸ್ತೆಗೂ ಪ್ರಧಾನಿ ಮೋದಿ ಬರಬೇಕಿತ್ತು!

ಮಾನ್ಯರೆ,

ಮೈಸೂರು ನಗರ ಕೆಲವು ರಸ್ತೆಗಳು ಸಂಪೂರ್ಣ ಹದಗೆಟ್ಟಿದ್ದು, ಜನಪ್ರತಿನಿಧಿಗಳು ಮತ್ತು ಅಧಿಕಾರಿಗಳು ಇದಕ್ಕೂ ನಮಗೂ ಸಂಬಂಧವಿಲ್ಲವೆಂದು ಕಣ್ಮುಚ್ಚಿ ಕುಳಿತಿದ್ದಾರೆ.



ನಜರ್‌ಬಾದ್ ಪೊಲೀಸ್ ಠಾಣೆ ಸರ್ಕಲ್‌ನಿಂದ ಮೈಸೂರು ಡೇರಿ ಕಡೆಗೆ ಹೋಗುವ ರಸ್ತೆ ಹಳ್ಳ–ಕೊಳ್ಳಗಳಿಂದ ತುಂಬಿದ್ದು, ರಸ್ತೆ ಎಲ್ಲಿದೆ ಎಂದು ಹುಡುಕಬೇಕಾದ ಪರಿಸ್ಥಿತಿ ಇದೆ ಅದರಲ್ಲೂ ಶ್ರೀ ಮಹದೇಶ್ವರ ದೇವಸ್ಥಾನದ ಮುಂಭಾಗವಿರುವ ರಸ್ತೆಯ ಸ್ಥಿತಿಯಂತೂ ತೀರಾ ಅದ್ವಾನದಿಂದ ಕೂಡಿದೆ.

ಈ ರಸ್ತೆಯಲ್ಲಿ ಹಾಲಿನ ಡೇರಿ, ನೂತನ ಜಿಲ್ಲಾಧಿಕಾರಿ ಗಳ ಕಚೇರಿ ಸಂಕೀರ್ಣ, ಟೆರೇಷಿಯನ್ ಕಾಲೇಜು, ಗೀತಾ ಶಿಶು ಶಿಕ್ಷಣ ಸಂಸ್ಥೆ ಸೇರಿದಂತೆ ಹಲವಾರು ವಿದ್ಯಾ ಸಂಸ್ಥೆಗಳಿದ್ದು, ಪ್ರತಿ ನಿತ್ಯ ಸಾವಿರಾರು ವಾಹನಗಳು, ಜನರು ಓಡಾಡುತ್ತಾರೆ. ಅವರುಗಳು ಅಧಿಕಾರಿ ಗಳು ಮತ್ತು ಜನಪ್ರತಿನಿಧಿಗಳಿಗೆ ಹಿಡಿಶಾಪ ಹಾಕುತ್ತ ಸಂಚರಿಸುವಂತಾಗಿದೆ. ಈ ರಸ್ತೆ ತಿ.ನರಸೀಪುರ, ಬನ್ನೂರಿಗೆ ಸಂಪರ್ಕ ಕಲ್ಪಿಸುವ ರಸ್ತೆಯಾಗಿದೆ.

ಅಂತರರಾಷ್ಟ್ರೀಯ ಯೋಗ ದಿನಾಚರಣೆ ಅಂಗವಾಗಿ ಮೈಸೂರು ಅರಮನೆ ಆವರಣದಲ್ಲಿ ನಡೆದ ಯೋಗ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಪ್ರಧಾನಿ ನರೇಂದ್ರ ಮೋದಿ ಆಗಮಿಸಿದ್ದರು. ಈ ಹಿನ್ನೆಲೆಯಲ್ಲಿ ಅವರು ಸಂಚರಿಸುವ ರಸ್ತೆಗಳೆಲ್ಲಾ ಡಾಂಬರ್ ಕಂಡವು. ಸುಣ್ಣ–ಬಣ್ಣ ಬಳಿದು ಸ್ವಾಗತ ಕೋರಲಾಯಿತು. ಹಾಗಾದರೆ ಪ್ರಧಾನಿ ಮೋದಿ ಅವರು ಸಂಚಾರಕ್ಕೆ ಯೋಗ್ಯವಲ್ಲದ ಡೇರಿ ರಸ್ತೆಗೂ ಬರಬೇಕಿತ್ತು. ಆಗ ಅದಕ್ಕೆ ರಿಪೇರಿ ಭಾಗ್ಯ ದೊರಕುತ್ತಿತ್ತು. ಪ್ರಧಾನಿಗೆ ಇರುವ ಗೌರವ ಪ್ರಜೆಗಳಿಗೆ ಇಲ್ಲವೇ ಎಂಬ ಪ್ರಶ್ನೆ ನನ್ನನ್ನು ಕಾಡುತ್ತಿದೆ. ಈ ರಸ್ತೆಯಲ್ಲಿ ಹಲವಾರು ದ್ವಿಚಕ್ರ ವಾಹನ ಸವಾರರು ಗುಂಡಿಗೆ ಬೀಳುವುದನ್ನು ತಪ್ಪಿಸಲು ಯತ್ನಿಸಿ, ಆಯ ತಪ್ಪಿ ಬಿದ್ದು, ಕೈ–ಕಾಲು ಮುರಿದುಕೊಂಡು, ತಲೆಗೆ ಪೆಟ್ಟು ಬಿದ್ದು ಆಸ್ಪತ್ರೆಗೆ ಸೇರಿದ ಘಟನೆಗಳು ಸಂಭವಿಸಿವೆ. ಇನ್ನಾದರೂ ನಮ್ಮ ಈ ನೋವು ದಪ್ಪ ಚರ್ಮದ ಅಧಿಕಾರಿಗಳು, ಜನಪ್ರತಿನಿಧಿಗಳಿಗೆ ತಲುಪುವುದೇ ಕಾದು ನೋಡಬಾಕಾಗಿದೆ.

– ಬೊಮ್ಮ ಲಿಂಗರಾಜು, ಆಲನಹಳ್ಳಿ, ಮೈಸೂರು,

ಪ್ರತಿಭಟನೆ ಬಿಟ್ಟು, ಕೋರ್ಟ್ ಮೊರೆ ಹೋಗಿ

ಮಾನ್ಯರೆ,

ನ್ಯಾಷನಲ್ ಹೆರಾಲ್ಡ್ ಆಸ್ತಿ ವಿಚಾರದಲ್ಲಿ ಅವ್ಯವಹಾರ ನಡೆದಿದೆ ಎಂದು ಬಿಜೆಪಿ ನಾಯಕ ಸುಬ್ರಮಣಿಯನ್ ಸ್ವಾಮಿ, ಗಾಂಧಿ ಕುಟುಂಬದ ವಿರುದ್ಧ ದೂರು ನೀಡಿದ್ದರು. ಅದರ ಆಧಾರದ ಮೇಲೆ ಸೋನಿಯಾ ಮತ್ತು ರಾಹುಲ್ ಗಾಂಧಿಗೆ ಜಾರೀ ನಿರ್ದೇಶಾಲಯ (ಇಡಿ) ನೋಟೀಸ್ ನೀಡಿ ವಿಚಾರಣೆ ನಡೆಸಲು ಮುಂದಾಗಿದೆ.

ಈ ವಿಚಾರದಲ್ಲಿ ಅಕ್ರಮ ಆಗಿಲ್ಲ ಎಂದು ಹೇಳುವ ಕಾಂಗ್ರೆಸ್ ನಾಯಕರು ಪ್ರತಿಭಟನೆ ನಡೆಸುತ್ತಿದ್ದಾರೆ. ಇದರ ಬದಲು ತಮ್ಮಲ್ಲಿರುವ ಸಾಕ್ಷ್ಯ ಮತ್ತು ದಾಖಲೆ ಗಳನ್ನು ನ್ಯಾಯಾಲಯಕ್ಕೆ ಸಲ್ಲಿಸಿ, ನ್ಯಾಯಾಲಯದಿಂದ ಕ್ಲೀನ್‌ಚಿಟ್ ಪಡೆಯುವುದು ಸೂಕ್ತ.

ಇದರೊಂದಿಗೆ ಅವ್ಯವಹಾರ ನಡೆದಿದೆ ಎಂದು ಯಾರು ದೂರು ನೀಡಿದ್ದಾರೋ, ಅವರ ಮೇಲೂ ಮಾನನಷ್ಟ ಮೊಕ್ಕದಮ್ಮೆ ಹೂಡಬಹುದು.

ನ್ಯಾಷನಲ್ ಹೆರಾಲ್ಡ್ ಅಕ್ರಮ ಪ್ರಕರಣದ ವಿಚಾರಣೆಯನ್ನು ಇಡಿಯವರು ಬಹಳ ವರ್ಷಗಳಿಂದ ನಡೆಸುತ್ತಿದ್ದಾರೆ. ಕಾಂಗ್ರೆಸ್ ಪಕ್ಷದ ಹಲವಾರು ರಾಜಕಾರಣಿಗಳ ವಿಚಾರಣೆಯನ್ನು ಈಗಾಗಲೇ ಇಡಿ ಸಂಸ್ಥೆ ಮಾಡಿದೆ. ಆಗ ಇಲ್ಲದ ವಿರೋಧ, ಪ್ರತಿಭಟನೆ ಈಗ್ಯಾಕೆ. ನಾವುಗಳು ಕ್ರಿಮಿನಲ್‌ಗಳಲ್ಲ. ನಾವುಗಳು ತಪ್ಪು ಮಾಡಿಲ್ಲ ಎಂದು ಸಾಬೀತು ಮಾಡಲು ನ್ಯಾಯಾಲಯಗಳು ಇವೆ.

ಯಾರೇ ಆಗಲೀ, ಅವರ ಮೇಲೆ ಆರೋಪ–ಪ್ರತ್ಯಾರೋಪಗಳು ಬಂದಿದ್ದೇ ಆದಲ್ಲಿ, ಹೆದರುವ ಅಗತ್ಯವಿಲ್ಲ. ನ್ಯಾಯಾಲಯಗಳಲ್ಲಿ ಹೋರಾಡುವ ಅವಕಾಶ ದೇಶದ ಪ್ರತಿಯೊಬ್ಬ ವ್ಯಕ್ತಿಗೂ ಇದ್ದೇ ಇದೆ. ಒಂದು ವೇಳೆ ಬಿಜೆಪಿಯವರೇ ಷಡ್ಯಂತ್ರ ಮಾಡಿದ್ದರೆ, ಅವರುಗಳ ಮೇಲೆಯೂ ದೂರು ನೀಡುವ ಹಕ್ಕು ಕಾಂಗ್ರೆಸ್ ರಾಜಕಾರಣಿಗಳಿಗೆ ಇಲ್ಲವೇ? ಅವರುಗಳನ್ನು ನ್ಯಾಯಾಲಯಕ್ಕೆ ಮುಲಾಜಿಲ್ಲದೆ ಎಳೆಯಿರಿ. ಯಾರದು ತಪ್ಪು, ಯಾರದು ಸರಿ ಅನ್ನು ವುದು ನ್ಯಾಯಾಲಯದಲ್ಲೇ ತೀರ್ಮಾನವಾಗಲಿ. ತಂತ್ರಕ್ಕೆ ಪ್ರತಿತಂತ್ರ ಹೂಡುವ ಜಾಣ್ಮೆಯನ್ನು ಕಾಂಗ್ರೆಸ್ ಪಕ್ಷದವರಿಗೆ ಹೇಳಿಕೊಡಬೇಕೆ?

– ಎ.ಎಸ್. ಗೋಪಾಲಕೃಷ್ಣ, ಮೈಸೂರು

ಕುಸಿದು ಬಿದ್ದ ಕಟ್ಟಡದ ತ್ಯಾಜ್ಯ ತೆರವುಗೊಳಿಸಿ

ಮಾನ್ಯರೆ,



ಮೈಸೂರಿನ ಶಿವರಾಂಪೇಟೆಯ ಮಾರುತಿ ದೇವಸ್ಥಾನದ ಎದುರಿರುವ ಕಟ್ಟಡವೊಂದು ಕೆಲ ದಿನಗಳ ಹಿಂದೆ ಕುಸಿದು ಬಿದ್ದಿದ್ದು, ರಾತ್ರಿಯಾದ ಕಾರಣ ಯಾವುದೇ ರೀತಿಯ ಅಪಾಯ ಸಂಭವಿಸಲಿಲ್ಲ. ಈಗ ಇನ್ನು ಉಳಿದ ಭಾಗ ಯಾವಾಗ ಬೇಕಾದರೂ ಬೀಳಬಹುದು ಎಂಬ ಆತಂಕ ಎದುರಾಗಿದೆ. ಕುಸಿದು ಬಿದ್ದಿರುವ ಜಾಗದಲ್ಲಿ ಇಟ್ಟಿಗೆ–ಮಣ್ಣನ್ನು ತೆಗೆಯದೆ ಹಾಗೇ ಬಿಡಲಾಗಿದೆ.

ಇದರಿಂದಾಗಿ ಇಲ್ಲಿ ಸಂಚರಿಸುವವರಿಗೆ ತುಂಬಾ ತೊಂದರೆಯಾಗುತ್ತಿದೆ. ಶಿವರಾಂಪೇಟೆಯು ಜನದಟ್ಟಣೆ ರಸ್ತೆಯಾಗಿದ್ದು, ಸಾವಿರಾರು ಜನರು ಈ ರಸ್ತೆಯಲ್ಲಿ ಓಡಾಡುತ್ತಿರುತ್ತಾರೆ. ಆಯುಕ್ತರು ಇದನ್ನು ಗಮನಿಸಿ ಈ ಜನ ದಟ್ಟಣೆ ರಸ್ತೆ ಸಂಚಾರಕ್ಕೆ ಅನುವು ಮಾಡಿಕೊಡಬೇಕೆಂದು ಈ ಭಾಗದ ಜನರ ಅಪೇಕ್ಷೆ.

–ಶ್ರೀರಾಂಪೇಟೆ ನಿವಾಸಿಗಳು, ಮೈಸೂರು,

ಇಹ–ಪರ

ಮಾನ್ಯರೆ,

ವರ್ತಮಾನದಲ್ಲಿ 'ಮಣ್ಣು ಉಳಿಸಿ' ಅಭಿಯಾನ ಶ್ಲಾಘ್ಯ. ಹಿಂದೆ ಮಣ್ಣೆಂದರೆ ತಾತ್ಸಾರ, ತಿರಸ್ಕಾರ. 'ಅಲ್ಲೇನಿದೆ ಮಣ್ಣು', 'ಮೂರು ಹಿಡಿ ಮಣ್ಣು', 'ಮಣ್ಣಾಂಗಟ್ಟಿ' ಮುಂತಾದ ಉಕ್ತಿಗಳನ್ನು ನೆನೆಯಬಹುದು.


ತದ್ವಿರುದ್ಧವಾಗಿ ಜನಪದ ಕವಯಿತ್ರಿಯ ಈ ಅಳಲು ಸ್ಮರಣೀಯ

ಹೆಣ್ಣಾಗಿ ಹುಟ್ಟೋದಕ್ಕಿಂತ ಮಣ್ಣಾಗಿ ಹುಟ್ಟೋದು ಲೇಸು,
ಮಣ್ಣಿನ ಮೇಲೆ ಮರವಾಗಿ ಹುಟ್ಟಿದರೆ ದಾರಿಕಾರರಿಗೆ ನೆರಳಾದೆ!

ಎಂದರೆ, ಮಣ್ಣಿನಿಂದ ಪರೋಕ್ಷವಾಗಿ ನೆರಳು, ಹುರುಳು, ಆಶ್ರಯ. ಬದುಕ್ಕಿದ್ದಾಗ ಗಿಡ, ಮರಗಳು. ಮರಣ ಹೊಂದಿದಾಗಲೂ ಬೇಕಲ್ಲವೆ ಮಣ್ಣು?

"ರತ್ನಗರ್ಭಾ ವಸುಂಧರಾ' ಎಂಬುದು ಪ್ರಸಿದ್ಧ ಸೂಕ್ತಿ. ಒಟ್ಟಿನಲ್ಲಿ ಮಣ್ಣಿನಿಂದಲೇ ಇಹ, ಮಣ್ಣಿನಿಂದಲೇ ಪರ.

– ಸಿಪಿಕೆ, ದತ್ತಪೀಠ ಆಸ್ಥಾನ ವಿದ್ವಾನ್.



ಬನ್ನೂರು ಕೆ. ರಾಜು
ಸಾಹಿತಿ, ಪತ್ರಕರ್ತ
ಮೊ : 94815 33167

ಬಹುಮುಖಿ

ನಮೋ ನಮಃ ನಾಡುಪ್ರಭು ಕೆಂಪೇಗೌಡ

ನಾಡು ಕಟ್ಟಿದ ಕೆಂಪೇಗೌಡರು
ನಾಡಿನ ನೆಲ ಜಲ ಸಂರಕ್ಷಕರು
ನಾಡ ಜನಬಾಳ ಜೀವಧಾತರು
ನಾಡಪ್ರಭುವಾಗಿ ಮೆರೆದವರು
ನಾಡ ನರನಾಡಿಗಳಲಿ ಶಾಶ್ವತರು
ನಾಡು ಸ್ಮರಿಸುವ ನಾಡಾತ್ಮರು

ಸಾವಿರಾರು ವರ್ಷಗಳ ಸುದೀರ್ಘವಾದ ಪೂರ್ವ ಚರಿತ್ರೆಯುಳ್ಳ ಕನ್ನಡ ನಾಡು ಅರ್ಥಾತ್ ಕರ್ನಾಟಕ ರಾಜ್ಯ ರಾಜಕೀಯವಾಗಿ, ವೈಜ್ಞಾನಿಕವಾಗಿ, ಸಾಂಸ್ಕೃತಿಕವಾಗಿ, ಧಾರ್ಮಿಕವಾಗಿ, ಆಧ್ಯಾತ್ಮಿಕವಾಗಿ, ಸಾಹಿತ್ಯಿಕವಾಗಿ, ಶೈಕ್ಷಣಿಕವಾಗಿ, ಸಾಮಾಜಿಕವಾಗಿ..... ಹೀಗೆ ಒಟ್ಟಾರೆ ಎಲ್ಲಾ ರೀತಿಯಿಂದಲೂ ಅಖಂಡವಾದದ್ದು. ಕನ್ನಡನಾಡೆಂದರೆ, ಕರ್ನಾಟಕವೆಂದರೆ ಅದೊಂದು ಸುಭಿಕ್ಷವಾದ, ಸುಭದ್ರವಾದ ಪ್ರದೇಶ ಎಂಬ ಪ್ರತೀತಿ ಭಾರತದಾದ್ಯಂತ ಸರ್ವವಿಧಿತ. ಭಾರತ ಜನನಿಯ ತನುಜಾತೆಯಾಗಿ ಭಾರತದ ಚರಿತ್ರೆಯೊಂದಿಗೆ ನಡೆದು ಬಂದಿರುವ ಕರ್ನಾಟಕಕ್ಕೆ ದೇಶದಲ್ಲಿ ಒಂದು ವಿಶಿಷ್ಟ ಸ್ಥಾನವಿದೆ. ಕನ್ನಡನಾಡನ್ನು ಅನೇಕ ರಾಜ ಮಹಾರಾಜರು, ಸಾಮ್ರಾಟರು,ಸಾಮಂತರು, ಸುಲ್ತಾನರು, ಪಾಳೆಗಾರರು, ಪ್ರಭುಗಳು, ನವಾಬರು, ಚಕ್ರವರ್ತಿಗಳು ಆಳಿದ್ದಾರೆ. ಹಾಗೆಯೇ ನಾಡು ಕಟ್ಟುವಲ್ಲಿ ತಮ್ಮದೇ ಆದ ಕೊಡುಗೆ ನೀಡಿದ್ದಾರೆ ಇಂತಹ ನಾಡು ಕಟ್ಟಿದ ಮಹನೀಯರ ಸಾಲಿನಲ್ಲಿ ಮಿಂಚಿನಂಥ ಪ್ರಮುಖ ಹೆಸರು ನಾಡಪ್ರಭು ಕೆಂಪೇಗೌಡರದು.


ನಾಡಪ್ರಭು ಕೆಂಪೇಗೌಡರೆಂದರೆ
ಜಗದ್ವಿಖ್ಯಾತ ದಾಖಲೆಗಳ ಧೀರ
ಸಾವಿರ ಕೆರೆಗಳ ಸರದಾರ
ಬೆಂಗಳೂರು ಕಟ್ಟಿದ ಕನಸುಗಾರ
ಮಣ್ಣಿನ ಮಗನಿವ ರಣಧೀರ
ನಾಡು ಮರೆಯದ ಕನ್ನಡ ಕುವರ.

ಕೃಷಿತಜ್ಞ, ಶಿಕ್ಷಣ ತಜ್ಞ, ಆಡಳಿತ ತಜ್ಞ, ಇಂಜಿನಿಯರ್, ವಾಣಿಜ್ಯೋದ್ಯಮಿ, ವಿಚಾರವಾದಿ, ವೈದ್ಯ, ಮನೋವೈದ್ಯ, ವಿಜ್ಞಾನಿ, ಕಾಲಜ್ಞಾನಿ, ತಂತ್ರಜ್ಞ, ದಾರ್ಶನಿಕ, ಸಂತ, ಪವಾಡಪುರುಷ, ಯೋಜನಾ ನಿಪುಣ, ತತ್ವಜ್ಞಾನಿ, ಸಾರ್ವಭೌಮ... ಹೀಗೆ ಬಹುಪಾಲು ಎಲ್ಲವೂ, ಎಲ್ಲರೂ ಒಬ್ಬ ವ್ಯಕ್ತಿಯಲ್ಲಿ ಇರಲು ಸಾಧ್ಯವೇ? ಎಂಬ ಪ್ರಶ್ನೆಗೆ ಸಾಧ್ಯವೆಂದು ಉತ್ತರವಾಗಿ ನಾಡಪ್ರಭು ಕೆಂಪೇಗೌಡರು ಕಾಣುತ್ತಾರೆ. ಏಕೆಂದರೆ ಎಲ್ಲಾ ಕ್ಷೇತ್ರಗಳ ತಂತ್ರಜ್ಞತೆ, ನಿಪುಣತೆ ಕೆಂಪೇಗೌಡರೊಳಗಿತ್ತೆಂಬುದಕ್ಕೆ ಸುಮಾರು ಐನೂರು ವರ್ಷಗಳ ಹಿಂದೆಯೇ ಅವರು ಕಟ್ಟಿದ, ಇಂದು ಸಿಲಿಕಾನ್ ಸಿಟಿಯಾಗಿ ವಿಶ್ವವಿಖ್ಯಾತಿಗಳಿಸಿರುವ ಬೆಂಗಳೂರನ್ನು ಒಮ್ಮೆ ಒಳಹೊಕ್ಕಿ ನೋಡಿದರೆ ಸಾಕು ಪವಾಡಸದೃಶರಾದ ಕೆಂಪೇಗೌಡರ ಶಕ್ತಿ, ಸಾಮರ್ಥ್ಯದ ಅರಿವಾಗುತ್ತದೆ. ಕುಡಿಯುವ ನೀರಿಗಾಗಿ ಬೆಂಗಳೂರು ನಗರವೊಂದರಲ್ಲೇ 25ಕ್ಕೂ ಹೆಚ್ಚು ಸರಣಿ ಕೆರೆಗಳನ್ನು ವೈಜ್ಞಾನಿಕವಾಗಿ ನಿರ್ಮಿಸಿ ಒಂದು ಕೆರೆಯಲ್ಲಿ ತುಂಬಿದ ನೀರು ಮತ್ತೊಂದು ಕೆರೆಗೆ ಹರಿದು ಹೋಗುವಂತೆ ಮಾಡಿದ್ದ ಕೆಂಪೇಗೌಡರ ವೈಜ್ಞಾನಿಕ ತಂತ್ರಜ್ಞತೆಗೆ ಎಲ್ಲಾ ಕ್ಷೇತ್ರಗಳ ತಜ್ಞರೂ ತಲೆಬಾಗಲೇಬೇಕು. ಹಾಗೆಯೇ ಇಡೀ ನಾಡು ಇವತ್ತಿಗೂ ಕೆಂಪೇಗೌಡರಿಗೆ ಶರಣು ಶರಣೆನ್ನಲೇಬೇಕು. ಸಾವಿರಾರು ಕೆರೆಗಳನ್ನು ನಿರ್ಮಿಸಿ ಸಾವಿರ ಕೆರೆಗಳ ಸರದಾರನೆಂದೇ ಹೆಸರಾಗಿದ್ದ ಮತ್ತೊಬ್ಬ ರಾಜ ಜಗತ್ತಿನಲ್ಲಿ ಸಿಗುವುದು ಬಹಳ ವಿರಳ. ಇಲ್ಲವೆಂದರೂ ಆದೀತು. ಈ ದೃಷ್ಟಿಯಲ್ಲಿ ಕೆಂಪೇಗೌಡರಿಗೆ ಸಮ ಇಡೀ ವಿಶ್ವದಲ್ಲಿ ಮತ್ತೊಬ್ಬರನ್ನು ಹೆಸರಿಸಲಾಗದು! ದುರಂತವೆಂದರೆ ಅವರು ಬಹಳ ಕಾಳಜಿಯಿಂದ ಬೆಂಗಳೂರು ನಗರದಲ್ಲಿ ನಿರ್ಮಿಸಿದ್ದ ಬಹುತೇಕ ಕೆರೆಗಳು ಇಂದು ಮುಚ್ಚಿ ಹೋಗಿವೆ. ಅವುಗಳ ಸಮಾಧಿಗಳ ಮೇಲೆ ಬೃಹತ್ ಬಡಾವಣೆಗಳು ತಲೆಯೆತ್ತಿ ನಿಂತಿವೆ.

ಕರ್ನಾಟಕದ ಇತಿಹಾಸದಲ್ಲಿ ಯಲಹಂಕ ನಾಡು ಬಹಳ ವಿಶಾಲವಾದದ್ದು, ಅಷ್ಟೇ ವೈಶಿಷ್ಟಪೂರ್ಣವಾದುದು. ಪ್ರಬಲವಾದುದು. ವಿಶೇಷವಾಗಿ ವಿಜಯನಗರ ಸಾಮ್ರಾಜ್ಯದ ಅಭಿವೃದ್ಧಿಯಲ್ಲಿ ಯಲಹಂಕ ನಾಡಿನ ಪ್ರಭುಗಳ ಪಾತ್ರ ಅತ್ಯಂತ ಮಹತ್ತರವಾದದ್ದು. ವಾಸ್ತವವಾಗಿ ಯಲಹಂಕ ಒಂದು ಸಾಮಾನ್ಯ ಸಾಮಂತರಾಜ್ಯ. ಆದರೆ ಇದು ಕನ್ನಡನಾಡಿಗೆ ನೀಡಿದ ಕೊಡುಗೆ ಅಸಾಮಾನ್ಯವಾದದ್ದು. ಯಾವ ಸಾಮ್ರಾಜ್ಯದ ಸಾಮ್ರಾಟರಿಗೂ ಕಮ್ಮಿಯಿಲ್ಲದ್ದು. ಇತಿಹಾಸಕಾರರ ಪ್ರಕಾರ ಯಲಹಂಕ ಪ್ರಭುಗಳು ಅರ್ಥಾತ್ ರಾಜರು ಹತ್ತು ಮಂದಿ. ಇವರಲ್ಲಿ ಪ್ರಥಮ ರಾಜನಾದ ದೇವರಸಗೌಡನೇ ನಾಡ ಪ್ರಭು ಕೆಂಪೇಗೌಡರ ವಂಶಸ್ಥರ ಮೂಲ ಪುರುಷ. ಈತ ಹೊಯ್ಸಳರ ಸಾಮಂತನಾಗಿ 'ಕುರುವಗೆರೆ' ಎಂಬ ಪ್ರದೇಶದಿಂದ ರಾಜ್ಯಾಡಳಿತ ಮಾಡುತ್ತಿದ್ದ. ಕ್ರಿ.ಶ. 1200ರ ಶಾಸನವೊಂದು ಈತನ ಬಗ್ಗೆ ಮಾಹಿತಿ ತಿಳಿಸುತ್ತದೆ.

ಹೊಯ್ಸಳರ ಸಾಮಂತನಾಗಿದ್ದ ದೇವರಸಗೌಡ ನಂತರದ ದಿನಗಳಲ್ಲಿ ತನ್ನ ರಾಜ್ಯವನ್ನು ವಿಸ್ತರಿಸಿ 'ಆವತಿ' ಎನ್ನುವ ಊರಿಗೆ ಬಂದು ಅದನ್ನು ರಾಜಧಾನಿಯನ್ನಾಗಿ ಮಾಡಿಕೊಂಡ. ಆವತಿ ಈಗಿನ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿದೆ. ದೇವರಸಗೌಡ ಆವತಿಯನ್ನು ಕೇಂದ್ರಸ್ಥಾನ ಮಾಡಿಕೊಂಡು ಇಲ್ಲಿ ನೆಲೆನಿಂತ ಕಾರಣ ಈ ವಂಶಸ್ಥರನ್ನು 'ಆವತಿ ನಾಡಗೌಡ ಪ್ರಭುಗಳು' ಎಂದೂ ಕರೆಯಲಾಗಿದೆ. ಎರಡನೇ ರಾಜ ಜಯಗೌಡ ಈತ ದೇವರಸಗೌಡನ ಪುತ್ರ ಇವನು ತನ್ನ ತಂದೆ ದೇವರಸಗೌಡನ ಹೆಸರಿನಲ್ಲಿ ನಿರ್ಮಿಸಿದ ಹಳ್ಳಿಯೇ 'ದೇವನಹಳ್ಳಿ' ಈತ ಆವತಿಯಿಂದ ತನ್ನ ರಾಜಧಾನಿಯನ್ನು ಯಲಹಂಕಕ್ಕೆ ಬದಲಾಯಿಸಿದ. ಇವನು ನಿಧನವಾದ ನಂತರ ಒಂದನೇ ಭೈರೇಗೌಡ ಆಳ್ವಿಕೆಗೆ ಬಂದ. ಇವನು ಹೊಯ್ಸಳರೊಡನೆ ಒಳ್ಳೆಯ ಸಂಬಂಧ ಹೊಂದಿದ್ದ ಕಾರಣ ದೊಡ್ಡಬಳ್ಳಾಳನ ನೆನಪಿಗಾಗಿ ದೊಡ್ಡಬಳ್ಳಾಪುರ ಪಟ್ಟಣವನ್ನು ನಿರ್ಮಿಸಿದ. ಹೊಯ್ಸಳರ ಪಟ್ಟದರಸಿ ಶಾಂತಲಾದೇವಿಯ ಪುತ್ರ ಚಿಕ್ಕಬಳ್ಳಾಳ. ಇವನ ಗೌರವಾರ್ಥ ಒಂದನೇ ಭೈರೇಗೌಡ ಚಿಕ್ಕಬಳ್ಳಾಪುರ ನಿರ್ಮಿಸಿದ.

ಒಂದನೇ ಭೈರೇಗೌಡನ ಕಾಲಾನಂತರ ಇಮ್ಮಡಿ ಭೈರೇಗೌಡ ಅಧಿಕಾರದ ಚುಕ್ಕಾಣಿ ಹಿಡಿದ. ಈತನನ್ನು ರಣಭೈರೇಗೌಡ ಎಂದೂ ಕರೆಯಲಾಗುತ್ತಿತ್ತು. ವಿಜಯ ನಗರ ಸಾಮ್ರಾಜ್ಯ ಕಟ್ಟುವ ಕಾಲದಲ್ಲಿ ಅವರಿಗೆ ಸರ್ವ ರೀತಿಯಲ್ಲಿ ಸಹಕಾರ ನೀಡಿ ವಿಜಯನಗರ ಸಾಮ್ರಾಜ್ಯದ ಬೆಳವಣಿಗೆಯಲ್ಲಿ ಇವರು ಪ್ರಮುಖ ಪಾತ್ರವಹಿಸಿದ್ದರು.



> **ನಾಡಪ್ರಭು ಕೆಂಪೇಗೌಡ ಪುಟ್ಟ ವಯಸ್ಸಿನಲ್ಲೇ ಪುಟಿದೇಳುವ ಪಾದರಸದಂತಹ ಚುರುಕು ಸ್ವಭಾವದ ಕ್ರಿಯಾಶೀಲತೆ ಹೊಂದಿದ್ದರು. ತನ್ನ ಜೀವಿತಾವಧಿಯಲ್ಲಿ ಏನಾದರೂ ಅದ್ಭುತವಾದುದನ್ನು ಸಾಧಿಸಿ ಸೈ ಎನಿಸಿಕೊಳ್ಳಬೇಕೆಂಬ ಮಹದಾಕಾಂಕ್ಷೆ ಬಾಲಕ ಕೆಂಪೇಗೌಡನಿಗಿತ್ತು. ಇವರ ಬಾಲ್ಯ ಅತ್ಯಂತ ರೋಚಕವಾದದ್ದು. ತಂದೆ ಕೆಂಪನಂಜೇಗೌಡರಿಗೆ ಮಗ ಕೆಂಪೇಗೌಡನ ಮೇಲೆ ಅಗಾಧ ಪ್ರೀತಿ, ಇವನನ್ನು ಸಕಲಕಲಾವಲ್ಲಭನನ್ನಾಗಿ ಮಾಡಬೇಕೆಂಬ ಅದ್ಯಮ್ಯ ಆಸೆ. ಅದಕ್ಕೆ ತಕ್ಕ ಹಾಗೆ ಬೆಳೆವ ಸಿರಿ ಮೊಳಕೆಯಲ್ಲಿ ನೋಡು ಎಂಬಂತೆ ಬಾಲಕ ಕೆಂಪೇಗೌಡ ಎಲ್ಲದಕ್ಕೂ ಸಿದ್ಧನಿದ್ದ. ಗುರುಗಳೆಂದರೆ ಹೀಗಿರಬೇಕೆನ್ನುವಂತಿದ್ದ ತಮ್ಮ ಪಾಂಡಿತ್ಯದಿಂದ ಹೆಸರುವಾಸಿಯಾಗಿದ್ದ. ಐಗಂಡಪುರದ ಮಾಧವಭಟ್ಟರಲ್ಲಿ ಶಿಷ್ಯನೆಂದರೆ ಹೀಗಿರಬೇಕೆನ್ನುವಂತಿದ್ದ**

ಇಮ್ಮಡಿ ಭೈರೇಗೌಡರ ನಂತರ ಇವರ ಪುತ್ರ ನಂಜಪ್ಪಗೌಡ ಪಟ್ಟಕ್ಕೆ ಬಂದರು. ನಂಜಪ್ಪಗೌಡರಿಗೆ ಬಹಳಕಾಲ ಮಕ್ಕಳಿರಲಿಲ್ಲ. ತಮ್ಮ ಕುಲದೇವತೆಯಾದ ಕುರುವಗೆರೆ ಕೆಂಪಮ್ಮನಿಗೆ ಹರಕೆ ಕಟ್ಟಿಕೊಂಡಿದ್ದರಿಂದ ದೇವಿಯ ಆಶೀರ್ವಾದದ ಫಲವಾಗಿ ಕೆಂಪನಂಜೇಗೌಡ ಜನಿಸಿದರು. ಇವರೇ ನಾಡಪ್ರಭು ಕೆಂಪೇಗೌಡರ ತಂದೆ. ಕೆಂಪನಂಜೇಗೌಡ ಮತ್ತು ಲಿಂಗಮಾಂಬೆ ದಂಪತಿಗೆ ನಾಲ್ಕು ಮಂದಿ ಗಂಡು ಮಕ್ಕಳು. ಅವರಲ್ಲಿ ಹಿರಿಮಗನೇ ನಾಡಪ್ರಭುವಾದ ಕೆಂಪೇಗೌಡ. ಇವರು 1510ರಲ್ಲಿ ಜನಿಸಿದರು. ಇನ್ನು ಮೂವರೆಂದರೆ ವೀರೇಗೌಡ, ಬಸವೇಗೌಡ ಹಾಗೂ ಕೆಂಪಸೋಮೇಗೌಡ. ಇವರುಗಳ ತಂದೆ ಕೆಂಪನಂಜೇಗೌಡ ವಿಜಯನಗರ ಸಾಮ್ರಾಜ್ಯಕ್ಕೆ ಅತ್ಯಂತ ನಿಷ್ಠನಾಗಿದ್ದುದರಿಂದ ಕೃಷ್ಣದೇವರಾಯ ಇವನನ್ನು ಹಾಗೂ ಇವನ ಆಡಳಿತದ ಕಾರ್ಯ ಶೈಲಿಯನ್ನು ಬಹಳ ಮೆಚ್ಚಿಕೊಂಡಿದ್ದರು. ಇದು ನಾಡಪ್ರಭು ಕೆಂಪೇಗೌಡರ ಕಾಲಕ್ಕೂ ಮುಂದುವರೆದು ಕೃಷ್ಣದೇವರಾಯನಿಗೆ ಕೆಂಪೇಗೌಡರು ಅತ್ಯಂತ ಪ್ರೀತಿ ಪಾತ್ರನಾಗಿದ್ದರು.

ಯಲಹಂಕ ಊರಿಗೆ ಅಂದಾಜು 1200 ವರ್ಷಗಳ ಇತಿಹಾಸವಿದೆ. ಗಂಗರ ಕಾಲದಲ್ಲಿ ಇದು ಹೆಚ್ಚಿನ ಮಹತ್ವ ಪಡೆದಿತ್ತು. ವಿಶೇಷ ಮಾನ್ಯತೆಗಳಿಸಿತ್ತು ಬೆಂಗಳೂರು ಸಮೀಪದ ಚಿಕ್ಕಜಾಲದ ಚೆನ್ನಕೇಶವ ಯಲಹಂಕ ಪ್ರಭುಗಳ ಆರಾಧ್ಯದೈವ ಹಾಗೆಯೇ ಕುರುವಗೆರೆ ಕೆಂಪಮ್ಮ ಆರಾಧ್ಯ ದೇವತೆ. ಕುಲದೈವ ಭೈರವೇಶ್ವರ. ನಾಡಪ್ರಭು ಕೆಂಪೇಗೌಡರ ವಂಶಸ್ಥರು ರಾಜ್ಯಭಾರ ಮಾಡಿದ ಮತ್ತೊಂದು ಪ್ರಮುಖ ಸ್ಥಳ 'ಮಾಗಡಿ' ಇದು 12ನೇ ಶತಮಾನದಲ್ಲಿ ಚೋಳರಾಜನೊಬ್ಬನಿಂದ ಸ್ಥಾಪಿತವಾಯಿತೆಂದು ಹೇಳಲಾಗುತ್ತದೆ. ಇದಕ್ಕೆ ಪೂರಕವಾದ ಐತಿಹ್ಯ ಕೂಡ ಇಲ್ಲುಂಟು. ನಂತರದ ದಿನಗಳಲ್ಲಿ 'ಮಾಗಡಿ'ಯು ಹೊಯ್ಸಳರ ಕೈವಶವಾಗಿ ಬಳಿಕ ವಿಜಯನಗರದ ಅರಸರ ಕೈ ಸೇರಿತು. ಅಂತಿಮವಾಗಿ ಕೆಂಪೇಗೌಡರ ವಂಶಸ್ಥರ ವಶಕ್ಕೆ ಬಂತು. ಇದನ್ನು ಬಹು ವೈಭವದಿಂದ ಆಳಿದ ನಾಡಪ್ರಭು ಕೆಂಪೇಗೌಡರ ಎರಡನೇ ಪುತ್ರ ಇಮ್ಮಡಿ ಕೆಂಪೇಗೌಡನು ಮಾಗಡಿ ಕೆಂಪೇಗೌಡರೆಂದೇ ಕರೆಸಿಕೊಂಡು ಹೆಸರುವಾಸಿಯಾದರು. ಮತ್ತೊಬ್ಬ ಮಗ ಗಿಡ್ಡೇಗೌಡ ಕ್ರಿ.ಶ. 1578ರವರೆಗೆ ಆಳಿದನೆಂದು ಹೇಳಲಾಗುತ್ತದೆ. 18ನೇ ಶತಮಾನದ ಪ್ರಾರಂಭದ ತನಕವೂ ಕೆಂಪೇಗೌಡರ ವಂಶಸ್ಥರ ಆಳ್ವಿಕೆಯಲ್ಲಿದ್ದ ಮಾಗಡಿ ಆ ನಂತರ ಮೈಸೂರು ಅರಸರ ಪಾಲಾಯಿತು. ಕ್ರಿ.ಶ. 1791ರಲ್ಲಿ ಇದನ್ನು ಬ್ರಿಟಿಷರು ಆಕ್ರಮಿಸಿಕೊಂಡರು. ಅಲ್ಲಿಗೆ ವೈಭವದ ಮಾಗಡಿಯ ಇತಿಹಾಸ ಕೊನೆಗೊಂಡಿತು. ಇದು ನಾಡಪ್ರಭು ಕೆಂಪೇಗೌಡರ ವಂಶಸ್ಥರ ಇತಿಹಾಸ. ಸುಮಾರು 500 ವರ್ಷಗಳ ಕಾಲ ವೈಭವ ಪೂರ್ಣವಾಗಿ ಆಡಳಿತ ನಡೆಸಿದ ಈ ವಂಶದ ಸಾಮ್ರಾಜ್ಯ ನಾಡಪ್ರಭು ಕೆಂಪೇಗೌಡರ ಕಾಲದಲ್ಲಿ ಮೈಸೂರು ಸಂಸ್ಥಾನಕ್ಕಿಂತ ವಿಶಾಲವಾಗಿತ್ತು. ವಿಶ್ವವಿಖ್ಯಾತಿಯಾಗಿ ಮೆರೆದಿತ್ತು.

ನಾಡಪ್ರಭು ಕೆಂಪೇಗೌಡ ಪುಟ್ಟ ವಯಸ್ಸಿನಲ್ಲೇ ಪುಟಿದೇಳುವ ಪಾದರಸದಂತಹ ಚುರುಕು ಸ್ವಭಾವದ ಕ್ರಿಯಾಶೀಲತೆ ಹೊಂದಿದ್ದರು. ತನ್ನ ಜೀವಿತಾವಧಿಯಲ್ಲಿ ಏನಾದರೂ ಅದ್ಭುತವಾದುದನ್ನು ಸಾಧಿಸಿ ಸೈ ಎನಿಸಿಕೊಳ್ಳಬೇಕೆಂಬ ಮಹದಾಕಾಂಕ್ಷೆ ಬಾಲಕ ಕೆಂಪೇಗೌಡನಿಗಿತ್ತು. ಇವರ ಬಾಲ್ಯ ಅತ್ಯಂತ ರೋಚಕವಾದದ್ದು. ತಂದೆ ಕೆಂಪನಂಜೇಗೌಡರಿಗೆ ಮಗ ಕೆಂಪೇಗೌಡನ ಮೇಲೆ ಅಗಾಧ ಪ್ರೀತಿ, ಇವನನ್ನು ಸಕಲಕಲಾವಲ್ಲಭನನ್ನಾಗಿ ಮಾಡಬೇಕೆಂಬ ಅದ್ಯಮ್ಯ ಆಸೆ. ಅದಕ್ಕೆ ತಕ್ಕ ಹಾಗೆ ಬೆಳೆವ ಸಿರಿ ಮೊಳಕೆಯಲ್ಲಿ ನೋಡು ಎಂಬಂತೆ ಬಾಲಕ ಕೆಂಪೇಗೌಡ ಎಲ್ಲದಕ್ಕೂ ಸಿದ್ಧನಿದ್ದ. ಗುರುಗಳೆಂದರೆ ಹೀಗಿರಬೇಕೆನ್ನುವಂತಿದ್ದ ತಮ್ಮ ಪಾಂಡಿತ್ಯದಿಂದ ಹೆಸರುವಾಸಿಯಾಗಿದ್ದ. ಐಗಂಡಪುರದ ಮಾಧವಭಟ್ಟರಲ್ಲಿ ಶಿಷ್ಯನೆಂದರೆ ಹೀಗಿರಬೇಕೆನ್ನುವಂತಿದ್ದ ಐದು ವರ್ಷದ ಬಾಲಕ ಕೆಂಪೇಗೌಡನನ್ನು ತಂದೆ ಕೆಂಪನಂಜೇಗೌಡ ವಿದ್ಯಾಭ್ಯಾಸಕ್ಕೆ ಸೇರಿಸಿದ್ದರು. ಅಲ್ಲಿ ಗುರುಗಳಿಂದ ಆಡಳಿತ, ರಾಜನೀತಿ ಸೇರಿದಂತೆ ಪ್ರತಿಯೊಂದು ವಿಷಯದಲ್ಲೂ ಪರಿಣಿತಿ ಗಳಿಸಿ ಕುದುರೆ ಸವಾರಿ, ಕತ್ತಿವರಸೆ, ಮಲ್ಲಯುದ್ಧ ಮುಂತಾದ ಓರ್ವ ರಾಜನಿಗಿರಬೇಕಾದ ಸರ್ವ ವಿದ್ಯೆಗಳಲ್ಲೂ ಸಮರ್ಥರಾದರು. ಅಲ್ಲಿ ಗೆಳೆಯನಾಗಿ ದೊರೆತ ನಾರಾಯಣಭಟ್ಟ (ನಾಣಿ) ಕೆಂಪೇಗೌಡನ ಪ್ರತಿಯೊಂದು ಹೆಜ್ಜೆಯಲ್ಲೂ ಸಹಕಾರದ ಆತ್ಮೀಯನಾಗಿದ್ದ. ಇವರಿಬ್ಬರ ಸ್ನೇಹ ಕೃಷ್ಣ–ಕುಚೇಲ ಸಂಬಂಧವಾಗಿತ್ತು.

ಗುರು ಮಾಧವಭಟ್ಟರ ಅಣತಿಯಂತೆ ರಾಜ್ಯಾಡಳಿತ ರಥವೇರುವ ಮುನ್ನ ದೇಶನೋಡು ಕೋಶ ಓದು ಎಂಬಂತೆ ದೇಶ ಪರ್ಯಟನೆಗೆ ಹೊರಟ ಕೆಂಪೇಗೌಡ ಮೊದಲಿಗೆ ವಿಜಯನಗರಕ್ಕೆ ಭೇಟಿ ನೀಡುತ್ತಾನೆ. ಐದಾರು ವರ್ಷಗಳ ಬಾಲಕನಾಗಿದ್ದಾಗಲೇ 1515ರ ಆಸುಪಾಸಿನಲ್ಲಿ ಒಮ್ಮೆ ತಂದೆಯ ಹೆಗಲ ಮೇಲೆ ಕೂತು ರಾಜಧಾನಿ ಹಂಪಿಯಲ್ಲಿ ವಿಜಯನಗರದ ವೈಭವವನ್ನು ಕಂಡು ಬೆರಗಾಗಿದ್ದ ಕೆಂಪೇಗೌಡ ಈಗ ಮತ್ತಷ್ಟು ನಿಬ್ಬೆರಗುಗೊಂಡು ರೋಮಾಂಚಿತನಾಗುತ್ತಾನೆ. ಅಷ್ಟೇ ಅಲ್ಲ, ಬಾಲಕನಾಗಿದ್ದಾಗಲೇ ಇಂತಹದೊಂದು ನಗರವನ್ನು ತಾನೂ ನಿರ್ಮಿಸಬೇಕೆಂಬ ಕನಸು ಕಂಡಿದ್ದ ಕನಸುಗಾರ ಕೆಂಪೇಗೌಡ ಈಗ ಅದನ್ನು ಸಾಕಾರಗೊಳಿಸುವತ್ತ ಮನಸ್ಸನ್ನು ದೃಢ ಮಾಡಿಕೊಂಡು ಒಟ್ಟಾರೆ ದೇಶ ಸಂಚಾರದ ಬಳಿಕ ಯಲಹಂಕಕ್ಕೆ ವಾಪಸ್ಸು ಬರುತ್ತಾರೆ. 1528ರಲ್ಲಿ ಚೆನ್ನಮಾಂಬೆಯೊಡನೆ ವಿವಾಹವಾಗಿ ಯುವರಾಜರಾಗಿ ಪಟ್ಟಾಭಿಷಿಕ್ತರಾಗುತ್ತಾರೆ. ಆ ನಂತರ 1531ರಲ್ಲಿ ಯಲಹಂಕ ಪ್ರಭುವಾಗಿ ಪಟ್ಟಾಭಿಷಿಕ್ತರಾಗಿ ರಾಜ್ಯಾಡಳಿತದ ಚುಕ್ಕಾಣಿ ಹಿಡಿಯುತ್ತಾರೆ. ಅಲ್ಲಿಂದ ಆರಂಭವಾಗುತ್ತದೆ ಕೆಂಪೇಗೌಡರ ಸಾಹಸ ಯುಗ. ಇಡೀ ಜಗತ್ತೇ ಬೆಂಗಳೂರಿನತ್ತ ತಿರುಗಿ ನೋಡುವಂಥಾ ಮಹದದ್ಭುತ...!

ರಾಜಧಾನಿ ಹಂಪೆಯ ಬೀದಿ ಬೀದಿಗಳಲ್ಲಿ ಮುತ್ತುರತ್ನಗಳನ್ನು, ವಜ್ರ ವೈಡೂರ್ಯಗಳನ್ನು ಬಳ್ಳಗಳಲ್ಲಿ ಅಳೆದು ಸುರಿದು ಮಾರುತ್ತಿದ್ದ ಮಹಾ ಸಿರಿವಂತಿಕೆಯ ವಿಜಯನಗರ ಸಾಮ್ರಾಜ್ಯದ ಸಂಪದಭಿವೃದ್ಧಿಯ ವೈಭವದಲ್ಲಿ ಸಾಮಂತರಾಗಿದ್ದ ಕೆಂಪೇಗೌಡರ ವಂಶಸ್ಥರದ್ದೂ ಸಿಂಹಪಾಲಿತ್ತು ಹಾಗಾಗಿ ವಿಜಯನಗರ ಅರಸರಿಗೆ ಅದರಲ್ಲೂ ವಿಶೇಷವಾಗಿ ಕೃಷ್ಣದೇವರಾಯನಿಗೆ ಇವರ ಮೇಲೆ ಹೆಚ್ಚಿನ ಒಲವಿತ್ತು. ಚಿಕ್ಕ ವಯಸ್ಸಿನಲ್ಲೇ ಕೆಂಪೇಗೌಡರಿಗೆ ಕೃಷ್ಣದೇವರಾಯರೊಡನಾಟ ಚೆನ್ನಾಗಿತ್ತು.

ಕೃಷ್ಣದೇವರಾಯ1529ರಲ್ಲಿ ನಿಧನರಾದಾಗ ಅವರ ಸಹೋದರ ಅಚ್ಚುತರಾಯ ಅಧಿಕಾರಕ್ಕೆ ಬರುತ್ತಾರೆ. ಬೆಂಗಳೂರು ನಿರ್ಮಾಣಕ್ಕೆ 50 ಸಾವಿರ ಚಿನ್ನದ ವರಹಗಳನ್ನು ನೀಡುವುದರ ಜೊತೆಗೆ 30 ಸಾವಿರ ಪಗೋಡಗಳ ಉತ್ಪನ್ನ ಬರುವ ಹಳೆಬೆಂಗಳೂರು, ಬೇಗೂರು, ವರ್ತೂರು, ಹಲಸೂರು, ಜಿಗಣಿ, ತಲಘಟ್ಟಪುರ, ಕೆಂಗೇರಿ, ಕುಂಬಳಗೋಡು, ಹೆಸರಘಟ್ಟ, ಕಾವಳ್ಳಿ (ಈಗಿನ ಕನ್ನಲ್ಲಿ), ಚಿಕ್ಕಬಾಣಾವರ ಇತ್ಯಾದಿ 12 ಹೋಬಳಿಗಳನ್ನು ಕೆಂಪೇಗೌಡರಿಗೆ ದಾನವಾಗಿ ಬಿಟ್ಟು ಕೊಡುತ್ತಾರೆ. ವೈಜ್ಞಾನಿಕ ಪ್ರಜ್ಞೆಯ ಪ್ರಖರ ವಿಚಾರವಾದಿಯಾಗಿದ್ದ ಕೆಂಪೇಗೌಡರು ಯಾವುದೇ ಮೂಢನಂಬಿಕೆಗಳಿಗೆ ಒಳಗಾಗದೆ ಪುರೋಹಿತರ ಅಣತಿಯಂತೆ ಯಾವುದೇ ಶಾಸ್ತ್ರ, ಘಳಿಗೆ ನೋಡದೆ ರೈತನೊಬ್ಬನಿಂದ ನೇಗಿಲಿನಿಂದ ಗೆರೆ ಎಳೆಸುವ ಮೂಲಕ ತಮ್ಮ ಮಹದಾಕಾಂಕ್ಷೆಯ ಬೆಂಗಳೂರು ನಿರ್ಮಾಣವನ್ನು ಆರಂಭಿಸಿದ್ದರು. ಹಾಗೆಯೇ ರೈತ ಸಮುದಾಯದಿಂದ ಬಂದವರಾದ ಇವರು ಬಸವನನ್ನು ರಾಜಮುದ್ರೆಯಾಗಿ ಸ್ವೀಕರಿಸಿದ್ದರು. ಇದರ ದ್ಯೋತಕವಾಗಿ ಬೆಂಗಳೂರು ಕೋಟೆಯ ದಕ್ಷಿಣ ಭಾಗದ ಗುಡ್ಡವೊಂದರ ಮೇಲೆ ಬೃಹತ್ ಬಸವ ವಿಗ್ರಹವನ್ನು ನಿರ್ಮಿಸಿದ್ದರು. ನವಬೆಂಗಳೂರಿಗೆ 1537ರಲ್ಲಿ ಅಡಿಗಲ್ಲು ಹಾಕಿ ನಗರದ ನಾಲ್ಕು ದಿಕ್ಕುಗಳಿಗೂ ನಾಲ್ಕು ದ್ವಾರಗಳನ್ನು ನಿರ್ಮಿಸಿ ಅವುಗಳನ್ನು ಹಲಸೂರು ಹೆಬ್ಬಾಗಿಲು, ಕೆಂಗೇರಿ ಹೆಬ್ಬಾಗಿಲು, ಯಶವಂತಪುರ ಹೆಬ್ಬಾಗಿಲು, ಯಲಹಂಕ ಹೆಬ್ಬಾಗಿಲುಗಳೆಂದು ಹೆಸರಿಟ್ಟರು. ಮುಖ್ಯದ್ವಾರದ ಬಾಗಿಲು ನಿಲ್ಲದೇ ಬೀಳುತ್ತಿರಲು ಸೊಸೆ ಲಕ್ಷ್ಮೀದೇವಿ ಆತ್ಮಾರ್ಪಣೆ ಮಾಡಿಕೊಳ್ಳುತ್ತಾಳೆ. ನಾಡಪ್ರಭು ಕೆಂಪೇಗೌಡರ ಸೊಸೆ ನಾಡಿಗಾಗಿ ಬಲಿದಾನಗೈದ ಪರಿಣಾಮವಾಗಿ ಮುಖ್ಯದ್ವಾರದ ಬಾಗಿಲು ಭದ್ರವಾಗಿ ನಿಲ್ಲುತ್ತದೆ. ಈ ಮುಖೇನ ಲಕ್ಷ್ಮೀದೇವಿ ಬೆಂಗಳೂರು ಚರಿತ್ರೆಯ ಸುವರ್ಣ ಪುಟಗಳಲ್ಲಿ ತಾನೇ ಒಂದು ವಿಶೇಷ ಪುಟವಾಗಿ ಸೇರಿಹೋಗುತ್ತಾಳೆ.

ಮೈಸೂರಿನ ಪಿರಿಯಾಪಟ್ಟಣ, ಕಲ್ಲಹಳ್ಳಿ, ನಂಜರಾಯಪಟ್ಟಣ, ಕೊಡಗು ಮುಂತಾದ ಪ್ರಾಂತ್ಯಗಳು ಸೇರಿದಂತೆ ಉಮ್ಮತ್ತೂರಿನ ಆಡಳಿತಕ್ಕೆ ಒಳಪಟ್ಟಿದ್ದ ಶಿವನಸಮುದ್ರ ಸೀಮೆಯವರೆಗೂ ಕೆಂಪೇಗೌಡರ ಆಳ್ವಿಕೆ ಇತ್ತು. ಇದರಿಂದ ಯಲಹಂಕ ನಾಡು ದಕ್ಷಿಣದ ಗಡಿ ಕಾವೇರಿ ತೀರದವರೆಗೂ ವಿಸ್ತಾರಗೊಂಡಿತ್ತು. 1510ರಲ್ಲಿ ಜನಿಸಿ 1531ರಲ್ಲಿ ಪಟ್ಟಾಭಿಷಕ್ತರಾಗಿ ಅಧಿಕಾರಕ್ಕೆ ಬಂದ ನಾಡಪ್ರಭು ಕೆಂಪೇಗೌಡರು. 1569ರವರೆಗೆ ಸುಮಾರು 38 ವರ್ಷಗಳ ಕಾಲ ಆಳ್ವಿಕೆ ನಡೆಸಿ 1569ರಲ್ಲಿ ಇಹಲೋಕ ತ್ಯಜಿಸಿದರು. ಆದರೆ ತಮ್ಮ ಅಭೂತಪೂರ್ವ ಸಾಧನೆಗಳಿಂದ ಇವರು ಚಿರಂಜೀವಿ. ಇತ್ತೀಚೆಗೆ ಮಾಗಡಿ ಬಳಿಯ ತಿಪ್ಪಸಂದ್ರ ಹ್ಯಾಂಡ್‌ಪೋಸ್ಟ್ ಮತ್ತು ಕೆಂಚನಹಳ್ಳಿ ನಡುವೆ ಇರುವ ಕೆಂಪಾಪುರ ಗ್ರಾಮದಲ್ಲಿ ಕೆಂಪೇಗೌಡರ ಸಮಾಧಿ ದೊರೆತಿದ್ದು ಅದರ ಅಭಿವೃದ್ಧಿಯಾಗಬೇಕಾಗಿದೆ. ಕೆಂಪೇಗೌಡರ ಕುರಿತು ಆಸ್ಥಾನ ಕವಿಯಾಗಿದ್ದ ಗುರುನಂಜೇಶ ಅವರು ರಚಿಸಿರುವ 'ಕೆಂಪೇಗೌಡ ಜಯ ಪ್ರಶಸ್ತಿ' ಕೃತಿಯಿಂದ ಹಿಡಿದು ಇಲ್ಲಿಯವರೆಗೆ ಅನೇಕ ಪುಸ್ತಕಗಳು ಪ್ರಕಟವಾಗಿವೆ. ಅದರಲ್ಲಿ ಅಧಿಕೃತವಾಗಿ ಅಂದಾಜು 85 ಪುಸ್ತಕಗಳಿವೆ.

ನಾಡಪ್ರಭು ಶ್ರೀ ಕೆಂಪೇಗೌಡರ ಜಯಂತಿ ಪ್ರಯುಕ್ತ; ಬಂಡೀಪಾಳ್ಯ ಬಳಿಯ

ನಂದೀಶ್ವರ ದೇವಸ್ಥಾನದ ಕಲ್ಯಾಣಿ ಸುತ್ತ ವಾರಕಾಲ ಸ್ವಚ್ಛತಾ ಕಾರ್ಯ

ಮೈಸೂರು, ಜೂ.26 (ಪಿಎಂ)–ಬೆಂಗಳೂರು ನಿರ್ಮಾತೃ, ನಾಡಪ್ರಭು ಶ್ರೀ ಕೆಂಪೇಗೌಡರ ಜಯಂತಿ ಅಂಗವಾಗಿ ವಿವಿಧ ಸಂಘಟನೆಗಳ ಜೊತೆಗೂಡಿ ಜನಚೇತನ ಟ್ರಸ್ಟ್ ವತಿಯಿಂದ ಜೂ.27ರಿಂದ ಸುಮಾರು ಒಂದು ವಾರಗಳ ಕಾಲ ಹೊರವರ್ತುಲ ರಸ್ತೆಯ ಬಂಡೀಪಾಳ್ಯ ಬಳಿಯಿರುವ ನಂದೀಶ್ವರ ದೇವಸ್ಥಾನದ ಕಲ್ಯಾಣಿಯ ಸುತ್ತ ಸ್ವಚ್ಛತಾ ಕಾರ್ಯ ನಡೆಸಲಾಗುವುದು ಎಂದು ಟ್ರಸ್ಟ್‌ನ ಅಧ್ಯಕ್ಷ ಪ್ರಸನ್ನ ಎನ್.ಗೌಡ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಭಾನುವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಲಯನ್ಸ್ ಕ್ಲಬ್ ಆಫ್ ಮೈಸೂರು ಪ್ಯಾಲೇಸ್ ಸಿಟಿ, ಕರ್ನಾಟಕ ರಾಜ್ಯ ರೈತ ಸಂಘ, ಗ್ರಾಮೀಣ ಟ್ರಸ್ಟ್ ಮೈಸೂರು, ಸ್ವಚ್ಛಂದ ಸಂಸ್ಥೆ ಸೇರಿದಂತೆ ಇನ್ನಿತರ ಸಂಘಟನೆಗಳ ಸಂಯುಕ್ತಾಶ್ರಯದಲ್ಲಿ ಈ ಸ್ವಚ್ಛತಾ ಕಾರ್ಯ ನಡೆಸಲಾಗುತ್ತಿದೆ ಎಂದು ಹೇಳಿದರು.



ಕೆಂಪೇಗೌಡರು ಎಲ್ಲಾ ವರ್ಗದ ವಿಶ್ವಾಸ ಗಳಿಸಿ ನಾಡು ಕಟ್ಟುವಲ್ಲಿ ಶ್ರಮಿಸಿದವರು. ಅವರ ಸಮಾಜಮುಖಿ ಕಾರ್ಯದ ಹಾದಿಯಲ್ಲೇ ನಮ್ಮ ಟ್ರಸ್ಟ್ ಸಾಗುತ್ತಿದೆ. ರೈತರಿಗೆ ಸೈಸರ್ಗಿಕ ಕೃಷಿ ತರಬೇತಿ, ಕೆರೆಕಟ್ಟೆ ಅಭಿವೃದ್ಧಿ, ಕಲ್ಯಾಣಿಗಳ ಮನಶ್ಚೇತನ ಸೇರಿದಂತೆ ಮೊದಲಾದ ಸೇವಾ ಕಾರ್ಯಗಳ ಮೂಲಕ ನಾಡಿನ ಅಭಿವೃದ್ಧಿಗೆ ಟ್ರಸ್ಟ್ ಶ್ರಮಿಸುತ್ತಿದೆ ಎಂದರು.

ಕಳೆದ ವರ್ಷ ವಿವಿಧ ಸಂಘಟನೆಗಳ ಸಹಕಾರದೊಂದಿಗೆ ಟ್ರಸ್ಟ್‌ನಿಂದ ನಂದೀಶ್ವರ ದೇವಸ್ಥಾನದ ಕಲ್ಯಾಣಿಯನ್ನು ಪುನಶ್ಚೇತಗೊಳಿಸಲಾಗಿತ್ತು. ಕಲ್ಯಾಣಿ ರಕ್ಷಣೆಗಾಗಿ ಸುತ್ತಲು ಬೇಲಿಯನ್ನು ನಿರ್ಮಿಸಿ, ಕಲ್ಲಿನ ಮೆಟ್ಟಿಲುಗಳನ್ನು ಅಳವಡಿಸಲಾಗಿತ್ತು. ಇದರ ಮುಂದುವರಿದ ಭಾಗವಾಗಿ ಅಭಿವೃದ್ಧಿ ಕೆಲಸವನ್ನು ಕೈಗೊಳ್ಳುವ ಮೂಲಕ ಮಹತ್ವದ ಪ್ರಾಚೀನ ಕಲ್ಯಾಣಿಯ ಅಭಿವೃದ್ಧಿ ಕಾರ್ಯ ಪೂರ್ಣಗೊಳಿಸಲು ನಿರ್ಧರಿಸಲಾಗಿದೆ ಎಂದರು. ಅದರಂತೆ ಜೂ.27ರ ನಾಡಪ್ರಭು ಕೆಂಪೇಗೌಡರ ಜಯಂತಿಯಂದು ನಂದೀಶ್ವರ ದೇವಸ್ಥಾನದ ಕಲ್ಯಾಣಿ ಸುತ್ತ ಸ್ವಚ್ಛತಾ ಕಾರ್ಯಕ್ಕೆ ಚಾಲನೆ ನೀಡಿ, ಅಂದು ಬೆಳಗ್ಗೆ 8ರಿಂದ ಮಧ್ಯಾಹ್ನ 2ರವರೆಗೆ ಶ್ರಮದಾನ ಮಾಡಲಾಗುವುದು. ಈ ಕಾರ್ಯವು ವಾರ ಕಾಲ ನಡೆಯಲಿದೆ. ಪರಿಸರ ಆಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ಮೂಲಕ ಈ ಶ್ರಮದಾನ ಕಾರ್ಯ ಯಶಸ್ವಿಗೆ ಕೈಜೊಡಿಸಬೇಕೆಂದು ಕೋರಿದರು. ರಾಜ್ಯ ರೈತ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹೊಸಕೋಟೆ ಬಸವರಾಜು, ಮುಖಂಡರಾದ ಚಂದ್ರಶೇಖರ್, ಮಹೇಶ್, ಮಹೇಂದ್ರ ಗೋಷ್ಠಿಯಲ್ಲಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: news@mysurumithra.com For advertisements: ad@mysurumithra.com, website: www.mysurumithra.com

ರಣಜಿ ಟ್ರೋಫಿ ಫೈನಲ್: ಇತಿಹಾಸ ಬರೆದ ಮಧ್ಯ ಪ್ರದೇಶ

41 ಬಾರಿ ಚಾಂಪಿಯನ್ ಮುಂಬೈ ವಿರುದ್ಧ 6 ವಿಕೆಟ್‌ಗಳ ಜಯ

ಬೆಂಗಳೂರು: ತೀವ್ರ ಕುತೂಹಲ ಕೆರಳಿಸಿದ್ದ ರಣಜಿ 2022 ಫೈನಲ್ ಪಂದ್ಯದಲ್ಲಿ 41 ಬಾರಿ ಚಾಂಪಿಯನ್ ಮುಂಬೈ ವಿರುದ್ಧ 6 ವಿಕೆಟ್‌ಗಳ ಜಯಗಳಿಸುವ ಮೂಲಕ ಮಧ್ಯ ಪ್ರದೇಶ ತಂಡ ಚೊಚ್ಚಲ ಬಾರಿಗೆ ಪ್ರಶಸ್ತಿ ಗೆದ್ದು, ಇತಿಹಾಸ ನಿರ್ಮಿಸಿದೆ.

ಮಧ್ಯಪ್ರದೇಶ ಕ್ರಿಕೆಟ್ ತಂಡವು ಭಾನುವಾರವಾದ ಇಂದು ರಣಜಿ ಟ್ರೋಫಿ ಗೆದ್ದು ಇತಿಹಾಸ ನಿರ್ಮಿಸಿದ್ದು, 41 ಬಾರಿಯ ರಣಜಿ ಚಾಂಪಿಯನ್ ಮುಂಬೈ ಎದುರು ಆದಿತ್ಯ ಶ್ರೀವಾಸ್ತವ್ ನೇತೃತ್ವದ ಮಧ್ಯಪ್ರದೇಶ ತಂಡವು 6 ವಿಕೆಟ್‌ಗಳ ಅಂತರದ ಭರ್ಜರಿ ಗೆಲುವು ಸಾಧಿಸಿದೆ. ಬೆಂಗಳೂರಿನ ಚಿನ್ನಸ್ವಾಮಿ ಸ್ಟೇಡಿಯಂನಲ್ಲಿ ನಡೆದ 2022ನೇ ಸಾಲಿನ ರಣಜಿ ಟ್ರೋಫಿ ಫೈನಲ್ ಪಂದ್ಯದಲ್ಲಿ ಮುಂಬೈ ತಂಡವನ್ನು ಬಗ್ಗುಬಡಿಯುವ ಮೂಲಕ ಚೊಚ್ಚಲ ಬಾರಿಗೆ ರಣಜಿ ಟ್ರೋಫಿ ಜಯಿಸಿದೆ.

ಆ ಮೂಲಕ ಮಧ್ಯಪ್ರದೇಶ ಕ್ರಿಕೆಟ್ ತಂಡವು ಬರೋಬ್ಬರಿ 23 ವರ್ಷಗಳ ಬಳಿಕ ರಣಜಿ ಟ್ರೋಫಿ ಟೂರ್ನಿಯಲ್ಲಿ ಫೈನಲ್ ಪ್ರವೇಶಿಸಿದ ಸಾಧನೆ ಮಾಡಿದೆ. 1998-99ರಲ್ಲಿ ಇದೇ ಮೈದಾನದಲ್ಲಿ ಕರ್ನಾಟಕದೆದುರು ಮಧ್ಯಪ್ರದೇಶ ತಂಡವು 96 ರನ್‌ಗಳ ಅಂತರದ ಸೋಲು ಕಾಣುವ ಮೂಲಕ ಕಪ್ ಗೆಲ್ಲುವ ಅವಕಾಶವನ್ನು ಕೈಚೆಲ್ಲಿತ್ತು. ಆಗ ಮಧ್ಯಪ್ರದೇಶ ತಂಡದ ನಾಯಕರಾಗಿದ್ದ ಚಂದ್ರಕಾಂತ್ ಪಂಡಿತ್, ಇದೀಗ ಮಧ್ಯಪ್ರದೇಶ ತಂಡದ ಕೋಚ್ ಆಗಿ ತಮ್ಮ ತಂಡವನ್ನು ಚಾಂಪಿಯನ್ ಪಟ್ಟಕ್ಕೇರಿಸುವಲ್ಲಿ ಯಶಸ್ವಿಯಾಗಿದ್ದಾರೆ. ಮಧ್ಯಪ್ರದೇಶ ತಂಡವು ಚಾಂಪಿಯನ್ ಆಗುತ್ತಿದ್ದಂತೆಯೇ ಆಟಗಾರರು ತಮ್ಮ ಕೋಚ್ ಚಂದ್ರಕಾಂತ್ ಪಂಡಿತ್ ಅವರನ್ನು ಹೆಗಲ ಮೇಲೆ ಹೊತ್ತು ಸಂಭ್ರಮಿಸಿದರು.

ಗೆಲ್ಲಲು 108 ರನ್‌ಗಳ ಸಾಧಾರಣ ಗುರಿ ಬೆನ್ನತ್ತಿದ ಮಧ್ಯಪ್ರದೇಶ ತಂಡಕ್ಕೆ ವಿಕೆಟ್ ಕೀಪರ್ ಬ್ಯಾಟರ್ ಹಿಮಾಂಶು ಮಂತ್ರಿ 37 ರನ್ ಬಾರಿಸುವ ಮೂಲಕ ಎರಡನೇ ಇನಿಂಗ್ಸ್‌ನಲ್ಲಿ ಗರಿಷ್ಠ ಸ್ಕೋರರ್ ಎನಿಸಿದರು. ಇನ್ನು ಮೊದಲ ಇನಿಂಗ್ಸ್‌ನಲ್ಲಿ ಶತಕ ಸಿಡಿಸುವ ಮೂಲಕ ಇನಿಂಗ್ಸ್ ಮುನ್ನಡೆಗಳಿಸಲು ನೆರವಾಗಿದ್ದ ತಾರಾ ಬ್ಯಾಟರ್ ರಜತ್ ಪಾಟೀದಾರ್ ಅಜೇಯ 30 ರನ್ ಬಾರಿಸುವ ಮೂಲಕ ತಂಡವನ್ನು ಸುಲಭವಾಗಿ ಗೆಲುವಿನ ದಡ ಸೇರಿಸಿದರು.

ಅನುತ್ತೀರ್ಣಗೊಂಡ ಪಿಯು ವಿದ್ಯಾರ್ಥಿಗಳಿಗೆ ಉಚಿತ ಬೋಧನಾ ತರಗತಿ

ಮೈಸೂರು, ಜೂ.26-ದ್ವಿತೀಯ ಪಿಯು ಪರೀಕ್ಷೆಯಲ್ಲಿ ಅನುತ್ತೀರ್ಣಗೊಂಡ ವಿದ್ಯಾರ್ಥಿಗಳಿಗೆ ಉಚಿತ ಬೋಧನಾ ತರಗತಿಗಳನ್ನು ದೇವರಾಜ ಪಿಯು ಕಾಲೇಜು ಆವರಣದಲ್ಲಿ ರಾಜ್ಯ ಪಿಯು ಕಾಲೇಜು ಸರ್ಕಾರಿ ಉಪನ್ಯಾಸಕರ ಹಿತರಕ್ಷಣಾ ಸಂಘ, ಪ್ರಾಂಶುಪಾಲರ ಸಂಘ ಹಾಗೂ ಪದವಿ ಪೂರ್ವ ಶಿಕ್ಷಣ ಇಲಾಖೆ ಸಹಯೋಗದೊಂದಿಗೆ ಜೂ.27ರ ಮಧ್ಯಾಹ್ನ 2.30ರಿಂದ ಆಯೋಜಿಸಲಾಗಿದೆ.



ಆಸಕ್ತರು ಇದರ ಸದುಪಯೋಗ ಪಡೆದುಕೊಳ್ಳುವಂತೆ ಉಪನ್ಯಾಸಕರ ಸಂಘದ ರಾಜ್ಯಾಧ್ಯಕ್ಷ ಕಾಡ್ನೂರು ಶಿವೇಗೌಡ, ಜಿಲ್ಲಾಧ್ಯಕ್ಷ ಕೋಟೆ ವೆಂಕಟೇಶ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ವಿವರಗಳಿಗೆ ನಾಗೇಶ್-ಮೊ.ನಂ. 99808-64066, ಆನಂದ 98442-77671, 97417-69216 ಅನ್ನು ಸಂಪರ್ಕಿಸಬಹುದು.

10ನೇ ವರ್ಷದ ಪುಣ್ಯಸ್ಮರಣೆ



ನೀನು ನಮ್ಮನ್ನಗಲಿ ಇಂದಿಗೆ 10 ವರ್ಷ ಕಳೆದರೂ ಸದಾ ನಿನ್ನ ನೆನಪಿನಲ್ಲಿರುವ

ದುಃಖತಪ್ತರು: ಅಪ್ಪ, ಅಮ್ಮ, ಅಣ್ಣ ಹಾಗೂ ಕುಟುಂಬ ವರ್ಗದವರು, ಮೈಸೂರು

ನಿಶಿಕ್ ಎಂ. ಗೌಡ











ಮೈಸೂರು ಮಿತ್ರ ಸೋಮವಾರ 27 ಜೂನ್ 2022

ಪ್ರಸಕ್ತ ಸಾಲಿನ ಕಬ್ಬು ಅರೆಯುವಿಕೆ ಹಿನ್ನೆಲೆ

ಬಾಯ್ಲರ್‌ಗೆ ಅಗ್ನಿ ಸ್ಪರ್ಶ

ಪಾಂಡವಪುರ, ಜೂ.26– ಪ್ರಸಕ್ತ ಸಾಲಿನ ಕಬ್ಬು ಅರೆಯುವಿಕೆ ಹಿನ್ನೆಲೆಯಲ್ಲಿ ಪಾಂಡವಪುರ ಸಹಕಾರ ಸಕ್ಕರೆ ಕಾರ್ಖಾನೆಯಲ್ಲಿ ಎಂಆರ್‌ಎನ್ ಕೇನ್ ಪವರ್ಸ್ ಲಿಮಿಟೆಡ್‌ನಿಂದ ರೈತರು ಮತ್ತು ಕಾರ್ಮಿಕರ ಸಮ್ಮುಖದಲ್ಲಿ ಭಾನುವಾರ ಬಾಯ್ಲರ್‌ಗೆ ಅಗ್ನಿ ಸ್ಪರ್ಶ ಮಾಡಲಾಯಿತು.



ನಿರಾಣಿ ಶುಗರ್ಸ್ ಮುಖ್ಯ ವ್ಯವಸ್ಥಾಪಕ ಶಿವಾನಂದ ಸಲಗಾರ್ ನೇತೃತ್ವದಲ್ಲಿ ಕಾರ್ಖಾನೆ ಅಧಿಕಾರಿಗಳು, ಕಾರ್ಮಿಕರು ಹಾಗೂ ಸ್ಥಳೀಯ ರೈತ ಮುಖಂಡರ ಸಮ್ಮುಖದಲ್ಲಿ ಧಾರ್ಮಿಕ ಪೂಜಾ ಕೈಂಕರ್ಯಗಳೊಂದಿಗೆ ಬಾಯ್ಲರ್‌ಗೆ ಪೂಜೆ ಸಲ್ಲಿಸಿ ಅಗ್ನಿ ಸ್ಪರ್ಶಿಸಲಾಯಿತು.

ಎಂಆರ್‌ಎನ್ ಶುಗರ್ಸ್ ಮುಖ್ಯ ವ್ಯವಸ್ಥಾಪಕ ಶಿವಾನಂದ ಸಲಗಾರ್ ಮಾತನಾಡಿ, ಕಳೆದ 2 ವರ್ಷಗಳಿಂದ ಕಾರ್ಖಾನೆ ಯಂತ್ರೋಪಕರಣಗಳ ದುರಸ್ತಿ ನಡುವೆ ಯಶಸ್ವಿಯಾಗಿ ಕಬ್ಬು ಅರೆಯಲಾಗಿದೆ. ಕಳೆದ ವರ್ಷ 4.60 ಲಕ್ಷ ಟನ್ ಕಬ್ಬನ್ನು ಯಶಸ್ವಿಯಾಗಿ ನುರಿಸಿ, ಈ ಭಾಗದ ಕಬ್ಬು ಬೆಳೆಗಾರರಿಗೆ ಅನುಕೂಲ ಮಾಡಿಕೊಡಲಾಗಿತ್ತು. ಈ ಹಂಗಾಮಿನಲ್ಲಿ ಕಬ್ಬು ಅರೆಯುವಿಕೆಗೆ ಚಾಲನೆ ನೀಡಲು ಬಾಯ್ಲರ್‌ಗೆ ಅಗ್ನಿಸ್ಪರ್ಶ ಮಾಡಲಾಗಿದೆ. ಜುಲೈ ಮೊದಲ ವಾರ ಕಬ್ಬು ಅರೆಯಲು ಚಾಲನೆ ನೀಡಿ ಕಾರ್ಖಾನೆ ವ್ಯಾಪ್ತಿಯಲ್ಲಿ ಲಭ್ಯವಿರುವ 6 ರಿಂದ 7 ಲಕ್ಷ ಟನ್ ಕಬ್ಬು ಅರೆಯಲು ನಿರ್ಧರಿಸಲಾಗಿದೆ. ಇದಕ್ಕಿಂತಲೂ ಹೆಚ್ಚಿಗೆ ಕಬ್ಬು ಲಭ್ಯವಾದರೂ, ರೈತರಿಗೆ ತೊಂದರೆಯಾಗದಂತೆ ಕಬ್ಬು ಅರೆಯಲಾಗುವುದು. ಕಬ್ಬು ಕಟಾವು ಹಾಗೂ ಸರಬರಾಜಿಗೆ ಸಂಬಂಧಿಸಿದಂತೆ ಎಲ್ಲಾ ರೀತಿಯ ಸಿದ್ಧತೆ ಕೈಗೊಳ್ಳಲಾಗಿದೆ. ಎಫ್‌ಆರ್‌ಪಿ ದರದಂತೆ ಟನ್ ಕಬ್ಬಿಗೆ ದರ ನಿಗದಿ ಮಾಡಲಾಗುವುದು ಎಂದರು.

ರೈತ ಸಂಘದ ಜಿಲ್ಲಾಧ್ಯಕ್ಷ ಎ.ಎಲ್.ಕೆಂಪೂಗೌಡ ಮಾತನಾಡಿ, ಎಂಆರ್‌ಎನ್ ಸಂಸ್ಥೆ ಕಬ್ಬು ಅರೆದು ರೈತರಿಗೆ ಯಾವುದೇ ತೊಂದರೆಯಾಗದಂತೆ ಬಟವಾಡೆ ಮಾಡುತ್ತಿದೆ. ಆದರೆ ಪಿಎಸ್‌ಎಸ್‌ಕೆ ಕಾರ್ಖಾನೆ ಆಸ್ತಿ ರಕ್ಷಿಸಲು ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಬೇಕು. ಕಾರ್ಖಾನೆಗೆ ತನ್ನದೇ ಆದ ಚರ ಮತ್ತು ಸ್ಥಿರ ಆಸ್ತಿಗಳಿದ್ದು ಅವುಗಳ ರಕ್ಷಣೆಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರಿಗೆ ಪತ್ರ ಬರೆಯಲಾಗುವುದು. ಎಫ್‌ಆರ್‌ಪಿ ದರವನ್ನು 8.5ಕ್ಕೆ ನಿಲ್ಲಿಸಬೇಕು ಹಾಗೂ ರಾಜ್ಯ ಸರ್ಕಾರ ರೈತರನ್ನು ಉಳಿಸುವ ನಿಟ್ಟಿನಲ್ಲಿ ಗರಿಷ್ಟ ಮಾರಾಟ (ಎಂಎಸ್‌ಪಿ) ದರ ನೀಡಬೇಕು ಎಂದು ಆಗ್ರಹಿಸಿ ಜು.11 ರಂದು ಮುಖ್ಯಮಂತ್ರಿ ನಿವಾಸಕ್ಕೆ ಮುತ್ತಿಗೆ ಹಾಕುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದರು.

ಈ ವೇಳೆ ಕೆನ್ನಾಳು ಗ್ರಾಪಂ ಅಧ್ಯಕ್ಷೆ ಶ್ವೇತಾ, ರೈತ ಸಂಘದ ತಾಲೂಕು ಅಧ್ಯಕ್ಷ ಹರೀಶ್, ಮಂಜು, ವೈ.ಜಿ.ರಘು, ಪ್ರಕಾಶ್ ಇತರರಿದ್ದರು.

ಆ.1ರಿಂದ ಮಂಡ್ಯ ಜಿಲ್ಲೆಯಲ್ಲಿ ಕಾಂಗ್ರೆಸ್ ಪಾದಯಾತ್ರೆ

ಕೆಪಿಸಿಸಿ ಉಪಾಧ್ಯಕ್ಷ, ಮಾಜಿ ಸಚಿವ ಎನ್.ಚಲುವರಾಯಸ್ವಾಮಿ



ಮಂಡ್ಯ, ಜೂ.26(ಮೋಹನ್‌ರಾಜ್)– ಸ್ವಾತಂತ್ರ್ಯೋತ್ಸವದ ಅಮೃತ ಮಹೋತ್ಸವ ಹಿನ್ನೆಲೆಯಲ್ಲಿ ಆ.1ರಿಂದ ಜಿಲ್ಲೆಯಲ್ಲಿ ಕಾಂಗ್ರೆಸ್ ವತಿಯಿಂದ ಪಾದಯಾತ್ರೆ ನಡೆಸಲಾಗುವುದು ಎಂದು ಕೆಪಿಸಿಸಿ ಉಪಾಧ್ಯಕ್ಷ ಹಾಗೂ ಮಾಜಿ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದರು.

ನಗರದ ಖಾಸಗಿ ಹಾಲ್‌ನಲ್ಲಿ ಏರ್ಪಡಿಸಿದ್ದ ಕಾಂಗ್ರೆಸ್ ನವ ಸಂಕಲ್ಪ ಚಿಂತನಾ ಶಿಬಿರದಲ್ಲಿ ಮಾತನಾಡಿದ ಅವರು, 10 ದಿನಗಳ ಕಾಲ ನಡೆಯುವ 75 ಕಿಮೀ ಪಾದಯಾತ್ರೆಯಲ್ಲಿ ಜಿಲ್ಲೆಯ ಎಲ್ಲಾ ವಿಧಾನಸಭಾ ಕ್ಷೇತ್ರಗಳಿಗೂ ತೆರಳಿ ಜನರ ಸಮಸ್ಯೆಗಳನ್ನು ಕ್ರೋಢೀಕರಿಸಲಾಗುವುದು. ಆ.15 ರಂದು ಬೆಂಗಳೂರಿನಲ್ಲಿ ನಡೆಯುವ ಬೃಹತ್ ಸಮಾವೇಶಕ್ಕೆ ಪ್ರತಿ ವಿಧಾನಸಭಾ ಕ್ಷೇತ್ರದಿಂದ 500 ಮಂದಿಯನ್ನು ಕರೆದೊಯ್ಯಲಾಗುವುದು ಎಂದರು.

ಪಾದಯಾತ್ರೆ ರೂಪು ರೇಷೆಗಳು ತಯಾರಾಗುತ್ತಿದ್ದು, ಎಲ್ಲಿಂದ ಆರಂಭಿಸಬೇಕು. ಎಲ್ಲೆಲ್ಲಿ ವಾಸ್ತವ್ಯ ಹೂಡುವುದು. ಪಾದಯಾತ್ರೆಗೆ ಬರುವವರಿಗೆ ವ್ಯವಸ್ಥೆಗಳ ಕುರಿತಂತೆ ಮುಂದಿನ ದಿನಗಳಲ್ಲಿ ವ್ಯವಸ್ಥಿತವಾಗಿ ನಿರ್ಧಾರ ಕೈಗೊಳ್ಳಲಾಗುವುದು ಎಂದರು.

ಜಿಲ್ಲೆಯೊಳಗೆ ಬಿಜೆಪಿಗಿಂತ ಹೆಚ್ಚಾಗಿ ಜಾತ್ಯತೀತ ಜನತಾದಳಕ್ಕೆ ಸೆಡ್ಡು ಹೊಡೆಯುವಂತೆ ಕೆಲಸ ಮಾಡಬೇಕಿದೆ. 2018ರಲ್ಲಿ ನಾವು ಏಳೂ ಕ್ಷೇತ್ರಗಳಲ್ಲೂ ಸಂಪೂರ್ಣವಾಗಿ ಸೋಲು ಅನುಭವಿಸಿದ್ದೆವು. ರಾಜ್ಯದಲ್ಲಿ ಮಂಡ್ಯದೊಳಗೆ ಕಾಂಗ್ರೆಸ್ ಇದೆಯಾ ಎಂಬ ಪರಿಸ್ಥಿತಿ ನಿರ್ಮಾಣವಾಗಿತ್ತು ಇತ್ತೀಚೆಗೆ ನಡೆದ ವಿಧಾನ ಪರಿಷತ್ ಚುನಾವಣೆಗಳಲ್ಲಿ ಜಿಲ್ಲೆಯ ಜನರು ನಮ್ಮ ಮೇಲೆ ವಿಶ್ವಾಸವಿಟ್ಟು ಅವಕಾಶ ಕೊಟ್ಟಿದ್ದಾರೆ. ಇದರಿಂದ ಕೆಪಿಸಿಸಿಯಲ್ಲಿ ನಮಗೆ ಸ್ವಲ್ಪ ಗೌರವ ಸಿಕ್ಕಿದೆ ಎಂದರು.

ಕೆಪಿಸಿಸಿ ಕಾರ್ಯಾಧ್ಯಕ್ಷ ಆರ್.ಧ್ರುವನಾರಾಯಣ್ ಮಾತನಾಡಿ, ಬಿಜೆಪಿ–ಜೆಡಿಎಸ್ ಒಂದು ನಾಣ್ಯದ ಎರಡು ಮುಖವಿದ್ದಂತೆ. ಎರಡೂ ಪಕ್ಷಗಳು ಒಟ್ಟಾಗಿ ಚುನಾವಣೆಗೆ ಬರುತ್ತಾರೆ. ಅವರನ್ನು ಎದುರಿಸುವ ಕೆಲಸ ನಮ್ಮದಾಗಬೇಕು ಎಂದು ಸೂಚ್ಯವಾಗಿ ಹೇಳಿದರು.

2023ರ ಚುನಾವಣೆ ಗೆಲ್ಲುವ ಸಂಕಲ್ಪದೊಂದಿಗೆ ಕಾಂಗ್ರೆಸ್ ಮತ್ತಷ್ಟು ಸದೃಢವಾಗಬೇಕು. ಚಿಂತನಾ ಸಭೆಯ ಪ್ರಾಮುಖ್ಯತೆ ಅರಿತು ಉತ್ಸಾಹ, ಬದ್ಧತೆಯಿಂದ ಪಕ್ಷ ಸಂಘಟನೆಯಲ್ಲಿ ಕಾರ್ಯೋನ್ಮುಖರಾಗಬೇಕು. ಚುನಾವಣೆ ಹತ್ತಿರ ಬರುತ್ತಿದ್ದು, ಸ್ಥಾನಮಾನಗಳಿಗೆ ಹೋರಾಡದೆ ಪಕ್ಷದ ಬಲವರ್ಧನೆಗೆ ಶ್ರಮಿಸುವಂತೆ ತಿಳಿಸಿದರು.

ಒಗ್ಗಟ್ಟಾಗಿದ್ದರೆ ಚುನಾವಣೆಯಲ್ಲಿ ಗೆಲುವು ಅಸಾಧ್ಯವೇನಲ್ಲ. ಎರಡು ವಿಧಾನ ಪರಿಷತ್ ಚುನಾವಣೆಗಳು ಇದನ್ನು ಸಾಬೀತುಪಡಿಸಿವೆ. ಇದೇ ಒಗ್ಗಟ್ಟನ್ನು ಮುಂದಿನ ದಿನಗಳಲ್ಲೂ ಪ್ರದರ್ಶಿಸಿದರೆ ನಮಗೆ ಉತ್ತಮ ಪ್ರತಿಫಲ ಸಿಗುತ್ತದೆ. ರಾಜ್ಯದಲ್ಲಿ 72 ಲಕ್ಷ ಕಾಂಗ್ರೆಸ್ ಸದಸ್ಯತ್ವ ನೋಂದಣಿಯಾಗಿದೆ. ಇದು ಹಿಂದಿನ ಕಾಲ ಅಲ್ಲ. ಕಾಲಕ್ಕೆ ತಕ್ಕಂತೆ ಬದಲಾವಣೆಯಾಗಬೇಕು. ನಾವು ಕೂಡ ಚುನಾವಣಾ ತಂತ್ರವನ್ನು ಬದಲಾವಣೆ ಮಾಡಿಕೊಳ್ಳಬೇಕು ಎಂದರು.


ಮಾಜಿ ಸಚಿವ ಪಿ.ಎಂ.ನರೇಂದ್ರಸ್ವಾಮಿ ಮಾತನಾಡಿ, ಜಿಲ್ಲೆಯಲ್ಲಿ ಕಾಂಗ್ರೆಸ್ ಸತ್ತಿಲ್ಲ. ಪಕ್ಷ ಸೋತಿದ್ದರೆ ಅದು ಕಾಂಗ್ರೆಸ್‌ನಿಂದ ಮಾತ್ರ ಎಂದು ನಿಷ್ಠುರವಾಗಿ ನುಡಿದರು.

ಪ್ರಧಾನಿಯಾಗಿದ್ದ ಮನಮೋಹನ್ ಸಿಂಗ್ ಅವರು ಜಾರಿಗೆ ತಂದ ನರೇಗಾ, ಆರ್‌ಟಿಐ, ಆರ್‌ಟಿಇ ಸೇರಿದಂತೆ ಹಲವಾರು ಜನಪ್ರಿಯ ಕಾರ್ಯಕ್ರಮಗಳನ್ನು ಜನಸಾಮಾನ್ಯರಿಗೆ ತಲುಪಿಸುವಲ್ಲಿ ನಾವು ವಿಫಲರಾಗಿದ್ದೇವೆ. ಅವುಗಳನ್ನು ಜನರಿಗೆ ತಲುಪಿಸುವ ಕಾರ್ಯ ನಮ್ಮದಾಗಬೇಕು. ಬಿಜೆಪಿ ಸುಳ್ಳು ಹೇಳಿಕೊಂಡೇ ಜನರನ್ನು ಮರಳು ಮಾಡುತ್ತಿದೆ. ಬಿಜೆಪಿಯವರ ಸುಳ್ಳನ್ನು ಜನರೆದುರು ಬಿಚ್ಚಿಡುವ ಕೆಲಸವನ್ನು ನಾವು ಮಾಡಬೇಕು. ಆಗ ನಾವು ಶಕ್ತಿಶಾಲಿಯಾಗಿ ನಿಲ್ಲಬಹುದು ಎಂದರು. ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಬಿ.ಸಿ.ಚಂದ್ರಶೇಖರ್, ವಿಧಾನ ಪರಿಷತ್ ಸದಸ್ಯ ದಿನೇಶ್ ಗೂಳಿಗೌಡ, ಮಾಜಿ ಶಾಸಕರಾದ ರಮೇಶ್ ಬಂಡಿಸಿದ್ದೇಗೌಡ, ಕೆ.ಬಿ.ಚಂದ್ರಶೇಖರ್, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ದಡದಪುರ ಶಿವಣ್ಣ, ಮುಖಂಡರಾದ ರವಿಕುಮಾರ್ ಗಣಿಗ, ಡಾ.ಹೆಚ್.ಕೃಷ್ಣ, ಡಾ.ಎಚ್.ವಿ.ರವೀಂದ್ರ, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಸಿ.ಡಿ.ಗಂಗಾಧರ್, ಮಹಿಳಾಧ್ಯಕ್ಷೆ ಅಂಜನಾ ಸೇರಿದಂತೆ ಇತರರಿದ್ದರು.

> 2023ರ ಸಾರ್ವತ್ರಿಕ ಚುನಾವಣೆ ನಮ್ಮ ಮುಂದಿರುವ ಗುರಿ. ಅದಕ್ಕಾಗಿ ಈಗಿನಿಂದಲೇ ಎಲ್ಲರೂ ಸಿದ್ಧತೆ ಮಾಡಿಕೊಳ್ಳಬೇಕು. ಅದಕ್ಕೂ ಮುನ್ನಾ ಜಿಪಂ, ತಾಪಂ ಚುನಾವಣೆ ನಡೆದರೂ ಒಗ್ಗಟ್ಟಿನಿಂದ ಎದುರಿಸಿ ಅಧಿಕಾರದ ಗದ್ದುಗೆ ಏರಬೇಕು. ಯಾವಾಗಲೂ ಸವಾಲು ಎದುರಿಸುವುದಕ್ಕೆ ಸನ್ನದ್ಧರಾಗಿಬೇಕು. ಕಾಂಗ್ರೆಸ್ ಕಾರ್ಯಕರ್ತರು, ಮುಖಂಡರು ಜಿಲ್ಲೆಯ ಜನರ ಸಮಸ್ಯೆಗಳಿಗೆ ಸ್ಪಂದಿಸುವ ಮೂಲಕ ಮುಂಬರುವ ಚುನಾವಣೆಯಲ್ಲಿ ಏಳಕ್ಕೆ ಏಳೂ ಕ್ಷೇತ್ರ ಗೆಲ್ಲುವುದಕ್ಕೆ ಸಂಕಲ್ಪ ಮಾಡಬೇಕು.
> –ಎನ್.ಚಲುವರಾಯಸ್ವಾಮಿ, ಮಾಜಿ ಸಚಿವ.

ಇಂದು ನಾಡಪ್ರಭು ಕೆಂಪೇಗೌಡ ಜಯಂತಿ

ಮಂಡ್ಯ, ಜೂ.26– ಜಿಲ್ಲಾಡಳಿತ, ಜಿಪಂ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಇವರ ಸಂಯುಕ್ತಾಶ್ರಯದಲ್ಲಿ ಜೂ.27 ರಂದು ಬೆಳಗ್ಗೆ 11 ಗಂಟೆಗೆ ನಗರದ ನಾಲ್ವಡಿ ಕೃಷ್ಣರಾಜ ಒಡೆಯರ್ ಕಲಾಮಂದಿರದಲ್ಲಿ ನಾಡಪ್ರಭು ಕೆಂಪೇಗೌಡ ಜಯಂತೋತ್ಸವ ಹಮ್ಮಿಕೊಳ್ಳಲಾಗಿದೆ.



ಕಾರ್ಯಕ್ರಮವನ್ನು ಜಿಲ್ಲಾ ಉಸ್ತುವಾರಿ ಸಚಿವ ಕೆ.ಗೋಪಾಲಯ್ಯ ಉದ್ಘಾಟಿಸುವರು. ಶಾಸಕ ಎಂ.ಶ್ರೀನಿವಾಸ್ ಅಧ್ಯಕ್ಷತೆ ವಹಿಸಲಿದ್ದು, ಸಚಿವ ಡಾ.ಕೆ.ಸಿ.ನಾರಾಯಣಗೌಡ ಉಪಸ್ಥಿತರಿರುವರು. ಮುಖ್ಯ ಭಾಷಣಕಾರರಾಗಿ ಮಂಡ್ಯ ಶಂಕರಗೌಡ ಶಿಕ್ಷಣ ಮಹಾವಿದ್ಯಾಲಯದ ನಿವೃತ್ತ ಪ್ರಾಂಶುಪಾಲ ಎಸ್.ಬಿ.ಶಂಕರಗೌಡ ಆಗಮಿಸುವರು. ಸಂಸದೆ ಸುಮಲತಾ, ಶಾಸಕರಾದ ಮರಿತಿಬ್ಬೇಗೌಡ, ಕೆ.ಟಿ.ಶ್ರೀಕಂಠೇಗೌಡ, ದಿನೇಶ್ ಗೂಳಿಗೌಡ, ಸಿ.ಎಸ್.ಪುಟ್ಟರಾಜು, ಡಿ.ಸಿ.ತಮ್ಮಣ್ಣ, ಸುರೇಶ್‌ಗೌಡ, ಡಾ.ಕೆ.ಅನ್ನದಾನಿ, ನಗರಸಭಾಧ್ಯಕ್ಷ ಎಚ್.ಎಸ್.ಮಂಜು, ಉಪಾಧ್ಯಕ್ಷೆ ಇಷ್ರತ್ ಫಾತಿಮಾ, ಮಂಡ್ಯ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕೆ.ಎಸ್. ದೊರೆಸ್ವಾಮಿ, ದಿ ಮೈಸೂರು ಶುಗರ್ ಕಂಪನಿ ಲಿ. ಅಧ್ಯಕ್ಷ ಜೆ.ಶಿವಲಿಂಗೇಗೌಡ, ಕಾವೇರಿ ಅಚ್ಚುಕಟ್ಟು ಅಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಎನ್.ಶಿವಲಿಂಗಯ್ಯ, ಮಂಡ್ಯ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ.ವಿ.ರಾಮ್ ಪ್ರಸಾದ್ ಮನೋಹರ್ ಹಾಗೂ ಜಿಲ್ಲಾಧಿಕಾರಿಗಳು ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಭಾಗವಹಿಸಲಿದ್ದಾರೆ.

ಸರ್ಕಾರವೇ ಡಯಾಲಿಸಿಸ್ ಕೇಂದ್ರ ನಿರ್ವಹಣೆಗೆ ಆಗ್ರಹಿಸಿ ಪ್ರತಿಭಟನೆ



ಕೆ.ಆರ್.ಪೇಟೆ, ಜೂ.26(ಶ್ರೀನಿವಾಸ್)– ಡಯಾಲಿಸಿಸ್ ಕೇಂದ್ರವನ್ನು ಖಾಸಗಿಯವರಿಗೆ ವಹಿಸದೇ ಸರ್ಕಾರವೇ ನಿರ್ವಹಣೆ ಮಾಡಬೇಕೆಂದು ಆಗ್ರಹಿಸಿ ರೋಗಿಗಳು ಪಟ್ಟಣದಲ್ಲಿ ಪ್ರತಿಭಟನೆ ನಡೆಸಿದರು.

ಪಟ್ಟಣದ ಸರ್ಕಾರಿ ಆಸ್ಪತ್ರೆ ಡಯಾಲಿಸಿಸ್ ಕೇಂದ್ರದ ಎದುರು ಜಮಾಯಿಸಿದ ತಾಲೂಕಿನ ವಿವಿಧ ಗ್ರಾಮಗಳಿಂದ ಆಗಮಿಸಿದ್ದ ರೋಗಿಗಳು ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು.

ರಾಜ್ಯ ಸರ್ಕಾರ ಈ ಹಿಂದೆ ಬಿಆರ್‌ಎಸ್ ಸಂಸ್ಥೆಗೆ ಡಯಾಲಿಸಿಸ್ ಕೇಂದ್ರವನ್ನು 4 ವರ್ಷಗಳ ಕಾಲ ಗುತ್ತಿಗೆಗೆ ನೀಡಿತ್ತು. ಆಗ ಗುಣಮಟ್ಟದ ಚಿಕಿತ್ಸೆ ದೊರೆಯುತ್ತಿತ್ತು. 2021ರ ಆಗಸ್ಟ್‌ನಲ್ಲಿ ಮತ್ತೆ ಸರ್ಕಾರ ವಹಿಸಿಕೊಂಡಾಗಲೂ ಉತ್ತಮ ಚಿಕಿತ್ಸೆ ದೊರೆಯುತ್ತಿತ್ತು. ಆದರೆ 2022ರ ಜನವರಿಯಲ್ಲಿ ರಾಜ್ಯದ ಎಲ್ಲಾ ಡಯಾಲಿಸಿಸ್ ಕೇಂದ್ರವನ್ನು ಸಂಜೀವಿನಿ ಎಂಬ ಖಾಸಗಿ ಸಂಸ್ಥೆಗೆ ವಹಿಸಿದ್ದು, ಆ ಸಂಸ್ಥೆ ಡಯಾಲಿಸಿಸ್ ಕೇಂದ್ರ ನಿರ್ವಹಣೆ ಮಾಡುವಲ್ಲಿ ವಿಫಲವಾಗಿದೆ ಎಂದು ಆರೋಪಿಸಿದರು. ಸಂಜೀವಿನಿ ಸಂಸ್ಥೆ ಡಯಾಲಿಸಿಸ್ ಕೇಂದ್ರ ಸಿಬ್ಬಂದಿಗೆ ಸರಿಯಾಗಿ ವೇತನ ಪಾವತಿಸುತ್ತಿಲ್ಲ. ಕೆಟ್ಟು ಹೋಗಿರುವ ಡಯಾಲಿಸಿಸ್ ಯಂತ್ರಗಳನ್ನು ತಿಂಗಳಾದರೂ ರಿಪೇರಿ ಮಾಡಿಸಿಲ್ಲ. ಆಸ್ಪತ್ರೆಯಲ್ಲಿರುವ ಒಂದೇ ಒಂದು ಡಯಾಲಿಸಿಸ್ ಯಂತ್ರದಿಂದ ಸುಮಾರು 17 ರೋಗಿಗಳಿಗೆ ಡಯಾಲಿಸಿಸ್ ಮಾಡಲು ತೊಂದರೆಯಾಗುತ್ತಿದೆ. ಇದರಿಂದ ರೋಗಿಗಳು ಬೇರೆ ಬೇರೆ ರೋಗಗಳಿಗೆ ತುತ್ತಾಗುತ್ತಿದ್ದಾರೆ. ಅಲ್ಲದೇ ಸರಿಯಾದ ಚಿಕಿತ್ಸೆ ಸಿಗದೇ ಇಬ್ಬರು ರೋಗಿಗಳು ಮೃತಪಟ್ಟಿದ್ದಾರೆ. ಡಯಾಲಿಸಿಸ್ ಕೇಂದ್ರಗಳಿಗೆ ಸೂಕ್ತ ಸಿಬ್ಬಂದಿ ಹಾಗೂ ಅಗತ್ಯ ಚಿಕಿತ್ಸಾ ಪರಿಕರಗಳನ್ನು ನೀಡುವ ಮೂಲಕ ಸರ್ಕಾರವೇ ಡಯಾಲಿಸಿಸ್ ಕೇಂದ್ರಗಳನ್ನು ನಿರ್ವಹಣೆ ಮಾಡಿ ರೋಗಿಗಳಿಗೆ ಗುಣಮಟ್ಟದ ಚಿಕಿತ್ಸೆ ದೊರಕಿಸಿಕೊಡಬೇಕು ಎಂದು ಒತ್ತಾಯಿಸಿದರು.

ರೋಗಿಗಳ ಮನವಿ ಆಲಿಸಿದ ಸಾರ್ವಜನಿಕ ಆಸ್ಪತ್ರೆ ಆಡಳಿತಾಧಿಕಾರಿ ಡಾ.ಎ.ರವಿ, ಡಯಾಲಿಸಿಸ್ ಸಿಬ್ಬಂದಿ ವೇತನಕ್ಕೆ ಆಗ್ರಹಿಸಿ ಪ್ರತಿಭಟನೆ ನಡೆಸುತ್ತಿದ್ದಾರೆ. ಹೀಗಾಗಿ ರೋಗಿಗಳಿಗೆ ತೊಂದರೆಯಾಗದಂತೆ ಚಿಕಿತ್ಸೆಗೆ ಕ್ರಮ ವಹಿಸಲಾಗುವುದು ಎಂದು ಭರವಸೆ ನೀಡಿದ ಬಳಿಕ ಪ್ರತಿಭಟನೆ ಹಿಂಪಡೆಯಲಾಯಿತು. ಪ್ರತಿಭಟನೆಯಲ್ಲಿ ರೋಗಿಗಳಾದ ಚಂದ್ರಪ್ಪ, ಮಹದೇವ್, ತೇಜಸ್ವಿನಿ, ತೋಯಜಾಕ್ಷಮ್ಮ, ಗಾಯಿತ್ರಿ, ಕೃಷ್ಣೇಗೌಡ, ಕುಮಾರಗೌಡ, ಆನಂದ್, ಅಭಿಷೇಕ್, ಗಿರೀಶ್, ಯಶೋಧಮ್ಮ, ಪುಟ್ಟಸಿದ್ದಮ್ಮ, ಮಂಜುನಾಥ್, ಮಹಮದ್ ಇಮ್ರಾನ್ ಇತರರಿದ್ದರು.



ಶ್ರೀರಂಗಪಟ್ಟಣ ತಾಲೂಕಿನ ಪಾಲಹಳ್ಳಿ ಡೈರಿ ನೂತನ ಅಧ್ಯಕ್ಷರಾಗಿ ಎಂ.ಕಿಶೋರ್ (ಕಿರಣ್) ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಈ ವೇಳೆ ಉಪಾಧ್ಯಕ್ಷೆ ಶಾಂತಮ್ಮ, ಮಾಜಿ ಅಧ್ಯಕ್ಷ ಪಿ.ಎಲ್.ಪುಟ್ಟರಾಮು, ನಿರ್ದೇಶಕರಾದ ಸಿ.ಲೋಕೇಶ್, ಎಸ್.ಶಿವಶಂಕರ್, ಪಿ.ಎಸ್.ಮೋಹನ್ ಕುಮಾರ್, ಜಯರಾಂ, ಶಿವಣ್ಣ, ರವಿಕುಮಾರ್, ರೂಪ, ಲಕ್ಷ್ಮಮ್ಮ ಮತ್ತು ಗ್ರಾಮದ ಮುಖಂಡರಾದ ಪಿ.ಎಸ್.ರಮೇಶ್‌ಬಾಬು, ಪೈಲ್ವಾನ್ ಮುಕುಂದ, ಪ್ರಕಾಶ್, ಪಿ.ಹೆಚ್.ನಾಗರಾಜು, ವಿ.ಶಂಕರೇಗೌಡ, ಶ್ರೀಧರ್ ಹಾಗೂ ಗ್ರಾಮಸ್ಥರಿದ್ದರು.

ಇಂದು ಜನಸಂಪರ್ಕ ಸಭೆ

ಮಂಡ್ಯ, ಜೂ.26– ಮಂಡ್ಯ ತಾಲೂಕು ವ್ಯಾಪ್ತಿಯ ಮಂಡ್ಯ, ಕೊತ್ತತ್ತಿ ಮತ್ತು ಕೆರಗೋಡು ಉಪವಿಭಾಗ ವ್ಯಾಪ್ತಿಯ ವಿದ್ಯುತ್ ಸಮಸ್ಯೆಗಳ ಕುರಿತು ಚರ್ಚಿಸಲು ಜೂ.27ರಂದು ವಿದ್ಯುತ್ ಗ್ರಾಹಕರ ಕುಂದು ಕೊರತೆ ಜನಸಂಪರ್ಕ ಸಭೆ ಮಂಡ್ಯ ನಗರ ಉಪ ವಿಭಾಗದಲ್ಲಿ ಬೆಳಗ್ಗೆ 10 ರಿಂದ 11 ಗಂಟೆವರೆಗೆ, ಕೊತ್ತತ್ತಿ ಉಪವಿಭಾಗದಲ್ಲಿ ಬೆಳಗ್ಗೆ 11 ರಿಂದ ಮಧ್ಯಾಹ್ನ 12 ರವರೆಗೆ ಹಾಗೂ ಕೆರಗೋಡು ಉಪ ವಿಭಾಗದಲ್ಲಿ ಮಧ್ಯಾಹ್ನ 12 ರಿಂದ 1 ಗಂಟೆವರೆಗೆ ನಡೆಯಲಿದೆ ಎಂದು ಪ್ರಕಟಣೆ ತಿಳಿಸಿದೆ.

ತುರ್ತು ಪರಿಸ್ಥಿತಿಯಲ್ಲಿ ಪ್ರಜಾಪ್ರಭುತ್ವ ಹತ್ತಿಕ್ಕಲು ಯತ್ನಿಸಲಾಗಿತ್ತು

ಮನ್ ಕಿ ಬಾತ್‌ನಲ್ಲಿ ಪ್ರಧಾನಿ ಮೋದಿ



ನವದೆಹಲಿ: ತುರ್ತು ಪರಿಸ್ಥಿತಿಯಲ್ಲಿ ಪ್ರಜಾಪ್ರಭುತ್ವವನ್ನು ಹತ್ತಿಕ್ಕುವ ಯತ್ನ ನಡೆದಿತ್ತು ಎಂದು ಪ್ರಧಾನಿ ಮೋದಿ ಹೇಳಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಇಂದು ಬೆಳಗ್ಗೆ 11 ಗಂಟೆಗೆ ಮಾಸಿಕ ಆಕಾಶವಾಣಿ ಕಾರ್ಯಕ್ರಮ 'ಮನ್ ಕಿ ಬಾತ್' ಉದ್ದೇಶಿಸಿ ಮಾತನಾಡಿದ್ದು, ಈ ವೇಳೆ ಹಲವು ವಿಚಾರಗಳನ್ನು ಪ್ರಸ್ತಾಪಿಸಿದ್ದಾರೆ. ಇದು ಪ್ರಧಾನಿ ಮೋದಿ ಅವರ 90ನೇ ಸಂಚಿಕೆಯ ರೇಡಿಯೋ ಕಾರ್ಯಕ್ರಮವಾಗಿದೆ. ಈ ತಿಂಗಳ ಮನ್ ಕಿ ಬಾತ್‌ಗೆ ಪ್ರಧಾನಿ ಮೋದಿ ಸಂತಸ ವ್ಯಕ್ತಪಡಿಸಿದ್ದು, ದೇಶವಾಸಿಗಳಿಗೆ ಕೃತಜ್ಞತೆ ಸಲ್ಲಿಸಿದ್ದಾರೆ. MyGov ಅಥವಾ NaMo ಅಪ್ಲಿಕೇಶನ್‌ನಲ್ಲಿ ಮನ್ ಕಿ ಬಾತ್ ಕುರಿತು ತಮ್ಮ ಅಭಿಪ್ರಾಯಗಳನ್ನು ಹಂಚಿಕೊಳ್ಳುವಂತೆ ಪ್ರಧಾನಮಂತ್ರಿ ಜನರನ್ನು ಆಗ್ರಹಿಸಿದ್ದಾರೆ.

ತುರ್ತು ಪರಿಸ್ಥಿತಿ ಕುರಿತು ಮಾತನಾಡಿದ ಪ್ರಧಾನಿ ಮೋದಿ, ತುರ್ತು ಪರಿಸ್ಥಿತಿಯ ಸಂದರ್ಭ ದಲ್ಲಿ ಪ್ರಜಾಪ್ರಭುತ್ವದ ಸೈನಿಕನಾಗಿ ದೇಶವಾಸಿಗಳ ಹೋರಾಟಕ್ಕೆ ಸಾಕ್ಷಿಯಾಗುವ, ಪಾಲುದಾರನಾಗುವ ಸೌಭಾಗ್ಯ ನನಗೆ ಸಿಕ್ಕಿತ್ತು. ತುರ್ತು ಪರಿಸ್ಥಿತಿಯಲ್ಲಿ ಪ್ರಜಾಪ್ರಭುತ್ವವನ್ನು ಹತ್ತಿಕ್ಕುವ ಯತ್ನ ನಡೆದಿತ್ತು. ಶತ ಶತಮಾನಗಳಿಂದ ನಮ್ಮ ಭಾರತದ ಜನತೆಯಲ್ಲಿ ನಡೆದುಕೊಂಡು ಬಂದಿರುವ ಪ್ರಜಾಪ್ರಭುತ್ವದ ಮೌಲ್ಯಗಳು, ನಮ್ಮ ಧಾಟಿಯಲ್ಲಿರುವ ಪ್ರಜಾಸತ್ತಾತ್ಮಕ ಚೈತನ್ಯವನ್ನು ಅಂತಿಮವಾಗಿ ಅವರು ಗೆದ್ದಿದ್ದಾರೆ. ಭಾರತದ ಜನರು ತುರ್ತು ಪರಿಸ್ಥಿತಿಯನ್ನು ತೆಗೆದುಹಾಕುವ ಮೂಲಕ ಪ್ರಜಾಸತ್ತಾತ್ಮಕ ರೀತಿಯಲ್ಲಿ ಪ್ರಜಾಪ್ರಭುತ್ವವನ್ನು ಸ್ಥಾಪಿಸಿದರು ಎಂದಿದ್ದಾರೆ ಎಂದು ಹೇಳಿದರು.

ಅಂತೆಯೇ ಇತ್ತೀಚೆಗೆ ನಿವೃತ್ತರಾದ ಭಾರತ ಮಹಿಳಾ ಕ್ರಿಕೆಟ್ ಆಟಗಾರ್ತಿ ಮಿಥಾಲಿ ರಾಜ್ ಮತ್ತು ನೀರಜ್ ಚೋಪ್ರಾ ಅವರನ್ನು ಹೊಗಳಿದ ಪ್ರಧಾನಿ ಮೋದಿ, ಇಂದು ನಾನು ಭಾರತದ ಪ್ರತಿಭಾನ್ವಿತ ಕ್ರಿಕೆಟಿಗರಲ್ಲಿ ಒಬ್ಬರಾದ ಮಿಥಾಲಿ ರಾಜ್ ಅವರ ಬಗ್ಗೆಯೂ ಚರ್ಚಿಸಲು ಬಯಸುತ್ತೇನೆ. ಅವರು ಇದೇ ತಿಂಗಳು ಕ್ರಿಕೆಟ್‌ಗೆ ನಿವೃತ್ತಿ ಘೋಷಿಸಿದ್ದು, ಹಲವು ಕ್ರೀಡಾಭಿಮಾನಿಗಳನ್ನು ಭಾವುಕರನ್ನಾಗಿಸಿದ್ದಾರೆ. ಮಿಥಾಲಿ ಅವರ ಭವಿಷ್ಯಕ್ಕಾಗಿ ನಾನು ಶುಭ ಹಾರೈಸುತ್ತೇನೆ ಎಂದು ಹೇಳಿದರು. ಈ ಹಿಂದೆ ನಮ್ಮ ಒಲಿಂಪಿಕ್ ಚಿನ್ನದ ಪದಕ ವಿಜೇತ ನೀರಜ್ ಚೋಪ್ರಾ ಅವರು, ಫಿನ್‌ಲ್ಯಾಂಡ್‌ನಲ್ಲಿ ನಡೆದ ಪಾವೊ ನೂರ್ಮಿ ಗೇಮ್ಸ್‌ನಲ್ಲಿ ನೀರಜ್ ಬೆಳ್ಳಿ ಗೆದ್ದಿದ್ದರು. ಅಷ್ಟೇ ಅಲ್ಲ, ತಮ್ಮದೇ ಜಾವೆಲಿನ್ ಥ್ರೋ ದಾಖಲೆಯನ್ನೂ ಮುರಿದಿದ್ದಾರೆ ಎಂದರು.

ಇಂದು ದೇಶವು ಕೊರೋನಾ ವಿರುದ್ಧ ಲಸಿಕೆಯ ಸಮಗ್ರ ರಕ್ಷಣೆ ಹೊಂದಿದೆ. ನಾವು ಸುಮಾರು 200 ಕೋಟಿ ಲಸಿಕೆ ಪ್ರಮಾಣವನ್ನು ತಲುಪಿದ್ದೇವೆ. ದೇಶದಲ್ಲಿ ಕ್ಷಿಪ್ರವಾಗಿ ಮುನ್ನೆಚ್ಚರಿಕೆ ಲಸಿಕೆ ನೀಡಲಾಗುತ್ತಿದೆ. ನಿಮ್ಮ ಮುನ್ನೆಚ್ಚರಿಕೆ ಡೋಸ್‌ಗೆ ಇದು ಸಮಯವಾಗಿದ್ದರೆ, ನೀವು ಈ ಮೂರನೇ ಡೋಸ್ ಅನ್ನು ತೆಗೆದುಕೊಳ್ಳಬೇಕು ಎಂದಿದ್ದಾರೆ.

ಕೆಲವು ವರ್ಷಗಳ ಹಿಂದೆ ಬಾಹ್ಯಾಕಾಶ ಕ್ಷೇತ್ರದ ಸ್ಟಾರ್ಟ್‌ಅಪ್‌ಗಳ ಬಗ್ಗೆ ಯಾರೂ ಯೋಚಿಸಿರಲಿಲ್ಲ. ಇಂದು ಅವುಗಳ ಸಂಖ್ಯೆ ನೂರಕ್ಕೂ ಹೆಚ್ಚು. ಈ ಎಲ್ಲಾ ಸ್ಟಾರ್ಟ್‌ಅಪ್‌ಗಳು ಅಂತಹ ಆಲೋಚನೆಗಳ ಮೇಲೆ ಕಾರ್ಯನಿರ್ವಹಿಸುತ್ತಿವೆ, ಇದನ್ನು ಮೊದಲು ಖಾಸಗಿ ವಲಯಕ್ಕೆ ಅಸಾಧ್ಯವೆಂದು ಪರಿಗಣಿಸಲಾಗಿತ್ತು ಎಂದಿದ್ದಾರೆ.

ಭಾರತದಲ್ಲಿ ಅಘೋಷಿತ ತುರ್ತು ಪರಿಸ್ಥಿತಿ ಇಲ್ಲ



ಬೆಂಗಳೂರು: ಭಾರತದ ಪ್ರಜಾಪ್ರಭುತ್ವ ಬಲಿಷ್ಠವಾಗಿದ್ದು, ಇತರ ಹಲವು ದೇಶಗಳಲ್ಲಿ ಈ ಪ್ರಜಾಪ್ರಭುತ್ವ ಕೆಲವೇ ನಿಮಿಷಗಳ ಕಾಲ ಸಿನಿಮಾ ಟ್ರೈಲರ್‌ಗಳಂತೆ ಬಂದು ಹೋಗುತ್ತಿರುತ್ತದೆ ಎಂದು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಹೇಳಿದ್ದಾರೆ.

ತುರ್ತು ಪರಿಸ್ಥಿತಿ ಕರಾಳ ದಿನಾಚರಣೆಯ ಪ್ರಯುಕ್ತ ಫ್ರೀಡಂ ಪಾರ್ಕ್‌ಗೆ ಭೇಟಿ ನೀಡಿ ಮಾತನಾಡಿದ ಅವರು, ಪ್ರಜಾಪ್ರಭುತ್ವವು ಬಲವಾಗಿ ಬೆಳೆಯುತ್ತಿರುವ ಏಕೈಕ ದೇಶವೆಂದರೆ ಭಾರತ. ಪಾಕಿಸ್ತಾನ, ಬಾಂಗ್ಲಾದೇಶ, ನೇಪಾಳ ಅಥವಾ ಶ್ರೀಲಂಕಾ ನಿರಂತರ ಪ್ರಜಾಪ್ರಭುತ್ವವನ್ನು ಕಂಡಿಲ್ಲ ಎಂದು ಹೇಳಿದರು. ಭಾರತೀಯ ಸಂವಿಧಾನವು ವಿಶ್ವದಲ್ಲೇ ಅತ್ಯುತ್ತಮವಾಗಿದೆ. ಇದು ನಮ್ಮ ಪ್ರಜಾಪ್ರಭುತ್ವವನ್ನು ರಕ್ಷಿಸುವ ಸಮಯ–ಪರೀಕ್ಷಿತ ದಾಖಲೆಯಾಗಿದೆ. ಕೇವಲ ಮತದಾನದ ಮೂಲಕ ತಮ್ಮ ಜವಾಬ್ದಾರಿ ಮುಗಿದಿದೆ ಎಂದು ಜನರು ಭಾವಿಸಬಾರದು ಮತ್ತು ನಡೆಯುತ್ತಿರುವ ಸಮಸ್ಯೆಗಳಲ್ಲಿ ತಮ್ಮನ್ನು ತಾವು ತೊಡಗಿಸಿಕೊಳ್ಳಬೇಕು. ಭಾಗವಹಿಸುವಿಕೆ ಪ್ರಜಾಪ್ರಭುತ್ವಕ್ಕೆ ನಿಜವಾದ ಅರ್ಥವನ್ನು ನೀಡುತ್ತದೆ. ಅದರಲ್ಲಿ ಎಲ್ಲರೂ ಪಾಲುದಾರರಾಗಿರಬೇಕು. ಬಲಿಷ್ಠ ಪ್ರಜಾಪ್ರಭುತ್ವ ನಿರ್ಮಾಣಕ್ಕೆ ಪ್ರಧಾನಿ ನರೇಂದ್ರ ಮೋದಿ ಶ್ರಮಿಸಿದ್ದಾರೆ ಎಂದು ತಿಳಿಸಿದರು. ಹಿಂದೆ ವಾಕ್ ಸ್ವಾತಂತ್ರ್ಯ ಇರಲಿಲ್ಲ, ಮತ್ತು ಈಗ ಕಾಂಗ್ರೆಸ್ ನಾಯಕರು ದೇಶದಲ್ಲಿ ಅಘೋಷಿತ ತುರ್ತು ಪರಿಸ್ಥಿತಿ ಇದೆ ಎಂದು ಹೇಳುತ್ತಾರೆ. ಇಂದು ಜನರು ಮನದಾಳದ ಮಾತನ್ನು ಹೇಳಲು ಅವಕಾಶವಿದೆ ಮತ್ತು ಅದು ಪ್ರಜಾಪ್ರಭುತ್ವದ ಪುರಾವೆ ಎಂಬುದನ್ನು ಅವರು ಅರಿತುಕೊಳ್ಳಬೇಕು ಎಂದರು.

ಇಂದಿರಾಗಾಂಧಿ ಪ್ರಧಾನಿಯಾಗಿದ್ದಾಗ ತುರ್ತು ಪರಿಸ್ಥಿತಿ ಹೇರಲಾಗಿತ್ತು, ಕೇಂದ್ರ ಸರ್ಕಾರ ಎಲ್ಲ ಅಧಿಕಾರವನ್ನೂ ಹೊಂದಿತ್ತು. ಆದರೆ, ಮೋದಿಯವರ ಸರ್ಕಾರದಲ್ಲಿ ಹಾಗಿಲ್ಲ. ಜನ್–ಧನ್ ಯೋಜನೆ ಜಾರಿಗೆ ತಂದು ಎಲ್ಲರೂ ಬ್ಯಾಂಕ್ ಖಾತೆ ತೆರೆಯುವಂತೆ ಮಾಡಿದರು. ನಂತರ ಸ್ವಚ್ಛ ಭಾರತ ಉಪಕ್ರಮ, ಯೋಜನೆಗಳ ಫಲ ನೇರವಾಗಿ ಜನರಿಗೆ ತಲುಪುವಂತೆ ಮಾಡಲಾಗುತ್ತಿದೆ. ಕುಡಿಯುವ ನೀರು ಸರಬರಾಜು ಯೋಜನೆ ಜಾರಿಗೆ ತರಲಾಗಿದೆ. ಈ ರೀತಿ ಪ್ರಜಾಪ್ರಭುತ್ವ ಬಲಗೊಳ್ಳುತ್ತಿದೆ.

ತುರ್ತುಪರಿಸ್ಥಿತಿಯ ಸಂದರ್ಭದಲ್ಲಿ ಸ್ವಾತಂತ್ರ್ಯ ಹೋರಾಟದ ಬೆಂಕಿ ಕಾಣಿಸಿಕೊಂಡಿತ್ತು. ಕರಾಳ ಯುಗ ಭಾರತವನ್ನು ಇನ್ನಷ್ಟು ಬಲಿಷ್ಠಗೊಳಿಸಿತು. ಉತ್ತರ ಭಾರತದಲ್ಲಿ ಬಂಧಿತರಾದವರನ್ನು ಬೆಂಗಳೂರು ಜೈಲಿಗೆ ಸ್ಥಳಾಂತರಿಸುವ ಮೂಲಕ ತುರ್ತು ಪರಿಸ್ಥಿತಿಯಲ್ಲಿ ಕರ್ನಾಟಕದ ಪಾತ್ರ ಪ್ರಮುಖವಾಗಿದೆ ಎಂದರು.

ರಾಜ್ಯದಲ್ಲಿ 133 ಮಂದಿಗೆ ಪಾಸಿಟಿವ್

ಬೆಂಗಳೂರು: ರಾಜ್ಯದಲ್ಲಿ ಕೊರೊನಾ ಪಾಸಿಟಿವ್ ಪ್ರಕರಣಗಳ ಸಂಖ್ಯೆಯಲ್ಲಿ ಏರಿಳಿತ ಮುಂದುವರೆದಿದ್ದು, ಕಳೆದ 24 ಗಂಟೆಯಲ್ಲಿ 133 ಮಂದಿಗೆ ಕೋವಿಡ್ ಪಾಸಿಟಿವ್ ದೃಢಪಟ್ಟಿದೆ. ಇದರೊಂದಿಗೆ ಸೋಂಕಿತರ ಸಂಖ್ಯೆ 39,64,835ಕ್ಕೆ ಏರಿಕೆಯಾಗಿದೆ.

ಇನ್ನೂ ರಾಜ್ಯದಲ್ಲಿ ಮಹಾಮಾರಿ ಕೊರೊನಾದಿಂದ ಇಂದು ಯಾವುದೇ ಸಾವು ವರದಿಯಾಗಿಲ್ಲ. ಹೀಗಾಗಿ ಸಾವಿನ ಸಂಖ್ಯೆ 40,072 ಇದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಪ್ರಕಟಣೆಯಲ್ಲಿ ತಿಳಿಸಿದೆ. ಬೆಂಗಳೂರಿನಲ್ಲಿ ಇಂದು 131 ಮಂದಿಗೆ ಸೋಂಕು ದೃಢಪಟ್ಟಿದೆ. ಇದರೊಂದಿಗೆ ನಗರದಲ್ಲಿ ಸೋಂಕಿತರ ಸಂಖ್ಯೆ 17,99,823ಕ್ಕೆ ಏರಿಕೆಯಾಗಿದೆ. ಇಂದು ರಾಜಧಾನಿಯಲ್ಲೂ ಯಾವುದೇ ಕೊರೋನಾ ಸಾವು ವರದಿಯಾಗಿಲ್ಲ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹೇಳಿದೆ.

ರಾಜ್ಯದಲ್ಲಿ ಇಂದು 517 ಸೋಂಕಿತರು ಗುಣಮುಖರಾಗಿ ಆಸ್ಪತ್ರೆಯಿಂದ ಡಿಸ್ಚಾರ್ಜ್ ಆಗಿದ್ದಾರೆ. ಇದರೊಂದಿಗೆ ಸೋಂಕಿನಿಂದ ಚೇತರಿಸಿಕೊಂಡವರ ಸಂಖ್ಯೆ 39,20,283ಕ್ಕೆ ಏರಿಕೆಯಾಗಿದೆ.

ಬನ್ನೂರಲ್ಲಿ ಬೃಹತ್ ಆರೋಗ್ಯ ತಪಾಸಣೆ ಶಿಬಿರ ಯಶಸ್ವಿ



ಬನ್ನೂರು, ಜೂ.26– ಪಟ್ಟಣದ ಲಯನ್ಸ್ ವಿದ್ಯಾ ಸಂಸ್ಥೆಯ ಆವರಣದಲ್ಲಿ ಮೈಸೂರಿನ ಜೆಎಸ್‌ಎಸ್ ಆಯುರ್ವೇದ ಕಾಲೇಜು, ಹಾಸನದ ಎಸ್‌ಡಿಎಂ ಆಯುರ್ವೇದ ಮೆಡಿಕಲ್ ಕಾಲೇಜು, ಬೆಂಗಳೂರಿನ ಕೆಟಿಜಿ ಆಯುರ್ವೇದ ಕಾಲೇಜು, ಮೈಸೂರಿನ ಸರ್ಕಾರಿ ಆಯುರ್ವೇದ ಕಾಲೇಜು, ಹಾಗೂ ಬೆಂಗಳೂರಿನ ಎಸ್‌ಡಿಎಂ ಆಯುರ್ವೇದ ಕಾಲೇಜು ಮತ್ತು ಅಶ್ವಿನಿ ಚಾರಿಟೇಬಲ್ ಟ್ರಸ್ಟ್ ಆಯೋಜಿಸಿದ್ದ ಬೃಹತ್ ಆರೋಗ್ಯ ತಪಾಸಣಾ ಶಿಬಿರ ಯಶಸ್ವಿಯಾಗಿ ನಡೆಯಿತು.


ಕಾರ್ಯಕ್ರಮ ಉದ್ಘಾಟಿಸಿದ ಚಿತ್ರನಟ ಧನ್ವೀರ್‌ಗೌಡ ಮಾತನಾಡಿ, ಇಂದು ಪ್ರತಿಯೊಬ್ಬರು ತಮ್ಮ ಆರೋಗ್ಯದ ಮೇಲೆ ವಿಶೇಷ ಗಮನಹರಿಸುವುದು ಅಗತ್ಯವಾಗಿದೆ. 40 ವರ್ಷ ವಯೋಮಿತಿ ಮೀರಿದ ಪ್ರತಿಯೊಬ್ಬರು ಆಗಿಂದಾಗ್ಗೆ ನುರಿತ ವೈದ್ಯರ ಬಳಿ ತಮ್ಮ ಆರೋಗ್ಯವನ್ನು ಪರೀಕ್ಷಿಸಿಕೊಳ್ಳಬೇಕು. ಅಶ್ವಿನಿ ಚಾರಿಟೇಬಲ್ ಟ್ರಸ್ಟ್‌ನ ರಾಹುಲ್‌ಗೌಡ ಮಾಡುತ್ತಿರುವ ಆರೋಗ್ಯ ಶಿಬಿರದ ಕಾರ್ಯವು ಶ್ಲಾಘನೀಯ ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ ಸಾರ್ವಜನಿಕರ ಒತ್ತಾಯಕ್ಕೆ ಮಣಿದು ಚಿತ್ರವೊಂದರ ಸಂಭಾಷಣೆಯನ್ನು ಹೇಳಿ ರಂಜಿಸಿದರು.

ಅಶ್ವಿನಿ ಚಾರಿಟೇಬಲ್ ಟ್ರಸ್ಟ್‌ನ ಡಾ.ರಾಹುಲ್‌ಗೌಡ ಮಾತನಾಡಿದರು. ಗ್ರಾಮೀಣ ಭಾಗದ ಜನರ ಆರೋಗ್ಯದ ದೃಷ್ಟಿಯಿಂದ ಹಾಗೂ ಬಡಜನರಿಗೆ ಅನುಕೂಲ ಕಲ್ಪಿಸುವ ನಿಟ್ಟಿನಲ್ಲಿ ಉಚಿತವಾದ ಬೃಹತ್ ಆರೋಗ್ಯ ತಪಾಸಣೆಯ ಶಿಬಿರ ಹಮ್ಮಿಕೊಂಡಿದ್ದು, ಉಚಿತವಾಗಿ ಔಷಧಿಗಳನ್ನು ನೀಡಲಾಗುತ್ತಿದೆ ಎಂದು ತಿಳಿಸಿದರು.

ಬೆಳಗ್ಗೆ 8 ಗಂಟೆಯಿಂದ ಆರಂಭವಾದ ಶಿಬಿರದಲ್ಲಿ ಅಸ್ತಮಾ, ಚರ್ಮರೋಗ, ಕೀಲುನೋವು, ಮಂಡಿನೋವು, ಸಂಧಿ ನೋವು, ಮಧುಮೇಹ ಸೇರಿದಂತೆ ಹಲವು ಆರೋಗ್ಯದ ಸಮಸ್ಯೆಗಳ ಬಗ್ಗೆ ನುರಿತ ವೈದ್ಯರು ತಪಾಸಣೆ ನಡೆಸಿ ಸೂಕ್ತ ಚಿಕಿತ್ಸೆ ನೀಡಿದರು. ಕಾರ್ಯಕ್ರಮದಲ್ಲಿ ಡಾ.ಗುರುಬಸವರಾಜು ಮತ್ತು ತಂಡದವರು, ಡಾ.ಗಜಾನನ ಹೆಗಡೆ ಮತ್ತು ತಂಡದವರು, ಡಾ.ಬಿ.ಎನ್.ರಮೇಶ್, ಡಾ.ಪಿ.ಟಿ.ಕೇಶವನ್, ಡಾ.ಪ್ರಸನ್ನ ನರಸಿಂಹರಾವ್, ಡಾ.ಚಂದ್ರಶೇಖರ್, ಡಾ.ಸುರೇಶ್‌ಕುಮಾರ್, ಡಾ.ಸರ್ವೇಶ್ವರ್ ಸೇರಿದಂತೆ ಪ್ರಮುಖರು ಇದ್ದರು.

ಸರಗೂರಲ್ಲಿ ಜಗಜ್ಯೋತಿ ಬಸವೇಶ್ವರ ಜಯಂತಿ ಮಹೋತ್ಸವ

ಸಮಾನತೆ ಸಂದೇಶ ಸಾರಿದ ಮಾನವತಾವಾದಿ ಬಸವಣ್ಣ



ಸರಗೂರು, ಜೂ.26(ನಾಗೇಶ್)– ಸಾಮಾಜಿಕವಾಗಿ ಕಾಂತ್ರಿಯ ಕಹಳೆ ಮೊಳಗಿಸುವ ಮೂಲಕ ಸಮಾನತೆಯ ಸಂದೇಶ ಸಾರಿದವರಲ್ಲಿ ಬಸವಣ್ಣ ಮೊದಲಿಗರು ಎಂದು ಸುತ್ತೂರು ಕ್ಷೇತ್ರದ ಶ್ರೀಶಿವರಾತ್ರಿ ದೇಶಿ ಕೇಂದ್ರ ಸ್ವಾಮೀಜಿ ತಿಳಿಸಿದರು.

ಪಟ್ಟಣದ ವೀರಶೈವ ಲಿಂಗಾಯತ ಸಮಾಜದ ನಿವೇಶನದಲ್ಲಿ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಸರಗೂರು, ಹೆಚ್.ಡಿ.ಕೋಟೆ ತಾಲೂಕು ಘಟಕದಿಂದ ನಡೆದ ಜಗಜ್ಯೋತಿ ಬಸವೇಶ್ವರ ಜಯಂತಿ ಮಹೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಬಸವಣ್ಣನವರನ್ನು ನಾವು ಜಗಜ್ಯೋತಿ, ವಿಶ್ವಗುರು ಹೀಗೆ ಹಲವು ವಿಶೇಷತೆಗಳಿಂದ ಗುರುತಿಸುತ್ತೇವೆ. ಅಂತಹ ಬಸವಣ್ಣನವರ ಅಂದಿನ ಕಾಲಕ್ಕೆ ಸಮಾನತೆಯ ಸಂದೇಶ ಸಾರಿದ್ದರು. ಅವರ ತತ್ವಾದರ್ಶಗಳು ಜೀವನದಲ್ಲಿ ಬಹಳ ಮುಖ್ಯ ಎಂದರು.

ಅಖಿಲ ಭಾರತ ವೀರಶೈವ ಲಿಂಗಾಯಿತ ಮಹಾಸಭಾ ಮಹಾ ಪ್ರಧಾನ ಕಾರ್ಯದರ್ಶಿಯೂ ಆದ ಶಾಸಕ ಈಶ್ವರಖಂಡ್ರೆ ಮಾತನಾಡಿ, ಬಸವಣ್ಣನವರು ಅಂದು ನೀಡಿದ ಆದೇಶಗಳು ಇಂದಿಗೂ ಪ್ರಸ್ತುತವಾಗಿವೆ. ಅವರ ತತ್ವ, ಸಿದ್ಧಾಂತಗಳು ವೈಜ್ಞಾನಿಕ ಮತ್ತು ವೈಚಾರಿಕತೆಯ ತಳಹದಿ ಮೇಲೆ ನಿಂತಿದೆ. ದುಡಿದು ತಿನ್ನಬೇಕು. ಅಗತ್ಯಕ್ಕಿಂತ ಹೆಚ್ಚಿದ್ದನ್ನು ಸಮಾಜಕ್ಕೆ ವಿನಿಯೋಗ ಮಾಡಬೇಕು ಎಂಬ ಅವರ ತಾತ್ವಿಕ ನೆಲೆಗಟ್ಟಿನ ಚಿಂತನೆಯನ್ನು ನಾವೆಲ್ಲ ಅಳವಡಿಸಿಕೊಳ್ಳಬೇಕು ಎಂದರು.

ಸಂಸದ ವಿ.ಶ್ರೀನಿವಾಸ್‌ಪ್ರಸಾದ್ ಮಾತನಾಡಿ, ಸಮಾನತೆ, ಅಂತರ್ಜಾತಿ ವಿವಾಹ, ಅನುಭವ ಮಂಟಪ ಇಂತಹ ಸಾಕಷ್ಟು ಕಾಂತ್ರಿ ಮಾಡಿದರು. ಅನುಭವ ಮಂಟಪದಲ್ಲಿ ಎಲ್ಲಾ ವರ್ಗದವರು ಸೇರಿ ಚರ್ಚೆ ಮಾಡುತ್ತಿದ್ದರು. ಇಂದಿನ ಗ್ರಾಪಂಗಳು ಅನುಭವ ಮಂಟಪಗಳಾಗಬೇಕಿತ್ತು. ಆದರೆ, ಅದು ಸಾಧ್ಯವಾಗದಿರುವುದು ನಮ್ಮ ದುರಂತ. ಸರಗೂರಿನಲ್ಲಿ ಬಸವ ಭವನ ನಿರ್ಮಾಣಕ್ಕೆ ನಿವೇಶನ ಖರೀದಿಸಿರುವುದು ಸಂತಸ ತಂದಿದೆ. ಬಸವ ಭವನ ನಿರ್ಮಾಣಕ್ಕೆ 10ಲಕ್ಷ ರೂ. ಅನುದಾನ ನೀಡಲು ಕ್ರಮವಹಿಸುತ್ತೇನೆ ಎಂದು ಭರವಸೆ ನೀಡಿದರು.

ಮಠಾಧೀಶರಿಂದ ಆಶೀರ್ವಚನ: ಕಾರ್ಯಕ್ರಮದಲ್ಲಿ ದೇವನೂರು ಮಹಾಸಂಸ್ಥಾನ ಮಠದ ಮಹಾಂತ ಸ್ವಾಮೀಜಿ, ಬಿಡುಗಲು ಪಡುವಲು ವಿರಕ್ತಮಠದ ಮಹದೇವ ಸ್ವಾಮೀಜಿ ಸೋಮಹಳ್ಳಿ ವೀರಸಿಂಹಾಸನ ಶಿಲಾಮಠದ ಸಿದ್ದಮಲ್ಲ ಸ್ವಾಮೀಜಿ, ಕುದೇರು ಮಠದ ಗುರುಶಾಂತ ಸ್ವಾಮೀಜಿ, ಮರ ಮಠದ ಚಂದ್ರಶೇಖರ ಸ್ವಾಮೀಜಿ, ಬೀಚನಹಳ್ಳಿ ಮಠದ ನಾಗೇಂದ್ರ ಸ್ವಾಮೀಜಿ, ಮಾದಾಪುರ ಮಠದ ಮಲ್ಲಿಕಾರ್ಜುನ ಸ್ವಾಮೀಜಿ, ಹಂಚೀಪುರ ಮಠದ ಕಿರಿಯ ತೋಂಟದಾರ್ಯ ಸ್ವಾಮೀಜಿ, ಜಕ್ಕಹಳ್ಳಿ ಮಠದ ನಂದೀಶ ಸ್ವಾಮೀಜಿ, ಹಂಚೀ ಮಠದ ಚನ್ನಬಸವ ಸ್ವಾಮೀಜಿ, ದಡದಹಳ್ಳಿ ಮಠದ ಡಾ.ಷಡಕ್ಷರಿ ಸ್ವಾಮೀಜಿ, ಬಸವೇಶ್ವರ ಯಡಿಯಾಲ ಮಠದ ಕೆಂಡಗಣ್ಣ ಸ್ವಾಮೀಜಿ ಅವರು ಆಶೀರ್ವಚನ ನೀಡಿದರು.

ಅದ್ದೂರಿ ಮೆರವಣಿಗೆ: ಕಾರ್ಯಕ್ರಮಕ್ಕೂ ಮುನ್ನ ಬಸವೇಶ್ವರರ ಪುತ್ಥಳಿಯನ್ನು ಪಟ್ಟಣದ ಕೆಇಬಿ ಕಚೇರಿ ಮುಂಭಾಗದಿಂದ ನಂದಿ ಧ್ವಜ ಬಸವೇಶ್ವರರ ಪುತ್ಥಳಿ ಲಿಂಗವಿರುವ ಬೆಳ್ಳಿ ರಥದಲ್ಲಿ ಕೂರಿಸಿ, ಶರಣರ ವಚನಗಳು, ಅಲಂಕೃತ ಸ್ತಬ್ಧ ಚಿತ್ರಗಳು, ಭಜನಾ ಮೇಳ, ವೀರಗಾಸೆ ಕುಣಿತ, ಡೊಳ್ಳು ಕುಣಿತ, ಮಂಗಳ ವಾದ್ಯ, ಚಂಡೆ ಮದ್ದಳೆ ಸೇರಿ ದಂತೆ ಇನ್ನಿತರ ಕಲಾ ತಂಡಗಳ ಮೂಲಕ ಮೆರವಣಿಗೆಯಲ್ಲಿ ಸಮಾಜದ ನಿವೇಶನದಲ್ಲಿ ನಿರ್ಮಿಸಲಿರುವ ಶರಣರ ಅನುಭವ ಮಂಟಪ ಸೇರಿತು.

ಇದೇ ವೇಳೆ ಸಮುದಾಯದ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು. ಮಹಾಸಭಾ ಸರಗೂರು ತಾಲೂಕು ಅಧ್ಯಕ್ಷ ಡಿ.ಜಿ.ಶಿವರಾಜು, ರಾಷ್ಟ್ರೀಯ ಘಟಕದ ಉಪಾಧ್ಯಕ್ಷ ಸಚ್ಚಿದಾನಂದಮೂರ್ತಿ, ಕಾರ್ಯದರ್ಶಿ ರೇಣುಕಾ ಪ್ರಸನ್ನ, ಜಿಲ್ಲಾ ಘಟಕ ಅಧ್ಯಕ್ಷ ಎಸ್.ಶಿವಮೂರ್ತಿ, ಜೆಎಸ್‌ಎಸ್ ಪ್ರೌಢಶಾಲೆ ಶಿಕ್ಷಕ ಸಿದ್ದಲಿಂಗಸ್ವಾಮಿ, ಮಹಾಸಭಾ ಹೆಚ್.ಡಿ.ಕೋಟೆ ಅಧ್ಯಕ್ಷ ಬಸವರಾಜಪ್ಪ, ಮೈಸೂರು ಮಹಾನಗರ ಪಾಲಿಕೆ ಮೇಯರ್ ಸುನಂದಾ ಪಾಲನೇತ್ರಾ, ಮಾಜಿ ಶಾಸಕ ಚಿಕ್ಕಣ್ಣ, ರಾಧಾಕೃಷ್ಣ ಎಜುಕೇಷನ್ ಟ್ರಸ್ಟ್ ಅಧ್ಯಕ್ಷ ಡಾ.ಹೆಚ್.ವಿ.ಕೃಷ್ಣಸ್ವಾಮಿ, ಕಸಾಪ ಅಧ್ಯಕ್ಷ ಎಂ.ಕೆಂಡಗಣ್ಣಸ್ವಾಮಿ, ಗುರುಸ್ವಾಮಿ, ಯುವ ಘಟಕದ ಅಧ್ಯಕ್ಷ ಪರಶಿವಮೂರ್ತಿ, ವೀರಶೈವ ಸಹಕಾರ ಸಂಘದ ಅಧ್ಯಕ್ಷ ಗಣಪತಿ, ಪಪಂ ಅಧ್ಯಕ್ಷೆ ರಾಧಿಕಾ, ಉಪಾಧ್ಯಕ್ಷ ವಿನಾಯಕ ಪ್ರಸಾದ್, ತಾಪಂ ಮಾಜಿ ಸದಸ್ಯ ಮಹದೇವ ಸ್ವಾಮಿ, ಸಿ.ಕೆ.ಗುರುಸ್ವಾಮಿ, ಸುನಂದರಾಜು, ಮಹಾಸಭಾದ ಪ್ರಧಾನ ಕಾರ್ಯದರ್ಶಿ ಸಿದ್ದಪ್ಪ, ಕಾರ್ಯದರ್ಶಿ ಶಿವಕುಮಾರ್, ನಿರ್ದೇಶಕರಾದ ಮಾದಪ್ಪ, ನಟರಾಜು, ದೊರೆಸ್ವಾಮಿ, ಸೋಮಶೇಖರ್, ಎಲ್.ಶಿವಣ್ಣ, ಡಿ.ಎಸ್.ಮಹದೇವಪ್ಪ ನಾಗರಾಜಪ್ಪ ಡಿ.ಜಿ.ಮಲ್ಲೇಶ್, ನಟರಾಜು, ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಕೆ.ಗುರುಸ್ವಾಮಿ, ಮಲ್ಲಿಕಾರ್ಜುನ, ಟಿ.ಎಸ್.ನಾಗರಾಜು ಇತರರಿದ್ದರು.

> ಮಠ–ಸಂಸ್ಥಾನಗಳು ಬಡ ಮಕ್ಕಳಿಗೆ ಅಕ್ಷರ ದಾಸೋಹ, ಅನ್ನ ದಾಸೋಹ ನೀಡುತ್ತಿವೆ. ಇಂದು ನಾವೆಲ್ಲಾ ಬಸವಣ್ಣ ಅವರ ತತ್ವ ಸಿದ್ಧಾಂತಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಭವನ ನಿರ್ಮಾಣಕ್ಕೆ ಶಾಸಕರ ಅನುದಾನದಲ್ಲಿ ಸಾಧ್ಯವಾದಷ್ಟು ಹೆಚ್ಚಿನ ಅನುದಾನ ನೀಡಲು ಪ್ರಯತ್ನಿಸುತ್ತೇನೆ.
> – ಅನಿಲ್ ಚಿಕ್ಕಮಾದು, ಶಾಸಕರು.

ಮೈಸೂರಿನ ಹೊರವಲಯದ ಆರ್‌ಟಿ ನಗರದಲ್ಲಿ ಕಳ್ಳರ ಹಾವಳಿ

● ಒಂದೇ ತಿಂಗಳಲ್ಲಿ ನಿರ್ಮಾಣ ಹಂತದಲ್ಲಿದ್ದ 5 ಕಟ್ಟಡಗಳ ಕಬ್ಬಿಣದ ಸಲಕರಣೆ, ಕಿಟಕಿ-ಬಾಗಿಲುಗಳ ಕಳ್ಳತನ ● ಆತಂಕದಲ್ಲಿ ವಾಸಿಸುತ್ತಿರುವ ನಿವಾಸಿಗಳು

ಮೈಸೂರು, ಜೂ.26(ಎಂಕೆ)– ಮೈಸೂರಿನ ಹೊರವರ್ತುಲ ರಸ್ತೆ ಸಮೀಪದಲ್ಲಿರುವ ಆರ್‌ಟಿ ನಗರ(ರವೀಂದ್ರನಾಥ್ ಠಾಗೋರ್ ನಗರ)ದಲ್ಲಿ ಕಳ್ಳರ ಹಾವಳಿ ವಿಪರೀತವಾಗಿದ್ದು, ನಿವಾಸಿಗಳನ್ನು ಆತಂಕಕ್ಕೀಡು ಮಾಡಿದೆ. ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ(ಮುಡಾ) ಅಭಿವೃದ್ಧಿಪಡಿಸಿರುವ ಆರ್‌ಟಿ ನಗರದಲ್ಲಿ ನಿರ್ಮಾಣದಲ್ಲಿರುವ ಕಟ್ಟಡಗಳನ್ನೇ ಟಾರ್ಗೆಟ್ ಮಾಡುತ್ತಿರುವ ಖದೀಮರು ಕಳೆದೊಂದು ತಿಂಗಳಲ್ಲಿ 5ಕ್ಕೂ ಹೆಚ್ಚು ಕಡೆ ಕಬ್ಬಿಣದ ಸಲಕರಣೆಗಳು, ಕಿಟಕಿ–ಬಾಗಿಲುಗಳನ್ನು ಕದ್ದೊಯ್ದಿದ್ದಾರೆ. ರಾತ್ರಿ ವೇಳೆ ಸೆಕ್ಯೂರಿಟಿ ಗಾರ್ಡ್‌ನ್ನು ಬೆದರಿಸಿ, ಕಳ್ಳತನ ಮಾಡುವುದರ ಜೊತೆಗೆ ರಸ್ತೆಯಲ್ಲಿ ತಿರುಗಾಡುವವರನ್ನು ಅಡ್ಡ ಹಾಕಿ ಹಣ ನೀಡುವಂತೆ ಪೀಡಿಸುತ್ತಿದ್ದಾರೆ.

ಮನೆ ಕಳವು ಆತಂಕ: ಆರ್‌ಟಿ ನಗರದಲ್ಲಿನ ಸುಮಾರು 32 ಮನೆಗಳಲ್ಲಿ ಜನರು ವಾಸವಿದ್ದು, 30–35 ಮನೆಗಳು ನಿರ್ಮಾಣ ಹಂತದಲ್ಲಿವೆ. ನಿರ್ಮಾಣ ಹಂತದಲ್ಲಿನ ಕಟ್ಟಡಗಳಲ್ಲಿ ಕಳ್ಳತನ ಮಾಡುತ್ತಿರುವವರು ವಾಸವಿರುವ ಮನೆಗಳಲ್ಲಿಯೂ ಕಳ್ಳತನ ಮಾಡಬಹುದು ಎಂದು ನಿವಾಸಿಗಳು ಆತಂಕ ವ್ಯಕ್ತಪಡಿಸಿದ್ದಾರೆ.

ಬೀದಿ ದೀಪಗಳಿಲ್ಲ: ಸುಮಾರು 2600 ನಿವೇಶಗಳನ್ನು ಹೊಂದಿರುವ ಆರ್‌ಟಿ ನಗರದ ಯಾವ ರಸ್ತೆಯಲ್ಲಿಯೂ ಬೀದಿ ದೀಪಗಳನ್ನು ಅಳವಡಿಸಿಲ್ಲ. ಬೀದಿ ದೀಪಗಳನ್ನು ಅಳವಡಿಸಿದ್ದರೆ ಕಳ್ಳತನ ಕಡಿಮೆಯಾಗುವುದಲ್ಲದೆ ಭಯವಿಲ್ಲದೆ ರಾತ್ರಿ ವೇಳೆ ತಿರುಗಾಡಬಹುದು. ಈ ಸಂಬಂಧ ಕಳೆದೆರಡು ವರ್ಷದಿಂದ ಪ್ರತಿ ತಿಂಗಳು ನಡೆಯುವ ನಿವಾಸಿಗಳ ಸಭೆಯಲ್ಲಿ ಮುಡಾ ಅಧಿಕಾರಿಗಳಲ್ಲಿ ಮನವಿ ಮಾಡುತ್ತಿದ್ದರೂ ಇನ್ನೂ ಬೀದಿ ದೀಪ ಅಳವಡಿಸುವ ಕೆಲಸ ಆರಂಭವಾಗಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಮನವಿ: ಹೆಚ್ಚುತ್ತಿರುವ ಕಳ್ಳತನ ತಡೆಗಟ್ಟಲು ಜಯಪುರ ಪೊಲೀಸ್ ಠಾಣೆಗೆ ಹಲವು ಬಾರಿ ದೂರು ನೀಡಿ ಮನವಿ ಸಲ್ಲಿಸಿದ್ದರೂ ಕಳ್ಳತನ ನಿಂತಿಲ್ಲ. ಪೊಲೀಸರು ರಾತ್ರಿ 10–11 ಸುಮಾರಿಗೆ ಒಂದೂ ರೌಂಡ್ ಬಂದು ಹೋಗುತ್ತಾರೆ ಪೊಲೀಸರು ಬಂದು–ಹೋಗುವುದನ್ನೇ ಕಾಯುವ ಖದೀಮರು ರಾತ್ರಿ 12 ಗಂಟೆ ನಂತರ ಕಬ್ಬಿಣದ ಸಲಕರಣೆಗಳು ಹಾಗೂ ಕಿಟಕಿ–ಬಾಗಿಲುಗಳನ್ನು ಕಳ್ಳತನ ಮಾಡುತ್ತಿದ್ದಾರೆ. ಒಂದೇ ತಿಂಗಳಲ್ಲಿ 5ಕ್ಕೂ ಹೆಚ್ಚು ನಿರ್ಮಾಣ ಹಂತದಲ್ಲಿದ್ದ ಮನೆಗಳ ಕಿಟಕಿ, ಬಾಗಿಲು ಮತ್ತು ಕಬ್ಬಿಣ ಸರಳುಗಳನ್ನು ಕದ್ದೊಯ್ಯುತ್ತಿದ್ದಾರೆ ಎಂದು ರವೀಂದ್ರನಾಥ್ ಠಾಗೋರ್ ನಗರ ಕ್ಷೇಮಾಭಿವೃದ್ಧಿ ಮತ್ತು ಸಾಂಸ್ಕೃತಿಕ ಸಂಘ ಅಧ್ಯಕ್ಷ ರಾಜೇಶ್, ಕಾರ್ಯದರ್ಶಿ ಶ್ರೀನಿವಾಸ್, ಮಲ್ಲಿಕಾರ್ಜುನಸ್ವಾಮಿ, ನಿಂಗರಾಜು ಇನ್ನಿತರರು 'ಮೈಸೂರು ಮಿತ್ರ'ನಲ್ಲಿ ತಮ್ಮ ಅಳಲು ತೋಡಿಕೊಂಡರು.

ಇಂದು ನಾಡಪ್ರಭು ಕೆಂಪೇಗೌಡರ ಜಯಂತಿ

ಮೈಸೂರು, ಜೂ.26(ಎಂಕೆ)– ಮೈಸೂರಿನ ಕಲಾಮಂದಿರದಲ್ಲಿ ನಾಳೆ(ಜೂ.27) ಬೆಳಗ್ಗೆ 11 ಗಂಟೆಗೆ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ನಾಡಪ್ರಭು ಕೆಂಪೇಗೌಡ ಜಯಂತೋತ್ಸವ ಸಮಿತಿ ವತಿಯಿಂದ 'ನಾಡಪ್ರಭು ಕೆಂಪೇಗೌಡರ ಜಯಂತಿ' ಆಚರಣೆ ನಡೆಯಲಿದೆ. ಆದಿಚುಂಚನಗಿರಿ ಶಾಖಾ ಮಠದ ಶ್ರೀ ಸೋಮನಾಥ ಸ್ವಾಮೀಜಿ ದಿವ್ಯ ಸಾನಿಧ್ಯ ವಹಿಸಲಿದ್ದು, ಜಿಲ್ಲಾ ಉಸ್ತುವಾರಿ ಸಚಿವ ಎಸ್.ಟಿ.ಸೋಮಶೇಖರ್ ಉದ್ಘಾಟಿಸಲಿದ್ದಾರೆ. ಚಾಮರಾಜ ವಿಧಾನ ಸಭಾ ಕ್ಷೇತ್ರದ ಶಾಸಕ ಎಲ್.ನಾಗೇಂದ್ರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದು, ಮುಖ್ಯ ಅತಿಥಿಗಳಾಗಿ ಹಂಗಾಮಿ ಮೇಯರ್ ಸುನಂದಾ ಪಾಲನೇತ್ರ, ಸಂಸದರಾದ ವಿ.ಶ್ರೀನಿವಾಸ್ ಪ್ರಸಾದ್, ಪ್ರತಾಪ್ ಸಿಂಹ, ಸುಮಲತಾ ಅಂಬರೀಶ್, ಶಾಸಕರಾದ ಜಿ.ಟಿ.ದೇವೇಗೌಡ, ತನ್ವೀರ್ ಸೇಠ್, ಎಸ್.ಎ.ರಾಮದಾಸ್, ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ ಸೇರಿದಂತೆ ಹಲವರು ಭಾಗವಹಿಸಲಿದ್ದಾರೆ.

ಮೆರವಣಿಗೆ: ಬೆಳಗ್ಗೆ 9 ಗಂಟೆಗೆ ಅರಮನೆ ಉತ್ತರದ್ವಾರದಲ್ಲಿರುವ ಕೋಟೆ ಶ್ರೀ ಆಂಜನೇಯಸ್ವಾಮಿ ದೇವಸ್ಥಾನದಿಂದ ಡಿ.ದೇವರಾಜ ಅರಸು ರಸ್ತೆ ಮಾರ್ಗವಾಗಿ ಕಲಾಮಂದಿರದವರೆಗೆ ಸಾಂಸ್ಕೃತಿಕ ಕಲಾ ತಂಡಗಳಿಂದ ಮೆರವಣಿಗೆ ನಡೆಯಲಿದೆ. ಬಳಿಕ ಗಾಯಕ ನಾಗೇಶ್ ಕಂದೇಗಾಲ ಮತ್ತು ತಂಡದವರಿಂದ ಗೀತ–ಗಾಯನ ಕಾರ್ಯಕ್ರಮ ಇರಲಿದೆ.

ರಾಜ್ಯದಲ್ಲಿ ಹಿಂದೂಸ್ತಾನಿ ಮತ್ತು ಕರ್ನಾಟಕ ಶಾಸ್ತ್ರೀಯ ಸಂಗೀತ ಕ್ಷೇತ್ರ ಶ್ರೀಮಂತ

ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ, ವಚನ ಗಾಯನ ಕಾರ್ಯಕ್ರಮ



ಮೈಸೂರು, ಜೂ.26(ಎಸ್‌ಪಿಎನ್)– ಹಿಂದೂಸ್ತಾನಿ ಮತ್ತು ಕರ್ನಾಟಕ ಶಾಸ್ತ್ರೀಯ ಸಂಗೀತದಲ್ಲಿ ಶ್ರೇಷ್ಠ ಕಲಾವಿದರನ್ನು ನೀಡಿದ ಕೀರ್ತಿ ನಮ್ಮ ರಾಜ್ಯಕ್ಕೆ ಸಲ್ಲುತ್ತದೆ ಎಂದು ಹಿಂದೂಸ್ತಾನಿ ಕಲಾವಿದರಾದ ಡಾ.ಪಂಡಿತ್ ನಾಗರಾಜ್ ರಾವ್ ಹವಾಲ್ದಾರ್ ತಿಳಿಸಿದರು.

ಮೈಸೂರಿನ ಸರಸ್ವತಿಪುರಂನ ಜೆಎಸ್‌ಎಸ್ ಮಹಿಳಾ ಕಾಲೇಜು ಆವರಣದ ನವಜ್ಯೋತಿ ಸಭಾಂಗಣದಲ್ಲಿ ಜೆಎಸ್‌ಎಸ್ ಸಂಗೀತ ಸಭಾ ಟ್ರಸ್ಟ್ ವತಿಯಿಂದ ಏರ್ಪಡಿಸಿದ್ದ ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ ಮತ್ತು ವಚನಗಾಯನ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಭಾರತದ ಕಲಾ ಕ್ಷೇತ್ರದಲ್ಲಿ ಕರ್ನಾಟಕ ಮತ್ತು ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ ಕ್ಷೇತ್ರ ಶ್ರೀಮಂತವಾಗಿದ್ದು, ಇದು ಜಾಗತಿಕ ಮಟ್ಟದಲ್ಲಿ ಸಾಂಸ್ಕೃತಿಕ, ಸಾಮಾಜಿಕ, ಭಾಷಾ, ಸಂಗೀತ ಮತ್ತು ಸಾಹಿತ್ಯದ ಬೆಳವಣಿಗೆ ಪೂರಕವಾಗಿದೆ. ಅಲ್ಲದೆ ಇವೆರಡು ಸಂಗೀತ ಕ್ಷೇತ್ರಕ್ಕೆ ಮೈಸೂರು ಮಹಾರಾಜರ ಕೊಡುಗೆ ಅಪಾರ ಎಂದು ಹೇಳಿದರು.

ಶ್ರೇಷ್ಠ ಕಲಾವಿದರಾದ ವೀಣೆ ಶೇಷಣ್ಣ, ಬಿಡರಾಂ ಕೃಷ್ಣಪ್ಪ, ವಾಸದೇವಾಚಾರ್ಯರು, ಪಂಡಿತ್ ಭೀಮ್ ಸೇನ್ ಜೋಶಿ, ಪಂಚಾಕ್ಷರ ಗವಾಯಿಗಳು ಸೇರಿದಂತೆ ಅನೇಕ ಕಲಾವಿದರಿಂದ ರಾಜ್ಯ ಕೀರ್ತಿ ಹೆಚ್ಚಿದೆ ಎಂದು ಅವರು ಬಣ್ಣಿಸಿದರು.

ಈ ವೇಳೆ 'ಮಾಡಿ ಮಾಡಿ ಕೆಟ್ಟರು ಮನವಿಲ್ಲದೆ', 'ಚೋರ ಸುಕುಮಾರ', ಬಸವಣ್ಣನವರ ಕಳಬೇಡ ಕೊಲಬೇಡ, ಹುಸಿಯಲು ನುಡಿಯಬೇಡ' ವಚನ ಸೇರಿದಂತೆ ಇತರೆ ದಾಸರ ಪದಗಳು ಹಾಗೂ ವಚನಗಳನ್ನು ವಿವಿಧ ರಾಗ ಸಂಯೋಜನೆಯನ್ನು ಹಾಡಿ ಪ್ರೇಕ್ಷಕರ ಹೃದಯ ಗೆದ್ದರು. ಇದಕ್ಕೂ ಮೊದಲು ವಿದ್ವಾನ್ ರಕ್ಷಿತ್ ಪ್ರಸಾದ್ ಹಾಗೂ ವಿದ್ವಾನ್ ಅಭಯ್ ಅನಿಲ್ ಕುಮಾರ್– ಮ್ಯಾಂಡೋಲಿನ್–ವಯೋಲಿನ್ ಜುಗಲ್ ಬಂದಿ ನಡೆಸಿಕೊಟ್ಟರು. ನಂತರ ಹಿರಿಯ ಕಲಾವಿದ ಡಾ.ನಾಗರಾಜ್ ರಾವ್ ಇತರೆ ಸಹ ಕಲಾವಿದರು ಹಿಂದೂಸ್ತಾನಿ ಶಾಸ್ತ್ರೀಯ ಸಂಗೀತ ಮತ್ತು ವಚನಗಾಯನ ನಡೆಸಿಕೊಟ್ಟರು. ಇವರಿಗೆ ರಾದೇಶ್– ಮೃದಂಗ, ಎಸ್.ಮಂಜುನಾಥ್–ಘಟಂ, ಓಂಕಾರ್‌ನಾಥ್ ಹವಾಲ್ದಾರ್ ಸಹ ಗಾಯನ, ಕೇದಾರ್‌ನಾಥ್ ಹವಾಲ್ದಾರ್–ತಬಲ, ಸಮೀರ್ ಹವಾಲ್ದಾರ್–ಹಾರ್ಮೋನಿಯಂ ನುಡಿಸಿ ಸಾಥ್ ನೀಡಿದರು.

ವಿಶ್ವೇಶ್ವರ ಭಟ್ ಸೇರಿದಂತೆ ಇತರೆ ಹತ್ತು ಲೇಖಕರ ಕೃತಿ ಲೋಕಾರ್ಪಣೆ

ಕನ್ನಡ ಶಿಕ್ಷಕರು ತಂತ್ರಜ್ಞಾನ ಕಲಿಕೆಗೂ ಆದ್ಯತೆ ನೀಡಬೇಕು: ಪ್ರೊ.ಕೃಷ್ಣೇಗೌಡ ಸಲಹೆ

ಮೈಸೂರು, ಜೂ.26(ಎಸ್‌ಪಿಎನ್)– ಕನ್ನಡ ಸಾಹಿತಿಗಳು ಮತ್ತು ಶಿಕ್ಷಕರು ತಮ್ಮ ವೃತ್ತಿ ಜೊತೆಗೆ ತಂತ್ರಜ್ಞಾನ ಕಲಿಕೆಗೂ ಆದ್ಯತೆ ನೀಡಬೇಕು ಎಂದು ಸಾಹಿತಿ ಪ್ರೊ.ಎಂ.ಕೃಷ್ಣೇಗೌಡ ಅಭಿಪ್ರಾಯಪಟ್ಟರು.

ಮೈಸೂರು ರಾಮಕೃಷ್ಣನಗರದಲ್ಲಿರುವ ನಟನ ರಂಗಮಂದಿರದಲ್ಲಿ ವೀರಲೋಕ ಬುಕ್ಸ್ ಪ್ರೈ.ಲಿ. ವತಿಯಿಂದ ಆಯೋಜಿಸಿದ್ದ ವಿಶ್ವೇಶ್ವರ ಭಟ್ ಸೇರಿದಂತೆ ಇತರೆ ಲೇಖಕರ ಹತ್ತು ಕೃತಿಗಳಬಿಡುಗಡೆಗೊಳಿಸಿ ಮಾತನಾಡಿದ ಅವರು, ಕನ್ನಡ ಶಿಕ್ಷಕರು ಈಗಿನ ಕಾಲಘಟ್ಟಕ್ಕೆ ತಕ್ಕಂತೆ ತಂತ್ರಜ್ಞಾನ ಅಳವಡಿಸಿಕೊಳ್ಳುವುದು ಅನಿವಾರ್ಯ ಎಂದರು.

ಹಿರಿಯ ಲೇಖಕರಾದ ವಿಶ್ವೇಶ್ವರ ಭಟ್ ರಚಿತ 'ಕೈಹಿಡಿದು ನೀ ನಡೆಸು ತಂದೆ', ಕುಂ. ವೀರಭದ್ರಪ್ಪ ರಚಿತ ವಿಶ್ವಸುಂದರಿ, ರಮೇಶ್ ಅರವಿಂದ್ ರಚಿತ 'ಆರ್ಟ್ ಆಫ್ ಸಕ್ಸಸ್', ಜೋಗಿ ರಚಿತ 'ಇವರು ಅವರು ದೇವರು', ರವಿಕೃಷ್ಣಾರೆಡ್ಡಿ ರಚಿತ 'ಒಳ್ಳೆಯ ಬದುಕಿನ ಸೂತ್ರಗಳು', ದೀಪಾ ಹಿರೇಗುತ್ತಿ ರಚಿತ 'ಸೋಲೆಂಬ ಗೆಲುವು', ಗಣೇಶ್ ಕಾಸರಗೋಡು ರಚಿತ 'ಲಾಸ್ಟ್ ಡೇಸ್ ಆಫ್ ಲೆಜೆಂಡ್ಸ್', 'ಬೆಳ್ಳಿತೆರೆಯ ಬಂಗಾರದ ಗೆರೆ', ರಂಗಸ್ವಾಮಿ ಮೂಕನಹಳ್ಳಿ ರಚಿತ 'ಮನಿಮನಿ ಎಕಾನಮಿ', ಅನಂತ ಹುದೆಂಗಜೆ ರಚಿತ 'ನಿಮಗೆಷ್ಟು ಹಣಬೇಕು?' ಸೇರಿದಂತೆ ಒಟ್ಟು ಹತ್ತು ಕೃತಿಗಳನ್ನು ಬಿಡುಗಡೆಗೊಳಿಸಿದರು.



ಪ್ರಕಾಶಕ ವೀರಕಪುತ್ರ ಶ್ರೀನಿವಾಸ್ ಅವರು ಕನ್ನಡ ಪುಸ್ತಕೋದ್ಯಮಕ್ಕೆ ಹೊಸ ಆಯಾಮ ನೀಡಲು ಹೊರಟಿದ್ದಾರೆ. ರಾಜ್ಯದ ಪ್ರತಿ ಮನೆ ಮನೆಗೂ ಕನ್ನಡ ಪುಸ್ತಕಗಳನ್ನು ತಲುಪಿಸಬೇಕು ಎಂಬ ಮನೋಭಾವ ಹೊಂದಿದ್ದಾರೆ. ಅವರ ಆಸಕ್ತಿಗೆ ಕನ್ನಡಿಗರಾದ ನಾವು ಸಹ ಪ್ರೋತ್ಸಾಹಿಸಬೇಕು. ಸಾಧ್ಯವಾದಷ್ಟು ಕನ್ನಡ ಪುಸ್ತಕೋದ್ಯಮಕ್ಕೆ ಮಾರುಕಟ್ಟೆ ಸ್ವರೂಪ ಕಲ್ಪಿಸುವ ಹೊಸ ವಿಧಾನಕ್ಕೆ ಎಲ್ಲಾ ಲೇಖಕರು ಸಾಥ್ ನೀಡಬೇಕು ಎಂದು ಮನವಿ ಮಾಡಿದರು.

ಅಮೆರಿಕಾದಲ್ಲಿ ಹೊಸ 'ಐಫೋನ್' ಮಾರುಕಟ್ಟೆಗೆ ಬಂದರೆ, ಅಲ್ಲಿನ ಜನ ಖರೀದಿಸುವುದಕ್ಕೆ ಮುಗಿಬೀಳುತ್ತಾರೆ. ಅಲ್ಲದೆ, ಅಲ್ಲಿನ ಯುವ ಪೀಳಿಗೆ 'ಐಫೋನ್ ಖರೀದಿಸುವುದೇ ಪ್ರತಿಷ್ಠೆ ಎಂಬಂತೆ ಭಾವಿಸಿದ್ದಾರೆ. ಇದನ್ನು ನಾನು ಅಹಂಕಾರದ ಸಂಕೇತ ಎಂದು ಭಾವಿಸುತ್ತೇನೆ. ಅಲ್ಲದೆ, ಅಮೆರಿಕಾದಲ್ಲಿ ಓರ್ವ ಸಾಹಿತಿ ಪುಸ್ತಕ ಪ್ರಕಟಿಸಿದರೆ ಅದನ್ನು ಅಲ್ಲಿನ ಜನ ಮುಗಿಬಿದ್ದು ಆ ಪುಸ್ತಕವನ್ನು ಖರೀದಿಸುತ್ತಾರೆ. ಆದರೆ ಕರ್ನಾಟಕದಲ್ಲಿ ಅದಕ್ಕೆ ವಿರುದ್ಧವಾಗಿದೆ ಎಂದರು.

ನಮ್ಮ ಜನರಿಗೆ ಕನ್ನಡ ಸಾಹಿತಿಗಳ ಹೆಸರು ಬೆರಳೆಣಿಕೆ ಜನರಿಗೆ ಮಾತ್ರ ತಿಳಿದಿರುತ್ತದೆ. ಅದು ವಿವಿಗಳಲ್ಲಿ ಓದುವ ವಿದ್ಯಾರ್ಥಿಗಳಿಗೆ ಇಲ್ಲವೇ ಶಿಕ್ಷಕರಿಗೆ ಮಾತ್ರ ಪರಿಚಯವಿರುತ್ತದೆ. ಆದರೆ, ಸಾಮಾನ್ಯ ನಾಗರಿಕರಿಗೆ ಸಾಹಿತಿಗಳ ಹೆಸರೇ ತಿಳಿದಿಲ್ಲದಿರುವುದು ಬೇಸರದ ಸಂಗತಿ. ಅಂತೆಯೇ ಓರ್ವ ಪದವೀಧರ ಸಾರ್ವಜನಿಕವಾಗಿ ನಾನು ಲೇಖಕ ಎಂದು ಹೆಮ್ಮೆಯಿಂದ ಹೇಳಿಕೊಳ್ಳಲು ಸಂಕೋಚಪಡುತ್ತಾನೆ. ಅದೇ ಲೇವಾದೇವಿ ವ್ಯವಹಾರ ನಡೆಸುವ ವ್ಯಕ್ತಿ ಬಹಳ ಗತ್ತು–ಗೈರತ್ತಿನಲ್ಲಿ ತನ್ನ ವೃತ್ತಿಯನ್ನು ಬಹಳ ಗರ್ವದಿಂದ ಇತರರೊಂದಿಗೆ ತನ್ನ ಅನಿಸಿಕೆ ಹೇಳಿಕೊಳ್ಳುವುದು ಭಾರತದಲ್ಲಿ ಮಾತ್ರ. ಇಂತಹ ಸಮಾಜ ನಿರ್ಮಾಣವಾದರೆ, ಬೌದ್ಧಿಕ ಜಗತ್ತು ಪ್ರಗತಿ ಹೊಂದಲು ಸಾಧ್ಯವೇ ಎಂದು ಪ್ರಶ್ನಿಸಿದರು.

ಈ ಜಗತ್ತಿನಲ್ಲಿ ಸಾರ್ವಜನಿಕ ಸಮಸ್ಯೆಗಳ ಕುರಿತು ಚಿಂತಿಸುವವರ ಸಂಖ್ಯೆ ಕಡಿಮೆ. ಆ ಗುಂಪನ್ನು ನಾನು ಪ್ರಜ್ಞಾವಂತ ವ್ಯಕ್ತಿಗಳು ಇಲ್ಲವೇ ಕ್ರಿಯಾಶೀಲ ವ್ಯಕ್ತಿಗಳೆಂದು ಕರೆಯುತ್ತೇನೆ. ಅದಕ್ಕಾಗಿಯೇ ಪುಸ್ತಕ ಬಿಡುಗಡೆ ಕಾರ್ಯಕ್ರಮಕ್ಕೆ ಕಡಿಮೆ ಮಂದಿ ಬರುತ್ತಾರೆ. ಇಂದು ಪುಸ್ತಕ ಬಿಡುಗಡೆ ಕಾರ್ಯಕ್ರಮಕ್ಕೆ ಈ ಸಭಾಂಗಣದಲ್ಲಿ ತುಂಬಿರುವುದು ನನಗೆ ಅತೀವ ಸಂತೋಷವಾಗಿದೆ ಎಂದು ತಿಳಿಸಿದರು.

ಈ ವೇಳೆ ಹಿರಿಯ ಪತ್ರಕರ್ತ ವಿಶ್ವೇಶ್ವರ ಭಟ್, ರಂಗಕರ್ಮಿ ಮಂಡ್ಯ ರಮೇಶ್, ಲೇಖಕ ಗಣೇಶ್ ಕಾಸರಗೋಡು, ಲೇಖಕಿ ಕುಸುಮ ಆಯರಹಳ್ಳಿ, ವೀರಲೋಕ ಬುಕ್ಸ್‌ನ ವೀರಕಪುತ್ರ ಶ್ರೀನಿವಾಸ, ಜಿಲ್ಲಾ ಕಸಾಪ ಅಧ್ಯಕ್ಷ ಮಡ್ಡೀಕೆರೆ ಗೋಪಾಲ್, ಕಸಾಪ ಮಾಜಿ ಅಧ್ಯಕ್ಷ ಎಂ.ಚಂದ್ರಶೇಖರ್ ಇದ್ದರು.

"ಕನ್ನಡದಲ್ಲೂ ಪುಸ್ತಕ ಓದುವವರ ಸಂಖ್ಯೆ ಹೆಚ್ಚಿಸುತ್ತೇವೆ. ಮನೆ ಮನೆಗೂ ಪುಸ್ತಕ ತಲುಪಿಸುವ ಪ್ರಯತ್ನ ಮಾಡುತ್ತೇವೆ. ಬೇರೆ ಭಾಷೆಯಂತೆ ನಮ್ಮ ಭಾಷೆಯಲ್ಲೂ ಓದುಗರ ಸಂಖ್ಯೆ ಹೆಚ್ಚಿಸುವ ಕೆಲಸ ಮಾಡುತ್ತೇವೆ ಎಂಬ ಹಂಬಲ ಹೊಂದಿರುವ ಪ್ರಕಾಶಕ ವೀರಕಪುತ್ರ ಶ್ರೀನಿವಾಸ್ ಪ್ರಯತ್ನಕ್ಕೆ ಎಲ್ಲರೂ ಸಾಥ್ ನೀಡೋಣ.

-ಮಂಡ್ಯ ರಮೇಶ್,
ಹಿರಿಯ ರಂಗಕರ್ಮಿ

ಬೆಲೆ ಏರಿಕೆ ನಿರುದ್ಯೋಗ ವಿರುದ್ಧ ಎಐಡಿಎಸ್‌ಓ ಪ್ರತಿಭಟನೆ




ಮೈಸೂರು, ಜೂ.26(ಎಸ್‌ಬಿಡಿ)– ಅಗತ್ಯ ವಸ್ತುಗಳ ಬೆಲೆ ಏರಿಕೆ, ನಿರುದ್ಯೋಗ, ಭ್ರಷ್ಟಾಚಾರದ ವಿರುದ್ಧ ಆಲ್ ಇಂಡಿಯಾ ಡೆಮಾಕ್ರೆಟಿಕ್ ಯೂತ್ ಆರ್ಗನೈಸೇಷನ್ (ಎಐಡಿಎಸ್‌ಓ) ಸಂಘಟನೆ ವಿಭಿನ್ನ ರೀತಿಯಲ್ಲಿ ಪ್ರತಿಭಟನೆ ನಡೆಸಿತು.

ಎಐಡಿವೈಓ 57ನೇ ಸಂಸ್ಥಾಪನಾ ದಿನದ ಅಂಗವಾಗಿ ಮೈಸೂರಿನ ಚಿಕ್ಕಗಡಿಯಾರದ ಬಳಿ ಭಾನುವಾರ ಸಂಘಟನೆಯ ಪ್ರೇರಕರಾದ ಶಿವದಾಸ ಘೋಷ್ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿದ ನಂತರ ಕುಂಚ ಪ್ರತಿಭಟನೆ ಹಾಗೂ ನಾನು ಸಹಿ ಮಾಡುವೆ ಅಭಿಯಾನದ ನಡೆಸುವ ಮೂಲಕ ಸರ್ಕಾರಗಳ ವೈಫಲ್ಯವನ್ನು ಖಂಡಿಸಲಾಯಿತು.

ಈ ವೇಳೆ ಎಐಡಿವೈಓ ಜಿಲ್ಲಾಧ್ಯಕ್ಷ ಟಿ.ಆರ್. ಸುನಿಲ್ ಮಾತನಾಡಿ, ನಿರುದ್ಯೋಗ ಸಮಸ್ಯೆಯಿಂದ ಹತಾಶೆಗೊಳಗಾಗಿ ಆತ್ಮಹತ್ಯೆಗೆ ಶರಣಾಗುತ್ತಿದ್ದಾರೆ. ವಿವಿಧ ಇಲಾಖೆಗಳಲ್ಲಿ ಲಕ್ಷಾಂತರ ಹುದ್ದೆಗಳು ಖಾಲಿಯಿದ್ದರೂ ಸರ್ಕಾರ ನೇಮಕಾತಿಗೆ ಮುಂದಾಗುತ್ತಿಲ್ಲ. ಅತ್ಯಗತ್ಯ ಹುದ್ದೆಗಳ ನೇಮಕಾತಿಯಲ್ಲೂ ಭ್ರಷ್ಟಾಚಾರ ತಾಂಡವವಾಡುತ್ತಿದೆ. ಜನ ಬಡತನದಿಂದ ಹೊರಬರಲು ಸಾಧ್ಯವಾಗದ ದುಸ್ಥಿತಿಯಲ್ಲಿದ್ದರೂ ರಾಜಕಾರಣಿಗಳು, ಉದ್ಯಮಿಗಳ ಶ್ರೀಮಂತಿಕೆ ಹೆಚ್ಚುತ್ತಲೇ ಇದೆ. ಚುನಾವಣೆ ಸಂದರ್ಭದಲ್ಲಿ ಯುವ ಜನತೆಯನ್ನು ಓಲೈಸುವ ರಾಜಕಾರಣಿಗಳು ಗೆಲುವಿನ ನಂತರ ವರಸೆ ಬದಲಿಸುತ್ತಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸಂಘಟನೆಯ ಜಿಲ್ಲಾ ಕಾರ್ಯದರ್ಶಿ ಸುಮಾ ಮಾತನಾಡಿ, ಅನಗತ್ಯ ನೀತಿ–ನಿಯಮಗಳ ಮೂಲಕ ಜನರನ್ನು ಮತ್ತಷ್ಟು ಸಂಕಷ್ಟಕ್ಕೆ ಸಿಲುಕಿಸಲಾಗುತ್ತಿದೆ. ಉದ್ಯೋಗ ಸೃಷ್ಟಿಯ ಭರವಸೆ ನೀಡಿದ್ದ ಪ್ರಧಾನ ಮಂತ್ರಿಗಳು, ಪ್ರಸ್ತುತ ನಿರುದ್ಯೋಗ ಸಮಸ್ಯೆ ಬಗ್ಗೆ ಕನಿಷ್ಠ ಸ್ಪಷ್ಟನೆಯನ್ನೂ ನೀಡುತ್ತಿಲ್ಲ. ಯುವಜನರಿಗೆ ಚಂದ್ರನನ್ನು ತೋರಿಸಿ ಅವರನ್ನು ಹಳ್ಳಕ್ಕೆ ದೂಡುವ ಪ್ರವೃತ್ತಿ ನಿಲ್ಲಬೇಕು. ಸಾರ್ವಜನಿಕರಿಗೆ ಕನಿಷ್ಠ ಸೌಲಭ್ಯ ಒದಗಿಸಲು ಆರ್ಥಿಕ ಸಮಸ್ಯೆಯಿದೆ. ಆದರೆ ಸಚಿವರು, ಶಾಸಕರ ವೇತನ, ಭತ್ಯೆ ಹೆಚ್ಚಿಸಿಕೊಳ್ಳಲು ಯಾವುದೇ ಅಡ್ಡಿಯಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.

ಕಾವಾ ಕಾಲೇಜಿನ ವಿದ್ಯಾರ್ಥಿಗಳು ನಿರುದ್ಯೋಗ ಸಮಸ್ಯೆ ಹಾಗೂ ಪರಿಣಾಮವನ್ನು ಕಣ್ಣಿಗೆ ಕಟ್ಟುವ ಚಿತ್ರಗಳನ್ನು ರಚಿಸಿ, ಪ್ರದರ್ಶಿಸಿದರು. ಸಂಘಟನೆಯ ಜಿಲ್ಲಾ ಜಂಟಿ ಕಾರ್ಯದರ್ಶಿ ನೀತುಶ್ರೀ ಸಂಘಟನೆಯ ಉದ್ದೇಶ ಹಾಗೂ ಅವಶ್ಯಕತೆ ಬಗ್ಗೆ ವಿವರಿಸಿದರು. ಉಪಾಧ್ಯಕ್ಷ ನಿರಂಜನ್ ಹಿರೇಮಠ್, ಸದಸ್ಯರಾದ ಅಭಿಸಂದನ್, ಶಶಿಧರ್, ಸುಭಾನ್, ಸೂರ್ಯ, ಆಫ್ರಿನ್, ಫೈಜಾ, ಕಲಾ ವಿದ್ಯಾರ್ಥಿಗಳಾದ ನಾಗರಾಜ್, ಸಿದ್ದೇಶ್, ಮೋಹಿತ್, ನರೇಶ್, ಮಂಜುನಾಥ್, ಧಮ್ಮಕಿಟ್ಟಿ ರೂಪ್ಸನ್, ಗಣೇಶ್, ಗುರುಲಿಂಗಯ್ಯ, ಅಂಕಿತ್, ದೀಕ್ಷಿತ್ ಮತ್ತಿತರರು ಭಾಗವಹಿಸಿದ್ದರು.



ಮೈಸೂರಿನ ಪಡುವಾರಹಳ್ಳಿ ಸ್ನೇಹ ಬಳಗದ ವತಿಯಿಂದ ನಾಡಪ್ರಭು ಕೆಂಪೇಗೌಡರ ಜಯಂತಿಯನ್ನು ಭಾನುವಾರ ಆಚರಿಸಲಾಯಿತು. ದಿ ಮೈಸೂರು ಕೋ ಆಪರೇಟಿವ್ ಬ್ಯಾಂಕ್ ಮಾಜಿ ಅಧ್ಯಕ್ಷ ಕೆ.ಉಮಾಶಂಕರ್, ನಿರ್ದೇಶಕರಾದ ಪಡುವಾರಹಳ್ಳಿ ಎಂ ರಾಮಕೃಷ್ಣ ಹೆಚ್.ಹರೀಶ್ ಕುಮಾರ್, ಜಿಲ್ಲಾ ಒಕ್ಕಲಿಗರ ಸಂಘದ ಅಧ್ಯಕ್ಷ ಸಿ.ಮರಿಸ್ವಾಮಿ, ನಿರ್ದೇಶಕ ಎ.ರವಿ, ನಗರಪಾಲಿಕೆ ಸದಸ್ಯ ಎಂ.ಚಿಕ್ಕವೆಂಕಟು, ರಾಜ್ಯ ಒಕ್ಕಲಿಗರ ಸಂಘದ ನಿರ್ದೇಶಕ ರೈಲ್ವೆ ಮಂಜೇಗೌಡ, ಎನ್.ಬೆಟ್ಟೇಗೌಡ, ಜನಹಿತ ವಿವಿಧೋದ್ದೇಶ ಸಹಕಾರ ಸಂಘದ ನಿರ್ದೇಶಕರಾದ ಎಸ್.ಕೃಷ್ಣಕುಮಾರ್, ಬಿ.ಕುಮಾರ್, ರಾಘವ್ ಎಂ. ಗೌಡ, ದಿ ಸಿಟಿ ಕೋ ಆಪರೇಟಿವ್ ಬ್ಯಾಂಕ್ ನಿರ್ದೇಶಕ ಗೋಕುಲಂ ವಿ.ಮಧು, ಆಟೋ ಕಾಂತಾ, ಕೇಬಲ್ ಕಿಟ್ಟಿ ಸುರೇಂದ್ರ ಇನ್ನಿತರರಿದ್ದರು.

ಸೈಕಲ್ ಜಾಥಾ ಮೂಲಕ ಮಾದಕ ದ್ರವ್ಯ ವಿರೋಧ ಜಾಗೃತಿ



ಮೈಸೂರು, ಜೂ.26(ಎಸ್‌ಬಿಡಿ)– ಅಂತಾರಾಷ್ಟ್ರೀಯ ಮಾದಕ ದ್ರವ್ಯ ವ್ಯಸನ ಮತ್ತು ಅಕ್ರಮ ಸಾಗಾಣಿಕೆ ವಿರೋಧಿ ದಿನದ ಪ್ರಯುಕ್ತ ಮೈಸೂರಿನ ಸೈಬರ್ ಎಕನಾಮಿಕ್ ಅಂಡ್ ನಾರ್ಕೋಟಿಕ್ಸ್(ಸೆನ್) ಕ್ರೈಂ ಪೊಲೀಸ್ ಸ್ಟೇಷನ್ ಸಿಬ್ಬಂದಿ ಭಾನುವಾರ ಸೈಕಲ್ ಜಾಥಾ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು.

ನಗರದ ಕೋಟೆ ಆಂಜನೇಯಸ್ವಾಮಿ ದೇವಾಲಯದ ಬಳಿ ದೇವರಾಜ ವಿಭಾಗದ ಎಸಿಪಿ ಶಶಿಧರ್, ಸೈಕಲ್ ಜಾಥಾಕ್ಕೆ ಚಾಲನೆ ನೀಡಿದರು. ಈ ವೇಳೆ ಮೈಸೂರು ವಿಶ್ವವಿದ್ಯಾಲಯದ ಪಾಲಿಮರ್ ಸೈನ್ಸ್ ವಿಭಾಗದ ಪ್ರಾಧ್ಯಾಪಕ ಪ್ರೊ.ಜಗದೀಶ್ ಮಾತನಾಡಿ, ಕೆಟ್ಟದ್ದಕ್ಕೆ ಬಹುಬೇಗ ಆಕರ್ಷಿತರಾಗುತ್ತಾರೆ. ವ್ಯಸನಿಗಳಾಗಿ ಹಣದ ಜೊತೆಗೆ ಆರೋಗ್ಯವನ್ನೂ ಕಳೆದುಕೊಂಡು ಇಡೀ ಕುಟುಂಬವನ್ನು ಸಂಕಷ್ಟಕ್ಕೆ ಸಿಲುಕುತ್ತಾರೆ. ಯುವ ಜನತೆ ಈ ಬಗ್ಗೆ ಗಂಭೀರವಾಗಿ ಯೋಚಿಸಿ, ಉತ್ತಮ ರೀತಿಯಲ್ಲಿ ತಮ್ಮ ಭವಿಷ್ಯ ರೂಪಿಸಿಕೊಳ್ಳಬೇಕು ಎಂದು ಕಿವಿಮಾತು ಹೇಳಿದರು.

ಸೆನ್ ಠಾಣೆ ಇನ್‌ಸ್ಪೆಕ್ಟರ್ ಜಯಕುಮಾರ್, ಸಬ್‌ಇನ್‌ಸ್ಪೆಕ್ಟರ್‌ಗಳಾದ ಸಿದ್ದೇಶ್, ಅನಿಲ್ ಕುಮಾರ್ ಹಾಗೂ ಸಿಬ್ಬಂದಿ ಕೋಟೆ ಆಂಜನೇಯ ಸ್ವಾಮಿ ದೇವಾಲಯದ ಬಳಿಯಿಂದ ಕೆ.ಆರ್.ವೃತ್ತ, ಆಯುರ್ವೇದ ವೃತ್ತ, ರೈಲ್ವೆ ನಿಲ್ದಾಣ, ಮೆಟ್ರೋಪೋಲ್, ರಾಮಸ್ವಾಮಿ ವೃತ್ತ ಚಾಮರಾಜ ಜೋಡಿ ರಸ್ತೆ, ಹಾರ್ಡಿಂಗ್ ವೃತ್ತದ ಮೂಲಕ ಸೆನ್ ಪೊಲೀಸ್ ಠಾಣೆವರೆಗೆ ಸೈಕಲ್ ಜಾಥಾ ನಡೆಸಿ, ಮಾದಕ ದ್ರವ್ಯ ವ್ಯಸನಕ್ಕೆ ತುತ್ತಾಗದಂತೆ ಅರಿವು ಮೂಡಿಸಿದರು.

ಬಿಜೆಪಿಯಿಂದ 'ತುರ್ತು ಪರಿಸ್ಥಿತಿಯ ಕರಾಳ ದಿನ' ಆಚರಣೆ

ತುರ್ತು ಪರಿಸ್ಥಿತಿಯಂತ ಕೆಟ್ಟ ದಿನಗಳು ಮತ್ತೆ ಬರಬಾರದು ಮಾ. ವೆಂಕಟ ರಾಮ್‌ಜೀ



ಮೈಸೂರು, ಜೂ.26(ಜಿಎ)– ಪ್ರಜಾಪ್ರಭುತ್ವವಿದ್ದರೇ ಮಾತ್ರ ದೇಶ, ಸಮಾಜ ಹಾಗೂ ಯೋಜನೆಗಳು ಯಶಸ್ವಿಯಾಗುತ್ತದೆ ಎಂದು ತುರ್ತುಪರಿಸ್ಥಿತಿಯ ಮೂಲಕ ನಮಗೆ ತಿಳಿದಿದೆ ಎಂದು ರಾಷ್ಟ್ರೀಯ ಸ್ವಯಂ ಸೇವಕ ಸಂಘದ ರಾಜ್ಯ ಕಾರ್ಯಕಾರಿಣಿ ಸದಸ್ಯ ಮಾ. ವೆಂಕಟ ರಾಮ್‌ಜೀ ತಿಳಿಸಿದ್ದಾರೆ.

'ತುರ್ತು ಪರಿಸ್ಥಿತಿಯ ಕರಾಳ ದಿನ' ಎಂಬ ಶೀರ್ಷಿಕೆಯಡಿ ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಆಯೋಜಿಸಿದ್ದ ತುರ್ತು ಪರಿಸ್ಥಿತಿಯ 47ನೇ ವರ್ಷದ ಕರಾಳ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡುತ್ತಿದ್ದರು.

ಕಾಂಗ್ರೆಸ್ ಪಕ್ಷ ಬೇರೆ ಮಾರ್ಗದ ಮೂಲಕ ಅಧಿಕಾರಕ್ಕೆ ಬಂದಿದೆ. ಮುಂದಿನ ಆರು ವರ್ಷ ಯಾರು ಸ್ಪರ್ಧಿಸಬಾರದು ಎಂದು ಅಲಹಬಾದ್ ಕೋರ್ಟ್ ತೀರ್ಪು ನೀಡಿತ್ತು. 1975 ಜೂ.25ರ ಮಧ್ಯರಾತ್ರಿ ತುರ್ತು ಪರಿಸ್ಥಿತಿ ಹೇರಿದ ಕಾಂಗ್ರೆಸ್ ಆರ್‌ಎಸ್‌ಎಸ್ ಅನ್ನು ಎರಡು ಬಾರೀ ನಿಷೇಧ ಮಾಡಿತ್ತು. 1ಲಕ್ಷದ 30 ಸಾವಿರ ಮಂದಿಯನ್ನು ಬಂಧಿಸಲಾಗಿತ್ತು. ಅದರಲ್ಲಿ ಅತಿ ಹೆಚ್ಚು ಮಂದಿ ಸಂಘದವರೇ ಇದ್ದರು ಎಂದರು.

ಆ ಸಂದರ್ಭದಲ್ಲಿ ದೇಶದ ಪತ್ರಿಕೆಗಳಿಗೆ ಸ್ವಾತಂತ್ರ್ಯವಿರಲಿಲ್ಲ. ಪತ್ರಿಕೆಗಳು ಪ್ರಕಟವಾಗಬೇಕು ಎಂದರೆ ಮೊದಲು ಸೆನ್ಸಾರ್ ಆಗಬೇಕಿತ್ತು ಅದರ ನಡುವೆಯೂ ಗುಪ್ತವಾಗಿ ಪತ್ರಿಕೆಗಳು ಬರುತ್ತಿದ್ದವು. ಈ ಹಿನ್ನೆಲೆಯಲ್ಲಿ ನೇರವಾಗಿ ಪ್ರತಿಭಟನೆಗೆ ಸಂಘ ದುಮುಕಿ ಕಷ್ಟದ ಪರಿಸ್ಥಿತಿ ಇದ್ದರು ನಾವು ಇದರ ವಿರುದ್ಧ ಹೋರಾಟಬೇಕು ಎಂದು ಸಂದೇಶ ನೀಡಿತ್ತು ಅದರಂತೆ ಅನೇಕ ಜೈಲ್ ಬರೋಗಳು ನಡೆದಿತ್ತು. ಈ ಪರಿಸ್ಥಿತಿಯಲ್ಲಿ ಸಂಘ ಉತ್ತಮ ಕೆಲಸ ಮಾಡಿದೆ ಎಂದರು.

ಗುಪ್ತವಾಗಿ ಬರುತ್ತಿದ್ದ ಪತ್ರಿಕೆಗಳನ್ನು ನಾನು ಚಿಕ್ಕಮಗಳೂರಿಗೆ ತಲುಪಿಸಿ ದೇಶದ ಕೆಟ್ಟ ಪರಿಸ್ಥಿತಿ ಬಗ್ಗೆ ತಿಳಿಸುತ್ತಿದ್ದೆ. ಸಾರ್ವಜನಿಕ ಸಭೆಗಳು ಮಾಡಲು ಅವಕಾಶವಿಲ್ಲದಿದ್ದರಿಂದ ಮುಳ್ಳಯನಗಿರಿ ಬೆಟ್ಟದ ಮೇಲೆ ಸಂಘದ ಸದಸ್ಯರು ಸೇರಿ ಬೈಠಕ್ ನಡೆಸುತ್ತಿದ್ದೇವು. ಇಂತಹ ಪರಿಸ್ಥಿತಿಗಳು ಮತ್ತೆ ಬರಬಾರದು ಎಂದು ತಿಳಿಸಿದರು. ಇದೇ ವೇಳೆ ಬಿಜೆಪಿ ಜಿಲ್ಲಾಧ್ಯಕ್ಷ ಶ್ರೀವತ್ಸ, ಎಂಎಲ್‌ಸಿಗಳಾದ ಕೇಶವ ಪ್ರಸಾದ, ತುಳಸಿ ಮುನಿರಾಜು, ಬಿಜೆಪಿ ಮುಖಂಡ ತೋಂಟಾದರ್ಯ ಸೇರಿದಂತೆ ಮೈಸೂರು ಜಿಲ್ಲೆಯ ಬಿಜೆಪಿ ಮುಖಂಡರು ಭಾಗಿಯಾಗಿದ್ದರು.

ಅಗ್ನಿಪಥ್ ವಿರುದ್ಧ ಕಾಂಗ್ರೆಸ್ ಕಾರ್ಯಕರ್ತರ ಪ್ರತಿಭಟನೆ

ಮೈಸೂರು, ಜೂ.26(ಎಸ್‌ಬಿಡಿ)– ಅಗ್ನಿಪಥ್ ಯೋಜನೆ ವಿರೋಧಿಸಿ ಪ್ರತಿಭಟನೆ ನಡೆಸಿದ ಕಾಂಗ್ರೆಸ್ ಕಾರ್ಯಕರ್ತರನ್ನು ಪೊಲೀಸರು ವಶಕ್ಕೆ ಪಡೆದು ನಂತರ ಬಿಡುಗಡೆಗೊಳಿಸಿದರು.

ಮೈಸೂರಿನ ಅಂಬೇಡ್ಕರ್ ವೃತ್ತ (ಎಫ್‌ಟಿಎಸ್ ಸರ್ಕಲ್)ದ ಬಳಿ ಭಾನುವಾರ ಜಮಾಯಿಸಿದ ಕಾಂಗ್ರೆಸ್ ಕಾರ್ಯಕರ್ತರು, ಸೇನೆ ನೇಮಕಾತಿಗಾಗಿ ಕೇಂದ್ರ ಸರ್ಕಾರ ರೂಪಿಸಿರುವ ಅಗ್ನಿಪಥ್ ಯೋಜನೆ ದೋಷಪೂರಿತವಾಗಿದೆ. ಈ ಯೋಜನೆ ಅನುಷ್ಠಾನದಿಂದ ಸೇನೆಗೆ ಸೇರಲು ತರಬೇತಿ ಪಡೆದಿರುವ ಉದ್ಯೋಗಾಕಾಂಕ್ಷಿಗಳಿಗೆ ಅನ್ಯಾಯವಾಗಲಿದೆ ಎಂದು ಆರೋಪಿಸಿದರು.



ರಾಜಾಸ್ತಾನ್, ಮಧ್ಯಪ್ರದೇಶ, ಉತ್ತರಪ್ರದೇಶ, ಬಿಹಾರ್, ಹಿಮಾಚಲಪ್ರದೇಶ ಮತ್ತಿತರ ರಾಜ್ಯಗಳಲ್ಲಿ ಯುವ ಜನರು ಸೇನೆ ಸೇರಬೇಕೆಂಬ ಗುರಿಯೊಂದಿಗೆ ಅಗತ್ಯ ತರಬೇತಿ ಪಡೆದು ನೇಮಕಾತಿ ಪ್ರಕ್ರಿಯೆಗಾಗಿ ಕಾದಿದ್ದರು. ಆದರೆ ಅಗ್ನಿಪಥ್ ಯೋಜನೆ ಘೋಷಣೆ ಮೂಲಕ ನಿರುದ್ಯೋಗ ಭೀತಿ ಸೃಷ್ಟಿಸಿ, ಅವರಿಗೆ ಆಘಾತ ನೀಡಿದೆ. ಕೇವಲ 4 ವರ್ಷಗಳ ಗುತ್ತಿಗೆ ಆಧಾರದಲ್ಲಿ ಸೇನೆಗೆ ನೇಮಿಸಿಕೊಳ್ಳುವ ಈ ಯೋಜನೆ ಉದ್ಯೋಗಾಂಕ್ಷಿಗಳಿಗೆ ಶಾಪಗ್ರಸ್ತವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸೇನೆಗೆ ಸೇರಿದವರನ್ನು 4 ವರ್ಷಗಳ ನಂತರ ನಿರುದ್ಯೋಗಿಗಳನ್ನಾಗಿ ಮಾಡಿದರೆ ಅವರ ಭವಿಷ್ಯದ ಗತಿಯೇನು. ತರಬೇತಿ ಪಡೆದವರಲ್ಲಿ ಶೇ.25 ಮಂದಿಯನ್ನು ಮಾತ್ರ ಸೇವೆಯಲ್ಲಿ ಮುಂದುವರೆಸುವುದು ತಾರತಮ್ಯವಾಗುತ್ತದೆ. ನೇಮಕಾತಿ ನಂತರ ಕೇವಲ 3 ತಿಂಗಳ ತರಬೇತಿ ನೀಡುವ ಉದ್ದೇಶವೂ ಸರಿಯಲ್ಲ. ಇದರಿಂದ ದೇಶದ ಭದ್ರತೆ ವೈಫಲ್ಯಕ್ಕೂ ಕಾರಣವಾಗುತ್ತದೆ. ತೀವ್ರ ಪ್ರತಿರೋಧದ ನಡುವೆಯೂ ಕೇಂದ್ರ ಸರ್ಕಾರ ಸೇನೆಯನ್ನು ಖಾಸಗೀಕರಣಗೊಳಿಸುವ ಉದ್ದೇಶದಿಂದ ಈ ಯೋಜನೆ ಅನುಷ್ಠಾನಕ್ಕೆ ಮುಂದಾಗಿರುವುದು ಖಂಡನಾರ್ಹ. ಯುವಜನತೆಯ ಜೀವನ ಹಾಗೂ ದೇಶದ ಹಿತದೃಷ್ಟಿಯಿಂದ ಈ ಯೋಜನೆಯನ್ನು ಕೈಬಿಟ್ಟು, ಪೂರ್ಣ ಪ್ರಮಾಣದ ನೇಮಕಾತಿ ಪ್ರಕ್ರಿಯೆ ಮುಂದುವರೆಸಬೇಕೆಂದು ಆಗ್ರಹಿಸಿದರು.

ಕಾಂಗ್ರೆಸ್ ನಗರ ವಕ್ತಾರ ಎಸ್.ರಾಜೇಶ್, ಎಸ್ಸಿ ಘಟಕದ ನಗರಾಧ್ಯಕ್ಷ ಸುನಂದಕುಮಾರ್, ಕಾರ್ಯದರ್ಶಿ ಉಮೇಶ್ ಚಂದ್ರ ಮುಖಂಡರಾದ ಇಕ್ಬಾಲ್, ರಾಕೇಶ್ ಕುಮಾರ್, ರಾಮಕೃಷ್ಣ, ಹೇಮಚಂದ್ರ, ಎಚ್.ಎಂ.ಅಂಕಯ್ಯ ಸೇರಿದಂತೆ ಪ್ರತಿಭಟನಾನಿರತರನ್ನು ಎನ್.ಆರ್.ಠಾಣೆ ಪೊಲೀಸರು ವಶಕ್ಕೆ ಪಡೆದು, ನಂತರ ಬಿಡುಗಡೆ ಮಾಡಿದರು.

ಚಾ.ನಗರದಲ್ಲಿ 'ಅಮೃತ ಭಾರತಿಗೆ ಕನ್ನಡದ ಆರತಿ' ಕಾರ್ಯಕ್ರಮ

ಸ್ವಾತಂತ್ರ್ಯಕ್ಕೆ ಕರ್ನಾಟಕದ ಕೊಡುಗೆ ಅಪಾರ

ನಗರಸಭಾ ಅಧ್ಯಕ್ಷೆ ಆಶಾ ನಟರಾಜು ಅಭಿಮತ



ಚಾಮರಾಜನಗರ, ಜೂ.26–ಭಾರತದ ಸ್ವಾತಂತ್ರ್ಯಕ್ಕೆ ಕರ್ನಾಟಕದ ಕೊಡುಗೆ ಅಪಾರ ಎಂದು ನಗರಸಭಾ ಅಧ್ಯಕ್ಷೆ ಆಶಾ ನಟರಾಜು ಅಭಿಪ್ರಾಯಪಟ್ಟರು.

ನಗರದ ಮಾರಿಗುಡಿ ಮುಂಭಾಗದ ಆವರಣದಲ್ಲಿ ಜಿಲ್ಲಾಡಳಿತ, ಜಿಪಂ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಭಾರತ ಅಮೃತ ಸ್ವಾತಂತ್ರ್ಯದ ಮಹೋತ್ಸವದ ಅಂಗವಾಗಿ ಹಮ್ಮಿಕೊಂಡಿದ್ದ 'ಅಮೃತ ಭಾರತಿಗೆ ಕನ್ನಡದ ಆರತಿ' ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ದೇಶಕ್ಕೆ ಸ್ವಾತಂತ್ರ್ಯ ಬಂದು 75 ವರ್ಷಗಳು ತುಂಬಿರುವ ಹಿನ್ನೆಲೆಯಲ್ಲಿ ಸರ್ಕಾರದ ನಿರ್ದೇಶನದಂತೆ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿಯೂ 'ಅಮೃತ ಭಾರತಿಗೆ ಕನ್ನಡದ ಆರತಿ' ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ದೇಶದ ಸ್ವಾತಂತ್ರ್ಯ ಹೋರಾಟದಲ್ಲಿ ಕರ್ನಾಟಕದ ಹಾಗೂ ಜಿಲ್ಲೆಯ ಕೊಡುಗೆಯು ಅಪಾರವಾಗಿದೆ. ಈ ಸುಸಂದರ್ಭದಲ್ಲಿ ಸ್ವಾತಂತ್ರ್ಯಕ್ಕಾಗಿ ಹೋರಾಡಿದವರನ್ನು ಸ್ಮರಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯ ಎಂದರು.

ಬೆಂಗಳೂರಿನ ವಿದ್ಯಾಭಾರತಿ ಕ್ಷೇತ್ರಿಯ ಸಂಘಟನಾ ಕಾರ್ಯದರ್ಶಿ ಜಿಆರ್. ಜಗದೀಶ್ ಮುಖ್ಯ ಭಾಷಣ ಮಾಡಿದರು. ಕೇಂದ್ರ ಪರಿಹಾರ ಸಮಿತಿ ಅಧ್ಯಕ್ಷ ಎಂ.ರಾಮಚಂದ್ರ ಮಾತನಾಡಿದರು. ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶಾಂತಮೂರ್ತಿ ಕುಲಗಾಣ ಅಧ್ಯಕ್ಷತೆ ವಹಿಸಿದ್ದರು. ಕರ್ನಾಟಕ ಜಾನಪದ ಅಕಾಡೆಮಿ ಸದಸ್ಯ ಸಿ.ಎಂ.ನರಸಿಂಹಮೂರ್ತಿ ಪ್ರಾಸ್ತಾವಿಕ ನುಡಿಗಳನ್ನಾಡಿದರು.

ಇದಕ್ಕೂ ಮುನ್ನ ನಗರದ ಚಾಮರಾಜೇಶ್ವರ ದೇವಸ್ಥಾನದ ಅವರಣದಲ್ಲಿ ಹಸಿರು ನಿಶಾನೆ ತೋರುವ ಮೂಲಕ ಗಣ್ಯರು 'ಅಮೃತ ಭಾರತಿಗೆ ಕನ್ನಡದ ಆರತಿ' ಕಾರ್ಯಕ್ರಮದ ಅದ್ದೂರಿ ಮೆರವಣಿಗೆಗೆ ಚಾಲನೆ ನೀಡಿದರು. ವಿವಿಧ ಕಲಾತಂಡಗಳು, ಸ್ವಾತಂತ್ರ್ಯ ಹೋರಾಟಗಾರರ ವೇಷಭೂಷಣದ ಮಕ್ಕಳು, ಶಾಲಾಮಕ್ಕಳು, ವಿವಿಧ ಸ್ತ್ರೀಶಕ್ತಿ ಸಂಘದ ಸದಸ್ಯರು, ಸಂಘ-ಸಂಸ್ಥೆಗಳ ಕಾರ್ಯಕರ್ತರು ಭಾಗವಹಿಸಿ ಮರವಣಿಗೆ ಮೆರುಗು ಹೆಚ್ಚಿಸಿದರು. ಶ್ರೀ ಚಾಮರಾಜೇಶ್ವರ ದೇವಸ್ಥಾನದಿಂದ ಹೊರಟ ಮೆರವಣಿಗೆಯು ಭುವನೇಶ್ವರಿ ವೃತ್ತ ಕೆಎಸ್ಆರ್‌ಟಿಸಿ ಬಸ್ ನಿಲ್ದಾಣ, ದೇವಾಂಗ ಬೀದಿ, ಮಹಾವೀರ ವೃತ್ತದ ಮೂಲಕ ಮಾರಿಗುಡಿಯ ಮುಂಭಾಗದ ಆವರಣಕ್ಕೆ ತಲುಪಿತು. ಮೆರವಣಿಗೆಯುದ್ದಕ್ಕೂ 'ಭಾರತ್ ಮಾತಾ ಕೀ ಜೈ' ಹಾಗೂ 'ವಂದೇ ಮಾತರಂ' ಉದ್ಘೋಷಗಳು ಮುಗಿಲು ಮುಟ್ಟುವಂತಿತ್ತು. ಬಳಿಕ ಮಾರಿಗುಡಿಯ ಆವರಣದಲ್ಲಿ ಭಾರತ ಸ್ವಾತಂತ್ರ್ಯ ಹೋರಾಟವನ್ನು ಬಿಂಬಿಸುವ ಶಿಲಾಫಲಕವನ್ನು ಗಣ್ಯರು ಅನಾವರಣಗೊಳಿಸಿದರು. ಕಾರ್ಯಕ್ರಮದಲ್ಲಿ ನಗರಸಭೆ ಸದಸ್ಯರಾದ ಗಾಯತ್ರಿ ಚಂದ್ರಶೇಖರ್, ಭಾಗ್ಯಮ್ಮ, ಎಡಿಸಿ ಎಸ್.ಕಾತ್ಯಾಯಿನಿದೇವಿ, ನಗರಸಭೆ ಪೌರಾಯುಕ್ತ ಕರಿಬಸವಯ್ಯ, ನಾಮನಿರ್ದೇಶಿತ ಸದಸ್ಯ ಚಂದ್ರು, ತಹಸೀಲ್ದಾರ್ ಬಸವರಾಜು, ತಾಪಂ ಇಓ ಪ್ರೇಮ್‌ಕುಮಾರ್, ಮೈಸೂರು ವಿವಿ ಸಿಂಡಿಕೇಟ್ ಸದಸ್ಯ ಪ್ರದೀಪ್‌ಕುಮಾರ್ ದೀಕ್ಷಿತ್, ಸಂಯೋಜಕ ಅಶ್ವಿನ್ ಇತರರಿದ್ದರು.

ಗುಂಡ್ಲುಪೇಟೆ ಮುಖ್ಯರಸ್ತೆ ಚತುಷ್ಪಥವಾಗಿ ಪರಿವರ್ತಿಸಲು ಕ್ರಮ



ಚಾಮರಾಜನಗರ, ಜೂ.26–ಗುಂಡ್ಲುಪೇಟೆಯ ಮುಖ್ಯರಸ್ತೆಯಲ್ಲಿ ವಾಹನ ದಟ್ಟಣೆ ಹೆಚ್ಚಾಗಿದ್ದು, ಇದನ್ನು ಚತುಷ್ಪಥ ರಸ್ತೆಯನ್ನಾಗಿ ಪರಿವರ್ತಿಸುವ ಅಗತ್ಯವಿದ್ದು, ಈ ಸಂಬಂಧ ಕ್ರಮ ತೆಗೆದುಕೊಳ್ಳಲಾಗುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ವಿ.ಸೋಮಣ್ಣ ತಿಳಿಸಿದರು.

ಗುಂಡ್ಲುಪೇಟೆ ತಾಲೂಕಿನ ಬೇಗೂರಿನಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನಿರ್ಮಿಸಿರುವ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯದ ನೂತನ ಕಟ್ಟಡ ಉದ್ಘಾಟಿಸಿ ಅವರು ಮಾತನಾಡಿದರು.

ಗುಂಡ್ಲುಪೇಟೆಯಲ್ಲಿ ಸಾಕಷ್ಟು ಬದಲಾವಣೆಗಳು ಕಂಡು ಬರುತ್ತಿದೆ. ಇಲ್ಲಿನ ಮುಖ್ಯ ರಸ್ತೆಯಲ್ಲಿ ವಾಹನಗಳ ಸಂಚಾರ ಹೆಚ್ಚಿದೆ. ಪ್ರಸ್ತುತ ಇರುವ ರಸ್ತೆಯನ್ನು ಚತುಷ್ಪಥ ರಸ್ತೆಯನ್ನಾಗಿ ಪರಿವರ್ತಿಸುವುದರಿಂದ ಸಂಭವಿಸಬಹುದಾದ ಅಪಘಾತಗಳನ್ನು ತಡೆಯಬಹುದು. ಶಾಸಕ ನಿರಂಜನಕುಮಾರ್ ಅವರು ಸಹ ರಸ್ತೆ ಅಭಿವೃದ್ಧಿ ಸಂಬಂಧ ನನ್ನೊಂದಿಗೆ ಮಾತನಾಡಿದ್ದು, ಈ ಸಂಬಂಧ ಕ್ರಮ ವಹಿಸಲಾಗುತ್ತದೆ ಎಂದರು.

ಬೇಗೂರು ಪಟ್ಟಣದ ಮುಖ್ಯ ರಸ್ತೆಯಲ್ಲಿಯೇ 2 ಕೋಟಿ ರೂ.ಗಳಿಗೂ ಹೆಚ್ಚು ವೆಚ್ಚ ಮಾಡಿ ಉತ್ತಮವಾದ ವಿದ್ಯಾರ್ಥಿನಿಲಯ ಕಟ್ಟಡ ನಿರ್ಮಿಸಲಾಗಿದೆ. ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ನೆರವಾಗುವ ಉದ್ದೇಶದಿಂದ ಇಂತಹ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ವಿದ್ಯಾರ್ಥಿಗಳು ಈ ಅವಕಾಶಗಳನ್ನು ಬಳಸಿಕೊಂಡು ಶೈಕ್ಷಣಿಕವಾಗಿ ಉತ್ತಮ ಸಾಧನೆ ಮಾಡಬೇಕು ಎಂದು ಸಚಿವರು ಕಿವಿಮಾತು ಹೇಳಿದರು. ಶಾಸಕ ಸಿ.ಎಸ್. ನಿರಂಜನ ಕುಮಾರ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ವಿಧಾನಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ, ಕೇಂದ್ರ ಪರಿಹಾರ ಸಮಿತಿ ಅಧ್ಯಕ್ಷ ಎಂ.ರಾಮಚಂದ್ರ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶಾಂತಮೂರ್ತಿ ಕುಲಗಾಣ, ಗ್ರಾಪಂ ಅಧ್ಯಕ್ಷೆ ಇಂದಿರಾ ಸುರೇಶ್, ಜಿಪಂ ಸಿಇಓ ಕೆ.ಎಂ.ಗಾಯತ್ರಿ, ಎಡಿಸಿ ಕಾತ್ಯಾಯಿನಿ ದೇವಿ, ಎಎಸ್ಪಿ ಕೆ.ಎಸ್.ಸುಂದರರಾಜು, ಡಿವೈಎಸ್ಪಿ ಪ್ರಿಯದರ್ಶಿನಿ ಸಾಣಿಕೊಪ್ಪ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ರೇವಣ್ಣ, ಇತರೆ ಗಣ್ಯರು ಕಾರ್ಯಕ್ರಮದಲ್ಲಿದ್ದರು.

ಸಿದ್ದಯ್ಯನಪುರ ರಸ್ತೆ, ಚರಂಡಿ ಕಾಮಗಾರಿಗೆ ಭೂಮಿ ಪೂಜೆ



ಚಾಮರಾಜನಗರ.ಜೂ26(ಎಸ್‌ಎಸ್)– ತಾಲೂಕಿನ ಸಿದ್ದಯ್ಯನಪುರ ಗ್ರಾಮದಲ್ಲಿ ಎಸ್‌ಇಪಿ ಯೋಜನೆಯಡಿ ಪರಿಶಿಷ್ಟ ಜಾತಿಯ ಹೊಸ ಬಡಾವಣೆಯಲ್ಲಿ 20 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸುತ್ತಿರುವ ಸಿಸಿ ರಸ್ತೆ, ಚರಂಡಿ ಅಭಿವೃದ್ಧಿ ಕಾಮಗಾರಿಗೆ ಶಾಸಕ ಸಿ.ಪುಟ್ಟರಂಗಶೆಟ್ಟಿ ಗುದ್ದಲಿ ಪೂಜೆ ನೆರವೇರಿಸಿದರು.

ಬಳಿಕ ಮಾತನಾಡಿದ ಅವರು, ಗ್ರಾಮೀಣ ಪ್ರದೇಶಗಳಲ್ಲಿ ರಸ್ತೆಗಳು ಅಭಿವೃದ್ಧಿಯಾದರೆ ಅದು ಪ್ರಗತಿಯ ಸಂಕೇತವಾಗಿದ್ದು, ನಾಗರಿಕರ ಸಂಚಾರಕ್ಕೆ ಅಗತ್ಯವಾಗಿದೆ. ಸಿದ್ದಯ್ಯನಪುರ ಗ್ರಾಮಕ್ಕೆ ಅಗತ್ಯವಾಗಿರುವ ರಸ್ತೆ, ಚರಂಡಿ, ಸಮುದಾಯ ಭವನ, ಕುಡಿಯುವ ನೀರು, ಗಂಗಾ ಕಲ್ಯಾಣ ಯೋಜನೆ, ಅರ್ಹ ಫಲಾನುಭವಿಗಳಿಗೆ ಆಶ್ರಯ ಮನೆ, ನಿವೇಶನ ಸೇರಿದಂತೆ ಸರ್ಕಾರದಿಂದ ನೀಡಲಾಗುವ ಸೌಲಭ್ಯವನ್ನು ಸಮಗ್ರವಾಗಿ ಕಲ್ಪಿಸಿದ್ದು, ಇಂದು ಪರಿಶಿಷ್ಟ ಜಾತಿಯ ಹೊಸ ಬಡಾವಣೆಯಲ್ಲಿ ಸಿಸಿ ರಸ್ತೆ ಮತ್ತು ಚರಂಡಿ ಅಭಿವೃದ್ಧಿ ಕಾಮಗಾರಿಗೆ ಚಾಲನೆ ನೀಡಲಾಗಿದೆ. ಅಗತ್ಯವಿರುವೆಡೆ ರಸ್ತೆ ಅಭಿವೃದ್ಧಿ ಕಾಮಗಾರಿ ಕೈಗೊಳ್ಳಲಾಗುವುದು ಎಂದರು.

ಈ ಸಂದರ್ಭದಲ್ಲಿ ಗ್ರಾಪಂ ಅಧ್ಯಕ್ಷೆ ಶೈಲಜಾ ಗೋವಿಂದರಾಜು, ಗ್ರಾಪಂ ಸದಸ್ಯರಾದ ಬಸಮ್ಮ, ಮಹದೇವಮ್ಮ, ಸಿದ್ದರಾಜು, ಯಜಮಾನರಾದ ನಂಜುಂಡಯ್ಯ, ದೊಡ್ಡ ಮಹದೇವಯ್ಯ, ಪಾಪು ಹೊಂಗಲವಾಡಿ ಮಾಜಿ ಗ್ರಾಪಂ ಅಧ್ಯಕ್ಷ ಶಿವಮಾದಯ್ಯ, ಮಾಜಿ ಸದಸ್ಯ ಎಂ.ನಂಜುಂಡಸ್ವಾಮಿ, ಮುಖಂಡರಾದ ಹನುಮಂತು, ಶ್ರೀಕಂಠಮೂರ್ತಿ, ಕಾವೇರಿ ನೀರಾವರಿ ನಿಗಮದ ಇಂಜಿನಿಯರ್ ಮಹದೇವಸ್ವಾಮಿ, ರತೀಶ್ ಸೇರಿದಂತೆ ಗ್ರಾಮಸ್ಥರಿದ್ದರು.

ಕಾರಿನ ಮೇಲೆ ಕಾಡಾನೆ ದಾಳಿ: ತಪ್ಪಿದ ಅನಾಹುತ

ಚಾಮರಾಜನಗರ, ಜೂ.26(ಎಸ್‌ಎಸ್)–ನಗರದಿಂದ ತಮಿಳುನಾಡಿನ ಸತ್ಯಮಂಗಲ ಸಂಪರ್ಕಿಸುವ ರಾಷ್ಟ್ರೀಯ ಹೆದ್ದಾರಿಯ ಹಾಸನೂರು ಬಳಿ ಸಂಚರಿಸುತ್ತಿದ್ದ ವಾಹನಗಳ ಮೇಲೆ 2 ಕಾಡಾನೆಗಳು ದಾಳಿಗೆ ಯತ್ನಿಸಿದ ಘಟನೆ ಶುಕ್ರವಾರ ನಡೆದಿದೆ. ಅದೃಷ್ಟವಶಾತ್ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ.



ಹಾಸನೂರು ಬಳಿ ಶುಕ್ರವಾರ ಮಧ್ಯಾಹ್ನ ಮರಿಯಾನೆಯೊಂದಿಗಿದ್ದ ಎರಡು ಆನೆಗಳು ಕಾರೊಂದರ ಮೇಲೆ ದಾಳಿಗೆ ಮುಂದಾಗಿವೆ. ಕಾರಿನ ಮೇಲೆ ಕಾಡಾನೆ ದಾಳಿ ನಡೆಸಲು ಮುಂದಾಗುತ್ತಿದ್ದಂತೆಯೇ ಕಾರಿನ ಹಿಂಬದಿಯಲ್ಲಿ ಕುಳಿತಿದ್ದ ವ್ಯಕ್ತಿಯೊಬ್ಬರೂ ಕಾರಿನಿಂದ ಇಳಿದು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಈ ವೇಳೆ ಆನೆ ಕಾರಿನ ಸೈಡ್ ಮಿರರ್‌ಅನ್ನು ಕಿತ್ತೆಸೆದಿದೆ. ನಂತರ ಆನೆಗಳು ಕಾಡಿನೊಳಗೆ ತೆರಳುತ್ತಿದ್ದ ಈ ದೃಶ್ಯವನ್ನು ಬಸ್ ಅಥವಾ ಲಾರಿಯಲ್ಲಿದ್ದ ವ್ಯಕ್ತಿಯೊಬ್ಬರು ಸೆರೆ ಹಿಡಿದಿದ್ದಾನೆ. ಈಗ ಈ ದೃಶ್ಯ ವೈರಲ್ ಆಗಿದೆ. ಚಾಮರಾಜನಗರ ತಾಲೂಕಿನ ಪುಣಜನೂರು ದಾಟಿದರೆ, ತಮಿಳುನಾಡು ಆರಂಭವಾಗುತ್ತದೆ. ಇಲ್ಲಿಂದಲೇ ದಟ್ಟಾರಣ್ಯ ಇದೆ ಇದು ಸತ್ಯಮಂಗಲ ಹುಲಿ ರಕ್ಷಿತಾರಣ್ಯ ಆಗಿದೆ. ಇಲ್ಲ ರಾತ್ರಿ ವೇಳೆ ವಾಹನಗಳ ಸಂಚಾರವನ್ನು ನಿಷೇಧಿಸಲಾಗಿದೆ. ಇದರಿಂದಾಗಿ ಹಗಲು ವೇಳೆ ವಾಹನಗಳ ಸಂಚಾರ ತುಂಬಾ ಹೆಚ್ಚಾಗಿದೆ.

ಸರ್ಕಾರದ ಸೌಲಭ್ಯ ಪಡೆದು ಕಟ್ಟಡ ಕಾರ್ಮಿಕರು ಅಭಿವೃದ್ಧಿ ಹೊಂದಬೇಕು

ಹನೂರು, ಜೂ.26(ಸೋಮು)–ಸರ್ಕಾರದಿಂದ ದೊರಕುವ ಸೌಕರ್ಯಗಳನ್ನು ಸದುಪಯೋಗಪಡಿಸಿಕೊಂಡು ಕಟ್ಟಡ ಕಾರ್ಮಿಕರು ಆರ್ಥಿಕವಾಗಿ ಅಭಿವೃದ್ಧಿ ಹೊಂದಬೇಕು ಎಂದು ಓಬಿಸಿ ಮೋರ್ಚಾ ಜಿಲ್ಲಾ ಸಂಯೋಜಕ ಜನಧ್ವನಿ ಬಿ.ವೆಂಕಟೇಶ್ ತಿಳಿಸಿದರು.



ಹನೂರು ಪಟ್ಟಣದ ಬಿಜೆಪಿ ಕಚೇರಿಯ ಆವರಣದಲ್ಲಿ ಹಮ್ಮಿಕೊಂಡಿದ್ದ ಶ್ಯಾಮ್ ಪ್ರಸಾದ್ ಮುಖರ್ಜಿ ಅವರ ಪುಣ್ಯಸ್ಮರಣೆ ಅಂಗವಾಗಿ ಕಟ್ಟಡ ಕಾರ್ಮಿಕರಿಗೆ ತರಬೇತಿ ಪ್ರಮಾಣ ಪತ್ರ ವಿತರಣಾ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಕೇಂದ್ರ ಸರ್ಕಾರ ಹಾಗೂ ರಾಜ್ಯದ ಬಿಜೆಪಿ ಸರ್ಕಾರ ಕಟ್ಟಡ ಕಾರ್ಮಿಕರಿಗೆ ಹತ್ತಾರು ಸೌಲಭ್ಯಗಳನ್ನು ನೀಡುತ್ತಿದೆ. ಪ್ರತಿಯೊಬ್ಬ ಕಟ್ಟಡ ಕಾರ್ಮಿಕರು ಪ್ರತಿ 3 ವರ್ಷಗಳಿಗೊಮ್ಮೆ ತಮ್ಮ ಗುರುತಿನ ಚೀಟಿಗಳನ್ನು ನವೀಕರಣ ಮಾಡಿಸಿಕೊಳ್ಳಬೇಕು. ಇದಕ್ಕಾಗಿ ಯಾವುದೇ ಕಚೇರಿಗೆ ಅಲೆದಾಡಬೇಕಾಗಿಲ್ಲ. ನಮ್ಮ ಕಚೇರಿಗೆ ಬಂದು ಅಗತ್ಯ ದಾಖಲೆ ನೀಡಿದರೆ ನಮ್ಮ ಕಚೇರಿಯ ಸಿಬ್ಬಂದಿಗಳೇ ಸೇವಾ ಸಿಂಧು ಆಪ್‌ನಲ್ಲಿ ಕಟ್ಟಡ ಕಾರ್ಮಿಕರ ನೋಂದಾವಣೆಯನ್ನು ಉಚಿತವಾಗಿ ಮಾಡಿಕೊಡುತ್ತಾರೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ತರಬೇತಿ ಪಡೆದ 300ಕ್ಕೂ ಹೆಚ್ಚು ಕಟ್ಟಡ ಕಾರ್ಮಿಕರಿಗೆ ತರಬೇತಿ ಪ್ರಮಾಣ ಪತ್ರ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಓಬಿಸಿ ಮೋರ್ಚಾ ಜಿಲ್ಲಾಧ್ಯಕ್ಷ ನಟರಾಜುಗೌಡ, ಹನೂರು ಮಂಡಲದ ಓಬಿಸಿ ಮೋರ್ಚಾ ಅಧ್ಯಕ್ಷ ಕೃಷ್ಣಪ್ಪ ಎಸ್‌ಸಿ ಮೋರ್ಚಾ ಅಧ್ಯಕ್ಷ ರಾಜಶೇಖರ್, ಗ್ರಾಪಂ ಸದಸ್ಯ ವರಪ್ರಸಾದ್, ಮಧುವನಹಳ್ಳಿ ಗ್ರಾಪಂ ಸದಸ್ಯ ನಾಗರಾಜು ಸೇರಿದಂತೆ ಇನ್ನಿತರರಿದ್ದರು

ನೇಣು ಬಿಗಿದುಕೊಂಡು ಗೃಹಿಣಿ ಆತ್ಮಹತ್ಯೆ

ಚಾಮರಾಜನಗರ, ಜೂ.26 (ಎಸ್‌ಎಸ್)– ಗೃಹಿಣಿಯೊಬ್ಬರು ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ತಾಲೂಕಿನ ಕೂಡ್ಲೂರಿನಲ್ಲಿ ಭಾನುವಾರ ನಡೆದಿದೆ. ಗ್ರಾಮದ ನಿವಾಸಿ ಮಹೇಶ್ ಪತ್ನಿ ಜ್ಯೋತಿ(27) ಆತ್ಮಹತ್ಯೆ ಮಾಡಿಕೊಂಡವರು. ಈ ದಂಪತಿಗೆ ಇಬ್ಬರು ಮಕ್ಕಳಿದ್ದಾರೆ.



ಗುಂಡ್ಲುಪೇಟೆ ತಾಲೂಕಿನ ತೆರಕಣಾಂಬಿಹುಂಡಿಯ ಜ್ಯೋತಿ ಅವರನ್ನು 2014ರಲ್ಲಿ ಮಹೇಶ್ ಅವರಿಗೆ ಮದುವೆ ಮಾಡಿಕೊಡಲಾಗಿತ್ತು. ಅಡಿಕೆ ವ್ಯಾಪಾರ ಮಾಡಿಕೊಂಡಿದ್ದ ಮಹೇಶ್ ಅವರು ನಷ್ಟ ಅನುಭವಿಸಿದ್ದರು. ಆ ಬಳಿಕ ಕುಡಿತದ ಚಟಕ್ಕೆ ಬಿದ್ದಿದ್ದರು. ಇದರಿಂದ ಆಗಾಗ ದಂಪತಿ ನಡುವೆ ಜಗಳ ನಡೆಯುತ್ತಿತ್ತು. ಎರಡು ವಾರಗಳ ಹಿಂದೆ ಹಿರಿಯ ಸಮ್ಮುಖದಲ್ಲಿ ರಾಜಿ–ಪಂಚಾಯಿತಿಗೆ ಸಹ ನಡೆಸಲಾಗಿತ್ತು.

ಭಾನುವಾರ ಮನೆಯಲ್ಲಿ ದಂಪತಿ ನಡುವೆ ಜಗಳ ನಡದಿದೆ. ಆ ಬಳಿಕ ಜ್ಯೋತಿ ಅವರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಆತ್ಮಹತ್ಯೆ ಸಂಬಂಧ ಪ್ರಕರಣ ದಾಖಲಿಸಿಕೊಂಡಿರುವ ಚಾಮರಾಜನಗರ ಪೂರ್ವ ಠಾಣೆ ಇನ್‌ಸ್ಪೆಕ್ಟರ್ ಆನಂದ್, ಮುಂದಿನ ಕ್ರಮ ಕೈಗೊಂಡಿದ್ದಾರೆ.

ಡಾ.ಸಂಪತ್‌ಕುಮಾರ್ ನಿಧನ



ಚಾಮರಾಜನಗರ, ಜೂ.26–ನಗರದ ನಿವಾಸಿ ಚರ್ಮರೋಗ ತಜ್ಞ ಡಾ.ಸಂಪತ್‌ಕುಮಾರ್(67) ಶನಿವಾರ ರಾತ್ರಿ ತಮ್ಮ ನಿವಾಸದಲ್ಲಿ ನಿಧನರಾದರು. ಜಿಲ್ಲೆಯ ಆರೋಗ್ಯ ಇಲಾಖೆಯಲ್ಲಿ ಸುದೀರ್ಘ ಸೇವೆ ಸಲ್ಲಿಸಿದ್ದ ಅವರು ಜಿಲ್ಲಾ ಸರ್ಜನ್ ಆಗಿ ಸೇವೆಯಿಂದ ನಿವೃತ್ತರಾಗಿದ್ದರು. ಆ ಬಳಿಕವೂ ಕೆಲವು ವರ್ಷ ಜಿಲ್ಲಾಸ್ಪತ್ರೆಯಲ್ಲಿ ಕೆಲಸ ಮಾಡಿದ್ದರು. ಕೆಲವು ಸಮಯದಿಂದ ಖಾಸಗಿ ಕ್ಲಿನಿಕ್ ಇಟ್ಟು ಚಿಕಿತ್ಸೆ ನೀಡುತ್ತಿದ್ದರು.

ಮೂಲತಃ ತುಮಕೂರು ಜಿಲ್ಲೆಯವರಾದ ಡಾ.ಸಂಪತ್‌ಕುಮಾರ್ ಜಿಲ್ಲಾ ಕುಷ್ಠರೋಗ ನಿಯಂತ್ರಣ ಅಧಿಕಾರಿಯಾಗಿಯೂ ಕರ್ತವ್ಯ ನಿರ್ವಹಿಸಿದ್ದರು. ಮೃತರು ಪತ್ನಿ, ಪುತ್ರ ಸೇರಿದಂತೆ ಅಪಾರ ಬಂಧು–ಬಳಗ ಅಗಲಿದ್ದಾರೆ. ಅಂತ್ಯಕ್ರಿಯೆ ಭಾನುವಾರ ನಗರ ಸಮೀಪದ ಬೂದಿತಿಟ್ಟಿನಲ್ಲಿ ಅವರ ಸ್ನೇಹಿತರ ಜಮೀನಿನಲ್ಲಿ ನಡೆಯಿತು.

ಜಾರ್‌ಕೊಲ್ಲಿ ಕಾಫಿ ತೋಟದಲ್ಲಿ ಕಾಡಾನೆ ಪ್ರತ್ಯಕ್ಷ: ಸ್ಥಳೀಯರಲ್ಲಿ ಆತಂಕ

ಸುಂಟಿಕೊಪ್ಪ, ಜೂ.26– ಮಾದಾಪುರ ಜಾರ್‌ಕೊಲ್ಲಿ ಜನನಿಬಿಡ ಪ್ರದೇಶದ ಬಳಿಯಿರುವ ಕಾಫಿ ತೋಟದಲ್ಲಿ ಕಾಡಾನೆ ಕಾಣಿಸಿಕೊಂಡಿದ್ದು, ಸ್ಥಳೀಯರಲ್ಲಿ ಆತಂಕ ಮೂಡಿಸಿದೆ.

ಈ ಭಾಗದಲ್ಲಿ ಕಾಡಾನೆಗಳು ಎಂದೂ ಕಂಡು ಬಂದಿರಲಿಲ್ಲ ಎಂದು ಗ್ರಾಮಸ್ಥರು ತಿಳಿಸುತ್ತಾರೆ. ಆದರೆ ಇದೀಗ ರಾತ್ರಿ ವೇಳೆ ಜಾರ್‌ಕೊಲ್ಲಿ ಜನನಿಬಿಡ ಪ್ರದೇಶದ ಆಸುಪಾಸಿನ ಕಾಫಿ ತೋಟಕ್ಕೆ ಕಾಡಾನೆಗಳು ನುಗ್ಗಿ ಬಾಳೆ, ತೆಂಗು, ಬೆಣ್ಣೆ ಹಣ್ಣಿನ ಗಿಡಗಳನ್ನು ತಿಂದು ನಾಶಪಡಿಸಿವೆ. ಮಂಡೇಟಿರ ಮಂಜುನಾಥ ಎಂಬವರ ತೋಟಕ್ಕೂ ಕಾಡಾನೆಗಳು ಲಗ್ಗೆಯಿಟ್ಟಿದ್ದು ಕಾರ್ಮಿಕರು, ಸ್ಥಳೀಯ ನಿವಾಸಿಗಳು ಭಯ ಭೀತರಾಗಿದ್ದಾರೆ. ಕಾಡಾನೆಗಳನ್ನು ಅರಣ್ಯ ಪ್ರದೇಶಕ್ಕೆ ಅಟ್ಟುವ ಕೆಲಸವನ್ನು ಅರಣ್ಯಾಧಿಕಾರಿಗಳು ಮಾಡಬೇಕು ಎಂದು ಜಾರ್‌ಕೊಲ್ಲಿಯ ನಿವಾಸಿಗಳು ಆಗ್ರಹಿಸಿದ್ದಾರೆ.

ವಿದ್ಯುತ್ ತಂತಿ ತಗುಲಿ ಹಸು ಸಾವು

ಸೋಮವಾರಪೇಟೆ, ಜೂ.26– ವಿದ್ಯುತ್ ತಂತಿ ತಗುಲಿ ಹಸುವೊಂದು ಸಾವನ್ನಪ್ಪಿರುವ ಘಟನೆ ಸಮೀಪದ ಕೆಂಚಮ್ಮನಬಾಣೆ–ಕರ್ಕಳ್ಳಿ ಗ್ರಾಮದ ಸೀಗಲುಡುವೆ ಗ್ರಾಮದಲ್ಲಿ ಭಾನುವಾರ ನಡೆದಿದೆ.



ಇಂದು ಬೆಳಿಗ್ಗೆ ಗಾಳಿ ಮಳೆಗೆ ಮರದ ಕೊಂಬೆಯೊಂದು ವಿದ್ಯುತ್ ತಂತಿಯ ಮೇಲೆ ಬಿದ್ದ ಪರಿಣಾಮ, ವಿದ್ಯುತ್ ತಂತಿ ತುಂಡಾಗಿ ಕೆಳಗೆ ಬಿದ್ದಿತ್ತು. ಇದೇ ಸಂದರ್ಭ ಸೀಗಲುಡುವೆ ಗ್ರಾಮದ ಚಂದ್ರಶೇಖರ್ ಅವರಿಗೆ ಸೇರಿದ ಹಸು ಮೇಯಲು ತೆರಳಿದ್ದು, ವಿದ್ಯುತ್ ಪ್ರವಹಿಸಿ ಸ್ಥಳದಲ್ಲೇ ಸಾವನ್ನಪ್ಪಿದೆ. ಇದರಿಂದಾಗಿ ಸುಮಾರು 50 ಸಾವಿರ ರೂ. ನಷ್ಟವಾಗಿದ್ದು, ಪರಿಹಾರ ಒದಗಿಸುವಂತೆ ಮಾಲೀಕರು ಮನವಿ ಮಾಡಿದ್ದಾರೆ. ಸ್ಥಳಕ್ಕೆ ಪಶು ವೈದ್ಯಕೀಯ ಇಲಾಖೆಯ ಅಧಿಕಾರಿ ಡಾ.ಬದಾಮಿ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.



ಮಳೆ–ಗಾಳಿಗೆ ಮನೆಯ ಗೋಡೆ ಕುಸಿತ

ನಾಪೋಕ್ಲು,ಜೂ.(ದುಗ್ಗಳ)26– ಸಮೀಪದ ಎಮ್ಮೆಮಾಡು ಗ್ರಾಮದ ನಿವಾಸಿ ಉಮ್ಮು ಕುಲ್ಸು ಎಂಬವರ ಮನೆಯ ಒಂದು ಭಾಗದ ಗೋಡೆ ಕುಸಿದು ಬಿದ್ದು ನಷ್ಟ ಸಂಭವಿಸಿದೆ.

ಶನಿವಾರ ರಾತ್ರಿ ಸುರಿದ ಮಳೆ–ಗಾಳಿಯಿಂದ ಮನೆ ಒಂದು ಪಾರ್ಶ್ವ ಗೋಡೆ ಕುಸಿದಿದೆ. ಸ್ಥಳಕ್ಕೆ ಕಂದಾಯ ಪರಿವೀಕ್ಷಕ ರವಿಕುಮಾರ್, ಗ್ರಾಮಲೆಕ್ಕಿಗ ಹರೀಶ್ ಕುಮಾರ್ ಹಾಗೂ ಸಿಬ್ಬಂದಿ ತೆರಳಿ ಪರಿಶೀಲನೆ ನಡೆಸಿದ್ದಾರೆ. ರೂ. 50000 ನಷ್ಟ ಸಂಭವಿಸಿದೆ ಎಂದು ಅಂದಾಜಿಸಲಾಗಿದೆ.

ಹಿರಿಯ ಪತ್ರಕರ್ತ ಮನುಶೆಣೈ ನಿಧನ

ಮಡಿಕೇರಿ,ಜೂ.26– ವಿರಾಜಪೇಟೆ ನಿವಾಸಿ ಕೊಡಗು ಪತ್ರಿಕಾ ಭವನ ಟ್ರಸ್ಟ್‌ನ ಮ್ಯಾನೇಜಿಂಗ್ ಟ್ರಸ್ಟಿ, ಕೊಡಗು ಸಮಾಚಾರ ಪತ್ರಿಕೆಯ ಸಂಪಾದಕ ಬಿ.ಎನ್. ಮನುಶೆಣೈ(64) ಅವರು ಭಾನುವಾರ ಮುಂಜಾನೆ ಹೃದಯಾಘಾತದಿಂದ ನಿಧನರಾಗಿದ್ದಾರೆ. ಮೃತರು ಪತ್ನಿ, ಇಬ್ಬರು ಮಕ್ಕಳು ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ವಿರಾಜಪೇಟೆಯ ಅರಸು ನಗರದ ರುದ್ರಭೂಮಿಯಲ್ಲಿ ಭಾನುವಾರ ಸಂಜೆ ಮೃತರ ಅಂತ್ಯಕ್ರಿಯೆ ನಡೆಸಲಾಯಿತು.



ಸಂತಾಪ: ಮನುಶೆಣೈ ಅವರ ನಿಧನಕ್ಕೆ ಕೊಡಗು ಪತ್ರಿಕಾ ಭವನ ಟ್ರಸ್ಟ್ ಹಾಗೂ ಕೊಡಗು ಪತ್ರಕರ್ತರ ಸಂಘ, ಗಣ್ಯರು, ಕೊಡಗು ಪತ್ರಿಕಾ ಭವನ ಟ್ರಸ್ಟ್‌ನ ಟ್ರಸ್ಟಿ ಟಿ.ಪಿ.ರಮೇಶ್, ಟ್ರಸ್ಟ್ ಪ್ರಧಾನ ಕಾರ್ಯದರ್ಶಿ ಎಸ್.ಜಿ.ಉಮೇಶ್, ಕೆ.ತಿಮ್ಮಪ್ಪ, ಅನಿಲ್.ಎಚ್.ಟಿ, ಜಿ.ಚಿದ್ವಿಲಾಸ್, ಕೊಡಗು ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಎಸ್.ಎ.ಮುರಳೀಧರ್, ಪ್ರಧಾನ ಕಾರ್ಯದರ್ಶಿ ಉಜ್ವಲ್ ರಂಜಿತ್, ಖಜಾಂಚಿ ಟಿ.ಕೆ.ಸಂತೋಷ್, ಕ್ಷೇಮಾಭಿವೃದ್ಧಿ ಸಮಿತಿ ಅಧ್ಯಕ್ಷ ಹೆಚ್.ಆರ್.ಹರೀಶ್, ಕಾರ್ಯದರ್ಶಿ ಅರುಣ್ ಕೂರ್ಗ್, ಕೆಪಿಸಿಸಿ ಜಿಲ್ಲಾಧ್ಯಕ್ಷ ಧರ್ಮಜಾ ಉತ್ತಪ್ಪ, ಪ್ರಮುಖರಾದ ವಿ.ಪಿ.ಶಶಿಧರ್, ವಸತಿ ರಹಿತರ ಹೋರಾಟ ಸಮಿತಿ ಸಂಚಾಲಕ ನಿರ್ವಾಣಪ್ಪ, ಜಿಲ್ಲಾ ಕ್ರೈಸ್ತ ಸಮಾಜ ಪ್ರಮುಖರಾದ ಕೆ.ಟಿ.ಬೇಬಿ ಮ್ಯಾಥ್ಯು, ಕಸಾಪ ಜಿಲ್ಲಾಧ್ಯಕ್ಷ ಎಂ.ಪಿ.ಕೇಶವ ಕಾಮತ್, ಮುನೀರ್ ಅಹಮದ್, ವಿರಾಜಪೇಟೆ ಪಪಂ ಸದಸ್ಯ ರಾಜೇಶ್ ಪದ್ಮನಾಭ ಸಂತಾಪ ಸೂಚಿಸಿದರು.

ವಿರಾಜಪೇಟೆ ವ್ಯಾಪ್ತಿಯಲ್ಲಿ ಗಾಂಜಾ ಹಾವಳಿ ಹೆಚ್ಚು

ಕ್ರಮಕ್ಕೆ ಪೊಲೀಸ್ ಜನಸಂಪರ್ಕ ಸಭೆಯಲ್ಲಿ ಒತ್ತಾಯ



- ಗಾಂಜಾ ಸಾಗಿಸುವವರ, ಮಾರುವವರ ಮೇಲೆ ಶೀಘ್ರ ಕ್ರಮ
- ಪಟ್ಟಣದಲ್ಲಿ ಕಳ್ಳತನ, ಪುಂಡರ ಹಾವಳಿ ಹೆಚ್ಚುತ್ತಿವೆ
- ಬಸ್ ನಿಲ್ದಾಣದೊಳಗೆ ಆಟೋಗಳಿಗೆ ಪ್ರವೇಶವಿಲ್ಲ

ವಿರಾಜಪೇಟೆ, ಜೂ.26– ವಿರಾಜಪೇಟೆ ಪಟ್ಟಣ ವ್ಯಾಪ್ತಿಯಲ್ಲಿ ಗಾಂಜಾ ಹಾವಳಿ ಹೆಚ್ಚಾಗಿದ್ದು ಪೊಲೀಸ್ ಇಲಾಖೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕೆಂದು ಪೊಲೀಸ್ ಇಲಾಖೆಯ ಜನಸಂಪರ್ಕ ಸಭೆಯಲ್ಲಿ ಒತ್ತಾಯಿಸಲಾಯಿತು.

ಸಭೆಯಲ್ಲಿ ಭಾಗವಹಿಸಿದ್ದ ಡಿವೈಎಸ್‌ಪಿ ನಿರಂಜನ್ ರಾಜೇ ಅರಸ್ ಮಾತನಾಡಿ ಈಗಾಗಲೇ 9 ಮಂದಿ ಗಾಂಜಾ ಆರೋಪಿಗಳನ್ನು ಬಂಧಿಸಿ ಜೈಲಿಗೆ ಅಟ್ಟಲಾಗಿದೆ, ಗಾಂಜಾ ಸಾಗಾಟ ಮಾಡುವರ ಬಗ್ಗೆ ಮಾಹಿತಿ ಪಡೆದಿದ್ದು ಕ್ರಮಕೈಗೊಳ್ಳುವ ಭರವಸೆ ನೀಡಿದರು.

ವಿರಾಜಪೇಟೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಆವರಣದಲ್ಲಿ ಆಯೋಜಿಸಿದ್ದ ಜನ ಸಂಪರ್ಕ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಾರ್ವಜನಿಕರ ಅನುಕೂಲಕ್ಕಾಗಿ ಪಟ್ಟಣದಲ್ಲಿ ಹೆಚ್ಚು ಸಿಸಿಟಿವಿಗಳನ್ನು ಅಳವಡಿಸಬೇಕಾಗಿದೆ, ಈ ಹಿಂದೆ ಪಟ್ಟಣ ಪಂಚಾಯಿತಿಯಿಂದ ಅಳವಡಿಸಿದ್ದ ಸಿಸಿಟಿವಿ ಸರಿಯಾದ ನಿರ್ವಹಣೆಯಿಲ್ಲದೆ ಕೆಲಸ ಮಾಡುತ್ತಿಲ್ಲ. ಇನ್ನು ಮುಂದೆ ಸೂಕ್ತ ರೀತಿ ನಿರ್ವಹಣೆ ಮಾಡಲಾಗುತ್ತದೆ ಎಂದರಲ್ಲದೆ ನಿಯಮದಂತೆ ಎಲ್ಲಾ ಅಂಗಡಿ ಮಾಲಿಕರು ಕಡ್ಡಾಯವಾಗಿ ಸಿಸಿಟಿವಿ ಅಳವಡಿಸಿಕೊಳ್ಳುವಂತೆ ಸೂಚಿಸಿದರು.

ದಲಿತ ಸಂಘರ್ಷ ಸಮಿತಿಯ ಮುಖಂಡ ಹೆಚ್.ಆರ್.ಶಿವಣ್ಣ ಮಾತನಾಡಿ, ವಿರಾಜಪೇಟೆಯಲ್ಲಿ ಕೆಲವು ಪಡ್ಡೆ ಹುಡುಗರು, ಶಾಲಾ ಕಾಲೇಜು ಬಿಡುವ ಸಮಯದಲ್ಲಿ ಗಾಂಜಾ ನಶೆ ಏರಿಸಿಕೊಂಡು ವಿದ್ಯಾರ್ಥಿನಿಯರನ್ನು ಗುರಾಯಿಸುತ್ತಿರುವ ಬಗ್ಗೆ ಮಾಹಿತಿಗಳು ಬಂದಿವೆ ಎಂದರಲ್ಲದೆ ಕೆಲವು ಕಡೆ ಲೈನ್ ಮನೆಗಳಿಗೆ ಮದ್ಯ ಸರಬರಾಜು ಮತ್ತು ಸ್ಥಳೀಯ ಅಂಗಡಿಯಲ್ಲಿ ಅಕ್ರಮ ಮದ್ಯ ಮಾರಾಟ ಮಾಡುವುದನ್ನು ತಡೆಯುವಂತೆ ಹೇಳಿದಾಗ, ಇದಕ್ಕೆ ಕ್ರಮ ಕೈಗೊಳ್ಳುವ ಭರವಸೆ ನೀಡಿದ ಪೊಲೀಸರು ಸಹಾಯವಾಣಿ 112ಕ್ಕೆ ಕರೆ ಮಾಡುವಂತೆ ಸೂಚಿಸಿದರು.

ಪಪಂ ಸದಸ್ಯ ಸಿ.ಕೆ.ಪೃಥ್ವಿನಾಥ್ ಮಾತನಾಡಿ, ಪಟ್ಟಣದಲ್ಲಿ ಕಳ್ಳತನ ಹೆಚ್ಚಾಗಿದ್ದು ಇತ್ತೀಚೆಗೆ ಸರಗಳ್ಳತನ ನಡೆದಿದೆ ಪೊಲೀಸರು ಕ್ರಮ ಕೈಗೊಂಡಿದ್ದೀರಾ? ಎಂದಾಗ ವೃತ್ತನಿರೀಕ್ಷಕ ಬಿ.ಎಸ್.ಶಿವರುದ್ರ ಅವರು ಉತ್ತರಿಸಿ, ಈಗಾಗಲೇ ಇಲಾಖೆ ಆಗತ್ಯ ಕ್ರಮ ಕೈಗೊಂಡಿದೆ ಎಂದರು. ಆಟೋ ಚಾಲಕರ ಸಂಘದ ಅಧ್ಯಕ್ಷ ಎನ್.ಎನ್.ಶಿವು ಮಾತನಾಡಿ, ಖಾಸಗಿ ಬಸ್ಸು ನಿಲ್ದಾಣದ ಒಳಗಡೆ ಆಟೋರಿಕ್ಷಗಳನ್ನು ಬಿಡುವಂತೆ ಮನವಿ ಮಾಡಿದಾಗ, ಅಲ್ಲಿ ಬಸ್ ಹಾಗೂ ಇತರ ವಾಹನಗಳ ನಡುವೆ ಅಟೋಗಳ ಪ್ರವೇಶದಿಂದ ಟ್ರಾಫಿಕ್ ಸಮಸ್ಯೆ ಉಂಟಾಗುತ್ತದೆ. ಯಾವುದೇ ಕಾರಣಕ್ಕೂ ಬಸ್ ನಿಲ್ದಾಣದೊಳಗೆ ಆಟೋಗಳಿಗೆ ಪ್ರವೇಶವಿಲ್ಲ ಎಂದರು.

ಪಪಂ ಮಾಜಿ ಸದಸ್ಯ ರಚನ್ ಮೇದಪ್ಪ ಮಾತನಾಡಿ, ಪಟ್ಟಣದ ದೊಡ್ಡಟ್ಟಿ ಚೌಕಿಯಲ್ಲಿ ಸಿದ್ದಾಪುರ ಕಡೆಗೆ ಹೋಗುವ ಬಸ್‌ಗಳು ನಿಲ್ಲಿಸುವುದರಿಂದ ಅನಗತ್ಯ ಟ್ರಾಫಿಕ್ ಜ್ಯಾಮ್ ಆಗುತ್ತಿದೆ. ಇದರಿಂದ ಶಾಲಾ ಮಕ್ಕಳು ಮತ್ತು ಸಾರ್ವಜನಿಕರು ನಡೆದಾಡಲು ಸಮಸ್ಯೆಯಾಗುತ್ತಿದೆ. ಈ ಕಾರಣದಿಂದ ಬಸವೇಶ್ವರ ದೇವಾಲಯದ ಬಳಿ ನಿಲುಗಡೆ ಮಾಡುವಂತೆ ತಿಳಿಸಿದಾಗ ಒಪ್ಪಿಗೆ ನೀಡಿದರು.

ಮಲೆತಿರಿಕೆ ಬೆಟ್ಟದ ಶ್ರೀ ಈಶ್ವರ ದೇವಾಲಯಕ್ಕೆ ಹೋಗುವ ಮಾರ್ಗದಲ್ಲಿ ಮೋಜು ಮಸ್ತಿ ಹೆಚ್ಚಾಗಿದ್ದು ಹಗಲು ರಾತ್ರಿ ಎನ್ನದೆ ಗಾಂಜಾ ಮತ್ತು ಮದ್ಯ ಸೇರಿದಂತೆ ಅನೈತಿಕ ಚಟುವಟಿಕೆ ನಡೆಯುತ್ತಿದೆ. ದೇವಾಲಯದ ಅರ್ಚಕರಿಗೂ ಕಿರುಕುಳ ನೀಡುತ್ತಿದ್ದಾರೆ ಇದರ ಬಗ್ಗೆ ಸೂಕ್ತ ಕ್ರಮ ಕೈ ಗೊಳ್ಳುವಂತೆ ದೇವಾಲಯ ಸಮಿತಿ ಕಾರ್ಯದರ್ಶಿ ಬೊಳ್ಳಚಂಡ ಪ್ರಕಾಶ್ ಒತ್ತಾಯಿಸಿದಾಗ ಕ್ರಮ ಕೈಗೊಳ್ಳುವುದಾಗಿ ನಗರ ಠಾಣಾಧಿಕಾರಿ ಸಿ.ವಿ.ಶ್ರೀಧರ ಭರವಸೆ ನೀಡಿದರು.

ಸಭೆಯಲ್ಲಿ ಪಪಂ ಅಧ್ಯಕ್ಷೆ ಸುಸ್ಮಿತಾ, ಸದಸ್ಯರಾದ ಬಿ.ಡಿ.ಸುನೀತಾ, ತಸ್ಲಿಂ ಅಕ್ತರ್, ದಸಂಸ ಮುಖಂಡರಾದ ಎನ್.ವೀರಭದ್ರಯ್ಯ, ಹೆಚ್.ಜಿ. ಗೋಪಾಲ್, ಪಳನಿ ಪ್ರಕಾಶ್ ಮಾತನಾಡಿದರು. ಸಭೆಯಲ್ಲಿ ಆರ್ಜಿ ಗ್ರಾಪಂ ಅಧ್ಯಕ್ಷೆ ಪಾರ್ವತಿ, ಬೇಟೋಳಿ ಗ್ರಾ.ಪಂ, ಪಿಡಿಓ ಮಣಿ, ಪಟ್ಟಣದ ನಾಗರಿಕರು ಸಾರ್ವಜನಿಕರು ಉಪಸ್ಥಿತರಿದ್ದರು.

ಭಾಷೆ ಕಾಲಂನಲ್ಲಿ ಅರೆಭಾಷೆ ನಮೂದಿಸುವಂತಾಗಬೇಕು

ಮಡಿಕೇರಿ ಜೂ.26– ಮುಂದಿನ ಜನಗಣತಿ ಸಂದರ್ಭದಲ್ಲಿ ಭಾಷೆ ಕಾಲಂನಲ್ಲಿ ಕನ್ನಡದ ಜೊತೆಗೆ ತಾವು ಮಾತನಾಡುವ ಮಾತೃ ಭಾಷೆಯನ್ನು ನಮೂದಿಸುವಂತಾಗಬೇಕು ಎಂದು ಸರ್ಕಾರದ ಇ-ಆಡಳಿತ ವಿಭಾಗದಲ್ಲಿ ಮುಖ್ಯಮಂತ್ರಿ ಅವರ ಸಲಹೆಗಾರರಾದ ಬೇಳೂರು ಸುದರ್ಶನ ಸಲಹೆ ಮಾಡಿದ್ದಾರೆ.



ಕರ್ನಾಟಕ ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿ ವತಿಯಿಂದ ನಗರದ ಭಾರತೀಯ ವಿದ್ಯಾಭವನದಲ್ಲಿ ಶನಿವಾರ ಏರ್ಪಡಿಸಲಾಗಿದ್ದ ಡಿಜಿಟಲ್ ಪುಸ್ತಕಗಳ ಲೋಕಾರ್ಪಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಆ್ಯಪ್ ಆಧಾರಿತ ಗಣತಿ ಮಾಡುವ ಬಗ್ಗೆ ಚಿಂತನೆಗಳು ನಡೆಯುತ್ತಿದೆ. ಆ ನಿಟ್ಟಿನಲ್ಲಿ ಭಾಷೆ ಕಾಲಂನಲ್ಲಿ ಅರೆಭಾಷೆಯನ್ನು ನಮೂದಿಸುವಂತಾಗಬೇಕು ಎಂದರು.

ಹತ್ತು ಸಾವಿರಕ್ಕೂ ಹೆಚ್ಚು ಜನರು ಮಾತನಾಡುವ ಭಾಷೆಯನ್ನು ಎಲ್ಲಾ ಕ್ಷೇತ್ರಗಳಲ್ಲಿ ಪರಿಗಣಿಸುವಂತಾಗಬೇಕು. ಮಲೆನಾಡು ಹಾಗೂ ಕರಾವಳಿ ಭಾಗದಲ್ಲಿ ಜೀವ ಮತ್ತು ಭಾಷಾ ವೈವಿಧ್ಯತೆ ಜೊತೆಗೆ ಆಧುನಿಕ ಯುಗದಲ್ಲಿ ಡಿಜಿಟಲ್ ವೈವಿಧ್ಯತೆಯನ್ನು ಬಳಸಿಕೊಳ್ಳುವುದು ಅತ್ಯಂತ ಅವಶ್ಯಕವಾಗಿದೆ. ಇದರಿಂದ ಪುಸ್ತಕ ಓದುಗರಿಗೆ ಸಹಕಾರಿಯಾಗಲಿದೆ ಎಂದು ಅವರು ತಿಳಿಸಿದರು.

ಅರೆಭಾಷೆ, ಕೊಡವ, ತುಳು, ಕೊಂಕಣಿ, ಬ್ಯಾರಿ ಹೀಗೆ ರಾಜ್ಯದಲ್ಲಿ ಐದು ಭಾಷಾ ಅಕಾಡೆಮಿಗಳನ್ನು ಸರಕಾರ ಸ್ಥಾಪಿಸಿರುವುದು ವಿಶೇಷವಾಗಿದೆ. ಆ ನಿಟ್ಟಿನಲ್ಲಿ ಅರೆಭಾಷೆಗೆ ಐಎಸ್‌ಓ ಕೋಡ್ ಪಡೆಯಲು ಮತ್ತಷ್ಟು ಶ್ರಮಿಸಬೇಕಿದೆ ಎಂದು ಸುದರ್ಶನ ಹೇಳಿದರು.

ಕರ್ನಾಟಕ ಅರೆಭಾಷೆ ಸಂಸ್ಕೃತಿ ಮತ್ತು ಸಾಹಿತ್ಯ ಅಕಾಡೆಮಿ ಅಧ್ಯಕ್ಷರಾದ ಲಕ್ಷ್ಮೀನಾರಾಯಣ ಕಜೆಗದ್ದೆ ಅವರು ಮಾತನಾಡಿ ಅರೆಭಾಷೆ ಅಕಾಡೆಮಿಯಿಂದ ಹೊರತಂದಿರುವ ಪುಸ್ತಕಗಳು ಎಲ್ಲರಿಗೂ ತಲುಪುವಂತಾಗುವ ನಿಟ್ಟಿನಲ್ಲಿ ಪುಸ್ತಕಗಳ ಡಿಜಿಟಲೀಕರಣ ಮಾಡಲಾಗಿದೆ. ಪುಸ್ತಕಗಳು ಸಿಗುತ್ತಿಲ್ಲ ಎಂಬ ಭಾವನೆ ಯಾರಲ್ಲೂ ಬರಬಾರದು ಎಂಬ ಉದ್ದೇಶದಿಂದ ಆಧುನಿಕತೆಗೆ ಒಗ್ಗಿಕೊಂಡು ಅಕಾಡೆಮಿಯ ಹಲವು ಪುಸ್ತಕಗಳ ಡಿಜಿಟಲೀಕರಣ ಮಾಡಲಾಗಿದೆ ಎಂದರು.

ಕನ್ನಡ ಸಾಹಿತ್ಯ ಪರಿಷತ್ತು ಜಿಲ್ಲಾ ಘಟಕದ ಅಧ್ಯಕ್ಷರಾದ ಎಂ.ಪಿ.ಕೇಶವ ಕಾಮತ್ ಅವರು ಮಾತನಾಡಿ, ಶತಮಾನಗಳ ಹಿಂದೆ ತಾಳೆಗರಿಯಲ್ಲಿ ಬರೆದು ಓದಲಾಗುತ್ತಿದ್ದು, ಬಳಿಕ ಕಾಗದದಲ್ಲಿ ಮುದ್ರಣ ಮಾಡಿ ಓದಲಾಗುತ್ತಿತ್ತು, ಈಗ ಆಧುನಿಕ ಜಗತ್ತಿನ ಶರವೇಗದ ಬದುಕಿನಲ್ಲಿ ಡಿಜಿಟಲ್ ಮಾಧ್ಯಮ ಬಳಸಿಕೊಳ್ಳಲಾಗುತ್ತಿದೆ ಎಂದರು.

ಕೊಡಗು ಗೌಡ ಸಮಾಜಗಳ ಒಕ್ಕೂಟದ ಅಧ್ಯಕ್ಷ ಸೂರ್ತಲೆ ಸೋಮಣ್ಣ, ಮೈಸೂರು ಕೊಡಗು ಗೌಡ ಸಮಾಜದ ಅಧ್ಯಕ್ಷರಾದ ತೋಟಂಬೈಲು ಮನೋಹರ್, ಅಕಾಡೆಮಿ ಸದಸ್ಯರಾದ ಬೈತಡ್ಕ ಜಾನಕಿ ಬೆಳ್ಯಪ್ಪ, ಸ್ಮಿತಾ ಅಮೃತರಾಜ್, ಚೊಕ್ಕಾಡಿ ಪ್ರೇಮ ರಾಘವಯ್ಯ, ಧನಂಜಯ ಅಗೋಳಿಕಜೆ, ಡಾ.ಕೂಡಕಂಡಿ ದಯಾನಂದ, ಭರತೇಶ್ ಅಲಸಂಡೆಮಜಲು, ರಿಜಿಸ್ಟ್ರಾರ್ ಚಿನ್ನಸ್ವಾಮಿ ಇತರರು ಇದ್ದರು. ಪ್ರೇಮ ರಾಘವಯ್ಯ ಪ್ರಾರ್ಥಿಸಿದರು, ರಿಜಿಸ್ಟ್ರಾರ್ ಚಿನ್ನಸ್ವಾಮಿ ಸ್ವಾಗತಿಸಿದರು, ಧನಂಜಯ ಅಗೋಳಿಕಜೆ ನಿರೂಪಿಸಿ ದರು, ಭರತೇಶ ಅಲಸಂಡೆಮಜಲು ವಂದಿಸಿದರು.

ನಾಳೆ ನಾಡ್ ಮದ್ದ್‌ಕಾರಡ ಮೋಪ್‌ಕೂಟ

ಸೋಮವಾರಪೇಟೆ, ಜೂ.26– ಕರ್ನಾಟಕ ಕೊಡವ ಸಾಹಿತ್ಯ ಅಕಾಡೆಮಿ ಹಾಗೂ ಕೊಡವ ಸಮಾಜ ಮತ್ತು ಕೊಡಗು ಪತ್ರಕರ್ತರ ಸಂಘದ ಆಶ್ರಯದಲ್ಲಿ ಜೂ.28ರಂದು ನಾಡ್ ಮದ್ದ್‌ಕಾರಡ ಮೋಪ್‌ಕೂಟ ಕಾರ್ಯಕ್ರಮ ನಡೆಯಲಿದೆ.

ಅಂದು ಬೆಳಿಗ್ಗೆ 10.30ಕ್ಕೆ ಇಲ್ಲಿನ ಕೊಡವ ಸಮಾಜದ ಸಭಾಂಗಣದಲ್ಲಿ ನಡೆಯಲಿರುವ ಕಾರ್ಯಕ್ರಮವನ್ನು ಶಾಸಕ ಮಂಡೇಪಂಡ ಅಪ್ಪಚ್ಚುರಂಜನ್ ಉದ್ಘಾಟಿಸಲಿದ್ದಾರೆ. ಅಕಾಡೆಮಿ ಅಧ್ಯಕ್ಷ ಡಾ.ಅಮ್ಮಾಟಂಡ ಪಾರ್ವತಿ ಅಪ್ಪಯ್ಯ ಅಧ್ಯಕ್ಷತೆಯಲ್ಲಿ ನಡೆಯಲಿರುವ ಕಾರ್ಯಕ್ರಮದಲ್ಲಿ ಮುಖ್ಯಅತಿಥಿಗಳಾಗಿ ಕೊಡವ ಸಮಾಜ ಅಧ್ಯಕ್ಷ ಮಾಳೇಟಿರ ಅಭಿಮನ್ಯುಕುಮಾರ್, ಕೊಡಗು ಪತ್ರಕರ್ತರ ಸಂಘದ ಅಧ್ಯಕ್ಷ ಎಸ್.ಎ.ಮುರಳೀಧರ್ ಪಾಲ್ಗೊಳ್ಳಲಿದ್ದಾರೆ.

ನಮ್ಮ ಆರೋಗ್ಯ ರಕ್ಷಣೆಯಲ್ಲಿ ಔಷಧೀಯ ಗಿಡ ಮತ್ತು ಸಸ್ಯಗಳ ಪಾತ್ರ ಕುರಿತು ವಿರಾಜಪೇಟೆಯ ವೈದ್ಯರಾದ ಎಸ್.ವಿ.ನರಸಿಂಹನ್ ವಿಚಾರ ಮಂಡನೆ ಮಾಡಲಿದ್ದಾರೆ. ಇದೇ ಸಂದರ್ಭ ಅಕಾಡೆಮಿಯಿಂದ ಹೊರತರಲಾಗುವ ಪೊಂಗುರಿ ತ್ರೈಮಾಸಿಕ ಸಂಚಿಕೆ ಹಾಗೂ ಹಿರಿಯ ಸಾಹಿತಿ ಬಾಚರಣಿಯಂಡ ರಾಣು ಅಪ್ಪಣ್ಣ ಬರೆದಿರುವ ಕೊಡವ ಸಂಸ್ಕೃತಿ ಅಂದ್–ಇಂದ್ ಎಂಬ ಸಂಶೋಧನಾ ಪ್ರಬಂಧ ಪುಸ್ತಕ ಬಿಡುಗಡೆಗೊಳ್ಳಲಿದೆ.

ಸೋಲಿನ ಹತಾಶೆಯಿಂದ ಅಗ್ನಿಪಥ್ ವಿರೋಧಿಸುತ್ತಿರುವ ಕಾಂಗ್ರೆಸ್

ಜಿಲ್ಲಾ ಬಿಜೆಪಿ ಅಸಮಾಧಾನ

ಮಡಿಕೇರಿ,ಜೂ.26– ದೇಶಭಕ್ತಿ, ದೇಶ ರಕ್ಷಣೆ ಮತ್ತು ಉದ್ಯೋಗದ ಕುರಿತು ಯುವಶಕ್ತಿಗೆ ಪ್ರೇರಣೆ ನೀಡುವ ನಿಟ್ಟಿನಲ್ಲಿ ಕೇಂದ್ರ ಸರಕಾರ ಅಗ್ನಿಪಥ್ ಯೋಜನೆಯನ್ನು ಘೋಷಿಸಿದೆ. ಆದರೆ ಸೋಲಿನ ಹತಾಶೆಯಲ್ಲಿರುವ ಕಾಂಗ್ರೆಸ್ ಕೇಂದ್ರದ ನಿರ್ಧಾರವನ್ನು ವಿರೋಧಿಸುವ ಚಾಳಿಯನ್ನು ಮುಂದುವರೆಸಿದೆ ಎಂದು ಜಿಲ್ಲಾ ಬಿಜೆಪಿ ಅಸಮಾಧಾನ ವ್ಯಕ್ತಪಡಿಸಿದೆ.

ಪತ್ರಿಕಾ ಹೇಳಿಕೆ ನೀಡಿರುವ ಬಿಜೆಪಿ ಜಿಲ್ಲಾ ವಕ್ತಾರ ಮಹೇಶ್ ಜೈನಿ, ದೇಶದ ನೆಚ್ಚಿನ ಪ್ರಧಾನಿ ನರೇಂದ್ರಮೋದಿ ಅವರು ಅಗ್ನಿಪಥ್ ಮೂಲಕ ಯುವಶಕ್ತಿಗೆ ದೇಶಸೇವೆ ಮಾಡಲು ಪ್ರೇರಣೆ ನೀಡಿದ್ದಾರೆ. ಸರಕಾರದ ಈ ನಿರ್ಧಾರವನ್ನು ಯೋಧರ ನಾಡಾದ ಕೊಡಗು ಮುಕ್ತ ಮನಸ್ಸಿನಿಂದ ಸ್ವಾಗತಿಸುತ್ತದೆ. ಆದರೆ ಕಾಂಗ್ರೆಸ್ ಮಾತ್ರ ವಿನಾಕಾರಣ ವಿರೋಧಿಸುತ್ತಿದೆ ಎಂದು ತಿಳಿಸಿದ್ದಾರೆ. ಇದೊಂದು ಸರಕಾರದ ದಿಟ್ಟ ಹೆಜ್ಜೆಯಾಗಿದ್ದು, ಕಾಂಗ್ರೆಸ್‌ನ ಯಾವುದೇ ಪ್ರತಿರೋಧಕ್ಕೂ ಮಣಿಯುವ ಪ್ರಶ್ನೆಯೇ ಇಲ್ಲವೆಂದು ಸ್ಪಷ್ಟಪಡಿಸಿರುವ ಅವರು, ಕೊಡಗಿನ ಯುವಜನತೆ ಅಗ್ನಿಪಥ್ ಯೋಜನೆಯ ಲಾಭವನ್ನು ಪಡೆಯುವ ಮೂಲಕ ದೇಶಸೇವೆಯಲ್ಲಿ ತೊಡಗಿಸಿಕೊಂಡು ಬಲಿಷ್ಠ ಭಾರತವನ್ನು ನಿರ್ಮಿಸಲು ಪ್ರಧಾನ ಮಂತ್ರಿಗಳೊಂದಿಗೆ ಕೈಜೋಡಿಸಬೇಕೆಂದು ಕರೆ ನೀಡಿದ್ದಾರೆ.

ಪ್ರತ್ಯೇಕ ರಾಜ್ಯ ಕೇಳುವುದು ಮೂರ್ಖತನ



ಹುಬ್ಬಳ್ಳಿ: ಪ್ರತ್ಯೇಕ ರಾಜ್ಯ ಕೇಳುವುದು ಮೂರ್ಖತನ, ಕರ್ನಾಟಕ ಅಖಂಡವಾಗಿಯೇ ಉಳಿಯಬೇಕು ಎಂದು ಪರಿಷತ್ ಸದಸ್ಯ ಬಸವರಾಜ ಹೊರಟ್ಟಿ ತಿಳಿಸಿದರು.

ರಾಜ್ಯದಲ್ಲಿ ನಡೆಯುತ್ತಿರುವ ವಿವಾದಗಳ ಕುರಿತು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ರಾಜ್ಯಮಟ್ಟದ ಶಿಕ್ಷಕರ ಸಭೆ ಕರೆದಿದ್ದೇನೆ. ಚುನಾವಣೆಯಲ್ಲಿ ನನ್ನನ್ನು ಹೆಚ್ಚಿನ ಬಹುಮತದಿಂದ ಗೆಲ್ಲಿಸಿದ್ದಾರೆ. ಶಿಕ್ಷಕರ ಸಮಸ್ಯೆಗಳ ಬಗ್ಗೆ ಮುಖ್ಯಮಂತ್ರಿಗಳನ್ನು ಭೇಟಿಯಾಗುತ್ತಿದ್ದೇನೆ. ಪ್ರತ್ಯೇಕ ರಾಜ್ಯ ಕೇಳುವುದು ಮೂರ್ಖತನದ ಮಾತು. ಕರ್ನಾಟಕ ಏಕೀಕರಣದಲ್ಲಿ ನಡೆದ ಹೋರಾಟ ನೆನಪಿಸಿಕೊಳ್ಳಲಿ. ಕರ್ನಾಟಕ ಅಖಂಡವಾಗಿಯೇ ಉಳಿಯಬೇಕು ಎಂದರು.

ಬಿಜೆಪಿಯಲ್ಲಿ ಯಾರು ಖಂಡಿಸುತ್ತಾರೋ, ಇಲ್ವೋ ಗೊತ್ತಿಲ್ಲ. ನಾನು ಬಿಜೆಪಿ ಪಕ್ಷದವನಾಗಿ ಹೇಳುತ್ತಿದ್ದೇನೆ, ಉಮೇಶ್ ಕತ್ತಿ ಹೇಳಿಕೆ ಸರಿಯಲ್ಲ. ಏಕೀಕರಣ ಹೋರಾಟದ ಉದ್ದೇಶ ಸಫಲವಾಗಿ ಏಕೀಕರಣ ಉದ್ದೇಶ ಮರೆತು ಮಾತನಾಡುವುದು ಸರಿಯಲ್ಲ. ಉಮೇಶ್ ಕತ್ತಿ 2009ರಲ್ಲಿ ಹೀಗೆಯೇ ಹೇಳಿದ್ದರು. ನನ್ನ ಮಗ ಮುಖ್ಯಮಂತ್ರಿ ಆಗ್ತಾನೆ ಅಂತ ಹೇಳಿದ್ದರು. ಅದನ್ನು ಬಿಟ್ಟು ಪ್ರತ್ಯೇಕ ರಾಜ್ಯದ ಕೂಗು ಸರಿಯಲ್ಲ. ಪ್ರಾದೇಶಿಕ ಅಸಮಾನತೆ ಸರಿಪಡಿಸಲು ಸರ್ಕಾರಕ್ಕೆ ಕೇಳೋಣ, ಅನ್ಯಾಯ ಸರಿಪಡಿಸಲು ಕೇಳೋಣ ಎಂದರು.

ಪಠ್ಯಪುಸ್ತಕ ಪರಿಷ್ಕರಣೆ ವಿಳಂಬ ವಿಚಾರವಾಗಿ ಮಾತನಾಡಿದ ಅವರು, ಪಠ್ಯ ಪರಿಷ್ಕರಣೆ ವಿಚಾರದಲ್ಲಿ ಗೊಂದಲ ಉಂಟಾಗಿ ವಿಳಂಬವಾಗಿದೆ. ಈ ಕುರಿತು ಶಿಕ್ಷಣ ಸಚಿವರ ಜೊತೆ ಮಾತನಾಡುವೆ. ಪಠ್ಯ ವಿಚಾರದಲ್ಲಿ ಸರ್ಕಾರ ದೃಢ ನಿರ್ಧಾರ ತೆಗೆದುಕೊಳ್ಳಬೇಕು. ಪಠ್ಯಪುಸ್ತಕ ಪರಿಷ್ಕರಣ ವಿಚಾರ ಸಮಿತಿಗೆ ಬಿಡಬೇಕು. ಅದರಲ್ಲಿ ಸರ್ಕಾರ ಹಾಗೂ ರಾಜಕಾರಣಿಗಳು ಭಾಗವಹಿಸುವುದು ಸರಿಯಲ್ಲ. ಮಕ್ಕಳ ಶೈಕ್ಷಣಿಕ ಪ್ರಗತಿಗೆ ಹಾನಿಯಾಗಬಾರದು. ಆ ದೃಷ್ಟಿಯಿಂದ ಸರ್ಕಾರ ದೃಢ ನಿರ್ಧಾರ ಕೈಗೊಳ್ಳಬೇಕು ಎಂದು ಸಲಹೆ ಕೊಟ್ಟರು.

ಅಗ್ನಿಪಥ್ ಯುವಕರಿಗೆ ಒಂದು ಉತ್ತಮ ಅವಕಾಶ



ನವದೆಹಲಿ: ಭಾರತದಲ್ಲಿ ಯುವಕರಿಗೆ ಅವಕಾಶಗಳನ್ನು ಒದಗಿಸುವ ಕೇಂದ್ರದ ಅಗ್ನಿಪಥ್ ಯೋಜನೆಯನ್ನು ಇನ್ಫೋಸಿಸ್ ಸಹ-ಸಂಸ್ಥಾಪಕ ಮತ್ತು ಅಧ್ಯಕ್ಷ ನಂದನ್ ನಿಲೇಕಣಿ ಶ್ಲಾಘಿಸಿದ್ದು, ಇದು ಯುವಕರಿಗೆ ಒಂದು ಉತ್ತಮ ಅವಕಾಶ ಎಂದು ಹೇಳಿದ್ದಾರೆ. ಆದರೆ ಅಗ್ನಿವೀರರ ನೇಮಕಾತಿ ವಿಚಾರದಲ್ಲಿ ಇನ್ಫೋಸಿಸ್ ತನ್ನದೇ ಆದ ಆಯ್ಕೆ ಮಾನದಂಡಗಳನ್ನು ಅನುಸರಿಸುತ್ತದೆ ಎಂದು ತಿಳಿಸಿದ್ದಾರೆ.

41ನೇ ವಾರ್ಷಿಕ ಸಾಮಾನ್ಯ ಸಭೆಯಲ್ಲಿ ಮಾತನಾಡಿದ ನಿಲೇಕಣಿ, ಕೇಂದ್ರ ಸರ್ಕಾರ ಪರಿಚಯಿಸಿದ ಅಗ್ನಿವೀರ್ ಯೋಜನೆಯ ಸಾಮರ್ಥ್ಯವನ್ನು ಇನ್ಫೋಸಿಸ್ ಗುರುತಿಸುತ್ತದೆ. ಇದು ಯುವಕರಿಗೆ ಅತ್ಯಂತ ಶಿಸ್ತಿನ ವಾತಾವರಣದಲ್ಲಿ ವೃತ್ತಿಜೀವನ ಪ್ರಾರಂಭಿಸಲು ಉತ್ತಮ ಅವಕಾಶವಾಗಲಿದೆ ಎಂದು ಹೇಳಿದ್ದಾರೆ.

ಭವಿಷ್ಯದ ವೃತ್ತಿಜೀವನಕ್ಕೆ ಕೌಶಲ್ಯಗಳನ್ನು ನಿರ್ಮಿಸಲು ಅಗ್ನಿಪಥ್ ಯೋಜನೆ ಸಹಾಯ ಮಾಡುತ್ತದೆ. ಇನ್ಫೋಸಿಸ್ ಸಹ ಯಾವಾಗಲೂ ಕೌಶಲ್ಯವನ್ನು ವೃದ್ಧಿಸಲು ಬಯಸುತ್ತದೆ ಮತ್ತು ಉದ್ಯೋಗಿಗಳನ್ನು ನೇಮಿಸಿಕೊಳ್ಳುವಾಗ ನಾವು ನಮ್ಮದೇ ಆದ ಸ್ಥಾಪಿತ ನಿಯಮಗಳನ್ನು ಅನುಸರಿಸುತ್ತೇವೆ ಎಂದು ತಿಳಿಸಿದ್ದಾರೆ. ಇನ್ಫೋಸಿಸ್ ಅಗ್ನಿವೀರರನ್ನು ನೇಮಕ ಮಾಡಿಕೊಳ್ಳುತ್ತದೆಯೇ? ಎಂಬ ಷೇರುದಾರರೊಬ್ಬರು ಕೇಳಿದ ಪ್ರಶ್ನೆಗೆ ಪ್ರತಿಕ್ರಿಯಿಸಿದ ನಿಲೇಕಣಿ, ನೇಮಕಾತಿಗೆ ಸಂಬಂಧಿಸಿದಂತೆ ನಮ್ಮದೇ ಆದ ನಿಯಮಾವಳಿಗಳಿವೆ ಎಂದು ಉತ್ತರಿಸಿದ್ದಾರೆ. ಇನ್ಫೋಸಿಸ್ ಜಗತ್ತಿನಾದ್ಯಂತ 3 ಲಕ್ಷಕ್ಕೂ ಹೆಚ್ಚು ಉದ್ಯೋಗಿಗಳನ್ನು ಹೊಂದಿದೆ. ಅದರಲ್ಲಿ ಶೇ.39.6ರಷ್ಟು ಮಹಿಳೆಯರಿದ್ದಾರೆ ಎಂದು ನಿಲೇಕಣಿ ಹೇಳಿದ್ದಾರೆ.



ಮೈಸೂರಿನ ಜೆ.ಪಿ.ನಗರದಲ್ಲಿರುವ ಜೆಎಸ್‌ಎಸ್ ಪದವಿ ಪೂರ್ವ ಕಾಲೇಜಿಗೆ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ.71ರಷ್ಟು ಫಲಿತಾಂಶ ಬಂದಿದ್ದು, ಕಲಾ ವಿಭಾಗದಲ್ಲಿ ಇಬ್ಬರು, ವಾಣಿಜ್ಯ ವಿಭಾಗದಲ್ಲಿ 7 ಮಂದಿ, ವಿಜ್ಞಾನ ವಿಭಾಗದಲ್ಲಿ ಇಬ್ಬರು ಅತ್ಯುನ್ನತ ಶ್ರೇಣಿಯಲ್ಲಿ ತೇರ್ಗಡೆಯಾಗಿದ್ದಾರೆ. ವಿದ್ಯಾರ್ಥಿಗಳನ್ನು ಕಾಲೇಜಿನ ಆಡಳಿತ ಮಂಡಳಿ ಅಭಿನಂದಿಸಿದೆ.

ಒಂದನೇ ಪುಟದಿಂದ

ಶಿಂಧೆ ಸುಪ್ರೀಂ ಮೊರೆ

ತೆಗೆದುಕೊಳ್ಳುವ ಬಗ್ಗೆ ಸಹ ಶಿವಸೇನೆ ಯೋಜಿಸುತ್ತಿದೆ. ಬಂಡಾಯ ನಾಯಕ ಏಕನಾಥ್ ಶಿಂಧೆ, ಗುಲಾಬ್ರಾವ್ ಪಾಟೀಲ್ ಮತ್ತು ದಾದಾ ಭೂಸೆ ಅವರು ತಮ್ಮ ಖಾತೆಗಳನ್ನು ಕಳೆದುಕೊಳ್ಳುವ ಸಾಧ್ಯತೆಯಿದೆ ಎಂದು ಮೂಲಗಳು ತಿಳಿಸಿವೆ. ಅಬ್ದುಲ್ ಸತ್ತಾರ್ ಮತ್ತು ಶಂಬುರಾಜೇ ದೇಸಾಯಿ ಕೂಡ ಕ್ರಮ ಎದುರಿಸುವ ಸಾಧ್ಯತೆ ಇದೆ.

ಮುಖ್ಯಮಂತ್ರಿ ಉದ್ಧವ್ ಠಾಕ್ರೆ ಅವರ ಆಪ್ತರಾಗಿರುವ ಶಿವಸೇನೆಯ ಸಂಜಯ್ ರಾವತ್ ಅವರು ಭಾನುವಾರ ಬಂಡುಕೋರರ ವಿರುದ್ಧ ವಾಗ್ದಾಳಿ ನಡೆಸಿದ್ದು, ಬಾಳಾ ಸಾಹೇಬ್‌ಗೆ ದ್ರೋಹ ಬಗೆದವನು ಕಳೆದುಹೋಗಿದ್ದಾನೆ. ಇನ್ನು ಮುಂದೆ ಯಾರನ್ನು ನಂಬಬೇಕೆಂದು ನಾವು ನಿರ್ಧರಿಸಬೇಕು ಎಂದು ಹೇಳಿದ್ದಾರೆ. ಶಿಂಧೆ ಅವರೊಂದಿಗೆ ಬೀಡುಬಿಟ್ಟಿರುವ ಶಾಸಕರಲ್ಲಿ ಕನಿಷ್ಠ 20 ಶಾಸಕರು ಮುಖ್ಯಮಂತ್ರಿ ಉದ್ಧವ್ ಠಾಕ್ರೆ ಅವರೊಂದಿಗೆ ಸಂಪರ್ಕದಲ್ಲಿದ್ದಾರೆ ಎಂದು ಸೇನಾ ಮೂಲಗಳು ಹೇಳಿವೆ. ಅವರಲ್ಲಿ ಕೆಲವರು ಬಿಜೆಪಿ ವಿಲೀನಕ್ಕೆ ವಿರೋಧ ವ್ಯಕ್ತಪಡಿಸಿದ್ದಾರೆನ್ನಲಾಗಿದೆ.

ಶಾಸಕರಿಗೆ Y+ ಭದ್ರತೆ

ಭದ್ರತೆಯನ್ನು ಹಿಂದಕ್ಕೆ ತೆಗೆದುಕೊಂಡಿದ್ದರು. ಹೀಗಾಗಿ ರೆಬೆಲ್ ಶಾಸಕರ ಭದ್ರತೆ ಆತಂಕಕ್ಕೀಡಾಗಿತ್ತು. ಠಾಕ್ರೆ ಅವರ ಈ ಕ್ರಮ ರಾಜಕೀಯ ವಲಯದಲ್ಲಿ ಭಾರಿ ಚರ್ಚೆಗೆ ಗ್ರಾಸವಾಗಿತ್ತು. ಇದಕ್ಕೆ ತಿರುಗೇಟು ನೀಡಿರುವ ಕೇಂದ್ರ ಸರ್ಕಾರ ಇದೀಗ ಶಿವಸೇನಾದ 15 ಮಂದಿ ಬಂಡಾಯ ಶಾಸಕರಿಗೆ 'Y+' ಶ್ರೇಣಿಯ ಸಿಆರ್‌ಪಿಎಫ್ ಭದ್ರತೆ ಒದಗಿಸಿದೆ. ಮಹಾರಾಷ್ಟ್ರದ ಮಹಾ ವಿಕಾಸ್ ಆಘಾಡಿ (ಎಂವಿಎ) ಸರ್ಕಾರದ ವಿರುದ್ಧ ಬಂಡಾಯ ಸಾರಿರುವ ಏಕನಾಥ ಶಿಂಧೆ ನೇತೃತ್ವದ 40ಕ್ಕೂ ಹೆಚ್ಚು ಶಾಸಕರ ತಂಡ ಗುವಾಹಟಿಯ ರ್‍ಯಾಡಿಸನ್ ಬ್ಲೂ ಹೋಟೆಲ್‌ನಲ್ಲಿ ಬೀಡುಬಿಟ್ಟಿದೆ.

SSLC ಪೂರಕ ಪರೀಕ್ಷೆ

ಕೇಂದ್ರವನ್ನು, ಪರೀಕ್ಷೆಗೆ ಮುನ್ನಾ, ನಂತರ ಸ್ಯಾನಿಟೈಸ್ ಮಾಡುವುದು, ಪರೀಕ್ಷಾ ಕೊಠಡಿಯ ಎಲ್ಲಾ ಪೀಠೋಪಕರಣ ಸ್ಯಾನಿಟೈಸ್ ಮಾಡುವುದು, ದೈಹಿಕ ಅಂತರ ಕಾಪಾಡುವುದು, ಪ್ರತಿ ಕೊಠಡಿಯಲ್ಲಿ ಗರಿಷ್ಠ 20 ವಿದ್ಯಾರ್ಥಿಗಳಿರಬೇಕು. ಒಂದು ಡೆಸ್ಕ್‌ಗೆ ಇಬ್ಬರು ವಿದ್ಯಾರ್ಥಿಯಂತೆ ಆಸನದ ವ್ಯವಸ್ಥೆ ಮಾಡುವುದು. ಕೆಮ್ಮು, ನೆಗಡಿ, ಜ್ವರ ಮೊದಲಾದವುಗಳಿಂದ ಬಳಲುತ್ತಿರೋ, ಲಕ್ಷಣಗಳಿರೋ ವಿದ್ಯಾರ್ಥಿಗಳಿಗೆ ಪರೀಕ್ಷೆ ನಡೆಸಲು ಕನಿಷ್ಠ 2 ಕೊಠಡಿಗಳನ್ನು ವಿಶೇಷ ಕೊಠಡಿಗಳೆಂದು ಕಾಯ್ದಿರಿಸುವುದು, ವಿದ್ಯಾರ್ಥಿಗಳು ಮಾಸ್ಕ್ ಧರಿಸಿ, ಪರೀಕ್ಷೆಗೆ ಹಾಜರಾಗುವಂತೆ ನೋಡಿಕೊಳ್ಳಬೇಕೆಂಬ ಸೂಚನೆ ನೀಡಲಾಗಿದೆ.

ನಾನು ಅವರನ್ನು ಕೇಳೋದೇ ಇಲ್ಲ

ಆರ್‌ಎಸ್‌ಎಸ್ ಟೀಕಿಸಿದರೆ ಸ್ವರ್ಗಕ್ಕೆ ಹೋಗ್ತೀವಿ ಅಂದುಕೊಂಡಿದ್ದಾರೆ. ಮುಸ್ಲಿಮರ ವೋಟು ಬರುತ್ತದೆ ಅಂದುಕೊಂಡಿದ್ದಾರೆ. ನೀವು ಮುಸಲ್ಮಾನರ ವೋಟು ತೆಗೆದುಕೊಳ್ಳಿ, ಬೇಡ ಅನ್ನೋದಿಲ್ಲ. ಆದರೆ ನನಗಂತೂ ಮುಸ್ಲಿಮರ ವೋಟು ಬೇಡ. ಈ ಹಿಂದೆಯೂ ನಾನು ಅವರ ವೋಟು ಕೇಳಿಲ್ಲ, ಕೇಳುವುದೂ ಇಲ್ಲ. ಆದರೂ ಮುಸ್ಲಿಂ ಸಮುದಾಯ ಇರುವ 60 ಬೂತ್‌ಗಳಲ್ಲಿ ನನಗೆ ಮೂರುವರೆ ಸಾವಿರ ವೋಟು ಬಂದಿದೆ ಎಂದು ಬೀಗಿದ್ದಾರೆ. ಆರ್‌ಎಸ್‌ಎಸ್ ಬೈಯ್ಯದಿದ್ದರೆ ಅವರಿಗೆ ತಿಂದ ಅನ್ನ ಜೀರ್ಣವಾಗುವುದಿಲ್ಲ. ಮೊದಲು ಸಿದ್ದರಾಮಯ್ಯ ಆರ್‌ಎಸ್‌ಎಸ್‌ಗೆ ಬೈಯ್ಯುತ್ತಿದ್ದರು. ಈಗ ಕುಮಾರಸ್ವಾಮಿ ಅವರಿಗೂ ಆ ಚಾಳಿ ಬಂದಿದೆ. ಆರ್‌ಎಸ್‌ಎಸ್ ಟೀಕಿಸಿದರೆ ಮುಸ್ಲಿಮರ ವೋಟು ಬರುತ್ತದೆ ಎನ್ನುವುದು ಅವರ ಭಾವನೆ ಎಂದು ಕೆ.ಎಸ್.ಈಶ್ವರಪ್ಪ ಕುಟುಕಿದ್ದಾರೆ.

ಏಳು ಮಂದಿ ಸಾವು

ಈ ದುರ್ಘಟನೆ ಸಂಭವಿಸಿದೆ. ಚಾಲಕನ ನಿಯಂತ್ರಣ ತಪ್ಪಿದ ಕ್ರೂಸರ್ ಪಲ್ಟಿಯಾಗಿ ರಸ್ತೆಯಿಂದ ಸುಮಾರು ಅಡಿಗಳಷ್ಟು ದೂರ ಸಾಗಿ ಬಳ್ಳಾರಿ ನಾಲೆಗೆ ಬಿದಿದ್ದೆ. ಇದರಿಂದಾಗಿ ಏಳು ಜನರು ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ. ಈ ಅಪಘಾತದಲ್ಲಿ ಇನ್ನೂ ಮೂವರು ಸ್ಥಿತಿ ಚಿಂತಾಜನಕವಾಗಿದೆ. ಇವರಿಗೆ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದ್ದು, ಸಾವು ಬದುಕಿನ ನಡುವೆ ಹೋರಾಟ ನಡೆಸಿದ್ದಾರೆ. ಕ್ರೂಸರ್ ಗೋಕಾಕ್ ನಿಂದ ಬೆಳಗಾವಿಗೆ ತೆರಳುತಿತ್ತು. ಮೃತರೆಲ್ಲರೂ ರೈಲ್ವೆ ಇಲಾಖೆಯಲ್ಲಿ ಗುತ್ತಿಗೆದಾರರಾಗಿ ಕೆಲಸ ಮಾಡುತ್ತಿದ್ದರು ಎನ್ನಲಾಗಿದೆ. ಸ್ಥಳದಲ್ಲಿ ಕುಟುಂಬಸ್ಥರ ಆಕ್ರಂದನ ಮುಗಿಲುಮುಟ್ಟಿದೆ. ಸ್ಥಳಕ್ಕೆ ಬೆಳಗಾವಿ ನಗರ ಪೊಲೀಸ್ ಆಯುಕ್ತ ಡಾ.ಬೋರಲಿಂಗಯ್ಯ ಭೇಟಿ ನೀಡಿ ಪರಿಶೀಲಿಸಿದ್ದಾರೆ.

ಒಂದು ಡಯಾಲಿಸಿಸ್ ಶಿಫ್ಟ್ ಜಾರಿ

ಡಯಾಲಿಸಿಸ್ ಮಾಡಿಸಬಹುದಾಗಿದೆ. ತಮಿಳುನಾಡು, ಪುದುಚೇರಿ ಪ್ರವಾಸದಲ್ಲಿದ್ದು, ಚೆನ್ನೈನಲ್ಲಿನ ಸರ್ಕಾರಿ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯಲ್ಲಿ ರೊಬೋಟಿಕ್ ಸರ್ಜರಿ ಯಂತ್ರವನ್ನು ವೀಕ್ಷಿಸಿ ಮಾಹಿತಿ ಪಡೆದರು. ಇದೇ ವೇಳೆ ಅವದಿಯಲ್ಲಿ ಸಿಜಿಹೆಚ್‌ಎಸ್ ವೆಲ್ನೆಸ್ ಕೇಂದ್ರ ಹಾಗೂ ಪ್ರಯೋಗಾಲಯಕ್ಕೆ ಮನ್ಸುಖ್ ಮಾಂಡವೀಯ ಶಂಕುಸ್ಥಾಪನೆ ನೆರವೇರಿಸಿದ್ದಾರೆ.

ವಿಶ್ವ ಪರಿಸರ ಮಾಸಾಚರಣೆ ಅಂಗವಾಗಿ

ಬಿಲ್ಡರ್ಸ್ ಅಸೋಸಿಯೇಷನ್‌ನಿಂದ 'ಗ್ರೀನ್ ಮ್ಯಾರಥಾನ್'

ನೂರಾರು ಮಂದಿಯಿಂದ ಪರಿಸರ ಉಳಿಸುವಂತೆ ಜಾಗೃತಿ



ಮೈಸೂರು, ಜೂ.26 (ಆರ್‌ಕೆಬಿ) – ವಿಶ್ವ ಪರಿಸರ ಮಾಸಾಚರಣೆ ಅಂಗವಾಗಿ ನೂರಾರು ಮಂದಿ ಭಾನುವಾರ ಮೈಸೂರಿನ ವಿವಿಧ ರಸ್ತೆಗಳಲ್ಲಿ ಓಡುವ ಮೂಲಕ ಮೈಸೂರನ್ನು ಹಸಿರುಮಯವಾಡಿ ಪರಿಸರ ಉಳಿಸುವಂತೆ ಸಾರ್ವಜನಿಕರ ಗಮನ ಸೆಳೆದರು.

> "ಮನುಕುಲವನ್ನು ಮತ್ತು ಸುತ್ತಮುತ್ತಲಿನ ಎಲ್ಲಾ ಜೀವಿಗಳನ್ನು ರಕ್ಷಿಸಲು ಪರಿಸರ ಸಂರಕ್ಷಣೆ ಅಗತ್ಯವಾಗಿದೆ. ಇಂತಹ ಸಂದರ್ಭದಲ್ಲಿ ಬಿಲ್ಡರ್ಸ್ ಅಸೋಸಿಯೇಷನ್ ಆಫ್ ಇಂಡಿಯಾ ಮೈಸೂರು ಘಟಕವು ಮೈಸೂರಿನ ಹಸಿರೀಕರಣಕ್ಕೆ ಒತ್ತು ನೀಡಿರುವುದು ಸ್ವಾಗತಾರ್ಹ. ಮೈಸೂರು ವಿಶ್ವ ವಿದ್ಯಾನಿಲಯವೂ ಸಹ ಹಸಿರೀಕರಣಕ್ಕೆ ಒತ್ತು ನೀಡಿದ್ದು, ಪ್ರತೀ ವರ್ಷ 1000 ಗಿಡಗಳನ್ನು ನೆಡುತ್ತಾ ಬಂದಿದೆ.
> - ಪ್ರೊ.ಜಿ.ಹೇಮಂತ್‌ಕುಮಾರ್, ಕುಲಪತಿ, ಮೈಸೂರು ವಿವಿ.

ಮೈಸೂರಿನ ಬಿಲ್ಡರ್ಸ್ ಅಸೋಸಿಯೇಷನ್ ಆಫ್ ಇಂಡಿಯಾ (ಬಿಎಐ), ಬಿಎಐ ಬೈರಿ ಡೆವಲಪರ್ಸ್ ಹಾಗೂ ವಿವಿಧ ಸಂಘಟನೆಗಳು ಸೇರಿ 'ಮೈಸೂರಿನ ಹಸಿರು ಕಾರಿಡಾರ್‌ಗಾಗಿ ನಮ್ಮೊಂದಿಗೆ ಓಡಿ' ಎಂಬ ಘೋಷಣೆಯೊಂದಿಗೆ ಆಯೋಜಿಸಿದ್ದ 'ಗ್ರೀನ್ ಮ್ಯಾರಥಾನ್'ಗೆ ಮೈಸೂರು ವಿವಿ ಕುಲಪತಿ ಪ್ರೊ.ಜಿ.ಹೇಮಂತ್‌ಕುಮಾರ್ ಅವರು ಮಾನಸಗಂಗೋತ್ರಿ ಬಯಲು ರಂಗ ಮಂದಿರದಲ್ಲಿ ಚಾಲನೆ ನೀಡಿದರು.

ಪುರುಷ ಹಾಗೂ ಮಹಿಳೆಯರಿಗಾಗಿ 10 ಕಿ.ಮೀ. ದೂರದ ಮುಕ್ತ ಓಟ, 16 ವರ್ಷದೊಳಗಿನ ಬಾಲಕ–ಬಾಲಕಿಯರಿಗಾಗಿ 5 ಕಿ.ಮೀ. ಉದ್ದದ ಓಟ ಹಾಗೂ ಮುಕ್ತ ಓಟ ಆಯೋಜಿಸಲಾಗಿತ್ತು. ಮೈಸೂರಿನ ಮಾನಸಗಂಗೋತ್ರಿ ಬಯಲು ರಂಗ ಮಂದಿರದಿಂದ ಆರಂಭವಾದ ಗ್ರೀನ್ ಮ್ಯಾರಥಾನ್ ಸೆನೆಟ್ ಭವನ, ಎಸ್‌ಜೆಸಿಇ, ಆಯಿಷ್ ವೃತ್ತ, ಸರ್ಕಾರಿ ಮುದ್ರಣಾಲಯ, ಸರಸ್ವತಿಪುರಂ ಅಗ್ನಿಶಾಮಕ ದಳ, ಏಕಲವ್ಯ ವೃತ್ತ, ಸ್ಕೌಟ್ಸ್ ಅಂಡ್ ಗೈಡ್ಸ್, ಕಲಾ ಮಂದಿರ, ಜಲದರ್ಶಿನಿ, ಕರಾಮುವಿ ಬಳಿಕ ಮತ್ತೆ ಅರಂಭ ಸ್ಥಳಕ್ಕೆ ವಾಪಸಾಯಿತು.

5 ಕಿ.ಮೀ ದೂರದ ಗ್ರೀನ್ ಮ್ಯಾರಥಾನ್ ಬಯಲುರಂಗ ಮಂದಿರದಿಂದ ಸೆನೆಟ್ ಭವನ, ಎಸ್‌ಜೆಸಿಇ, ಆಯಿಷ್ ವೃತ್ತ, ಮೌಲ್ಯ ಭವನದ ಮೂಲಕ ಮತ್ತೆ ಅರಂಭ ಸ್ಥಳಕ್ಕೆ ವಾಪಸಾಯಿತು. ಬಳಿಕ ಎಲ್ಲಾ ಆರು ವಿಭಾಗಗಳ ಮೊದಲ ಮೂವರಿಗೆ ನಗದು ಬಹುಮಾನ, ಮೆಡಲ್, ಪ್ರಮಾಣ ಪತ್ರ ವಿತರಿಸಲಾಯಿತು. ಭಾಗವಹಿಸಿದ ಎಲ್ಲರಿಗೂ ಪ್ರಮಾಣಪತ್ರ ನೀಡಲಾಯಿತು.

ಈ ಸಂದರ್ಭದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಸುರೇಶ್, ಮಿಸ್ ಮೈಸೂರು–2022 ಖ್ಯಾತಿಯ ತನಿಷ್ಕಾ ಮೂರ್ತಿ, ಮೈಸೂರಿನ ಕ್ಲಿಯರ್‌ಮೆಡಿ ರೇಡಿಯಂಟ್ ಆಸ್ಪತ್ರೆಯ ಪ್ರಧಾನ ವ್ಯವಸ್ಥಾಪಕ ನಿರ್ದೇಶಕ ಮಂಜುನಾಥ್, ಸ್ಟಾರ್ಟರ್ನ್ ಜಿಮ್ ಅಂಡ್ ಫಿಟ್‌ನೆಸ್ ವ್ಯವಸ್ಥಾಪಕ ನಿರ್ದೇಶಕ ಶಿವಾನಂದ ಮುಖ್ಯ ಅತಿಥಿಯಾಗಿದ್ದರು.

ಮೈಸೂರಿನ ಬಿಲ್ಡರ್ಸ್ ಅಸೋಸಿಯೇಷನ್ ಆಫ್ ಇಂಡಿಯಾದ ಅಧ್ಯಕ್ಷ ಆರ್.ರಘುನಾಥ್, ಕಾರ್ಯದರ್ಶಿ ವಿಶ್ವನಾಥ್, ವಿಶ್ವ ಪರಿಸರ ಮಾಸಾಚರಣೆ ಅಧ್ಯಕ್ಷ ನಾಗರಾಜ್ ವಿ.ಬೈರಿ, ಕಾರ್ಯದರ್ಶಿ ವೆಂಕಟೇಶ್ ಪ್ರಸಾದ್, ಮೈಸೂರು ಬಿಲ್ಡರ್ಸ್ ಚಾರಿಟಬಲ್ ಟ್ರಸ್ಟ್ ವ್ಯವಸ್ಥಾಪಕ ಟ್ರಸ್ಟಿ ಎ.ವಿ.ಶ್ರೀಧರ್, ಕಾರ್ಯದರ್ಶಿ ಎಂ.ಎಸ್.ರಾಮ್‌ಪ್ರಸಾದ್, ಬಿಎಐ ಪದಾಧಿಕಾರಿ ಬಿ.ಎಸ್.ದಿನೇಶ್ ಇನ್ನಿತರರು ಉಪಸ್ಥಿತರಿದ್ದರು.

ವಿಜೇತರು: 10 ಕಿ.ಮೀ ಮುಕ್ತ (ಪುರುಷರ ವಿಭಾಗ); ಶಿವಾಜಿ– ಪ್ರಥಮ (30 ನಿ. 33 ಸೆಕೆಂಡ್), ದುಶ್ಯಂತ್– ದ್ವಿತೀಯ (30 ನಿ.58 ಸೆ.) ನಿತಿನ್– ತೃತೀಯ (31.50 ನಿ.)

10 ಕಿ.ಮೀ. ಮುಕ್ತ (ಮಹಿಳೆಯರ ವಿಭಾಗ): ಕೆ.ಎಂ. ಅರ್ಚನಾ– ಪ್ರಥಮ (43 ನಿಮಿಷ 91 ಸೆಕೆಂಡ್), ನಾಗಶ್ರೀ– ದ್ವಿತೀಯ (45 ನಿ.), ಮೀರಾ– ತೃತೀಯ (55.30 ನಿ.).

5 ಕಿ.ಮೀ ಮುಕ್ತ (ಪುರುಷರ ವಿಭಾಗ): ರಾಹುಲ್ ಶುಕ್ಲ– ಪ್ರಥಮ (15.01 ಸೆ.), ವೈಭವ್– ದ್ವಿತೀಯ (15.18 ನಿ), ರಾಹುಲ್– ತೃತೀಯ (15.19 ನಿ.).


5 ಕಿ.ಮೀ. ಮುಕ್ತ (ಮಹಿಳೆಯರ ವಿಭಾಗ): ಆರ್.ಉಷಾ– ಪ್ರಥಮ (19.56 ನಿ), ರಿಯಾ ಅಚ್ಚಯ್ಯ– ದ್ವಿತೀಯ (23 ನಿ), ಎಂ.ಎಸ್.ಸರೋಜಾ– ತೃತೀಯ (27 ನಿ.)

5 ಕಿ.ಮೀ. 16 ವರ್ಷದೊಳಗಿನ ಬಾಲಕರ ವಿಭಾಗ: ಆರ್.ಅನಿರುದ್ಧ್ – ಪ್ರಥಮ (19.12 ನಿ.), ಕೆ.ನಿತಿನ್– ದ್ವಿತೀಯ ((19.38 ನಿ.), ತರುಣ್ ಗೌಡ– ತೃತೀಯ (20.02 ನಿ.)

5 ಕಿ.ಮೀ. 16 ವರ್ಷದೊಳಗಿನ ಬಾಲಕಿಯರ ವಿಭಾಗ: ಹೆಚ್.ಆರ್.ಹರಿಪ್ರಿಯಾ– ಪ್ರಥಮ (33.13 ನಿ), ಪ್ರೇರಣಾ ತಮ್ಮಯ್ಯ– ದ್ವಿತೀಯ (29.52 ನಿ), ನಿರಾರಿಕಾ– ತೃತೀಯ (40.27 ನಿ.).

ಹೆಣ್ಣುಮಕ್ಕಳು ಕರಾಟೆ ಕಲಿಯುವ ಅವಶ್ಯಕತೆ ಇದೆ

ಮೈಸೂರು ವಿವಿ ಕುಲಪತಿ ಪ್ರೊ॥ ಜಿ.ಹೇಮಂತ್‌ಕುಮಾರ್



ಮೈಸೂರು,ಜೂ.26(ಎಂಟಿವೈ)– ವಿಶ್ವ ಕರಾಟೆ ದಿನದ ಅಂಗವಾಗಿ ಮೈಸೂರು ವಿಶ್ವವಿದ್ಯಾನಿಲಯದ ಪೆವಿಲಿಯನ್ ಮೈದಾನದಲ್ಲಿ ಭಾನುವಾರ ನಡೆದ ಕರಾಟೆ ಪ್ರದರ್ಶನದಲ್ಲಿ ನೂರಾರು ಕರಾಟೆ ಪಟುಗಳು ಸಾಮೂಹಿಕ ಕರಾಟೆ ಪ್ರದರ್ಶನ ನೀಡಿ ಗಮನ ಸೆಳೆದರು.

ಮೈಸೂರು ಕರಾಟೆ ಸಂಸ್ಥೆ, ಮೈಸೂರು ವಿಶ್ವವಿದ್ಯಾನಿಲಯದ ದೈಹಿಕ ಶಿಕ್ಷಣ ಸಂಸ್ಥೆ ಸೇರಿದಂತೆ ವಿವಿಧ ಕರಾಟೆ ಸಂಸ್ಥೆಯ ಸಂಯುಕ್ತಾಶ್ರಯದಲ್ಲಿ ನಡೆದ 'ವಿಶ್ವ ಕರಾಟೆ ದಿನ'ದ ಕಾರ್ಯಕ್ರಮವನ್ನು ಮೈಸೂರು ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ.ಜಿ.ಹೇಮಂತ್‌ಕುಮಾರ್ ಉದ್ಘಾಟಿಸಿದರು. ಬಳಿಕ ಮಾತನಾಡಿದ ಅವರು, 'ಸ್ವಯಂ ರಕ್ಷಣೆಗಾಗಿ ಕರಾಟೆ' ಎಂಬ ಘೋಷಣೆಯೊಂದಿಗೆ ಆಚರಿಸುತ್ತಿರುವುದು ಕರಾಟೆಯ ಮಹತ್ವವನ್ನು ಸಾರುತ್ತದೆ. ಆತ್ಮ ರಕ್ಷಣಾ ಕಲೆಯಾಗಿರುವ ಕರಾಟೆ ಕಲಿಯುವುದು ಅನಿವಾರ್ಯವಾಗಿದೆ. ಅದರಲ್ಲೂ ಹೆಣ್ಣು ಮಕ್ಕಳು ಕರಾಟೆ ಕಲೆಯನ್ನು ಕರಗತ ಮಾಡಿಕೊಳ್ಳುವ ಅಗತ್ಯವಿದೆ ಎಂದರು.

ಆತ್ಮ ರಕ್ಷಣೆಗೆ ಕರಾಟೆ ಕಲೆ ಬಹು ಮುಖ್ಯ ಪಾತ್ರ ವಹಿಸುತ್ತದೆ. ಕರಾಟೆ ಕಲಿಯುವ ವೇಳೆ ಪಟುಗಳಿಗೆ ಆತ್ಮಸ್ಥೈರ್ಯ ಹೆಚ್ಚಿಸುವುದರೊಂದಿಗೆ ಪರಿಸ್ಥಿತಿಯನ್ನು ನಿಭಾಯಿಸುವ ಚಾಣಾಕ್ಷತನವೂ ಕಲಿಸುವುದರಿಂದ ಸೂಕ್ಷ್ಮ ಹಾಗೂ ಅಪಾಯದ ಸಂದರ್ಭದಲ್ಲಿ ಕರಾಟೆ ಕಲಿತಿದ್ದವರು ಸುರಕ್ಷಿತವಾಗಿ ಪಾರಾಗಿ ಬರಲು ಸಾಧ್ಯವಾಗಲಿದೆ. ಈ ಹಿನ್ನೆಲೆಯಲ್ಲಿ ಎಲ್ಲರೂ ತಮ್ಮ ಮಕ್ಕಳಿಗೆ ಕರಾಟೆ ಕಲಿಸುವುದಕ್ಕೆ ಮುಂದಾಗಬೇಕು. ಅಲ್ಲದೆ, ಇತ್ತೀಚಿನ ದಿನಗಳಲ್ಲಿ ಕರಾಟೆಗೆ ಹೆಚ್ಚಿನ ಬೇಡಿಕೆ ವ್ಯಕ್ತವಾಗುತ್ತಿರುವುದನ್ನು ಗಮನಿಸಿದರೆ ಕರಾಟೆ ಮಹತ್ವ ಅರಿಯಬಹುದಾಗಿದೆ ಎಂದು ಅಭಿಪ್ರಾಯಪಟ್ಟರು.

ಕರಾಟೆ ಪ್ರದರ್ಶನ: ವಿಶ್ವ ಕರಾಟೆ ದಿನದ ಅಂಗವಾಗಿ ಆಯೋಜಿಸಿದ್ದ ಕರಾಟೆ ಪ್ರದರ್ಶನದಲ್ಲಿ ವಿವಿಧ ಕರಾಟೆ ಶಾಲೆಗಳ 500ಕ್ಕೂ ಹೆಚ್ಚು ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು. ಕರಾಟೆಯ ವಿವಿಧ ಭಂಗಿಗಳನ್ನು ಪ್ರದರ್ಶಿಸಿ ಕರಾಟೆ ಹಾಗೂ ಅಪಾಯದ ಸಂದರ್ಭದಲ್ಲಿ ಪ್ರಯೋಗಿಸಬೇಕಾದ ಕರಾಟೆ ಭಂಗಿಯನ್ನು ಪ್ರದರ್ಶಿಸಿ ಗಮನ ಸೆಳೆದರು. ಅಲ್ಲದೆ, ಸಂಗೀತಕ್ಕೆ ಅನುಗುಣವಾಗಿ ಕರಾಟೆ ಪ್ರದರ್ಶನ ನೀಡಿದರು.

ಈ ಸಂದರ್ಭದಲ್ಲಿ ಮೈಸೂರು ಕರಾಟೆ ಸಂಸ್ಥೆಯ ಸಂಘದ ಗೌರವಾಧ್ಯಕ್ಷ ಅರುಣ್ ಮಾಚಯ್ಯ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್.ಚೇತನ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಕೆ.ಸುರೇಶ್, ಮೈಸೂರು ವಿವಿಯ ದೈಹಿಕ ಶಿಕ್ಷಣ ವಿಭಾಗದ ನಿರ್ದೇಶಕ ಸಿ.ಕೃಷ್ಣಯ್ಯ, ಮೈಸೂರು ಕರಾಟೆ ಸಂಸ್ಥೆ ಪ್ರಧಾನ ಕಾರ್ಯದರ್ಶಿ ಸೋಸಲೆ ಸಿದ್ಧರಾಜು, ಪದಾಧಿಕಾರಿಗಳಾದ ಶಿವದಾಸ್, ಸುನಿಲ್‌ಕುಮಾರ್, ಮಹದೇವಸ್ವಾಮಿ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಕಾಮನ್‌ವೆಲ್ತ್ ಕರಾಟೆಗೆ ಅರುಣ್ ಮಾಚಯ್ಯ ಆಯ್ಕೆ



ಮೈಸೂರು,ಜೂ.26(ಎಂಟಿವೈ)– ವಿಧಾನ ಪರಿಷತ್ ಮಾಜಿ ಸದಸ್ಯ, ಮೈಸೂರು ಕರಾಟೆ ಸಂಸ್ಥೆಯ ಗೌರವಾಧ್ಯಕ್ಷ ಹಾಗೂ ಕರಾಟೆ ಇಂಡಿಯಾ ಸಂಸ್ಥೆಯ ಹಿರಿಯ ಉಪಾಧ್ಯಕ್ಷರೂ ಆಗಿರುವ ಅರುಣ್ ಮಾಚಯ್ಯ ಸೆ.26ರಿಂದ ಇಂಗ್ಲೆಂಡ್‌ನಲ್ಲಿ ಆರಂಭವಾಗಲಿರುವ ಕಾಮನ್‌ವೆಲ್ತ್ ಕರಾಟೆ ಚಾಂಪಿಯನ್ ಶಿಪ್ ಪಂದ್ಯಾವಳಿಯಲ್ಲಿ ಭಾರತವನ್ನು ಪ್ರತಿನಿಧಿಸಲಿದ್ದಾರೆ.

ಇಂಗ್ಲೆಂಡ್‌ನ ನಡೆಯಲಿರುವ ಕಾಮನ್‌ವೆಲ್ತ್ ಕರಾಟೆ ಚಾಂಪಿಯನ್ ಶಿಪ್ ಭಾರತವನ್ನು ಪ್ರತಿನಿಧಿಸುವ ಅವಕಾಶ ಗಿಟ್ಟಿಸಿಕೊಂಡಿರುವ ಅರುಣ್ ಮಾಚಯ್ಯ ಅವರು ನಾಡಿನ ಕೀರ್ತಿಯನ್ನು ಇಮ್ಮಡಿಗೊಳಿಸಲಿದ್ದಾರೆ ಎಂದ ವಿಶ್ವಾಸ ಕರಾಟೆ ಸಂಸ್ಥೆಯದ್ದಾಗಿದೆ. ಮಹಾರಾಷ್ಟ್ರದ ಪುಣೆಯಲ್ಲಿ ಇತ್ತೀಚೆಗೆ ನಡೆದ ನ್ಯಾಷನಲ್ ಕರಾಟೆ ಚಾಂಪಿಯನ್ ಶಿಪ್ ಪಂದ್ಯಾವಳಿಯಲ್ಲಿ ಅರುಣ್ ಮಾಚಯ್ಯ ಅವರನ್ನು ಸನ್ಮಾನಿಸಲಾಗಿದೆ.

5.47 ಲಕ್ಷ ಮೌಲ್ಯದ ಮಾದಕ ವಸ್ತು ನಾಶಪಡಿಸಿದ ಪೊಲೀಸರು



ಮೈಸೂರು, ಜೂ.26(ಎಂಟಿವೈ)– ಅಂತರರಾಷ್ಟ್ರೀಯ ಮಾದಕ ದ್ರವ್ಯ ವಿರೋಧಿ ದಿನದ ಹಿನ್ನೆಲೆಯಲ್ಲಿ ಮೈಸೂರು ಪೊಲೀಸರು ವಿವಿಧ ಪ್ರಕರಣಗಳಲ್ಲಿ ಈ ಹಿಂದೆ ವಶಪಡಿಸಿಕೊಂಡಿದ್ದ 5,47,590 ರೂ. ಮೌಲ್ಯದ ಗಾಂಜಾ ಮತ್ತು ಮಾದಕ ವಸ್ತುಗಳನ್ನು ನಿಯಮಾನುಸಾರ, ಪರಿಸರದ ಮೇಲೆ ಹಾನಿಯಾಗದಂತೆ ಕಟ್ಟೆಚ್ಚರ ವಹಿಸಿ ದಹಿಸುವ ಮೂಲಕ ನಾಶಪಡಿಸಿದರು.

ಕಳೆದ ಕೆಲವು ವರ್ಷಗಳಿಂದ ವಶಪಡಿಸಿಕೊಳ್ಳಲಾಗಿದ್ದ 23 ಕೆಜಿ 211 ಗ್ರಾಂ ತೂಕದ ಗಾಂಜಾ ಹಾಗೂ 5 ಗ್ರಾಂ 67 ಮಿಲಿಗ್ರಾಂ ಎಂ.ಡಿ.ಎಂ.ಎ ಮಾದಕ ದ್ರವ್ಯವನ್ನು ನಾಶಪಡಿಸಲಾಯಿತು. ಇವುಗಳ ಒಟ್ಟು ಮೌಲ್ಯ 5,47,590 ರೂ. ಎಂದು ಅಂದಾಜಿಸಲಾಗಿದ್ದು, ಡಿಸಿಪಿ ಹಾಗೂ ಪೊಲೀಸ್ ಇಲಾಖೆಯ 'ಡ್ರಗ್ ಡಿಸ್ಪೋಸಲ್ ಕಮಿಟಿ'ಯ ಅಧ್ಯಕ್ಷರೂ ಆಗಿರುವ ಡಿಸಿಪಿ ಎಂ.ಎಸ್.ಗೀತ ಅವರ ನೇತೃತ್ವದಲ್ಲಿ ಮಾದಕ ವಸ್ತುಗಳನ್ನು ನಾಶಪಡಿಸಲಾಯಿತು.

ಮೈಸೂರು ತಾಲೂಕಿನ ಜಯಪುರ ಹೋಬಳಿಯ ಗುಜ್ಜೇಗೌಡನಪುರ ಗ್ರಾಮದದಲ್ಲಿರುವ ಜಿಐಪಿಎಸ್ ಬಯೋಟೆಕ್ ಪ್ಲಾಂಟ್‌ನಲ್ಲಿ ಪರಿಸರ ಮಾಲಿನ್ಯವಾಗದಂತೆ ಪಂಚಾಯ್ತಿದಾರರ ಸಮಕ್ಷಮ ಮಹಜರ್ ಮಾಡಿ, ಇನ್ಸಿನೇಟರ್ ಯಂತ್ರದಲ್ಲಿ ಸುಟ್ಟು ನಾಶಪಡಿಸಲಾಯಿತು. ಈ ಸಂದರ್ಭದಲ್ಲಿ ಡ್ರಗ್ ಡಿಸ್ಪೋಸಲ್ ಕಮಿಟಿಯ ಸದಸ್ಯರುಗಳಾದ ಸಿಸಿಬಿ ಎಸಿಪಿ ಅಶ್ವಥ್ ನಾರಾಯಣ, ಸಿಸಿಆರ್‌ಬಿ ಇನ್ಸ್‌ಪೆಕ್ಟರ್ ಮೊಹಮ್ಮದ್ ಇರ್ಷಾದ್ ಹಾಗೂ ಸಿಬ್ಬಂದಿಗಳು ಪಾಲ್ಗೊಂಡಿದ್ದರು.

ಕುಡಿದು ಕಾರು ಚಾಲನೆ ಮಾಡಿ ನಾಲ್ಕು ಬೈಕ್‌ಗಳಿಗೆ ಡಿಕ್ಕಿ

ಚೇಸ್ ಮಾಡಿ ಕಾರು ಚಾಲಕನ ಹಿಡಿದ ಸಾರ್ವಜನಿಕರು: ವೀಡಿಯೋ ವೈರಲ್

ಮೈಸೂರು,ಜೂ.26(ಎಂಟಿವೈ)– ಕುಡಿದ ಅಮಲಿನಲ್ಲಿ ಕಾರು ಚಾಲನೆ ಮಾಡಿ ನಾಲ್ಕು ಬೈಕ್‌ಗಳಿಗೆ ಡಿಕ್ಕಿ ಹೊಡೆದು ಪರಾರಿಯಾಗುತ್ತಿದ್ದ ಕಾರೊಂದನ್ನು ಸಾರ್ವಜನಿಕರು ಸಿನಿಮೀಯ ಶೈಲಿಯಲ್ಲಿ ಹಿಂಭಾಲಿಸಿ ಹಿಡಿದಿರುವ ಘಟನೆ ಮೈಸೂರಿನ ರಿಂಗ್ ರಸ್ತೆಯ ಬೋಗಾದಿ ರಸ್ತೆಯ ಜಂಕ್ಷನ್‌ನಲ್ಲಿ ನಡೆದಿದ್ದು, ಕಾರ್ ಚೇಸ್ ಮಾಡುತ್ತಿರುವ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

ಶನಿವಾರ ಸಂಜೆ ಕಂಠಪೂರ್ತಿ ಕುಡಿದಿದ್ದ ಯುವಕನೊಬ್ಬ ಬೋಗಾದಿ ರಿಂಗ್ ರಸ್ತೆಯಲ್ಲಿ ಕಾರು ಚಾಲನೆ ಮಾಡಿಕೊಂಡು ದಟ್ಟಗಳ್ಳಿ ಕಡೆಗೆ ಹೋಗುತ್ತಿದ್ದಾಗ ಬೈಕ್‌ಗೆ ಡಿಕ್ಕಿ ಹೊಡೆದು ಕಾರನ್ನು ನಿಲ್ಲಿಸದೆ ವೇಗವಾಗಿ ಚಾಲನೆ ಮಾಡಿಕೊಂಡು ಪರಾರಿಯಾಗಲು ಯತ್ನಿಸಿದ್ದಾನೆ. ಇದನ್ನು ಗಮನಿಸಿದ ಯುವಕನೊಬ್ಬ ಕಾರನ್ನು ಚೇಸ್ ಮಾಡುತ್ತ ಸಾಗಿ ಕಾರನ್ನು ನಿಲ್ಲಿಸುವಂತೆ ಸೂಚಿಸಿದ್ದಾನೆ. ಆದರೆ ಅಮಲಿನಲ್ಲಿದ್ದ ಚಾಲಕ ಮತ್ತೆ ಕಾರನ್ನು ಮುಂದಕ್ಕೆ ಚಾಲನೆ ಮಾಡಲು ಮುಂದಾದಾಗ ಮತ್ತೆ ಎರಡು ಬೈಕ್‌ಗೆ ಡಿಕ್ಕಿ ಹೊಡೆದಿದ್ದಾನೆ.

ನಂತರ ಜನರಿಂದ ತಪ್ಪಿಸಿಕೊಳ್ಳಲು ರಿಂಗ್ ರಸ್ತೆಯಲ್ಲಿ ಯು ಟರ್ನ್ ತೆಗೆದುಕೊಂಡು ಮತ್ತೆ ಬೋಗಾದಿ ರಸ್ತೆ ಜಂಕ್ಷನ್ ಕಡೆ ಬಂದಿದ್ದಾನೆ. ಈ ವೇಳೆ ಸಿಗ್ನಲ್‌ಗಾಗಿ ಕಾಯುತ್ತಿದ್ದ 15ಕ್ಕೂ ಹೆಚ್ಚು ವಾಹನಗಳಿಗೆ ಡಿಕ್ಕಿ ಹೊಡೆಯುವುದನ್ನು ತಪ್ಪಿಸಲು ಸರ್ವಿಸ್ ರಸ್ತೆಗೆ ಕಾರನ್ನು ತಿರುಗಿಸಿ, ಅಡ್ಡ ರಸ್ತೆಗೆ ನುಗ್ಗಿ ಪರಾರಿಯಾಗಲು ಯತ್ನಿಸಿದಾಗ ಮತ್ತೊಂದು ಬೈಕ್‌ಗೆ ಡಿಕ್ಕಿ ಹೊಡೆದಿದ್ದಾನೆ. ಈ ವೇಳೆ ಅಲ್ಲಿಯೇ ಇದ್ದ ಕೆಲವರು ಕಾರನ್ನು ತಡೆದು ನಿಲ್ಲಿಸಿ, ಕೀ ಕಿತ್ತುಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ. ಈ ಮೊದಲು ಕಾರು ಡಿಕ್ಕಿ ಹೊಡೆದು ಸಣ್ಣ ಪುಟ್ಟ ಗಾಯಗೊಂಡಿದ್ದ ಸವಾರರು ಸ್ಥಳಕ್ಕೆ ಬಂದು ಕುಡಿದ ಮತ್ತಿನಲ್ಲಿದ್ದ ಕಾರಿನ ಚಾಲಕನಿಗೆ ಥಳಿಸಿದ್ದಾರೆ. ಕಾರು ಚಾಲಕನ ಅವಾಂತರ ನಡೆದಿದ್ದರೂ ಯಾವುದೇ ಪ್ರಕರಣ ದಾಖಲಾಗದೇ ಇರುವುದಕ್ಕೆ ಸಾರ್ವಜನಿಕರು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಅಲ್ಲದೆ, ಪಾನಮತ್ತ ಯುವಕ ಕಾರನ್ನು ಚಲಾಯಿಸಿ ಬೈಕ್‌ಗೆ ಡಿಕ್ಕಿ ಹೊಡೆದ ಲೈವ್ ವಿಡಿಯೋ ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಮಾಡಿ, ಕಿಡಿಕಾರಿದ್ದಾರೆ.


ವಂತಿಕೆ ಹಣ ಪಾವತಿಸುವಂತೆ ಸೂಚನೆ

ಮೈಸೂರು, ಜೂ.26– ಮೈಸೂರು ಮಹಾನಗರಪಾಲಿಕೆ ವತಿಯಿಂದ ಕೃಷ್ಣರಾಜ ವಿಧಾನಸಭಾ ಕ್ಷೇತ್ರದ ಆಶ್ರಯ ವಸತಿ ಯೋಜನೆಯಡಿ ಲಲಿತಾದ್ರಿಪುರ ಮತ್ತು ಗೊರೂರು ಬಡಾವಣೆಯ ಗುಂಪು ಮನೆಗೆ ಸಂಬಂಧಿಸಿದಂತೆ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು. ಅದರಂತೆ ಆಯ್ಕೆಗೊಂಡಿರುವ ಫಲಾನುಭವಿಗಳಿಗೆ ವಂತಿಕೆ ಹಣ ಪಾವತಿಸುವಂತೆ ತಾತ್ಕಾಲಿಕ ತಿಳುವಳಿಕೆ ಪತ್ರವನ್ನು ಮೈಸೂರು ಮಹಾನಗರ ಪಾಲಿಕೆಯ ಆಶ್ರಯ ವಿಭಾಗದಿಂದ ಅಂಚೆ ಮುಖಾಂತರ ರವಾನಿಸಲಾಗಿದೆ. ಫಲಾನುಭವಿಗಳು 2022ರ ಜೂನ್ 30ರೊಳಗಾಗಿ ಪಾಲಿಕೆ ಕಚೇರಿಗೆ ನಿಗದಿಪಡಿಸಿರುವ ದಾಖಲಾತಿಗಳೊಂದಿಗೆ ಮೊದಲನೇ ಕಂತಿನ ಹಣವನ್ನು ಪಾವತಿಸಬೇಕೆಂದು ಮೈಸೂರು ಮಹಾನಗರ ಪಾಲಿಕೆಯ ಆಶ್ರಯ ವಿಭಾಗದ ಹೆಚ್ಚುವರಿ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮೈಸೂರು ಸಿಟಿ ಕ್ರೈಂ ಬ್ರಾಂಚ್ ಪೊಲೀಸರಿಂದ

ಮೂವರು ಅಂತರ ಜಿಲ್ಲಾ ಕಳ್ಳರ ಬಂಧನ

15 ಲಕ್ಷ ರೂ. ಮೌಲ್ಯದ ಚಿನ್ನಾಭರಣ, ದ್ವಿಚಕ್ರ ವಾಹನಗಳ ವಶ



ಮೈಸೂರು, ಜೂ.26(ಎಂಟಿವೈ)– ಮೈಸೂರಿನ ಸಿಸಿಬಿ ಪೊಲೀಸರು ಮೂವರು ಅಂತರಜಿಲ್ಲಾ ಕಳ್ಳರನ್ನು ಬಂಧಿಸಿ 15 ಲಕ್ಷ ರೂ. ಮೌಲ್ಯದ 280 ಗ್ರಾಂ ಚಿನ್ನಾಭರಣ, ಮೂರು ದ್ವಿಚಕ್ರ ವಾಹನ ವಶಪಡಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ.

ಬಂಧಿತ ಮೂವರು ಕಳ್ಳರು ಮೈಸೂರು, ಬೆಂಗಳೂರು ಹಾಗೂ ಹಾಸನ ಜಿಲ್ಲೆಯಲ್ಲಿ ಮೂರು ಸರಗಳ್ಳತನ, ಎರಡು ಮನೆಗಳ್ಳತನ, ಎರಡು ದ್ವಿಚಕ್ರ ವಾಹನ ಕಳ್ಳತನ ಹಾಗೂ ಒಂದು ಮನೆಯಲ್ಲಿ ಕಳ್ಳತನ ಮಾಡಿರುವುದು ಪತ್ತೆಯಾಗಿದೆ. ಈ ಮೂವರು ಪ್ರಕರಣವೊಂದರ ಸಂಬಂಧ ಜೈಲಿನಲ್ಲಿದ್ದ ಸಂದರ್ಭದಲ್ಲಿ ಪರಸ್ಪರ ಪರಿಚಯವಾಗಿದ್ದು, ಜೈಲಿನಿಂದ ಬಿಡುಗಡೆಯಾದ ನಂತರ ಮತ್ತೆ ಕಳ್ಳತನ ಮಾಡಲಾರಂಭಿಸಿದ್ದರು ಎಂದು ವಿಚಾರಣೆ ವೇಳೆ ತಿಳಿದುಬಂದಿದೆ.

ಬಾತ್ಮೀದಾರರು ನೀಡಿದ ಖಚಿತ ಮಾಹಿತಿ ಮೇರೆಗೆ ಸಿಸಿಬಿ ಪೊಲೀಸರು ಜೂ.14ರಂದು ಮೈಸೂರಿನ ಬನ್ನಿಮಂಟಪದ ಎಲ್‌ಐಸಿ ಕಚೇರಿ ಬಳಿ ಇಬ್ಬರು ಆರೋಪಿಗಳನ್ನು ವಶಕ್ಕೆ ಪಡೆದು ಅವರು ನೀಡಿದ ಸುಳಿವಿನ ಮೇರೆಗೆ ಮರು ದಿನ (ಜೂ.15) ಮತ್ತೋರ್ವ ಆರೋಪಿಯನ್ನು ಮಂಡ್ಯ ರೈಲ್ವೆ ನಿಲ್ದಾಣದಲ್ಲಿ ವಶಕ್ಕೆ ಪಡೆದು ವಿಚಾರಣೆ ನಡೆಸಿದಾಗ ಸರಗಳ್ಳತನ, ಮನೆಗಳ್ಳತನ ಹಾಗೂ ದ್ವಿಚಕ್ರ ವಾಹನ ಕಳ್ಳತನ ನಡೆಸಿರುವುದಾಗಿ ತಪ್ಪೊಪ್ಪಿಕೊಂಡಿದ್ದಾರೆ. ಬಳಿಕ ಮೂವರನ್ನು ಅಧಿಕೃತವಾಗಿ ಬಂಧಿಸಿ, ನ್ಯಾಯಾಲಯದ ಮುಂದೆ ಹಾಜರುಪಡಿಸಿ ಹೆಚ್ಚಿನ ವಿಚಾರಣೆಗಾಗಿ ತಮ್ಮ ವಶಕ್ಕೆ ಪಡೆದು ವಿಚಾರಣೆ ನಡೆಸಿ ಪೂರ್ಣ ಪ್ರಕರಣ ಬಯಲಿಗೆಳೆದಿದ್ದಾರೆ.

ಬಂಧಿತ ಆರೋಪಿಗಳಿಂದ 15 ಲಕ್ಷ ರೂ. ಮೌಲ್ಯದ 280 ಗ್ರಾಂ ಚಿನ್ನಾಭರಣ, 20 ಗ್ರಾಂ ಬೆಳ್ಳಿ ಕಾಯಿನ್ ಕಳುವು ಮಾಡಿದ್ದ ಎರಡು ದ್ವಿಚಕ್ರ ವಾಹನ, ಸರಗಳ್ಳತನಕ್ಕೆ ಬಳಸುತ್ತಿದ್ದ ಒಂದು ದ್ವಿಚಕ್ರ ವಾಹನವನ್ನು ವಶಪಡಿಸಿಕೊಂಡಿದ್ದಾರೆ. ಈ ಮೂವರ ಕಳ್ಳರ ಬಂಧನದಿಂದ ಮೈಸೂರು ನಗರದ ಸರಸ್ವತಿಪುರಂ ಠಾಣಾ ವ್ಯಾಪ್ತಿಯಲ್ಲಿನ ಒಂದು ಸರಗಳ್ಳತನ, ಕುವೆಂಪುನಗರ ಹಾಗೂ ವಿಜಯನಗರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ತಲಾ ಒಂದು ಸರಗಳ್ಳತನ ಪ್ರಕರಣ, ಜಯಲಕ್ಷ್ಮೀಪುರಂ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದ ಒಂದು ದ್ವಿಚಕ್ರ ವಾಹನ ಕಳ್ಳತನ ಪ್ರಕರಣ, ಬೆಂಗಳೂರು ಸುಬ್ರಮಣ್ಯಪುರಂ ಪೊಲೀಸ್ ಠಾಣೆಯಲ್ಲಿ ಒಂದು ದ್ವಿಚಕ್ರ ವಾಹನ ಕಳ್ಳತನ, ಹಾಸನ ಜಿಲ್ಲೆಯ ಪೆನ್ಷನ್ ಮೊಹಲ್ಲಾ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದ್ದ ಒಂದು ಮನೆ ಕನ್ನ ಕಳುವು ಪ್ರಕರಣಗಳು ಪತ್ತೆಯಾಗಿವೆ ಎಂದು ಪೊಲೀಸರು ತಿಳಿಸಿದ್ದಾರೆ.

ಬಂಧಿತರಲ್ಲಿ ಒಂದನೇ ಆರೋಪಿ ಈ ಹಿಂದೆ 10 ಪ್ರಕರಣಗಳಲ್ಲಿ, 2ನೇ ಆರೋಪಿಯು 2 ಪ್ರಕರಣಗಳಲ್ಲಿ ಹಾಗೂ 3ನೇ ಆರೋಪಿಯು 1 ಸ್ವತ್ತು ಕಳುವು ಪ್ರಕರಣಗಳಲ್ಲಿ ಭಾಗಿಯಾಗಿದ್ದಾನೆ. ಒಂದನೇ ಆರೋಪಿಯು ಮೈಸೂರಿನ ಲಕ್ಷ್ಮೀಪುರಂ ಪೊಲೀಸ್ ಠಾಣೆಯ ಕನ್ನ ಕಳುವು ಪ್ರಕರಣದಲ್ಲಿ ಇತ್ತೀಚೆಗೆ ಸಿಸಿಬಿ ಪೊಲೀಸರು ಬಂಧಿಸಿದ್ದರು.

ಡಿಸಿಪಿ ಎಂ.ಎಸ್.ಗೀತ ಅವರ ಮಾರ್ಗದರ್ಶನದಲ್ಲಿ ಸಿಸಿಬಿ ಎಸಿಪಿ ಸಿ.ಕೆ.ಅಶ್ವಥ್‌ನಾರಾಯಣ ಅವರ ನೇತೃತ್ವದಲ್ಲಿ ನಡೆದ ಕಾರ್ಯಾಚರಣೆಯಲ್ಲಿ ಸಿಸಿಬಿ ಘಟಕದ ಹೆಚ್ ಅಂಡ್ ಬಿ ವಿಭಾಗದ ಇನ್ಸ್‌ಪೆಕ್ಟರ್ ಜಿ.ಶೇಖರ್ ಹಾಗೂ ಸಿಬ್ಬಂದಿಗಳು ಪಾಲ್ಗೊಂಡಿದ್ದರು. ಈ ಪತ್ತೆ ಕಾರ್ಯಕ್ಕೆ ಮೈಸೂರು ನಗರದ ಪೊಲೀಸ್ ಆಯುಕ್ತ ಡಾ. ಚಂದ್ರಗುಪ್ತ ಪ್ರಶಂಸೆ ವ್ಯಕ್ತಪಡಿಸಿದ್ದಾರೆ.


ಎಸ್‌ಎಸ್‌ಎಲ್‌ಸಿ ಪೂರಕ ಪರೀಕ್ಷಾ ಕೇಂದ್ರದ ಸುತ್ತ ನಿಷೇಧಾಜ್ಞೆ ಜಾರಿ

ಮೈಸೂರು, ಜೂ.26– ಮೈಸೂರು ನಗರದ 7 ಪರೀಕ್ಷಾ ಕೇಂದ್ರಗಳಲ್ಲಿ 2021–22 ಸಾಲಿನ ಎಸ್‌ಎಸ್‌ಎಲ್‌ಸಿ ಪೂರಕ ಪರೀಕ್ಷೆಗಳು ಜೂ.27ರಿಂದ ಜು.4 ರವರೆಗೆ ಬೆಳಗ್ಗೆ 6 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ನಡೆಯಲಿದ್ದು, ಪರೀಕ್ಷೆಗಳನ್ನು ಸುಸೂತ್ರವಾಗಿ ನಡೆಸುವ ಉದ್ದೇಶದಿಂದ ಹಾಗೂ ಪರೀಕ್ಷಾ ಕೇಂದ್ರದ ವ್ಯಾಪ್ತಿಯಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ತಡೆಯಲು ಸೂಕ್ತ ಬಂದೋಬಸ್ತ್ ವ್ಯವಸ್ಥೆ ಹಾಗೂ ಪರೀಕ್ಷಾ ಕೇಂದ್ರದ 200 ಮೀಟರ್ ವ್ಯಾಪ್ತಿ ಪ್ರದೇಶದ ಸುತ್ತಲೂ ನಿಷೇಧಾಜ್ಞೆಯನ್ನು ಜಾರಿಗೊಳಿಸಲಾಗಿದೆ.

ಪರೀಕ್ಷಾ ಕೇಂದ್ರದ ಹೆಸರು ಮತ್ತು ಠಾಣಾ ವ್ಯಾಪ್ತಿ ವಿಭಜಿತ ಮಹಾರಾಜ ಸರ್ಕಾರಿ ಪದವಿ ಪೂರ್ವ ಕಾಲೇಜು ನಜರ್‌ಬಾದ್, ಸರ್ಕಾರಿ ಮಹಿಳಾ ಪದವಿ ಪೂರ್ವ ಕಾಲೇಜು, ಪೀಪಲ್ ಪಾರ್ಕ್ ನಜರ್‌ಬಾದ್, ಸರ್ಕಾರಿ ಉರ್ದು ಮಾಧ್ಯಮ ಪ್ರೌಢಶಾಲೆ ಲಷ್ಕರ್ ಮೊಹಲ್ಲಾ, ಕೆ.ಪಿ.ಎಸ್ ಕುವೆಂಪುನಗರ ಜ್ಞಾನಗಂಗಾ ವಿದ್ಯಾಪೀಠ ಕುವೆಂಪುನಗರ, ಮಹಾರಾಜ ಸರ್ಕಾರಿ ಪದವಿ ಪೂರ್ವ ಕಾಲೇಜು ಲಕ್ಷ್ಮೀಪುರಂ, ಚೈತ್ರಾ ಪ್ರೌಢಶಾಲೆ, ಶಿವಪುರ, ಕುವೆಂಪುನಗರ ಈ ಪ್ರದೇಶಗಳಲ್ಲಿ ಪರೀಕ್ಷಾರ್ಥಿಗಳು ಹಾಗೂ ಪರೀಕ್ಷಾ ಸಿಬ್ಬಂದಿಗಳನ್ನು ಹೊರತುಪಡಿಸಿ ಅನಧಿಕೃತ ವ್ಯಕ್ತಿಗಳು ಸಂಚರಿಸಬಾರದು ಮತ್ತು ಯಾರು ಆಕ್ಷೇಪಾರ್ಹ ವಸ್ತುಗಳನ್ನು ಒಯ್ಯಬಾರದು, ಪರೀಕ್ಷಾ ಕೇಂದ್ರಗಳ ಸುತ್ತಮುತ್ತಲಿರುವ ಜೆರಾಕ್ಸ್ ಅಂಗಡಿಗಳನ್ನು ಪರೀಕ್ಷಾ ಅವಧಿಯಲ್ಲಿ ಮುಚ್ಚುವಂತೆ ಆದೇಶಿಸಲಾಗಿದೆ ಎಂದು ನಗರ ಪೊಲೀಸ್ ಆಯುಕ್ತ ಡಾ.ಚಂದ್ರಗುಪ್ತ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮುಂದಿನ ಚುನಾವಣೆಗೆ ಈಗಿನಿಂದಲೇ ತಯಾರಿ ನಡೆಸಿದ ಸಿಎಂ ಬೊಮ್ಮಾಯಿ

ಮೋದಿ ಭೇಟಿ ಬೆನ್ನಲ್ಲೇ ಸಿಎಂ ಫುಲ್ ಅಲರ್ಟ್



ಹುಬ್ಬಳ್ಳಿ: ಮುಂದಿನ ವರ್ಷದ ವಿಧಾನಸಭಾ ಚುನಾವಣೆಗೆ ಬಿಜೆಪಿ ಈಗಿನಿಂದಲೇ ಭರ್ಜರಿ ತಯಾರಿ ನಡೆಸಿದೆ. ಮೊನ್ನೆ ಪ್ರಧಾನಿ ಮೋದಿ ರಾಜ್ಯಕ್ಕೆ ಭೇಟಿ ಕೊಟ್ಟ ಹಿನ್ನೆಲೆಯಲ್ಲಿ ಬೊಮ್ಮಾಯಿ ಸರ್ಕಾರ ಫುಲ್ ಆಕ್ಟೀವ್ ಆಗಿದೆ.

ಆಮೆಗತಿಯಲ್ಲಿ ಸಾಗಿದ್ದ ಮತ್ತು ನೆನೆಗುದಿಗೆ ಬಿದ್ದಿದ್ದ ವಿವಿಧ ಕಾಮಗಾರಿಗಳಿಗೆ ವೇಗವನ್ನು ನೀಡುತ್ತಿದೆ. ಉತ್ತರ ಕರ್ನಾಟಕದ ಮೇಲೆ ಕಣ್ಣು ಹಾಯಿಸಿರುವ ಸಿಎಂ, ಅಂಜನಾದ್ರಿ ಬೆಟ್ಟದ ಅಭಿವೃದ್ಧಿಗೆ ವೇಗ ನೀಡಿದ ಬೆನ್ನಲ್ಲೇ, ಹುಬ್ಬಳ್ಳಿಯ ಸ್ಮಾರ್ಟ್ ಸಿಟಿ ಕಾಮಗಾರಿಗಳತ್ತ ಗಮನ ಹರಿಸಿದ್ದು, ಈ ನಿಟ್ಟಿನಲ್ಲಿ ಕೋಟಿ ಕೋಟಿ ವೆಚ್ಚದ ಅಭಿವೃದ್ಧಿ ಕಾಮಗಾರಿಗಳನ್ನು ಲೋಕಾರ್ಪಣೆಗೊಳಿಸಿದ್ದಾರೆ.

ಹಾವೇರಿಯಲ್ಲಿ ಸಿಎಂ ಮನೆ ಇದ್ದರೂ, ಅದ್ಯಾಕೋ ಏನೋ ಹುಬ್ಬಳ್ಳಿ ಸ್ಮಾರ್ಟ್ ಸಿಟಿ ಯೋಜನೆಗಳು ಆಮೆಗತಿಯಲ್ಲಿ ಸಾಗಿದ್ದವು. ವಾರಕ್ಕೊಮ್ಮೆ ಹುಬ್ಬಳ್ಳಿಗೆ ಸಿಎಂ ಬೊಮ್ಮಾಯಿ ಭೇಟಿ ನೀಡುತ್ತಿದ್ದರೂ, ಮದುವೆ, ನಾಮಕರಣ, ವಾಣಿಜ್ಯ ಮಳಿಗೆಗಳ ಉದ್ಘಾಟನೆಗೆ ಭೇಟಿ ಸೀಮಿತವಾಗುತ್ತಿತ್ತು. ಆದರೆ ಇದೀಗ ಹುಬ್ಬಳ್ಳಿ ಸ್ಮಾರ್ಟ್ ಸಿಟಿ ಕಾಮಗಾರಿಗಳ ವಿಚಾರದಲ್ಲಿ ಫುಲ್ ಅಲರ್ಟ್ ಆಗಿರುವ ಸಿಎಂ, ಪಕ್ಷದ ಭೇದವನ್ನು ಮರೆತು ಕಾಮಗಾರಿಗಳಿಗೆ ವೇಗ ನೀಡಿದ್ದಾರೆ. ಜೊತೆಗೆ ಪೂರ್ಣಗೊಂಡಿರುವ ಕೆಲಸಗಳಿಗೆ ಉದ್ಘಾಟನಾ ಭಾಗ್ಯವನ್ನು ಸಹ ಕರುಣಿಸಿದ್ದಾರೆ. ನಗರದಲ್ಲಿ ಸ್ಮಾರ್ಟ್ ಸಿಟಿ ಯೋಜನೆಯಡಿ ನಿರ್ಮಾಣಗೊಂಡಿರುವ 2.8 ಕೋಟಿ ವೆಚ್ಚದ ವಿದ್ಯುತ್ ಚಿತಾಗಾರ, 31.40 ಕೋಟಿ ವೆಚ್ಚದ ರಸ್ತೆ ಮತ್ತು ಬೀದಿ ದೀಪ, 1,050 ಮನೆಗಳಿಗೆ ವಿದ್ಯುತ್ ಸಂಪರ್ಕ ಸೇರಿದಂತೆ ವಿವಿಧ ಕಾಮಗಾರಿ ಲೋಕಾರ್ಪಣೆಗೊಳಿಸಿದರು. ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ, ಜಿಲ್ಲಾ ಉಸ್ತುವಾರಿ ಸಚಿವ ಹಾಲಪ್ಪ ಆಚಾರ್, ನಗರಾಭಿವೃದ್ಧಿ ಸಚಿವ ಭೈರತಿ ಬಸವರಾಜ ಸಹ ಭಾಗಿಯಾಗಿದ್ದರು.

ಇಂದು ಪೌರಕಾರ್ಮಿಕರ ಮುಖಂಡರೊಂದಿಗೆ ಸಭೆ

ಮೈಸೂರು, ಜೂ.26–ಕರ್ನಾಟಕ ರಾಜ್ಯ ನಗರ ಪಾಲಿಕೆ, ಪುರಸಭೆ, ನಗರಸಭೆ ಪೌರಕಾರ್ಮಿಕರ ಮಹಾಸಂಘ ಹಾಗೂ ರಾಜ್ಯದ ವಿವಿಧ ಸಫಾಯಿ ಸಂಘಟನೆಗಳ ವಿವಿಧ ಬೇಡಿಕೆಗಳ ಬಗ್ಗೆ ಚರ್ಚಿಸಲು ಜೂ.27ರ ಬೆಳಗ್ಗೆ 11 ಗಂಟೆಗೆ ಬೆಂಗಳೂರಿನ ಗೃಹ ಕಚೇರಿ 'ಕೃಷ್ಣಾ'ದಲ್ಲಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರ ಸೂಚನೆ ಮೇರೆಗೆ ಪೌರಕಾರ್ಮಿಕ ಮುಖಂಡರ ಸಭೆ ಕರೆಯಲಾಗಿದೆ. ಈ ಸಭೆಗೆ ರಾಜ್ಯ ಪೌರಕಾರ್ಮಿಕರ ಮಹಾಸಂಘ ಹಾಗೂ ವಿವಿಧ ಸಫಾಯಿ ಕರ್ಮಚಾರಿಗಳ ಸಂಘದ ಗರಿಷ್ಠ 10 ಜನ ಪ್ರಮುಖ ಪದಾಧಿಕಾರಿಗಳೊಂದಿಗೆ ಭಾಗವಹಿಸುವಂತೆ ಮುಖ್ಯಮಂತ್ರಿಗಳ ಪ್ರಧಾನ ಕಾರ್ಯದರ್ಶಿ ಎನ್.ಮಂಜುನಾಥ ಪ್ರಸಾದ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮುರ್ಮು ಆಯ್ಕೆ: ಜ್ಯೋತಿ ರೇಚಣ್ಣ ಸಂತಸ

ಮೈಸೂರು,ಜೂ.26–ಬುಡಕಟ್ಟು ಜನಾಂಗದ ದ್ರೌಪದಿ ಮುರ್ಮು ಅವರನ್ನು ದೇಶದ ಅತ್ಯುನ್ನತ ಸ್ಥಾನವಾದ ರಾಷ್ಟ್ರಪತಿ ಹುದ್ದೆಗೆ ಅಭ್ಯರ್ಥಿಯನ್ನಾಗಿ ಆಯ್ಕೆ ಮಾಡುವ ಮೂಲಕ ಕಟ್ಟಕಡೆಯ ವ್ಯಕ್ತಿಯನ್ನು ಕೂಡ ನಮ್ಮ ಪಕ್ಷ ಗುರುತಿಸುತ್ತದೆ ಎನ್ನುವುದಕ್ಕೆ ಇದು ಅತ್ಯುತ್ತಮ ಉದಾಹರಣೆಯಾಗಿದೆ ಎಂದು ಮೃಗಾಲಯ ಪ್ರಾಧಿಕಾರ ಸದಸ್ಯರಾದ ಜ್ಯೋತಿ ರೇಚಣ್ಣ ಹೇಳಿದರು. ಪತ್ರಿಕೆ ಹೇಳಿಕೆ ನೀಡಿರುವ ಅವರು, ಪ್ರಧಾನಿ ಮೋದಿಯವರು ಓಡಿಸಾ ರಾಜ್ಯದ ಬುಡಕಟ್ಟು ಮಹಿಳೆ ದ್ರೌಪದಿ ಮುರ್ಮು ಅವರನ್ನು ರಾಷ್ಟ್ರಪತಿ ಅಭ್ಯರ್ಥಿಯನ್ನಾಗಿ ಆಯ್ಕೆ ಮಾಡುವ ಮೂಲಕ ನಮ್ಮ ಪಕ್ಷದ ಘೋಷವಾಕ್ಯ ಸಬ್ ಕಾ ಸಾತ್ ಸಬ್ ಕಾ ವಿಕಾಸ್ ಎನ್ನುವುದನ್ನು ಈ ಮೂಲಕ ಸಾಬೀತುಪಡಿಸಿದ್ದಾರೆ. ದ್ರೌಪದಿ ಮುರ್ಮು ಅವರು ಕೌನ್ಸಿಲರ್ ಆಗಿ, ಶಾಸಕರಾಗಿ, ಸಚಿವರಾಗಿ, ರಾಜ್ಯಪಾಲರಾಗಿ ಅನುಭವಿಗಳವರು, ಅವರು ರಾಷ್ಟ್ರಪತಿ ಅಭ್ಯರ್ಥಿಗಳಾಗಿ ಆಯ್ಕೆಯಾಗಿರುವುದು ಸಂತಸ ಎಂದು ಹೇಳಿದರು.

2023ಕ್ಕೆ ಕಾಂಗ್ರೆಸ್‌ಗೆ ರಾಜ್ಯದ ಜನತೆ ಬೆಂಬಲ: ಅನಿಲ್

ಸರಗೂರು, ಜೂ.26(ನಾಗೇಶ್)– 2023ಕ್ಕೆ ರಾಜ್ಯದ ಜನತೆ ಕಾಂಗ್ರೆಸ್ ಬೆಂಬಲಿಸಲಿದ್ದಾರೆ ಎಂದು ಶಾಸಕ ಅನಿಲ್ ಚಿಕ್ಕಮಾದು ವಿಶ್ವಾಸ ವ್ಯಕ್ತಪಡಿಸಿದರು.

ತಾಲೂಕಿನ ಬೆಣ್ಣೆಗೆರೆ, ನಂಜೀಪುರ, ದಡದಹಳ್ಳಿ, ಕಟ್ಟೆಹುಣಸೂರು ಗ್ರಾಮಗಳಲ್ಲಿ ಸರಗೂರು ಕಬಿನಿ ನಾಲಾ ಉಪವಿಭಾಗದಿಂದ ಗ್ರಾಮದ ಪರಿಮಿತಿಯಲ್ಲಿ ಸಿಸಿ ರಸ್ತೆ ಚರಂಡಿ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಮುಳ್ಳೂರು ಜಿಪಂ ಕ್ಷೇತ್ರದ ಮಕ್ಕಳು ಶೈಕ್ಷಣಿಕವಾಗಿ ಮುಂಚೂಣಿಯಲ್ಲಿದ್ದಾರೆ. ಆದರೆ, ಶಿಕ್ಷಣ ಪಡೆಯಲು ದೂರದ ಸರಗೂರು, ನಂಜನಗೂಡಿಗೆ ಹೋಗಬೇಕಾದ ಪರಿಸ್ಥಿತಿಯಿದೆ. ಮುಂದಿನ ದಿನಗಳಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದರೆ ಪದವಿ ಪೂರ್ವ ಕಾಲೇಜು ಮಂಜೂರು ಮಾಡಿಸಿ ಕೊಡಲಾಗುವುದು ಎಂದು ಹೇಳಿದರು.



ಶಾಸಕನಾಗಿ 4 ವರ್ಷಗಳು ಪೂರ್ಣವಾಗಿದ್ದು, 600ಕೋಟಿ ರೂ. ಅನುದಾನ ತಂದು ತಾಲೂಕಿನ ಅಭಿವೃದ್ಧಿಗೆ ಶ್ರಮಿಸುತ್ತಿದ್ದೇನೆ. ಆ ಮೂಲಕ ಮಾದರಿ ತಾಲೂಕು ಮಾಡುವ ಗುರಿ ಹೊಂದಿದ್ದೇನೆ. ನಾನು ಎಂದಿಗೂ ರಾಜಕಾರಣ ಮಾಡಿಲ್ಲ ಮಾಡುವುದಕ್ಕೂ ಬರೋದಿಲ್ಲ. ಜನ ಸೇವೆ ಮಾಡಲು ಬಂದಿದ್ದೇನೆ. ಮುಂದಿನ ಬಾರಿ ಅವಕಾಶ ನೀಡುವ ಮೂಲಕ ಮತ್ತಷ್ಟು ಜನ ಸೇವೆ ಮಾಡಲು ಅನುಕೂಲ ಮಾಡಿಕೊಡಬೇಕು ಎಂದು ಮನವಿ ಮಾಡಿದರು.

ದಡದಹಳ್ಳಿ ಅಭಿವೃದ್ಧಿಗೆ ಶಾಸಕರ ಅನುದಾನದಲ್ಲಿಯೂ ಸಾಕಷ್ಟು ಅನುದಾನ ನೀಡಲಾಗಿದ್ದು, ಮುಂದಿನ ದಿನಗಳ ಮತ್ತಷ್ಟು ಅಭಿವೃದ್ಧಿ ಕೆಲಸ ಮಾಡುತ್ತೇನೆ. ಜೊತೆಗೆ ಗ್ರಾಮದ ಹತ್ತಾರು ಸಮಸ್ಯೆ ಸ್ಪಂದಿಸುವ ಕೆಲಸ ಮಾಡಿದ್ದೇನೆ ಎಂದ ಅವರು, ತಾಲೂಕು ವಿಸ್ತೀರ್ಣ, ಜನಸಂಖ್ಯೆಗೆ ಅನುಗುಣವಾಗಿ ಅನುದಾನಗಳು ಬಂದರೆ ತಾಲೂಕು ಅಭಿವೃದ್ಧಿಯಾಗಲಿದೆ ಎಂದರು.

ಹಲಸೂರು ಗ್ರಾಮದ ಹಿರಿಯ ಮುಖಂಡರಾದ ಶಂಭುಲಿಂಗನಾಯಕ, ಗ್ರಾಮ ಪಂಚಾಯಿತಿ ಸದಸ್ಯ ಚಿನ್ನಸ್ವಾಮಿ ಮಾತನಾಡಿ, ಬಸ್ ಸಮಸ್ಯೆ, ಸಾಗುವಳಿ ಪತ್ರ ನೀಡುವ ಬಗ್ಗೆ ಶಾಸಕರ ಗಮನಕ್ಕೆ ತಂದರು. ಇದಕ್ಕೆ ಶಾಸಕರು ಬಸ್ ಡಿಪೋ ಅಧಿಕಾರಿಗಳಿಗೆ ಕರೆ ಮಾಡಿ, ಬಸ್ ಸೌಲಭ್ಯ ಕಲ್ಪಿಸುವಂತೆ ಸೂಚಿಸಿದರು.

ಈ ವೇಳೆ ಮುಳ್ಳೂರು ಗ್ರಾಪಂ ಅಧ್ಯಕ್ಷ ಗೋವಿಂದಚಾರ್, ಕಲ್ಲಂಬಾಳು ಗ್ರಾಪಂ ಅಧ್ಯಕ್ಷೆ ರೇಖಾ ನೀಲಕಂಠ, ಕಾಂಗ್ರೆಸ್ ಮುಖಂಡರಾದ ದಡದಹಳ್ಳಿ ಚಿನ್ನಸ್ವಾಮಿ, ಕುಂದೂರು ಮೂರ್ತಿ, ಮಹೇಶ್, ಮೂರ್ತಿ, ಎಇ ಉಷಾ, ಎಇಇ ಮಧುಕುಮಾರ್, ಮುಳ್ಳೂರು ಗ್ರಾಪಂ ಸದಸ್ಯರಾದ ಜಯಮ್ಮ, ಸೌಭಾಗ್ಯ ಶಿವಚೆನ್ನಪ್ಪ, ತೆರಣಿಮುಂಟಿ ಗಿರೀಶ್, ಪುಟ್ಟಸ್ವಾಮಿ, ಮುಳ್ಳೂರು ಮಂಜು, ಸಿದ್ದರಾಜು, ಸಿಟಿಜನ್ ನಾಗರಾಜು, ಪಿಡಿಓ ಹನುಮಯ್ಯ, ಲೋಕೇಶ್, ಬೆಟ್ಟೇಗೌಡ, ಶಿವರಾಜಪ್ಪ, ಮಹದೇವಸ್ವಾಮಿ, ಸುಬ್ರಹ್ಮಣ್ಯ ಸೇರಿದಂತೆ ಸುತ್ತಮುತ್ತಲ ಗ್ರಾಮಸ್ಥರು ಹಾಜರಿದ್ದರು.

ಪುರ ಗ್ರಾಮದ ಹಾಲು ಉತ್ಪಾದಕರ ಮಹಿಳಾ ಒಕ್ಕೂಟದ ಪದಾಧಿಕಾರಿಗಳು ಆಯ್ಕೆ



ಹಂಪಾಪುರ, ಜೂ.26(ರಾಜೇಶ್)– ಹೆಚ್.ಡಿ.ಕೋಟೆ ತಾಲೂಕು ಹಂಪಾಪುರ ಹೋಬಳಿಯ ಪುರ ಗ್ರಾಮದ ಹಾಲು ಉತ್ಪಾದಕರ ಮಹಿಳಾ ಒಕ್ಕೂಟದ ಪದಾಧಿಕಾರಿಗಳ ಆಯ್ಕೆ ನಡೆಯಿತು.

ಅಧ್ಯಕ್ಷರಾಗಿ ಮಹದೇವಮ್ಮ ಮಿಲ್ ಮಹದೇವಪ್ಪ ಉಪಾಧ್ಯಕ್ಷರಾಗಿ ಮಲ್ಲಿಗಮ್ಮ ಸಿದ್ದರಾಮಪ್ಪ ನಿರ್ದೇಶಕರಾಗಿ ಸೌಭಾಗ್ಯ, ಪಿ.ಕೆ.ಶಿವರಾಜು, ಆಶಾ ಸಿದ್ದರಾಜು, ಡಿ.ಬಿ.ರಾಜಮ್ಮ, ಪಿ.ಪಿ.ನಾಗರಾಜು, ಲೋಕಮಣಿ ಮಲ್ಲೇಶ್, ಸುಂದ್ರಮ್ಮ, ಪಿ.ಎಲ್.ಬಸವರಾಜು, ರತ್ನಮ್ಮ ದೇವಣ್ಣ, ಮಹದೇವಮ್ಮ ದೇವಣ್ಣ ಆಯ್ಕೆಯಾದರು. ಈ ವೇಳೆ ನಾಮ ನಿರ್ದೇಶಕಿ ಶೀಲಾ ಮಹದೇವಪ್ಪ, ಜಿಲ್ಲಾ ಒಕ್ಕೂಟದ ನಿರ್ದೇಶಕ ಕೆ.ಈರೇಗೌಡ, ದಾಕ್ಷಾಯಿಣಿ, ಬಸವರಾಜಪ್ಪ, ಗ್ರಾಪಂ ಸದಸ್ಯೆ ಸೌಭಾಗ್ಯ ಸಿದ್ದರಾಜು, ವೃಷಬೇಂದ್ರ, ಪಿ.ಕೆ.ಶಿವರಾಜು, ಮುಖಂಡರಾದ ಗೌಡಿಕೆ ಶಿವರುದ್ರಪ್ಪ, ಪಿ.ಆರ್.ಸಿದ್ದರಾಮಪ್ಪ, ಮುದ್ದುರಾಮಪ್ಪ, ಮಿಲ್ ಮಹದೇವಪ್ಪ, ರುದ್ರಸ್ವಾಮಿ, ಪಿ.ಬಿ.ಸಿದ್ದಪ್ಪ, ಬಿ.ಬಸವರಾಜು, ಲಿಂಗರಾಜು, ಕಾರ್ಯದರ್ಶಿ ಡಿ.ವಸಂತ್, ಹಾಲು ಪರೀಕ್ಷಕಿ ರೇಣುಕಾ, ಸಹಾಯಕ ಅಭಿಷೇಕ್ ಇದ್ದರು.

ಹೆಚ್.ಡಿ.ಕೋಟೆ ತಾಲೂಕಿನ ಕಬಿನಿ ಹಿನ್ನೀರಿನಲ್ಲಿ ಸ್ವಚ್ಛತಾ ಕಾರ್ಯಕ್ರಮ

ಹಿನ್ನೀರಿನ ಸುಂದರ ಪರಿಸರ ಹಾಳು ಮಾಡದಂತೆ ಮನವಿ

ಹೆಚ್.ಡಿ.ಕೋಟೆ, ಜೂ.26(ಮಂಜು)– ತಾಲೂಕಿನ ಕಬಿನಿ ಹಿನ್ನೀರಿನ ದಡದಲ್ಲಿ ಭಾನುವಾರ ಅರಣ್ಯ ಇಲಾಖೆ ಡಿಆರ್‌ಎಫ್‌ಓ ಚಂದನ್, ಬೀಚನಹಳ್ಳಿ ಗ್ರಾಪಂ ಸದಸ್ಯ ಭಾಸ್ಕರ್ ನೇತೃತ್ವದಲ್ಲಿ ಸ್ವಚ್ಛತಾ ಕಾರ್ಯ ನಡೆಯಿತು.

ಕಬಿನಿ ಜಲಾಶಯಕ್ಕೆ ಪ್ರವಾಸಿಗರು ಬರುವಾಗ ಜೊತೆಯಲ್ಲಿ ಮದ್ಯ, ತಿಂಡಿ, ತಿನಿಸು ತಂದು ಜಲಾಶಯದ ಹಿನ್ನೀರಿನಲ್ಲಿ ಮೋಜು ಮಸ್ತಿ ಮಾಡಿ ನಂತರ ಅಲ್ಲೇ ಬಿಸಾಡಿದ ಪ್ಲಾಸ್ಟಿಕ್ ಬಾಟಲ್, ಪೇಪರ್, ಖಾಲಿ ಬಾಟಲ್‌ಗಳನ್ನು ತೆರವುಗೊಳಿಸಲಾಯಿತು.

ಈ ವೇಳೆ ಡಿಆರ್‌ಎಫ್‌ಓ ಚಂದನ್ ಮಾತನಾಡಿ, ತಾಲೂಕಿನ ಹೆಸರಾಂತ ಕಬಿನಿ ಜಲಾಶಯದ ಹಿನ್ನೀರಿನಲ್ಲಿ ಪ್ರವಾಸಿಗರು ಮದ್ಯದ ಬಾಟಲು, ಪ್ಲಾಸ್ಟಿಕ್ ತ್ಯಾಜ್ಯಗಳನ್ನು ಎಲ್ಲೆಂದರಲ್ಲಿ ಬಿಸಾಡುತ್ತಿದ್ದಾರೆ. ಎಲ್ಲರ ಸಮ್ಮುಖದಲ್ಲಿ ಕಬಿನಿ ಹಿನ್ನೀರಿನ ನದಿ ಪಾತ್ರದಲ್ಲಿ ಸಂಗ್ರಹಿಸಿದ ತ್ಯಾಜ್ಯವನ್ನು ಹೆಚ್.ಡಿ.ಕೋಟೆ ಪಟ್ಟಣದ ಪುರಸಭಾ ತ್ಯಾಜ್ಯ ಘಟಕಕ್ಕೆ ರವಾನಿಸಲಾಯಿತು ಎಂದು ತಿಳಿಸಿದರು.



ಬೀಚನಹಳ್ಳಿ ಗ್ರಾಪಂ ಸದಸ್ಯ ಭಾಸ್ಕರ್ ಮಾತನಾಡಿ, ಕಬಿನಿ ಹಿನ್ನೀರಿಗೆ ಬರುವಂತ ಪ್ರವಾಸಿಗರು ಇಲ್ಲಿಯ ಸೌಂದರ್ಯಗಳನ್ನು ಸವಿಯಬೇಕು ಹೊರತು, ಸುಂದರವಾದ ಪರಿಸರವನ್ನು ಹಾಳು ಮಾಡಬಾರದು. ಅದೇ ರೀತಿ ಜಲಾಶಯಕ್ಕೆ ಬರುವಂತ ಪ್ರವಾಸಿಗರು ಕಬಿನಿ ಹಿನ್ನೀರಿನಲ್ಲಿ ಸ್ವಚ್ಛತೆಯನ್ನು ಕಾಪಾಡಬೇಕು ಎಂದು ಮನವಿ ಮಾಡಿದರು.

ಅಂತರಸಂತೆ ಸಬ್‌ಇನ್ಸ್‌ಪೆಕ್ಟರ್ ಜಯಪ್ರಕಾಶ್ ಮಾತನಾಡಿ, ಕಬಿನಿ ಜಲಾಶಯಕ್ಕೆ ಬರುವ ಪ್ರವಾಸಿಗರಿಗೆ ಅರಿವು ಮೂಡಿಸುವ ಉದ್ದೇಶದಿಂದ ಇಲಾಖೆಯಿಂದ ನಾಮ ಫಲಕ ಅಳವಡಿಸಲು ಹಾಗೂ ಕಬಿನಿ ಹಿನ್ನೀರಿನಲ್ಲಿ ಸಿಬ್ಬಂದಿ ಗಸ್ತು ತಿರುಗಲು ಕ್ರಮವಹಿಸಲಾಗುವುದು ಎಂದು ತಿಳಿಸಿದರು. ಈ ಸಂದರ್ಭದಲ್ಲಿ ರಾಜ್ಯ ಭೋವಿ ನಿಗಮದ ಮಾಜಿ ಅಧ್ಯಕ್ಷ ಜೀವಿ ಸೀತಾರಾಮ್, ಕಬಿನಿ ನೀರಾವರಿ ಇಲಾಖೆ ಎಇಇ ಜನಾರ್ಧನ್, ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರಾಂಶುಪಾಲ ಪರಮೇಶ್ವರ್, ಉಪನ್ಯಾಸಕಿ ಸ್ನೇಹ, ರವಿಕುಮಾರ್, ಕುಮಾರ್, ಚಿಕ್ಕಣ್ಣ, ಪದ್ಮ ಸರ್ಕಾರಿ ಪ್ರೌಢಶಾಲೆ ಮುಖ್ಯ ಶಿಕ್ಷಕ ನಾಗಣ್ಣ, ರಮೇಶ್, ಕೈಗಾರಿಕಾ ಭದ್ರತಾ ಸರ್ಕಲ್ ಇನ್ಸ್‌ಪೆಕ್ಟರ್ ಶಿವಲಿಂಗ, ಶಾಲಾ ಮಕ್ಕಳು ಹಾಗೂ ಅರಣ್ಯ ಇಲಾಖೆ ಸಿಬ್ಬಂದಿ ವರ್ಗ ಸೇರಿದಂತೆ ಇತರರು ಹಾಜರಿದ್ದರು.

ಬಂಧನದ ಭೀತಿಯಿಂದ ಆತ್ಮಹತ್ಯೆಗೆ ಯತ್ನಿಸಿದ್ದ ಕೊಲೆ ಆರೋಪಿ

● ಹುಲ್ಲಹಳ್ಳಿ ಠಾಣಾ ವ್ಯಾಪ್ತಿಯಲ್ಲಿ ಘಟನೆ ● ಚಿಕಿತ್ಸೆ ನಂತರ ಆರೋಪಿ ಬಂಧನ

ನಂಜನಗೂಡು, ಜೂ.26(ಸುದರ್ಶನ್/ಚನ್ನಪ್ಪ)– ಕೊಲೆ ಆರೋಪಿಯೊಬ್ಬ ಬಂಧನದ ಭೀತಿಯಿಂದ ಕ್ರಿಮಿನಾಶಕ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ ಘಟನೆ ನಂಜನಗೂಡಿನ ಹುಲ್ಲಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ.

ಹುಲ್ಲಹಳ್ಳಿ ಗ್ರಾಮದ ನಿವಾಸಿ ಮಹದೇವಸ್ವಾಮಿ ಅಲಿಯಾಸ್ ಜೀಪ್ ಕುಳ್ಳ ಆರೋಪಿಯಾಗಿದ್ದು, ಚಿಕಿತ್ಸೆ ನಂತರ ಈತನನ್ನು ಪೊಲೀಸರು ಬಂಧಿಸಿದ್ದಾರೆ.

ಏನಿದು ಘಟನೆ: ಮಹದೇವಸ್ವಾಮಿ ಅಲಿಯಾಸ್ ಜೀಪ್ ಕುಳ್ಳ ಕಳೆದ ಕೆಲವು ತಿಂಗಳ ಹಿಂದೆ ಗ್ರಾಮದ ಜವರನಾಯ್ಕ ಎಂಬುವವರ ಮನೆ ಮುಂದೆ ಮೂತ್ರ ವಿಸರ್ಜನೆ ಮಾಡಿದ್ದ. ಈ ವಿಚಾರವಾಗಿ ಇಬ್ಬರ ನಡುವೆ ಗಲಾಟೆಯಾಗಿತ್ತು. ಬಳಿಕ, ಗ್ರಾಮಸ್ಥರು ಮಧ್ಯೆ ಪ್ರವೇಶಿಸಿ ಇಬ್ಬರನ್ನು ಸಮಾಧಾನಪಡಿಸಿದ್ದರು.



ಆದರೆ, ಜೂ.14ರಂದು ಹುಲ್ಲಹಳ್ಳಿಯ ಬಾರ್ ಅಂಡ್ ರೆಸ್ಟೋರೆಂಟ್ ಬಳಿಯ ವಾಟರ್ ಟ್ಯಾಂಕ್ ಹತ್ತಿರ ಮತ್ತೆ ಮಹದೇವಸ್ವಾಮಿ ಹಾಗೂ ಜವರನಾಯ್ಕನ ನಡುವೆ ಗಲಾಟೆ ನಡೆದಿದೆ. ಈ ವೇಳೆ ಜವರನಾಯ್ಕರನ್ನು ಕಲ್ಲಿನಿಂದ ಹೊಡೆದು ಮಾರಣಾಂತಿಕವಾಗಿ ಮಹದೇವಸ್ವಾಮಿ ಹಲ್ಲೆ ನಡೆಸಿದ್ದಾರೆ.

ಕೂಡಲೇ ಈತನನ್ನು ಸ್ಥಳೀಯರು ಹಾಗೂ ಪೊಲೀಸರು ಮೈಸೂರಿನ ಕೆ.ಆರ್.ಆಸ್ಪತ್ರೆಗೆ ದಾಖಲಿಸಿದ್ದಾರೆ. ಆದರೆ, ಚಿಕಿತ್ಸೆ ಫಲಕಾರಿಯಾಗದೆ ಜವರನಾಯ್ಕ ಜೂ.20ರಂದು ಸಾವನ್ನಪ್ಪಿದ್ದಾರೆ. ಈ ಸಂಬಂಧ ಹುಲ್ಲಹಳ್ಳಿ ಪೊಲೀಸ್ ಠಾಣೆಯಲ್ಲಿ ಮಹದೇವಸ್ವಾಮಿ ಮೇಲೆ ಪ್ರಕರಣ ದಾಖಲಾಯಿತು.

ತನಿಖಾ ತಂಡ ರಚನೆ: ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್.ಚೇತನ್ ಅವರ ಮಾರ್ಗದರ್ಶನದಲ್ಲಿ ಡಿವೈಎಸ್‌ಪಿ ಗೋವಿಂದರಾಜು, ವೃತ್ತ ನಿರೀಕ್ಷಕ ಲಕ್ಷ್ಮೀಕಾಂತ ತಳವಾರ, ಪಿಎಸ್‌ಐ ಮಹೇಶ್‌ಕುಮಾರ್ ನೇತೃತ್ವದ ತಂಡ ತಲೆ ಮರೆಸಿಕೊಂಡಿದ್ದ ಆರೋಪಿ ಮಹದೇವಸ್ವಾಮಿ ಬಂಧನಕ್ಕೆ ಬಲೆ ಬೀಸಿ ಆತನನ್ನು ಪತ್ತೆ ಹಚ್ಚುವಲ್ಲಿ ಯಶಸ್ವಿಯಾಗಿದ್ದಾರೆ.

ಆತ್ಮಹತ್ಯೆಗೆ ಯತ್ನಿಸಿದ ಆರೋಪಿ: ತಾನಿರುವ ಸ್ಥಳ ಪೊಲೀಸರಿಗೆ ತಿಳಿದಿರುವ ವಿಚಾರ ತಿಳಿದ ಮಹದೇವಸ್ವಾಮಿ ಜೂ.22ರಂದು ಕ್ರಿಮಿನಾಶಕ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದ್ದಾನೆ. ಈ ವೇಳೆ ಸ್ಥಳಕ್ಕೆ ಬಂದ ಪೊಲೀಸರು ಆರೋಪಿಯನ್ನು ಮೈಸೂರಿನ ಕೆ.ಆರ್.ಆಸ್ಪತ್ರೆಗೆ ದಾಖಲಿಸಿ, ಚಿಕಿತ್ಸೆ ಕೊಡಿಸಿದ್ದಾರೆ. ಜೂ.25ರಂದು ಗುಣಮುಖನಾದ ಆರೋಪಿಯನ್ನು ಆಸ್ಪತ್ರೆಯಿಂದ ಡಿಸ್ಚಾರ್ಜ್ ಮಾಡಿಸಿ, ನ್ಯಾಯಾಲಕ್ಕೆ ಹಾಜರುಪಡಿಸಿ, ಬಳಿಕ ಜೈಲಿಗೆ ಕಳುಹಿಸಿದ್ದಾರೆ.

ಕಾರ್ಯಾಚರಣೆಯಲ್ಲಿ ಹುಲ್ಲಹಳ್ಳಿ ಠಾಣಾ ಸಿಬ್ಬಂದಿ ದೊಡ್ಡಯ್ಯ, ಮಹೇಂದ್ರ ಇತರರು ಪಾಲ್ಗೊಂಡಿದ್ದರು.

ಜೂ.30ರಂದು ಜಾಗತಿಕ ಲಿಂಗಾಯತ ಮಹಾಸಭಾದ ತಾಲೂಕು ಘಟಕ ಉದ್ಘಾಟನೆ



ತಿ.ನರಸೀಪುರ, ಜೂ.26(ಎಸ್‌ಕೆ)– ಜಾಗತಿಕ ಲಿಂಗಾಯತ ಮಹಾಸಭಾದ ತಾಲೂಕು ಘಟಕದ ಉದ್ಘಾಟನೆ ಹಾಗೂ ಪದಗ್ರಹಣ ಕಾರ್ಯಕ್ರಮ ಜೂ.30ರ ಗುರುವಾರ ಪಟ್ಟಣದಲ್ಲಿ ನಡೆಯಲಿದೆ ಎಂದು ಸಂಘದ ಅಧ್ಯಕ್ಷ ಕೆ.ಜಿ.ಶಿವಪ್ರಸಾದ್ ಹೇಳಿದರು.

ಪಟ್ಟಣದ ನಂಜನಗೂಡು ರಸ್ತೆಯ ಕೃಷಿ ಉತ್ಪನ್ನ ಮಾರುಕಟ್ಟೆ ಎದುರು ಜಾಗತಿಕ ಲಿಂಗಾಯತ ಮಹಾಸಭಾದ ಕಚೇರಿಯಲ್ಲಿ ಪದಗ್ರಹಣ ಕಾರ್ಯಕ್ರಮ ಹಮ್ಮಿಕೊಳ್ಳುವ ಕುರಿತಂತೆ ನಡೆದ ಪದಾಧಿಕಾರಿಗಳ ಪೂರ್ವ ಭಾವಿ ಸಭೆಯಲ್ಲಿ ಭಾಗವಹಿಸಿ ನಂತರ ಮಾತನಾಡಿದ ಅವರು, ಅಂದು ಸಂಘದ ಕಚೇರಿಯಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಮೈಸೂರು ಹೊಸಮಠದ ಶ್ರೀಚಿದಾನಂದ ಸ್ವಾಮೀಜಿ ಅವರು ದಿವ್ಯ ಸಾನಿಧ್ಯ ವಹಿಸಲಿದ್ದಾರೆ. ಜೆಎಲ್‌ಎಂ ತಾಲೂಕು ಘಟಕದ ಗೌರವಾಧ್ಯಕ್ಷ ಶ್ರೀಬಸವಯೋಗಿ ಪ್ರಭುಗಳು, ಚಿದರವಳ್ಳಿ ಗವಿಮಠದ ಶ್ರೀಮಲ್ಲಿಕಾರ್ಜುನ ಸ್ವಾಮೀಜಿ ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು.

ಹೈ ಕೋರ್ಟ್‌ನ ವಿಶ್ರಾಂತ ನ್ಯಾಯಾಧೀಶ ಅರಳಿ ನಾಗರಾಜ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಜಿಲ್ಲಾಧ್ಯಕ್ಷ ಶರಣ ಮಹದೇವಪ್ಪ ಅಧ್ಯಕ್ಷತೆ ವಹಿಸಲಿದ್ದು, ಜಿಲ್ಲಾ ಉಪಾಧ್ಯಕ್ಷ ಎಂ.ಸೀಹಳ್ಳಿ ವಿ.ಶಿವಮಲ್ಲಪ್ಪ, ಬಸವತತ್ವ ಪ್ರಚಾರಕರಾದ ಲಿಂಗರಾಜಪ್ಪ ಚೌಹಳ್ಳಿ ಭಾಗವಹಿಸಲಿದ್ದು, ಕಾರ್ಯಕ್ರಮಕ್ಕೆ ಸಮುದಾಯದ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಮನವಿ ಮಾಡಿದರು.

ಸಭೆಯಲ್ಲಿ ಸಂಘದ ಕಾರ್ಯದರ್ಶಿ ತುಂಬಲ ನಾಗರಾಜು, ದೊಡ್ಡನಹುಂಡಿ ಸೋಮಶೇಖರ್, ಹೆಳವರಹುಂಡಿ ಸತೀಶ್, ಧರ್ಮಯ್ಯನಹುಂಡಿ ಕುಮಾರ್, ಮಲ್ಲೇಶ್, ಕೆಬ್ಬೆಹುಂಡಿ ಸೋಮಶೇಖರ್ ಮತ್ತಿತರರಿದ್ದರು.

ಹರಂಬಳ್ಳಿ ಕೊಪ್ಪಲು ಗ್ರಾಮಕ್ಕೆ ಸಾರಿಗೆ ಬಸ್ ವ್ಯವಸ್ಥೆ: ಗ್ರಾಮಸ್ಥರು ಹರ್ಷ

ಭೇರ್ಯ, ಜೂ.26(ಮಹೇಶ್)– ಸಮೀಪದ ಹರಂಬಳ್ಳಿ ಕೊಪ್ಪಲು ಗ್ರಾಮಕ್ಕೆ ಸಾರಿಗೆ ಬಸ್ ವ್ಯವಸ್ಥೆ ಆರಂಭವಾಗದ ಹಿನ್ನೆಲೆಯಲ್ಲಿ ಗ್ರಾಮಕ್ಕೆ ಆಗಮಿಸಿದ ಬಸ್‌ಗೆ ಗ್ರಾಮಸ್ಥರು ಹಾಗೂ ಶಾಲಾ ಮಕ್ಕಳು ಪೂಜೆ ಸಲ್ಲಿಸಿದರು.



ಶಾಸಕರ ಕಾಳಜಿಗೆ ಗ್ರಾಮಸ್ಥರು ಹರ್ಷ: ಗ್ರಾಮಕ್ಕೆ ಬಸ್ ವ್ಯವಸ್ಥೆ ಇಲ್ಲದೇ ಶಾಲಾ ಮಕ್ಕಳು ಹಾಗೂ ಗ್ರಾಮಸ್ಥರು 2ಕಿ.ಮೀ.ನಷ್ಟು ದೂರ ನಡೆಯಬೇಕಿತ್ತು. ಇತ್ತೀಚೆಗೆ ಗ್ರಾಮಕ್ಕೆ ಶಾಸಕ ಸಾ.ರಾ.ಮಹೇಶ್ ಭೇಟಿ ನೀಡಿದ್ದರು. ಈ ವೇಳೆ ಗ್ರಾಮಸ್ಥರು ಹಾಗೂ ಶಾಲಾ ಮಕ್ಕಳು ಗ್ರಾಮಕ್ಕೆ ಬಸ್ ವ್ಯವಸ್ಥೆ ಕಲ್ಪಿಸಬೇಕು ಎಂದು ಶಾಸಕರಿಗೆ ಮನವಿ ಸಲ್ಲಿಸಿದರು.

ಗ್ರಾಮಸ್ಥರ ಮನವಿಗೆ ಸ್ಪಂದಿಸಿದ ಶಾಸಕರು ಕೆ.ಆರ್.ನಗರ ಸಾರಿಗೆ ಸಂಸ್ಥೆಯ ಬಸ್ ಘಟಕದ ವ್ಯವಸ್ಥಾಪಕರಿಗೆ ದೂರವಾಣಿ ಕರೆ ಮಾಡಿ ನಾಳೆಯಿಂದಲೇ ಹರಂಬಳ್ಳಿಕೊಪ್ಪಲು ಗ್ರಾಮಕ್ಕೆ ಬಸ್ ಸಂಚಾರ ವ್ಯವಸ್ಥೆ ಆಗಬೇಕು ಎಂದು ಸೂಚನೆ ನೀಡಿದರು.

ಶಾಸಕರ ಸೂಚನೆ ಮೇರೆಗೆ ಗ್ರಾಮಕ್ಕೆ ಬಸ್ ವ್ಯವಸ್ಥೆ ಕಲ್ಪಿಸಲಾಗಿದ್ದು, ಶಾಸಕರ ಕಾಳಜಿಗೆ ಗ್ರಾಮಸ್ಥರು ಹರ್ಷ ವ್ಯಕ್ತಪಡಿಸಿದ್ದಾರೆ. ವಿದ್ಯಾರ್ಥಿನಿ ಶ್ರದ್ಧಾ ಮಾತನಾಡಿ, ನಮ್ಮ ಮನವಿಗೆ ಶಾಸಕರಾದ ಸಾ.ರಾ.ಮಹೇಶ್ ಅವರು ಸ್ಪಂದಿಸಿ, ಗ್ರಾಮಕ್ಕೆ ಬೆಳಗ್ಗೆ 8 ಗಂಟೆಗೆ ಹಾಗೂ ಸಂಜೆ 5 ಗಂಟೆಗೆ ಬಸ್ ಸಂಚಾರವನ್ನು ಕಲ್ಪಿಸಿಕೊಟ್ಟಿದ್ದಾರೆ. ಎಲ್ಲಾ ವಿದ್ಯಾರ್ಥಿಗಳ ಪರವಾಗಿ ಅವರಿಗೆ ಅಭಿನಂದನೆ ಸಲ್ಲಿಸುತ್ತೇನೆ ಎಂದು ತಿಳಿಸಿದರು.

ಈ ವೇಳೆ ವಿದ್ಯಾರ್ಥಿಗಳಾದ ಅರ್ಚನಾ, ದಿವಾಕರ್, ಮುತ್ತುರಾಜ್, ರಾಮ್‌ಪ್ರಸಾದ್, ಯಶ್ವಂತ್, ಸೂರ್ಯ, ಯಶಸ್ವಿನಿ, ಪೃಥ್ವಿಶ್ರೀ ಸೇರಿದಂತೆ ಗ್ರಾಮಸ್ಥರು ಇದ್ದರು.

ದುದ್ದಗೆರೆ: ಪರಿಸರ ದಿನ ಆಚರಣೆ

ದುದ್ದಗೆರೆ, ಜೂ.26– ಮೈಸೂರು ತಾಲೂಕಿನ ದುದ್ದಗೆರೆ ಗ್ರಾಮದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಭಿವೃದ್ಧಿ ಯೋಜನೆ, ಬಿ.ಸಿ.ಟ್ರಸ್ಟ್ ವತಿಯಿಂದ ಗಿಡ ನೆಡುವ ಮೂಲಕ ಪರಿಸರ ದಿನ ಆಚರಿಸಲಾಯಿತು.



ನೇರಳೆ, ಮಹಾಗನಿ, ಜಂಬೂ ನೇರಳೆ ಸೇರಿದಂತೆ ಇತರೆ ಗಿಡಗಳನ್ನು ಶಾಲಾ ಮಕ್ಕಳಿಂದ ಮತ್ತು ತಂಡದ ಸದಸ್ಯರಿಂದ ನೆಡಲಾಯಿತು.

ಬಳಿಕ, ಕಾರ್ಯಕ್ರಮದ ಮೇಲ್ವಿಚಾರಕರು ಪರಿಸರ ಸಂರಕ್ಷಣೆ ಬಗ್ಗೆ ಮಾಹಿತಿ ನೀಡಿದರು. ಕಾರ್ಯಕ್ರಮದಲ್ಲಿ ಮೇಲ್ವಿಚಾರಕ ಪಾಟೀಲ, ಗ್ರಾಪಂ ಸದಸ್ಯರಾದ ರವಿ, ಎಸ್‌ಡಿಎಂಸಿ ಅಧ್ಯಕ್ಷೆ ಮಹಾಲಕ್ಷ್ಮೀ, ಸದಸ್ಯ ಕುಮಾರ್, ಸೇವಾ ಪ್ರತಿನಿಧಿ ಮಂಗಳಗೌರಿ, ಪ್ರದೀಪ್, ಶಾಲಾ ಶಿಕ್ಷಕರು, ಮಕ್ಕಳು ಹಾಜರಿದ್ದರು.

ಅರ್ಜಿ ಆಹ್ವಾನ

ಕೆ.ಆರ್ ನಗರ, ಜೂ.26– ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಗಳ ಕಚೇರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಮೈಸೂರು ಜಿಲ್ಲೆ ಕೆ ಆರ್ ನಗರ ತಾಲೂಕಿನ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ 2020–23 ನೇ ಸಾಲಿಗೆ ಮೆಟ್ರಿಕ್ ಪೂರ್ವ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳಿಗೆ ಪ್ರವೇಶ ಕಲ್ಪಿಸಲು ಅರ್ಜಿ ಆಹ್ವಾನಿಸಲಾಗಿದ್ದು, ಮಾಹಿತಿಗಾಗಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಕೆಆರ್ ನಗರ ದೂ.ಸಂ. 08221–262230 ಅನ್ನು ಸಂಪರ್ಕಿಸಬಹುದಾಗಿದೆ ಪ್ರಕಟಣೆ ತಿಳಿಸಿದೆ.

ಮುಳ್ಳೂರು ನೀರು ಬಳಕೆದಾರರ ಸಂಘಕ್ಕೆ ಆಯ್ಕೆ

ಹುಣಸೂರು, ಜೂ.26(ಕೆಕೆ)–ತಾಲೂಕಿನ ಮುಳ್ಳೂರು ನೀರು ಬಳಕೆದಾರರ ಸಂಘದ ಅಧ್ಯಕ್ಷರಾಗಿ 4ನೇ ಬಾರಿಗೆ ಎನ್.ಮಹದೇವ ಆಯ್ಕೆಯಾಗಿದ್ದು, ಉಪಾಧ್ಯಕ್ಷರಾಗಿ ದೇವರಾಜು, ನಿರ್ದೇಶಕರಾಗಿ ಈಶಣ್ಣ, ನಾರಾಯಣಚಾರಿ, ರಾಜಯ್ಯ, ಯೋಗಣ್ಣ, ಕುಮಾರ್, ಮಾಧುರಾಯ್ ಹಾಗೂ ಶೋಭಬಾಯಿ, ಶಿವಮ್ಮ ಅವರು ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ತಿಳಿಸಿದ್ದಾರೆ.

ಚನ್ನಬಸಪ್ಪ ನಿಧನ

ಹೆಚ್.ಡಿ.ಕೋಟೆ, ಜೂ.26– ತಾಲೂಕಿನ ಹೆಬ್ಬಲಗುಪ್ಪೆ ಗ್ರಾಮದ ನಿವಾಸಿ ಚನ್ನಬಸಪ್ಪ (66) ಭಾನುವಾರ ಸಂಜೆ ನಿಧನರಾದರು. ಮೃತರಿಗೆ ಪತ್ನಿ, ಮೂವರು ಪುತ್ರರು ಇದ್ದಾರೆ. ಅಂತ್ಯಕ್ರಿಯೆ ಸೋಮವಾರ ಮಧ್ಯಾಹ್ನ 12ಗಂಟೆಗೆ ಸ್ವಗ್ರಾಮದಲ್ಲಿ ನೆರವೇರಲಿದೆ.



ನ್ಯಾ.ಸದಾಶಿವ ಆಯೋಗದ ವರದಿ ಜಾರಿಗೊಳಿಸುವ ಭರವಸೆ ನೀಡುವವರಿಗೆ ಬೆಂಬಲ

ತಿ.ನರಸೀಪುರ, ಜೂ.26(ಎಸ್‌ಕೆ)– ಮುಂಬರುವ ಸಾರ್ವತ್ರಿಕ ಚುನಾವಣೆಯಲ್ಲಿ ಒಳ ಮೀಸಲಾತಿ ಪರವಾಗಿ ನಿಂತು ನ್ಯಾಯಮೂರ್ತಿ ಎ.ಜೆ.ಸದಾಶಿವ ಆಯೋಗದ ವರದಿ ಜಾರಿಗೊಳಿಸುವ ಭರವಸೆ ನೀಡುವ ಪಕ್ಷವನ್ನು ನಮ್ಮ ಸಮುದಾಯ ಬೆಂಬಲಿಸುತ್ತದೆ ಎಂದು ಡಾ.ಬಾಬು ಜಗಜೀವನರಾಂ ಸಂಘದ ತಾಲೂಕು ಘಟಕದ ಅಧ್ಯಕ್ಷ ಮಲಿಯೂರು ಡಿ.ಶಂಕರ್ ಹೇಳಿದರು.

ಪಟ್ಟಣದ ಲೋಕೋಪಯೋಗಿ ಅತಿಥಿ ಗೃಹದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾದಿಗ ಸಮುದಾಯದ ಮುಖಂಡರೊಂದಿಗೆ ಮಾತನಾಡಿದ ಅವರು, ಹಲವು ವರ್ಷಗಳಿಂದ ನಮ್ಮನ್ನಾಳಿದ ಸರ್ಕಾರಗಳು ಪರಿಶಿಷ್ಟ ಜಾತಿಯಲ್ಲಿ ಬರುವ ಬಹುಸಂಖ್ಯಾತ ಜನಸಂಖ್ಯೆ ಹೊಂದಿರುವ ಮಾದಿಗ ಸಮುದಾಯಕ್ಕೆ ಅನ್ಯಾಯ ಮಾಡುತ್ತಲೇ ಬಂದಿವೆ. ನ್ಯಾಯಮೂರ್ತಿ ಎ.ಜೆ.ಸದಾಶಿವ ಆಯೋಗದ ವರದಿಯನ್ನು ಜಾರಿಗೊಳಿಸುವ ವಿಚಾರವಾಗಿ ರಾಜ್ಯದ ಉದ್ದಗಲಕ್ಕೂ ಪ್ರತಿಭಟನೆ, ಉಪವಾಸ ಸತ್ಯಾಗ್ರಹ, ಕಾಲ್ನಡಿಗೆ ಜಾಥಾ ಮುಂತಾದ ಹೋರಾಟ ನಡೆಸಿ, ಸರ್ಕಾರದ ಗಮನ ಸೆಳೆಯುವ ಕಾರ್ಯಕ್ರಮಗಳ ಮೂಲಕ ಎಚ್ಚರಿಕೆ ನೀಡುತ್ತಾ ಬಂದಿದ್ದೇವೆ. ಆದರೆ, ಈ ಹಿಂದೆ ಆಡಳಿತ ನಡೆಸಿದ ಸರ್ಕಾರಗಳು ಸಮುದಾಯದ ಪರವಾದ ಯಾವುದೇ ಕೆಲಸಗಳನ್ನು ಮಾಡಲು ಮುಂದಾಗಲಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು.



ಹಿಂದಿನ ಸರ್ಕಾರ ಒಳ ಮೀಸಲಾತಿ ಜಾರಿಗೆ ತರುವ ವಿಷಯವಾಗಿ ಆಶ್ವಾಸನೆಗಳನ್ನೂ ಕೊಟ್ಟವೋ ಹೊರತು ಕಾರ್ಯಗತ ಮಾಡಲಿಲ್ಲ. ಸರ್ಕಾರದ ನಡೆಯಿಂದ ಬೇಸತ್ತ ಮಾದಿಗ ಸಮುದಾಯ ಕಳೆದ ಉಪಚುನಾವಣೆಯಲ್ಲಿ ಬಿಜೆಪಿಯ ರಾಜ್ಯಾಧ್ಯಕ್ಷರು ನಮ್ಮ ಪಕ್ಷ ಅಧಿಕಾರಕ್ಕೆ ಬಂದರೆ, ಸದಾಶಿವ ಆಯೋಗದ ವರದಿ ಜಾರಿಗೊಳಿಸುತ್ತೇವೆ ಎಂಬ ಭರವಸೆ ನೀಡಿದ್ದ ಹಿನ್ನೆಲೆಯಲ್ಲಿ ಸಮಾಜಕ್ಕೆ ಒಳ್ಳೆಯದಾಗಬಹುದೆನ್ನುವ ಉದ್ದೇಶದಿಂದ ರಾಜ್ಯದ ಉದ್ದಗಲಕ್ಕೂ ಬಿಜೆಪಿ ಸರ್ಕಾರವನ್ನು ಬೆಂಬಲಿಸಿದೆವು. ಆದರೆ, ಅವರು ಕೊಟ್ಟ ಭರವಸೆ ಈಡೇರಿಸದೇ ದ್ರೋಹವೆಸಗಿದರು ಎಂದು ದೂರಿದರು.

ಸಂಘದ ಖಜಾಂಚಿ ಬೈರಾಪುರ ಬಿ.ಎಲ್.ಮಹದೇವ್ ಮಾತನಾಡಿ, ಪ್ರಸ್ತುತ ಅಧಿಕಾರ ನಡೆಸುತ್ತಿರುವ ಬಿಜೆಪಿ ಸರ್ಕಾರದ ಅವಧಿ ಮುಗಿಯುತ್ತಾ ಬಂದಿದ್ದರೂ, ನೀಡಿದ್ದ ಭರವಸೆಯನ್ನು ಈಡೇರಿಕೆಯ ಯಾವುದೇ ಸೂಚನೆ ಕಾಣುತ್ತಿಲ್ಲ. ಜೊತೆಗೆ ಮೈಸೂರು ಪ್ರಾಂತ್ಯದಲ್ಲಿ ಯಾವುದೇ ರಾಜಕೀಯ ಪಕ್ಷಗಳು ಮೀಸಲು ಕ್ಷೇತ್ರಗಳಲ್ಲಿ ವಿಧಾನಸಭೆ ಹಾಗೂ ಜಿಪಂಗಳಿಗೆ ಟಿಕೆಟ್ ನೀಡುವ ವಿಷಯದಲ್ಲಿ ಮಾದಿಗ ಸಮುದಾಯವನ್ನು ಪರಿಗಣನೆಗೆ ತೆಗೆದುಕೊಂಡಿಲ್ಲ. ಹಾಗಾಗಿ, ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಯಾವ ಪಕ್ಷವು ಸಮುದಾಯದ ಪರವಾಗಿ ಒಳ ಮೀಸಲಾತಿ ಜಾರಿಗೆ ತರಲು ಆದ್ಯತೆ ನೀಡುತ್ತದೋ ಆ ಪಕ್ಷದ ಪರವಾಗಿ ನಮ್ಮ ಸಮುದಾಯ ಕೆಲಸ ಮಾಡುತ್ತದೆ ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಡಾ.ಬಾಬು ಜಗಜೀವನರಾಂ ಸಂಘದ ಉಪಾಧ್ಯಕ್ಷ ಗೋವಿಂದ ರಾಜು, ಬನ್ನೂರು ಪುರಸಭಾ ಸದಸ್ಯ ಶಿವಣ್ಣ, ಗ್ರಾಪಂ ಸದಸ್ಯರಾದ ಶಿವಪ್ರಸಾದ್, ರೇವಣ್ಣ, ಶಿವಣ್ಣ, ಸುನೀಲ್, ಮಾಜಿ ಸದಸ್ಯ ಸಿ.ಲಿಂಗರಾಜು, ನಾಗಯ್ಯ, ಸಂಘದ ನಿರ್ದೇಶಕರಾದ ಸಿ.ಪುಟ್ಟಯ್ಯ, ಮಾದೇಶ್, ರಾಜಣ್ಣ, ಕೆ.ಸಿ.ಲಿಂಗರಾಜು, ರಾಜಣ್ಣ, ರವಿ ಇದ್ದರು.

ಸರ್ಕಾರಿ ಪಿಯು ಕಾಲೇಜಿಗೆ ಉತ್ತಮ ಫಲಿತಾಂಶ


ಹುಣಸೂರು, ಜೂ.26(ಕೆಕೆ)– ಹುಣಸೂರಿನ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿಗೆ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ಬಂದಿದೆ ಎಂದು ಕಾಲೇಜಿನ ಪ್ರಾಂಶುಪಾಲ ರಾಮೇಗೌಡ ತಿಳಿಸಿದರು. ವಿಜ್ಞಾನ ವಿಭಾಗದಲ್ಲಿ ಬಿ.ಬಿ.ಮುಸ್ಕಾನ್ 546, ವಾಣಿಜ್ಯ ವಿಭಾಗದಲ್ಲಿ ಶಾದಿಕ ಬಾನು 560 ಹಾಗೂ ಕಲಾ ವಿಭಾಗದಲ್ಲಿ ಕೆ.ವಿ.ಐಶ್ವರ್ಯ 550 ಅಂಕ ಪಡೆದು ಕಾಲೇಜಿಗೆ ಪ್ರಥಮರೆನಿಸಿದ್ದಾರೆ. ಕಾಲೇಜಿನ 23 ಮಂದಿ ಉತ್ತಮ ಶ್ರೇಣಿ, 114 ಮಂದಿ ಪ್ರಥಮ, 58 ಮಂದಿ ದ್ವಿತೀಯ ದರ್ಜೆಯಲ್ಲಿ ತೇರ್ಗಡೆಯಾಗಿದ್ದಾರೆ. ವಿಜ್ಞಾನ ವಿಭಾಗದಲ್ಲಿ ಶೇ. 36.9ರಷ್ಟು, ಕಲಾ ವಿಭಾಗದಲ್ಲಿ ಶೇ. 58ರಷ್ಟು, ವಾಣಿಜ್ಯ ವಿಭಾಗದಲ್ಲಿ ಶೇ. 72ರಷ್ಟು ಫಲಿತಾಂಶ ಬಂದಿದೆ ಎಂದರು.



ಕಳಲೆ ಜವರನಾಯ್ಕ ನೇಮಕ



ನಂಜನಗೂಡು, ಜೂ.26– ಚುಟುಕು ಸಾಹಿತ್ಯ ಪರಿಷತ್ ತಾಲೂಕು ಅಧ್ಯಕ್ಷರಾಗಿ ಸಾಹಿತಿ ಕಳಲೆ ಜವರನಾಯ್ಕ ಅವರನ್ನು ನೇಮಕ ಮಾಡ ಲಾಗಿದೆ. ಸಾಹಿತ್ಯ ಕ್ಷೇತ್ರದಲ್ಲಿ ತಮ್ಮದೇ ಆದ ಕೊಡುಗೆ ನೀಡುತ್ತಾ ಬಂದಿರುವ ಅವರನ್ನು ಪರಿಷತ್‌ನ ಕೇಂದ್ರ ಸಮಿತಿ ರಾಜ್ಯಾಧ್ಯಕ್ಷ ತೊಂಟದಾರ್ಯ ನೇಮಕ ಮಾಡಿ ಆದೇಶ ಹೊರಡಿಸಿದ್ದಾರೆ.


ಆರನೇ ವರ್ಷದ ಪುಣ್ಯಸ್ಮರಣೆ
ಕೀರ್ತಿ ಕುಮಾರ್
ಜನನ : 18.2.1972 ಮರಣ : 27.6.2016
ನೀವು ನಮ್ಮನ್ನಗಲಿ ಆರು ವರ್ಷ ಕಳೆದರು, ನಿಮ್ಮ ನೆನಪು ನಮ್ಮ ಮನದಲ್ಲಿ ಚಿರಸ್ಥಾಯಿಯಾಗಿ ಉಳಿದಿದೆ. ನಿಮ್ಮ ಆದರ್ಶ, ಧ್ಯೇಯದಂತೆಯೇ ಜೀವನ ಸಾಗಿದೆ.
ಸದಾ ನಿಮ್ಮ ಆತ್ಮಕ್ಕೆ ಚಿರಶಾಂತಿ ಕೋರುತ್ತೇವೆ.
ತಾಯಿ ಪುಟ್ಟಮ್ಮ, ಪತ್ನಿ ಹೇಮಾವತಿ, ಸಹೋದರಿ, ಸಹೋದರರು ಹಾಗೂ ಕುಟುಂಬವರ್ಗ


ನಾಡಿನ ಸಮಸ್ತ ಜನತೆಗೆ
ನಾಡಪ್ರಭು ಕೆಂಪೇಗೌಡರ
ಜಯಂತಿಯ ಶುಭಾಶಯಗಳು
ದಿನಾಂಕ: 27-06-2022ರ ಸೋಮವಾರ
ಬೆಳಿಗ್ಗೆ 9:00ಗಂಟೆಗೆ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಮುಂಭಾಗದಿಂದ ಶ್ರೀ ಶ್ರೀ ಸೋಮೇಶ್ವರನಾಥ ಸ್ವಾಮಿಜಿಗಳವರ ದಿವ್ಯ ಸಾನಿಧ್ಯದಲ್ಲಿ ಹಾಗೂ ಜನ ಪ್ರತಿನಿಧಿಗಳ ಸಮ್ಮುಖದಲ್ಲಿ ನಂದಿ ಕಂಬಕ್ಕೆ ಪೂಜೆ ಸಲ್ಲಿಸಿ ವಿವಿಧ ಕಲಾತಂಡಗಳೊಂದಿಗೆ ಮೆರವಣಿಗೆಗೆ ಚಾಲನೆ ನೀಡಲಾಗುವುದು ಹಾಗೂ
ಜಿಲ್ಲಾಡಳಿತ ವತಿಯಿಂದ ಮಧ್ಯಾಹ್ನ 12:00ಗಂಟೆಗೆ ಕಲಾಮಂದಿರದಲ್ಲಿ ಕೆಂಪೇಗೌಡರ ಪ್ರತಿಮೆಗೆ ಪುಷ್ಪಾರ್ಚನೆ ಹಾಗೂ ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ
ಜಿ ಮಂಜುಗೌಡ
ನಿಕಟಪೂರ್ವ ಅಧ್ಯಕ್ಷರು, ಜಿಲ್ಲಾ ಒಕ್ಕಲಿಗರ ಸಂಘ ಮೈಸೂರು (ಚಾಮರಾಜನಗರ ಜಿಲ್ಲೆ ಒಳಗೊಂಡಂತೆ)
ಅಧ್ಯಕ್ಷರು, ಭಾಗ್ಯಸಾಗರ್ ಎಜುಕೇಷನಲ್ ಟ್ರಸ್ಟ್ (ರಿ.)
ಉಪಾಧ್ಯಕ್ಷರು, ಮೈಸೂರ ನಗರ ಜೆ.ಡಿ.ಎಸ್.
ಮಾಲೀಕರು ಅಶ್ವಿನಿ ಗೋಲ್ಡ್ ಕಂಪನಿ
ಮಾಲೀಕರು ಅಶ್ವಿನಿ ಎಂಟರ್‌ಪ್ರೈಸಸ್ & ಬಿಲ್ಡರ್ಸ್
ಮಾಲೀಕರು, ಜಿ.ಎಂ. ಕಾವೇರಿ ಸಿಲ್ಕ್ & ಹ್ಯಾಂಡಿ ಕ್ರಾಫ್ಟ್
ಸಮುದಾಯದ ಬಂಧುಗಳು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಜಯಂತಿಯನ್ನು ಯಶಸ್ವಿಗೊಳಿಸಬೇಕಾಗಿ ವಿನಂತಿ
ಸಾಗರ್‌ಗೌಡ
ಪ್ರಧಾನ ಕಾರ್ಯದರ್ಶಿ, ಭಾಗ್ಯಸಾಗರ್ ಎಜುಕೇಷನಲ್ ಟ್ರಸ್ಟ್ (ರಿ.)
ಪ್ರಕಟಣೆ:
ಜಿ.ಮಂಜುಗೌಡ ಸ್ನೇಹ ಬಳಗ, ಮೈಸೂರು


ವರುಣ ವಿಧಾನಸಭಾ ಕ್ಷೇತ್ರದ ಜನಪ್ರಿಯ ಶಾಸಕರಾದ
ಡಾ|| ಶ್ರೀ ಯತೀಂದ್ರ ಸಿದ್ದರಾಮಯ್ಯ ರವರಿಗೆ
ಹುಟ್ಟು ಹಬ್ಬದ ಶುಭಾಶಯಗಳು
ಶುಭಕೋರುವವರು
ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರದ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು
ರಾಕೇಶ್ ಪಾಪಣ್ಣ
ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯರು
ಚಾಮುಂಡೇಶ್ವರಿ ವಿಧಾನಸಭಾ ಕ್ಷೇತ್ರ